

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಡಿಸೆಂಬರ್ 11 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ
ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 234 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4





ಎಸ್.ಎಂ.ಕೃಷ್ಣ

01.05.1932 – 10.12.2024

ಎಸ್.ಎಂ.ಕೃಷ್ಣ ಇನ್ನಿಲ್ಲ

ಬೆಂಗಳೂರು, ಡಿ.10(ಕೆಎಂಶಿ)– ಬೆಂಗಳೂರು ನಗರವನ್ನು 'ಸಿಲಿಕಾನ್ ಸಿಟಿ' ಆಗಿ ವಿಶ್ವ ಭೂಪಟದಲ್ಲಿ ಕಂಗೊಳಿಸುವಂತೆ ಮಾಡಿದ ಪದ್ಮವಿಭೂಷಣ, ಮಾಜಿ ಮುಖ್ಯಮಂತ್ರಿ, ಮಾಜಿ ರಾಜ್ಯಪಾಲ ಹಾಗೂ ಮಾಜಿ ವಿದೇಶಾಂಗ ಸಚಿವ ಸೋಮನಹಳ್ಳಿ ಮಲ್ಲಯ್ಯ ಕೃಷ್ಣ (ಎಸ್.ಎಂ.ಕೃಷ್ಣ–92) ವಿಧಿವಶರಾಗಿದ್ದಾರೆ.

ಉಸಿರಾಟದ ತೊಂದರೆ ಹಾಗೂ ಪಾರ್ಶ್ವವಾಯುವಿನಿಂದ ಬಳಲುತ್ತಿದ್ದ ಕೃಷ್ಣ ಅವರು, ಇಂದು ಮುಂಜಾನೆ 2–30ಕ್ಕೆ ಸದಾಶಿವನಗರದ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದರು.

ಮೃತರ ಪಾರ್ಥಿವ ಶರೀರವನ್ನು ಸಾರ್ವಜನಿಕರ ದರ್ಶನಕ್ಕೆ ನಾಳೆ ಬೆಳಗ್ಗೆ 8 ಗಂಟೆವರೆಗೂ ಅವರ ನಿವಾಸದಲ್ಲಿ ಅವಕಾಶ ಮಾಡಿಕೊಡಲಾಗಿದ್ದು, ನಂತರ ಅವರ ಹುಟ್ಟೂರು ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಸೋಮನಹಳ್ಳಿಗೆ ಕೊಂಡೊಯ್ದು, ಅವರ ಜಮೀನಿನಲ್ಲಿ ಸಂಜೆ 4 ಗಂಟೆಗೆ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿಸಲಾಗುವುದು.

ಕೃಷ್ಣ ಅವರ ಗೌರವಾರ್ಥ ಡಿಸೆಂಬರ್ 11ರ ಬುಧವಾರದಂದು ಸರ್ಕಾರಿ ರಜೆ ಘೋಷಣೆ ಮಾಡಲಾಗಿದ್ದು, ಇಂದಿನಿಂದ ಮೂರು ದಿನಗಳ ಕಾಲ ರಾಜ್ಯದಲ್ಲಿ ಶೋಕಾಚರಣೆ ಇರಲಿದೆ ಎಂದು ಸರ್ಕಾರ ಆದೇಶ ಹೊರಡಿಸಿದೆ. ಎಸ್.ಎಂ.ಕೃಷ್ಣ ಅವರು ಪತ್ನಿ ಪ್ರೇಮಾ, ಇಬ್ಬರು ಪುತ್ರಿಯರಾದ ಮಾಳವಿಕಾ, ಶಾಂಭವಿ, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು.

ಅಳಿಯ ಕಾಫಿ ಡೇ ಸಂಸ್ಥಾಪಕ ಸಿದ್ಧಾರ್ಥ ಆತ್ಮಹತ್ಯೆ ನಂತರ ಕೃಷ್ಣ ಅವರು ಮಾನಸಿಕವಾಗಿ ಬಹಳ ಕುಗ್ಗಿದ್ದರು.

1932ರ ಮೇ 1ರಂದು ಸೋಮನಹಳ್ಳಿಯಲ್ಲಿ ಎಸ್.ಸಿ.ಮಲ್ಲಯ್ಯ ಮತ್ತು ತಾಯಮ್ಮ ದಂಪತಿಯ ಪುತ್ರರಾಗಿ ಜನಿಸಿದ ಎಸ್.ಎಂ. ಕೃಷ್ಣ ಅವರು ಪ್ರಾಥಮಿಕ ಶಿಕ್ಷಣವನ್ನು ಮದ್ದೂರಿನಲ್ಲಿ, ನಂತರ ಪದವಿ ಶಿಕ್ಷಣವನ್ನು ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಪಡೆದರು.

ನಂತರ ಬೆಂಗಳೂರಿನ ಸರ್ಕಾರಿ ಕಾನೂನು ಕಾಲೇಜಿನಲ್ಲಿ ಪದವಿ ಪಡೆದು ಅಮೆರಿಕದ ಟೆಕ್ಸಾಸ್‌ನಲ್ಲಿ ಉನ್ನತ ವ್ಯಾಸಂಗ ಮುಗಿಸಿ, ಭಾರತಕ್ಕೆ ಹಿಂತಿರುಗಿ ರೇಣುಕಾಚಾರ್ಯ ಕಾಲೇಜಿನಲ್ಲಿ ಕಾನೂನು ಉಪನ್ಯಾಸಕರಾಗಿ ಕೆಲವು ಕಾಲ ಸೇವೆ ಸಲ್ಲಿಸಿದರು. 1962ರಲ್ಲಿ ರಾಜಕೀಯ ಬದುಕು ಆರಂಭಿಸಿದ ಅವರು, ಮದ್ದೂರು ವಿಧಾನಸಭಾ ಕ್ಷೇತ್ರದಿಂದ ■9ನೇ ಪುಟಕ್ಕೆ

ನಾಲ್ಕು ಸದನಗಳನ್ನೂ ಪ್ರತಿನಿಧಿಸಿದ್ದರು...

ದಿವಂಗತ ಎಸ್.ಎಂ.ಕೃಷ್ಣ ಅವರು ರಾಜ್ಯ ಹಾಗೂ ರಾಷ್ಟ್ರಮಟ್ಟದ ರಾಜಕೀಯದಲ್ಲಿ ಸೇವೆ ಸಲ್ಲಿಸಿದ್ದಾರೆ. ಅದರಲ್ಲೂ ವಿಧಾನಸಭೆ, ವಿಧಾನಪರಿಷತ್, ಲೋಕಸಭೆ ಹಾಗೂ ರಾಜ್ಯಸಭೆಯ ಸದಸ್ಯರಾಗಿ ಕಾರ್ಯ ನಿರ್ವಹಿಸಿರುವುದು ವಿಶೇಷ. ಇವರಂತೆಯೇ 2023ರ ನವೆಂಬರ್‌ನಲ್ಲಿ ನಿಧನರಾದ ಡಿ.ಬಿ.ಚಂದ್ರೇಗೌಡ ಕೂಡ ನಾಲ್ಕು ಸದನಗಳನ್ನೂ ಪ್ರತಿನಿಧಿಸಿದ್ದರು. ಈ ಇಬ್ಬರು ನಾಯಕರೂ ವಿಧಾನಸಭೆ ಸ್ಪೀಕರ್ ಆಗಿಯೂ ಸೇವೆ ಸಲ್ಲಿಸಿರುವುದು ಮತ್ತೊಂದು ವಿಶೇಷ. ಹಾಲಿ ಮೇಘಾಲಯದ ರಾಜ್ಯಪಾಲರಾಗಿರುವ ರಾಜ್ಯದ ಸಿ.ಹೆಚ್. ವಿಜಯಶಂಕರ್ ಅವರು ವಿಧಾನಸಭೆ, ವಿಧಾನಪರಿಷತ್ ಹಾಗೂ ಲೋಕಸಭೆ ಸದಸ್ಯರಾಗಿ ಕಾರ್ಯ ನಿರ್ವಹಿಸಿದ್ದಾರೆ.

ಇಂದು ಸರ್ಕಾರಿ ರಜೆ: ಮೂರು ದಿನ ಶೋಕಾಚರಣೆ

ಮೈಸೂರು, ಡಿ.10– ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ನಿಧನದ ಹಿನ್ನೆಲೆಯಲ್ಲಿ ದಿವಂಗತರ ಗೌರವಾರ್ಥವಾಗಿ ಬುಧವಾರ(ಡಿ.11) ಎಲ್ಲಾ ಸರ್ಕಾರಿ ಕಚೇರಿಗಳು ಹಾಗೂ ಶಾಲಾ–ಕಾಲೇಜುಗಳಿಗೆ ರಾಜ್ಯ ಸರ್ಕಾರ ರಜೆ ಘೋಷಿಸಿದೆ.

ಕೃಷ್ಣರ ನಿಧನಕ್ಕೆ ತೀವ್ರ ಸಂತಾಪ ವ್ಯಕ್ತಪಡಿಸಿರುವ ರಾಜ್ಯ ಸರ್ಕಾರ, ಒಂದು ದಿನ ರಜೆ ಜೊತೆಗೆ ಮೂರು ದಿನಗಳ ಕಾಲ ಶೋಕಾಚರಣೆ ಘೋಷಣೆ ಮಾಡಿದೆ. ಡಿ.12ರವರೆಗೆ ಮೂರು ದಿನಗಳ ಕಾಲ ರಾಜ್ಯಾದ್ಯಂತ ಯಾವುದೇ ಸಾರ್ವಜನಿಕ ಮನೋರಂಜನಾ ಕಾರ್ಯಕ್ರಮ ಗಳನ್ನು ನಿಷೇಧಿಸಲಾಗಿದೆ. ರಾಜ್ಯ ಸರ್ಕಾರದ ಎಲ್ಲಾ ಕಟ್ಟಡಗಳ ಮೇಲೆ ರಾಷ್ಟ್ರ ಧ್ವಜವನ್ನು ಅರ್ಧ ಮಟ್ಟದಲ್ಲಿ ಹಾರಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಚಿತೆಗೆ 1000 ಕೆಜಿ ಶ್ರೀಗಂಧದ ಕಟ್ಟಿಗೆ

ಬೆಂಗಳೂರು, ಡಿ.10– ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರ ಅಂತ್ಯಕ್ರಿಯೆಗೆ ಸಾವಿರ ಕೆಜಿ ಶ್ರೀಗಂಧ ಬಳಸಲಾಗುತ್ತಿದೆ. ಎಂದು ಶಾಸಕ ಗಣಿಗ ರವಿ ತಿಳಿಸಿದ್ದಾರೆ.

ಬೆಂಗಳೂರಿನ ಸದಾಶಿವನಗರದಲ್ಲಿ ಎಸ್.ಎಂ.ಕೃಷ್ಣ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ಬಳಿಕ ಮಾತನಾಡಿದ ಶಾಸಕ ಗಣಿಗ ರವಿ, 1000 ಕೆಜಿ ಶ್ರೀಗಂಧದ ಕಟ್ಟಿಗೆಯಿಂದ ಎಸ್.ಎಂ. ಕೃಷ್ಣ ಅವರ ಅಂತ್ಯಸಂಸ್ಕಾರ ನೆರವೇರಿಸಲಾಗುವುದು ಎಂದರು. ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ ಶ್ರೀಗಂಧದ ಮರಗಳನ್ನು ರೈತರು ಬೆಳೆಯಲು ಅವಕಾಶ ಮಾಡಿಕೊಟ್ಟಿದ್ದರು. ಈ ಹಿನ್ನೆಲೆಯಲ್ಲಿ ಅದರ ಗೌರವಾರ್ಥವಾಗಿ ಶ್ರೀಗಂಧದಿಂದ ಅವರ ಅಂತ್ಯಕ್ರಿಯೆ ನೆರವೇರಿಸಲಾಗುವುದು. ಮಂಡ್ಯದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಹೆರಿಗೆ ಆಸ್ಪತ್ರೆ ಹಾಗೂ ಉದ್ಯಾನವನಕ್ಕೂ ಎಸ್.ಎಂ.ಕೃಷ್ಣ ಹೆಸರಿಡಲಾಗುವುದು ಎಂದು ಇದೇ ವೇಳೆ ತಿಳಿಸಿದರು.

ಕೃಷ್ಣ ನಿಧನಕ್ಕೆ ರಾಷ್ಟ್ರಪತಿ ಸಂತಾಪ



ತಮ್ಮ ಸುದೀರ್ಘ ಸಾರ್ವಜನಿಕ ಜೀವನದಲ್ಲಿ, ರಾಜ್ಯ ವಿಧಾನಸಭೆ, ಸಂಸತ್ತಿನ ಸದಸ್ಯ, ಕೇಂದ್ರ ಸಚಿವರು ಹಾಗೂ ರಾಜ್ಯಪಾಲ ಹೀಗೆ ವಿವಿಧ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸಿದ ಎಸ್.ಎಂ. ಕೃಷ್ಣ ಅವರ ನಿಧನದ ಸುದ್ದಿ ತಿಳಿದು ತೀವ್ರ ದುಃಖವಾಗಿದೆ. ಕರ್ನಾಟಕದ ಮುಖ್ಯಮಂತ್ರಿಯಾಗಿ, ರಾಜ್ಯದ ಅಭಿವೃದ್ಧಿಗೆ ತಮ್ಮ ಬದ್ಧತೆಯನ್ನು ತೋರಿಸಿ ಅಪಾರ ಜನಮನ್ನಣೆ ಗಳಿಸಿದ್ದರು. ಅವರ ಕುಟುಂಬಸ್ಥರು ಮತ್ತು ಅಭಿಮಾನಿಗಳಿಗೆ ನನ್ನ ಸಂತಾಪಗಳು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕಂಬನಿ ಮಿಡಿದಿದ್ದಾರೆ.

ಎಲ್ಲಾ ವರ್ಗದ ಜನ ಮೆಚ್ಚಿದ್ದರು



ಪ್ರಧಾನಿ ನರೇಂದ್ರ ಮೋದಿ ಅವರು ಟ್ವೀಟ್ ಮೂಲಕ ಎಸ್.ಎಂ.ಕೃಷ್ಣ ಅಗಲಿಕೆಗೆ ತೀವ್ರ ಸಂತಾಪ ಸೂಚಿಸಿದ್ದಾರೆ. ಎಸ್.ಎಂ.ಕೃಷ್ಣ ಅವರು ಅಸಾಧಾರಣ ನಾಯಕರಾಗಿದ್ದರು. ಎಲ್ಲಾ ವರ್ಗದ ಜನರು ಅವರನ್ನು ಮೆಚ್ಚಿಕೊಂಡಿದ್ದರು. ಅವರು ಯಾವಾಗಲೂ ಇತರರ ಜೀವನವನ್ನು ಸುಧಾರಿಸಲು ದಣಿವರಿಯದೆ ಕೆಲಸ ಮಾಡಿದರು. ಕರ್ನಾಟಕದ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ, ವಿಶೇಷವಾಗಿ ಮೂಲಸೌಕರ್ಯ ಅಭಿವೃದ್ಧಿಗೆ ಅವರು ನೀಡಿದ ಗಮನಕ್ಕಾಗಿ ಅವರನ್ನು ಪ್ರೀತಿಯಿಂದ ನೆನಪಿಸಿಕೊಳ್ಳಲಾಗುತ್ತದೆ. ಎಸ್.ಎಂ.ಕೃಷ್ಣ ಅವರು ಸಮೃದ್ಧ ಓದುಗ ಮತ್ತು ಚಿಂತಕರಾಗಿದ್ದರು. ಕಳೆದ ಹಲವಾರು ವರ್ಷಗಳಿಂದ ಎಸ್.ಎಂ.ಕೃಷ್ಣ ಅವರೊಂದಿಗೆ ಸಂವಾದ ನಡೆಸುವ ಅನೇಕ ಅವಕಾಶಗಳು ನನಗೆ ದೊರೆತವು ಮತ್ತು ಆ ಸಂವಾದಗಳನ್ನು ನಾನು ಯಾವಾಗಲೂ ಗೌರವಿಸುತ್ತೇನೆ. ಅವರ ನಿಧನದಿಂದ ನನಗೆ ಅತೀವ ದುಃಖವಾಗಿದೆ. ಓಂ ಶಾಂತಿ ಎಂದು ತಿಳಿಸಿದ್ದಾರೆ.

ಸ್ವಗ್ರಾಮ ಸೋಮನಹಳ್ಳಿಯಲ್ಲಿ ಇಂದು ಎಸ್.ಎಂ.ಕೃಷ್ಣ ಅಂತ್ಯಕ್ರಿಯೆ

ಅಂತಿಮ ವಿಧಿ–ವಿಧಾನ ಸಿದ್ಧತಾ ಕಾರ್ಯ ಪರಿಶೀಲಿಸಿದ ಡಿಸಿಎಂ ಡಿಕೆಶಿ

ಮದ್ದೂರು(ಮೋಹನ್‌ರಾಜ್), ಡಿ.10– ವಯೋಸಹಜ ಅನಾರೋಗ್ಯದಿಂದ ವಿಧಿವಶರಾದ ಮಾಜಿ ಮುಖ್ಯಮಂತ್ರಿ ಹಾಗೂ ಹಿರಿಯ ರಾಜಕೀಯ ಮುತ್ಸದ್ದಿ ಪದ್ಮವಿಭೂಷಣ ಎಸ್.ಎಂ.ಕೃಷ್ಣ ಅವರ ಅಂತ್ಯಕ್ರಿಯೆ ಅವರ ಹುಟ್ಟೂರು ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಸೋಮನಹಳ್ಳಿಯಲ್ಲಿ ಬುಧವಾರ ಮಧ್ಯಾಹ್ನ ನಡೆಯಲಿದೆ.

ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿನ ಕಾಫಿ ಡೇ ಬಳಿ ಖಾಲಿ ಜಾಗದಲ್ಲಿ ಅಂತ್ಯಕ್ರಿಯೆ ನೆರವೇರಿಸಲು ಸಿದ್ಧತೆಗಳು ನಡೆದಿವೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಮಂಗಳವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ.ಶಿವಕುಮಾರ್, ಕರ್ನಾಟಕ ರಾಜ್ಯವನ್ನು ವಿವಿಧ ಆಯಾಮದಲ್ಲಿ ಅಭಿವೃದ್ಧಿಗೊಳಿಸಿದ ಆಧುನಿಕ ಕರ್ನಾಟಕದ ಮಹಾಶಿಲ್ಪಿ ಎಸ್.ಎಂ.ಕೃಷ್ಣ. ಅವರ ಅಗಲಿಕೆ ರಾಜ್ಯಕ್ಕೆ ತುಂಬಲಾರದ ನಷ್ಟ ಉಂಟು ಮಾಡಿದೆ. ನವ ಕರ್ನಾಟಕ ನಿರ್ಮಾಣದ ಕಾರಣಕರ್ತ ಹಾಗೂ ಜಿಲ್ಲೆಯ ಒಬ್ಬ ■9ನೇ ಪುಟಕ್ಕೆ



ಎಸ್.ಎಂ.ಕೃಷ್ಣ ಅವರ ಅಂತ್ಯಕ್ರಿಯೆ ಸ್ಥಳವನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಪರಿಶೀಲನೆ ನಡೆಸಿದರು.



ಕೊಳ್ಳೇಗಾಲ ಮಾಜಿ ಶಾಸಕ ಎಸ್.ಜಯಣ್ಣ ನಿಧನ

ಹೊಸ ಮನೆ ಪ್ರವೇಶಕ್ಕೆ ಮುನ್ನವೇ ಕಾಲನ ಕರೆ!


ಕೊಳ್ಳೇಗಾಲ, ಡಿ.10– ಕೊಳ್ಳೇಗಾಲ ಮಾಜಿ ಶಾಸಕ ಹಾಗೂ ರಾಜ್ಯ ಉಗ್ರಾಣ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ಜಯಣ್ಣ (75) ಮಂಗಳವಾರ ಹೃದಯಾಘಾತದಿಂದ ನಿಧನರಾದರು.



ಎಸ್.ಜಯಣ್ಣ

ಎಸ್.ಜಯಣ್ಣ ಅವರು ಕೊಳ್ಳೇಗಾಲ ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಿರುವ ಮನೆ ಗೃಹಪ್ರವೇಶ ಆಹ್ವಾನ ಪತ್ರಿಕೆ ನೀಡಲು ಮಧ್ಯಾಹ್ನ 12.30ರಲ್ಲಿ ಕಾರಿನಲ್ಲಿ ತೆರಳುತ್ತಿದ್ದರು. ಈ ವೇಳೆ ಉತ್ತಂಬಳ್ಳಿ ಮಾರ್ಗಮಧ್ಯೆ ಎದೆನೋವು ಕಾಣಿಸಿಕೊಂಡಿದೆ. ತಕ್ಷಣ ಅವರನ್ನು ಪಟ್ಟಣದ ಜನನಿ ಆಸ್ಪತ್ರೆಗೆ ಕರೆದು ಕೊಂಡು ಬರಲಾಗಿದೆ. ಆದರೆ, ವೈದ್ಯರು ಅದಾಗಲೇ ಮೃತಪಟ್ಟಿರುವುದಾಗಿ ಹೇಳಿದ್ದಾರೆ.

ಮೃತರು ಮಾಂಬಳ್ಳಿ ಗ್ರಾಮದ ದಿವಂಗತ ಸಣ್ಣಯ್ಯ ಹಾಗೂ ದಿ.ಪುಟ್ಟನಂಜಮ್ಮ ಅವರ ಏಳು ಮಕ್ಕಳ ಪೈಕಿ ಮೊದಲನೇ ಮಗನಾಗಿದ್ದರು. ಒಬ್ಬ ಸಹೋದರ ಹಾಗೂ ಇಬ್ಬರು ಸಹೋದರಿಯರನ್ನು ಅಗಲಿದ್ದಾರೆ. ಸ್ವಗ್ರಾಮ ಮಾಂಬಳ್ಳಿಯ ಅವರ ಜಮೀನಿನಲ್ಲಿ ಬುಧವಾರ ಮಧ್ಯಾಹ್ನ 3 ಗಂಟೆಗೆ ಅಂತ್ಯಕ್ರಿಯೆ ನಡೆಯಲಿದೆ. ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅನೇಕ ಗಣ್ಯರು ಅಂತಿಮ ದರ್ಶನ ಪಡೆಯಲಿದ್ದಾರೆ ಎಂದು ಹೇಳಲಾಗಿದೆ. ಕೊಳ್ಳೇಗಾಲದಲ್ಲಿ ನೂತನವಾಗಿ ನಿರ್ಮಿಸಿರುವ ಮನೆ ಆವರಣದಲ್ಲಿ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ವಿಚಾರ ತಿಳಿಯುತ್ತಿದ್ದಂತೆ ■9ನೇ ಪುಟಕ್ಕೆ





ಬ್ರಾಹ್ಮಣ ಮಹಾ ಸಮ್ಮೇಳನಕ್ಕೆ ದತ್ತ ಪೀಠಾಧಿಪತಿಗಳಿಗೆ ಆಹ್ವಾನ



11ನೇ ಬ್ರಾಹ್ಮಣ ಮಹಾಸಮ್ಮೇಳನಕ್ಕೆ ಆಗಮಿಸುವಂತೆ ಮೈಸೂರಿನ ದತ್ತ ಪೀಠಾಧಿಪತಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರಿಗೆ ಆಹ್ವಾನ ನೀಡಲಾಯಿತು.

ಮೈಸೂರು,ಡಿ.10–ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ವತಿಯಿಂದ ಮುಂದಿನ ವರ್ಷ ಜನವರಿ 18, 19ರಂದು ಬೆಂಗಳೂರಿನಲ್ಲಿ ಆಯೋಜಿಸಿರುವ ಸುವರ್ಣ ಸಂಭ್ರಮ–2025 ಹಾಗೂ 11ನೇ ಬ್ರಾಹ್ಮಣ ಮಹಾಸಮ್ಮೇಳನಕ್ಕೆ ಮೈಸೂರಿನ ದತ್ತ ಪೀಠಾಧಿಪತಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರನ್ನು ಸಮ್ಮೇಳನದ ಸಂಚಾಲಕ ಕೆ.ಎನ್.ಸತ್ಯಮೂರ್ತಿ, ರಾಜ್ಯ ಉಪಾಧ್ಯಕ್ಷ ನಂ.ಶ್ರೀಕಂಠಕುಮಾರ್, ಸಮಿತಿ ಸದಸ್ಯರಾದ ಶಂಕರನಾರಾಯಣ, ನಾಗರಾಜು, ಎನ್ ಶ್ರೀನಿವಾಸ ಪ್ರಸಾದ್, ರಾಘವೇಂದ್ರ, ಎಂ.ಎಸ್. ಚಂದ್ರಶೇಖರ್ ಆಹ್ವಾನಿಸಿ, ಆಶೀರ್ವಾದ ಪಡೆದರು.

ಮುಖ್ಯಮಂತ್ರಿ ಒಳಗೊಂಡ ಮುಡಾ ನಿವೇಶನ ಹಂಚಿಕೆ ಹಗರಣ ಸಿಬಿಐಗೆ ವಹಿಸುವಂತೆ ಕೋರಿದ್ದ ಅರ್ಜಿ ವಿಚಾರಣೆ ಡಿ.19ಕ್ಕೆ ನಿಗದಿ





ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಿಂದ ತಮ್ಮ ಪತ್ನಿ ಹೆಸರಿಗೆ ಅಕ್ರಮವಾಗಿ ನಿವೇಶನ ಪಡೆದ ಆರೋಪ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಡಿಸೆಂಬರ್ 19ಕ್ಕೆ ನಿಗದಿಪಡಿಸಿದೆ.

ವಿಚಾರಣೆ ವೇಳೆ ಜಮೀನಿನ ಮೂಲ ಮಾಲೀಕ ದೇವರಾಜು ಪರ ಹಿರಿಯ ವಕೀಲ ದುಷ್ಯಂತ್ ದವೆ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಕ್ರಮವನ್ನು ಎತ್ತಿ ಹಿಡಿದಿರುವ ಏಕ ಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿರುವ ಮೇಲ್ಮನವಿ ಅರ್ಜಿ ವಿಭಾಗೀಯ ಪೀಠದಲ್ಲಿ ವಿಚಾರಣೆ ಹಂತದಲ್ಲಿದೆ. ಈ ಆದೇಶದಿಂದ ಪ್ರಕರಣಕ್ಕೂ ನಮಗೂ ಸಂಬಂಧವೇ ಇಲ್ಲದಿದ್ದರೂ ವಿಚಾರಣೆ ಎದುರಿಸಬೇಕಾಗಿದೆ. ಆದ್ದರಿಂದ ಅರ್ಜಿ ವಿಚಾರಣೆ ಮುಂದೂಡಬೇಕು ಎಂದು ಕೋರಿದರು.

ಸರ್ಕಾರದ ಪರ ವಾದಿಸಿದ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಪ್ರಕರಣ ಸಂಬಂಧ ಈವರೆಗೂ ಕೆಲ ಪ್ರತಿವಾದಿಗಳಿಗೆ ನೋಟಿಸ್ ಜಾರಿಯಾಗಿಲ್ಲ. ಹೀಗಾಗಿ ಕಾಲಾವಕಾಶ ನೀಡಬೇಕು ಎಂದು ಕೋರಿದರು. ಸರ್ಕಾರದ ಪರ ವಾದಿಸಿದ ಮತ್ತೊಬ್ಬ ಹಿರಿಯ ವಕೀಲ ಕಪಿಲ್ ಸಿಬಲ್, ಅರ್ಜಿದಾರರ ಮನವಿಯಂತೆ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸುವುದಕ್ಕೂ ಮುನ್ನ ಪ್ರತಿವಾದಿಗಳ ವಾದ ಕೇಳಬೇಕು. ಹೀಗಾಗಿ, ಪ್ರತಿವಾದಿಗಳಿಗೆ ನೋಟಿಸ್ ಜಾರಿಯಾಗದಿರುವುದರಿಂದ ಕಾಲಾವಕಾಶ ನೀಡಬೇಕು. ಈ ಪ್ರಕರಣ ಸಂಬಂಧದ ಮೇಲ್ಮನವಿ ವಿಭಾಗೀಯ ಪೀಠದಲ್ಲಿ ವಿಚಾರಣೆಗೆ ನಿಗದಿಯಾಗಿರುವುದರಿಂದ ವಿಚಾರಣೆ ಮುಂದೂಡಿದಲ್ಲಿ ಯಾವುದೇ ದೊಡ್ಡ ಸಮಸ್ಯೆ ಆಗುವುದಿಲ್ಲ ಎಂದರು.

ಅಲ್ಲದೆ, ದೂರುದಾರ ಸ್ನೇಹಮಯಿ ಕೃಷ್ಣ ವಿನಾಕಾರಣ ಅಡ್ವೋಕೇಟ್ ಜನರಲ್ ವಿರುದ್ಧ ವೈಯಕ್ತಿಕ ಆರೋಪ ಮಾಡುತ್ತಿದ್ದಾರೆ. ಇದನ್ನು ಕೋರ್ಟ್ ಗಂಭೀರವಾಗಿ ಪರಿಗಣಿಸಬೇಕು ಎಂದು ಪೀಠಕ್ಕೆ ಮನವಿ ಮಾಡಿದರು.

ಇದಕ್ಕೆ ಪೀಠ, ಸ್ನೇಹಮಯಿ ಕೃಷ್ಣ ಸ್ವನಿಯಂತ್ರಣ ವಿಧಿಸಿಕೊಳ್ಳಲು ಅವರ ಪರ ವಕೀಲರಿಗೆ ಸೂಚನೆ ನೀಡಿತು. ಸ್ನೇಹಮಯಿ ಕೃಷ್ಣ ಪರ ವಕೀಲ ವಾದ ಮಂಡಿಸಿ, ಮುಡಾ ಹಗರಣದ ಆರೋಪಿ ಸಿಎಂ ಆಗಿದ್ದಾರೆ. ಅವರೇ ರಾಜ್ಯದ ಮುಖ್ಯಸ್ಥರಾಗಿದ್ದು, ರಾಜ್ಯ ಸರ್ಕಾರದ ಹಿಡಿತದಲ್ಲಿಲ್ಲದ ಸಿಬಿಐ ಅಥವಾ ಬೇರೆ ಸ್ವತಂತ್ರ ಸಂಸ್ಥೆಗೆ ತನಿಖೆ ವಹಿಸಲು ಕೋರಿದರು. ಅಲ್ಲದೆ, ಪ್ರಕರಣದ ಎಲ್ಲ ಮಾಹಿತಿ ನ್ಯಾಯಪೀಠಕ್ಕೆ ಗೊತ್ತಿದೆ. ಹೀಗಾಗಿ ತನಿಖೆ ವಿಶ್ವಾಸಾರ್ಹವಾಗಲು ಸ್ವತಂತ್ರ ತನಿಖೆ ಅಗತ್ಯವೆಂದು ತಿಳಿಸಿದರು.

ಪ್ರಕರಣದ ತನಿಖೆ ಸಿಬಿಐಗೆ ಕೋರಿ ಸಲ್ಲಿಸಿರುವ ಅರ್ಜಿಯ ವಿಚಾರಣೆ ಬಾಕಿಯಿದೆ. ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸರು ಅಂತಿಮ ವರದಿ ಸಲ್ಲಿಸದಂತೆ ಸೂಚನೆ ನೀಡಬೇಕು ಎಂದು ಕೋರಿದರು. ಅಲ್ಲದೆ, ಜಾರಿ ನಿರ್ದೇಶನಾಲಯ (ಇಡಿ)ವನ್ನು ಪ್ರತಿವಾದಿಯನ್ನಾಗಿಸಲು ಕೋರಿ ಮಧ್ಯಂತರ ಅರ್ಜಿ ಸಲ್ಲಿಸಿದರು.

ಅರ್ಜಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದರೆ ಸಲ್ಲಿಸಲು ಪ್ರತಿವಾದಿಗಳಿಗೆ ಸೂಚನೆ ನೀಡಿದ ಹೈಕೋರ್ಟ್ ವಿಚಾರಣೆಯನ್ನು ಮುಂದೂಡಿತು.

ನಾಳೆಯಿಂದ ಮೈಸೂರಲ್ಲಿ ಮೈ ಬಿಲ್ಡ್ ಶೋ

ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ವಸ್ತುಪ್ರದರ್ಶನ

ಮೈಸೂರು, ಡಿ.10(ಜಿಎ)–ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾದ ಮೈಸೂರು ಶಾಖೆ ವತಿಯಿಂದ ಡಿ. 12 ರಿಂದ 16 ರವರೆಗೆ ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ವಸ್ತು ಪ್ರದರ್ಶನ ಮೈ ಬಿಲ್ಡ್ ಶೋ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಶಾಖೆ ಅಧ್ಯಕ್ಷ ಎ.ಎಸ್.ಯೋಗಾನರಸಿಂಹ ಈ ವಿಷಯ ತಿಳಿಸಿ, ಕಾರ್ಯಕ್ರಮವನ್ನು ಡಾ.ಕರಿ ವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಉದ್ಘಾಟಿಸುವರು. ಉಪಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ವಸ್ತು ಪ್ರದರ್ಶನ ಪ್ರತಿದಿನ ಬೆಳಗ್ಗೆ 10ಗಂಟೆಯಿಂದ ರಾತ್ರಿ 9 ಗಂಟೆವರೆಗೆ ತೆರೆದಿರಲಿದೆ ಎಂದರು.

ಈ ಬಾರಿಯ ವಸ್ತುಪ್ರದರ್ಶನದಲ್ಲಿ ಕಟ್ಟಡ ನಿರ್ಮಾಣದ ಬಗ್ಗೆ ಇತ್ತೀಚೆಗೆ ಆವಿಷ್ಕಾರಗೊಂಡಿರುವ ಕಟ್ಟಡ ಸಾಮಗ್ರಿಗಳ ಸಮಗ್ರ ಪರಿಚಯವಿರಲಿದ್ದು, ದೇಶ, ವಿದೇಶಗಳ ಕಟ್ಟಡ ಸಾಮಗ್ರಿಗಳನ್ನು ಇಲ್ಲಿ ನೋಡಬಹುದಾಗಿದೆ. ಸೌರಶಕ್ತಿ ಯೋಜನೆ, ನವೀನ ಮಾದರಿಯ ನೆಲಹಾಸು, ವಿದ್ಯುತ್ ಉಪಕರಣ, ಕಟ್ಟಡ ನಿರ್ಮಾಣ ಯಂತ್ರಗಳು, ಜಲಸಂರಕ್ಷಣಾ ವಿಧಾನ, ಅಡುಗೆ ಮನೆ, ಸ್ನಾನದ ಮನೆಯ ಅಲಂಕಾರಿಕ ಸಾಮಾಗ್ರಿ, ವಿಶೇಷ ರೀತಿಯ ಛಾವಣಿ ಸಾಮಾಗ್ರಿ, ಹೊರಾಂಗಣ ನೆಲಹಾಸು, ನವೀನ ರೀತಿಯ ಬಣ್ಣ ಮತ್ತು ಸಾಮಗ್ರಿಗಳಲ್ಲದೆ, ಎಂ ಸ್ಯಾಂಡ್ ಅರಿವಿಗೆ ಮಳಿಗೆಗಳು ಇಲ್ಲಿರಲಿವೆ ಎಂದು ತಿಳಿಸಿದರು.

ಪ್ರತಿದಿನ ಸಂಜೆ 6.30ರಿಂದ ರಾತ್ರಿ 8.30ರವರೆಗೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ನಗರದ ಪ್ರೌಢಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ವಾಯ್ಸ್ ಆಫ್ ಮೈಬಿಲ್ಡ್–24 ಸ್ಪರ್ಧೆ ಆಯೋಜಿಸಲಾಗಿದೆ. ಹೀಗಾಗಿ ಆಸಕ್ತರು ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಿ ಎಂದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಕೆ.ಟಿ. ಗೋವಿಂದರಾಜು, ಕೆ.ಆರ್.ಪ್ರಭಾಕರ್, ಎಸ್.ಎಲ್.ದಿನೇಶ್ ಉಪಸ್ಥಿತರಿದ್ದರು.

ಅಭಿಮಾನಿಗಳಿಂದ ಎಸ್.ಎಂ.ಕೃಷ್ಣರಿಗೆ ಶ್ರದ್ಧಾಂಜಲಿ



ಮೈಸೂರಿನ ಪಡುವಾರಹಳ್ಳಿ ಸಿಗ್ನಲ್ ಬಳಿ ಒಕ್ಕಲಿಗ ಮುಖಂಡರು ದಿವಂಗತ ಎಸ್.ಎಂ.ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.

ಮೈಸೂರು, ಡಿ.10– ಮೈಸೂರು–ಹುಣಸೂರು ಮುಖ್ಯರಸ್ತೆ ಪಡುವಾರಹಳ್ಳಿ ಸಿಗ್ನಲ್ ಬಳಿ ಮಂಗಳವಾರ ರಾತ್ರಿ ದಿವಂಗತ ಎಸ್.ಎಂ.ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಒಕ್ಕಲಿಗ ಮುಖಂಡರ ನೇತೃತ್ವದಲ್ಲಿ ಎಸ್.ಎಂ.ಕೃಷ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದ ನೂರಾರು ಮಂದಿ ಮೊಂಬತ್ತಿ ಬೆಳಗಿ ಭಾವಪೂರ್ಣ ನಮನ ಸಲ್ಲಿಸಿದರು.

ಈ ವೇಳೆ ಮಾಜಿ ಸಂಸದ ಪ್ರತಾಪ್ ಸಿಂಹ ಮಾತನಾಡಿ, ಈ ನಾಡು ಕಂಡ ದೂರದೃಷ್ಟಿಯ ರಾಜಕೀಯ ಮುತ್ಸದ್ಧಿ ಎಸ್.ಎಂ.ಕೃಷ್ಣ ಅವರ ನಿಧನದಿಂದ ಸಮಾಜಕ್ಕೆ ತುಂಬಲಾಗದ ನಷ್ಟವಾಗಿದೆ. ಸಂಪರ್ಕ ವ್ಯವಸ್ಥೆ ಅಭಿವೃದ್ಧಿ, ಐಟಿ–ಬಿಟಿಗೆ ಪ್ರೋತ್ಸಾಹ ನೀಡುವ ಮೂಲಕ ಉದ್ಯೋಗ ಸೃಷ್ಟಿಗೆ ಕಾರಣರಾದರು. ಮೈಸೂರು–ಬೆಂಗಳೂರು ನಾಲ್ಕು ಪಥದ ರಸ್ತೆ, ಮೈಸೂರು ರಿಂಗ್ ರಸ್ತೆ, ಇನ್‌ಫೋಸಿಸ್ ಸೇರಿದಂತೆ ಹಲವು ಕೊಡುಗೆ ನೀಡಿದ್ದಾರೆ. ಮುಖ್ಯಮಂತ್ರಿ ನೀಡಿರುವ ಯೋಜನೆಗಳು, ಕಾರ್ಯಕ್ರಮಗಳು ಇಂದಿಗೂ ಹಸಿರಾಗಿವೆ ಎಂದರು.

ಇದೇ ವೇಳೆ ಹಲವರು ಮೈಸೂರಿನ ಯಾವುದಾದರೂ ಪ್ರಮುಖ ವೃತ್ತ ಅಥವಾ ರಸ್ತೆಗೆ ಎಸ್.ಎಂ.ಕೃಷ್ಣ ಅವರ ಹೆಸರನ್ನು ನಾಮಕರಣ ಮಾಡುವಂತೆ ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದರು. ಮೈಸೂರಿನಲ್ಲಿ ದೊಡ್ಡ ಮಟ್ಟದಲ್ಲಿ ಶ್ರದ್ಧಾಂಜಲಿ ಕಾರ್ಯಕ್ರಮ ಆಯೋಜಿಸಿ, ಎಸ್.ಎಂ.ಕೃಷ್ಣ ಅವರ ತತ್ವ–ಸಿದ್ಧಾಂತ, ವೈಚಾರಿಕತೆ ಬಗ್ಗೆ ಯುವ ಸಮುದಾಯಕ್ಕೆ ಪರಿಚಯಿಸಲು ತೀರ್ಮಾನಿಸಲಾಯಿತು.

ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಮರಿಸ್ವಾಮಿ, ಪ್ರಧಾನ ಕಾರ್ಯದರ್ಶಿ ಚೇತನ್, ರಾಜ್ಯ ನಿರ್ದೇಶಕ ಗಂಗಾಧರ್, ನಮ್ಮೂರು ನಮ್ಮೋರು ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಬೀಡನಹಳ್ಳಿ ಸತೀಶ್‌ಗೌಡ, ನಗರಪಾಲಿಕೆ ಮಾಜಿ ಸದಸ್ಯರಾದ ಎಸ್.ಬಿ.ಎಂ ಮಂಜು, ಪ್ರೇಮಾ ಶಂಕರೇಗೌಡ, ಮುಖಂಡರಾದ ರವಿ ರಾಜಕೀಯ, ಹೇಮಾನಂದೀಶ್, ಎಂ.ಕೆ.ನಂಜಯ್ಯ, ಕುಮಾರ್ ಗೌಡ, ವಸಂತ ಮುನೀಶ್, ನಮ್ರತಾ ರಮೇಶ್, ಶೇಖರ್, ಹನುಮಂತ, ರವಿಕುಮಾರ್, ಹೇಮಾ ಸಂತೋಷ್, ಆರ್.ಲೋಕೇಶ್, ರಾಜಕುಮಾರ್ ನೇಹಾ ನೈನಾ, ಉಮೇಶ್, ಪಡುವಾರಹಳ್ಳಿ ಮುಖಂಡರಾದ ತಿಮ್ಮಯ್ಯ, ಯೋಗೇಶ್, ಪೈ.ಚಿಕ್ಕಪುಟ್ಟಿ, ಕೃಷ್ಣಪ್ಪ, ಬೆಳವಾಡಿ ಶ್ರೀನಿವಾಸ್, ಗುರುರಾಜ್, ನಿಂಗರಾಜೇಗೌಡ ಮತ್ತಿತರರು ಪಾಲ್ಗೊಂಡಿದ್ದರು.

ಡಿ.16ಕ್ಕೆ ರೈತರಿಂದ ಬೆಳಗಾವಿ ಚಲೋ

ಮೈಸೂರು,ಡಿ.10(ಜಿಎ)– ಬೇಡಿಕೆ ಗಳನ್ನು ಈಡೇರಿಸುವಂತೆ ರೈತರು ರಾಜ್ಯ ಹಾಗೂ ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ಡಿ.16ರಂದು ಬೆಳಗಾವಿ ಚಲೋ ಹಮ್ಮಿಕೊಂಡಿದ್ದಾರೆ ಎಂದು ರೈತ ಮುಖಂಡ ಪಚ್ಚಿ ನಂಜುಂಡಸ್ವಾಮಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ವಿವಿಧೆಡೆಗಳಿಂದ ಅಂದು ಬೆಳಗಾವಿಗೆ ಆಗಮಿಸುವ ಸುಮಾರು ಲಕ್ಷ ರೈತರು ಬೆಳಗ್ಗೆ 9 ಗಂಟೆಗೆ ಅಲ್ಲಿನ ರೈತ ವೃತ್ತದಿಂದ ಸುವರ್ಣ ಸೌಧದವರೆಗೆ ಜಾಥಾ ಹೊರಟು ತಮ್ಮ ಬೇಡಿಕೆ ಈಡೇರಿಕೆಗಾಗಿ ಜನಪ್ರತಿನಿಧಿಗಳಿಗೆ ಮನವಿ ಪತ್ರ ಸಲ್ಲಿಸಲಿದ್ದಾರೆ ಎಂದರು.

ಶಾಸಕ ದರ್ಶನ್ ಪುಟ್ಟಣ್ಣಯ್ಯ, ತಾವು ಹಾಗೂ ಇನ್ನಿತರ ಒಟ್ಟಾರೆ 21 ರೈತ ಸಂಘಟನೆಗಳ ಮುಖಂಡರು ನೇತೃತ್ವ ವಹಿಸಲಿದ್ದೇವೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ವಿದ್ಯಾಸಾಗರ ರಾಮೇಗೌಡ, ಇಮ್ಮಾವು ರಘು, ನಾಗರಾಜು, ಮಹದೇವ ನಾಯಕ, ನಂಜುಂಡ, ತಿಮ್ಮನಾಯಕ ಉಪಸ್ಥಿತರಿದ್ದರು.

ಮೈಸೂರಲ್ಲಿ ನಾಳೆಯಿಂದ ಯೋಗ ಉತ್ಸವ



ಮೈಸೂರು, ಡಿ.10(ಜಿಎ)–ಇಂಡಿಕಾ ಯೋಗ ಸಂಸ್ಥೆ ವತಿಯಿಂದ ಡಿ.12ರಿಂದ 15ರವರೆಗೆ ನಗರದ ನಜರ್‌ಬಾದ್‌ನಲ್ಲಿರುವ ವಿಂಡ್ ಚೈಮ್ಸ್ ಹೊಟೇಲ್‌ನಲ್ಲಿ ಮೈಸೂರು ಯೋಗ ಉತ್ಸವ ಆಯೋಜಿಸಲಾಗಿದೆ ಎಂದು ಉತ್ಸವದ ಸಂಚಾಲಕ ಡಾ.ವಿನಯ ಚಂದ್ರ ಬನವತಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.12ರಂದು ಬೆಳಗ್ಗೆ 11ಗಂಟೆಗೆ ಎಸ್‌ವಿವೈಎಎಸ್‌ಎ ಯೋಗ ವಿವಿ ಉಪಕುಲಪತಿ ಡಾ.ಎನ್.ಕೆ. ಮಂಜುನಾಥ್ ಶರ್ಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಎಸ್‌ವಿವೈಎಎಸ್‌ಎ ವಿವಿಯ ಕುಲಪತಿ ಡಾ.ಹೆಚ್.ಆರ್.ನಾಗೇಂದ್ರ, ಭರತ ಯೋಗ ಶಾಲೆಯ ಸಂಸ್ಥಾಪಕ ಭರತ್ ಶೆಟ್ಟಿ, ಮನುಬಾ, ಬಾಲಿ, ಉದ್ಯಮಿ ಬಿ.ಆರ್.ಪೈ ಆಗಮಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಸ್ತೋಕ ಕೃಷ್ಣ ಸ್ವಾಜಿ ವಹಿಸಲಿದ್ದಾರೆ ಎಂದರು.

ಯೋಗ ಉತ್ಸವದಲ್ಲಿ ಹೆಸರಾಂತ ಯೋಗ ಶಿಕ್ಷಕರು ಪಾಲ್ಗೊಳ್ಳಲಿದ್ದಾರೆ. ಅಭ್ಯಾಸ ಗೋಷ್ಠಿ, ಕಾರ್ಯಾಗಾರ, ಸ್ವಾಸ್ಥ್ಯ ಕುರಿತ ವಸ್ತುಪ್ರದರ್ಶನ, ಯೋಗ, ಆಯುರ್ವೇದ, ಆರೋಗ್ಯ ಮೊದಲಾದವುಗಳಿಗೆ ಸಂಬಂಧಿಸಿದ ಉತ್ಪನ್ನ ಮತ್ತು ಸೇವೆ ಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿದ್ದು, ಮಾಹಿತಿಗೆ ದೂ. 98801 93872 ಸಂಪರ್ಕಿಸಿ ಎಂದರು. ಸುದ್ದಿಗೋಷ್ಠಿಯಲ್ಲಿ ಪದ್ಮಾವತಿ ಎಸ್.ಭಟ್, ಆನಂದ ವೆಂಕಟ ಸುಬ್ರಹ್ಮಣ್ಯ, ಬಿ.ಪಿ. ಮೂರ್ತಿ, ದತ್ತಪ್ರಸಾದ್ ಉಪಸ್ಥಿತರಿದ್ದರು.

ಮೈಸೂರು ಡಿಸಿ ಕಚೇರಿ ಮುಂದೆ ಸಿಪಿಐ ಪ್ರತಿಭಟನೆ

ಅದಾನಿ ವಿರುದ್ಧ ತನಿಖೆ, ಮಣಿಪುರದಲ್ಲಿ ಶಾಂತಿ ಸ್ಥಾಪನೆಗೆ ಆಗ್ರಹ



ಅದಾನಿ ವಿರುದ್ಧ ತನಿಖೆ, ಮಣಿಪುರದಲ್ಲಿ ಶಾಂತಿ ಸ್ಥಾಪನೆಗೆ ಆಗ್ರಹಿಸಿ, ಭಾರತ ಕಮ್ಯುನಿಸ್ಟ್ ಪಕ್ಷದ (ಸಿಪಿಐ) ವತಿಯಿಂದ ಮೈಸೂರು ಡಿಸಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.


ಮೈಸೂರು, ಡಿ.10(ಜಿಎ)–ಅದಾನಿ ವಿರುದ್ಧದ ಲಂಚ ಪ್ರಕರಣದ ತನಿಖೆ ನಡೆಸಬೇಕು ಮತ್ತು ಮಣಿಪುರದಲ್ಲಿ ಶಾಂತಿ ಸ್ಥಾಪನೆ ಮಾಡುವಂತೆ ಆಗ್ರಹಿಸಿ ಭಾರತ ಕಮ್ಯುನಿಸ್ಟ್ ಪಕ್ಷದ (ಸಿಪಿಐ) ವತಿಯಿಂದ ಮೈಸೂರು ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಕೇಂದ್ರದಲ್ಲಿ ಮೂರನೇ ಬಾರಿಗೆ ಅಧಿಕಾರಕ್ಕೆ ಬಂದಿರುವ ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಪ್ರಜಾತಂತ್ರ ವಿರೋಧಿ ಆಡಳಿತ ಮುಂದುವರಿಸಿದೆ. ದೇಶದಲ್ಲಿ ರೈತ, ಕಾರ್ಮಿಕರ ಸಮಸ್ಯೆಗಳ ಪರಿಹಾರಕ್ಕೆ ಪ್ರಾಮುಖ್ಯತೆ ನೀಡದೆ ಅದಾನಿ–ಅಂಬಾನಿಯಂತಹ ಬಂಡವಾಳಶಾಹಿಗಳ ಹಿತಾಸಕ್ತಿಗಾಗಿ ಅಧಿಕಾರ ಬಳಕೆಯಾಗುತ್ತಿದೆ. ದೇಶ ಆರ್ಥಿಕ ಮುಗ್ಗಟ್ಟು ಎದುರಿಸುತ್ತಿದ್ದು, ಜಿಡಿಪಿ ನಿರಂತರವಾಗಿ ಕುಸಿಯುತ್ತಿದೆ. ನಿರುದ್ಯೋಗಿಗಳ ಸಂಖ್ಯೆಯು ದಿನೇ ದಿನೇ ಹೆಚ್ಚುತ್ತಿದ್ದು ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದಾಗಿ ಜನಸಾಮಾನ್ಯರು ಸಂಕಷ್ಟದಲ್ಲಿಯೇ ಬದುಕು ನಡೆಸುವಂತಾಗಿದೆ. ಸಂವಿಧಾನದ ಬಹುತ್ವದ ಆಶಯಗಳಿಗೆ ವಿರುದ್ಧವಾಗಿ ಏಕತ್ವದ ಪ್ರತಿಪಾದನೆ ಮುಂದುವರಿಸಿರುವ ಮೋದಿ ಸರ್ಕಾರ ಒಕ್ಕೂಟ ವ್ಯವಸ್ಥೆಗೆ ಮಾರಕವಾಗಲಿರುವ ಒಂದು ದೇಶ ಒಂದು ಚುನಾವಣೆ ಎಂಬ ವಿಷಯವನ್ನು ಪದೇ ಪದೇ ಮುನ್ನೆಲೆಗೆ ತರುತ್ತಿದೆ ಎಂದು ಕಿಡಿಕಾರಿದರು.

ಮಣಿಪುರ, ಉತ್ತರ ಪ್ರದೇಶ ಸೇರಿದಂತೆ ದೇಶದ ಹಲವು ರಾಜ್ಯಗಳಲ್ಲಿ ಜಾತಿ ಜನಾಂಗೀಯ ಸಂಘರ್ಷ, ಕೋಮುಭಾವನೆ ಕೆರಳಿಸಿ ಹಿಂಸಾಚಾರ ಭುಗಿಲೇಳುತ್ತಿದ್ದರೂ ಶಾಂತಿ ಸೌಹಾರ್ದತೆ ಬಲಪಡಿಸುವಲ್ಲಿ ಕೇಂದ್ರ ವಿಫಲವಾಗಿದೆ. ಗೌತಮ್ ಅದಾನಿ ತಮ್ಮ ಸಂಸ್ಥೆಯ ಪರವಾಗಿ ವ್ಯಾಪಾರ ವಹಿವಾಟು ಒಪ್ಪಂದ ಮಾಡಿಕೊಳ್ಳಲು ಸರ್ಕಾರಿ ಅಧಿಕಾರಿಗಳು ಸೇರಿದಂತೆ ಹಲವರಿಗೆ ಸಾವಿರಾರು ಕೋಟಿ ಲಂಚ ನೀಡಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಇದರಲ್ಲಿ ಕೇಂದ್ರ ಸರ್ಕಾರದ ಪಾತ್ರ ವಿದೆ. ಈ ಬಗ್ಗೆ ಸಮಗ್ರ ತನಿಖೆ ನಡೆಸಲು ಸಂಸತ್ತಿನ ಜಂಟಿ ಸಂಸದೀಯ ಸಮಿತಿ ರಚಿಸಿ (ಜೆಪಿಸಿ) ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಮಣಿಪುರದಲ್ಲಿ ಮೈತೆಯಿ ಮತ್ತು ಕುಕ್ಕಿ ಸಮುದಾಯಗಳ ನಡುವೆ ನಿರಂತರವಾಗಿ ನಡೆಯುತ್ತಿರುವ ಜನಾಂಗೀಯ ಸಂಘರ್ಷ ತಡೆದು ಶಾಂತಿ ಸ್ಥಾಪಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ. ಜನಾಂಗೀಯ ಸಂಘರ್ಷದಲ್ಲಿ ಅಪಾರ ಸಂಖ್ಯೆಯ ಸಾವು ನೋವುಗಳು ಸಂಭವಿಸುತ್ತಿದ್ದು, ಸುಮಾರು 60 ಸಾವಿರಕ್ಕೂ ಹೆಚ್ಚು ಜನರು ನಿರಾಶ್ರಿತರಾಗಿದ್ದಾರೆ. ಹೀಗಾಗಿ ಮಣಿಪುರದಲ್ಲಿ ಶಾಂತಿ ನಡೆಸಬೇಕು. ಅನುಕೂಲವಾಗುವಂತೆ ಅಲ್ಲಿನ ಪರಿಸ್ಥಿತಿ ಕುರಿತು ಸಂಸತ್ತಿನಲ್ಲಿ ಚರ್ಚಿಸಬೇಕು. ಮಣಿಪುರದಲ್ಲಿ ಹೇರಲಾಗಿರುವ ಸಶಸ್ತ್ರ ಪಡೆಗಳ ವಿಶೇಷ ಅಧಿಕಾರ ಕಾಯ್ದೆ ಹಿಂಪಡೆದು ಶಾಂತಿ ಸ್ಥಾಪನೆಗೆ ಮುಂದಾಗಬೇಕು. ಉತ್ತರಪ್ರದೇಶ ಸೇರಿದಂತೆ ದೇಶದ ಹಲವು ರಾಜ್ಯಗಳಲ್ಲಿ ಕೋಮು ಭಾವನೆ ಕೆರಳಿಸಿ ಹಿಂಸಾಚಾರಕ್ಕೆ ಪ್ರಚೋದಿಸುವಂತಹ ಕೃತ್ಯಗಳು ನಿರಂತರವಾಗಿ ನಡೆಯುತ್ತಿದ್ದು, ಅವುಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ದೇಶದ ಆರ್ಥಿಕ ಪರಿಸ್ಥಿತಿ ತೀರಾ ಹದಗೆಟ್ಟಿದ್ದು ಜನಪರ ಆರ್ಥಿಕ ಧೋರಣೆ ಹಾಗೂ ಔದ್ಯ ಮಿಕ ನೀತಿ ಜಾರಿಗೊಳಿಸುವಲ್ಲಿ ಕೇಂದ್ರ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ. ನಿರುದ್ಯೋಗ ಸಮಸ್ಯೆ ಸೇರಿದಂತೆ ಮೂಲ ಹಕ್ಕುಗಳ ರಕ್ಷಣೆಗೆ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಕಾರ್ಯದರ್ಶಿ ಹೆಚ್.ಬಿ.ರಾಮಕೃಷ್ಣ, ಸಹ ಕಾರ್ಯದರ್ಶಿ ಕೆ.ಜಿ.ಸೋಮಶೇಖರ್, ಖಜಾಂಚಿ ಎನ್.ಕೆ. ದೇವದಾಸ್, ಡಿ.ಜಗನ್ನಾಥ್, ತ್ಯಾಗರಾಜನ್ ಮತ್ತಿತರರು ಪಾಲ್ಗೊಂಡಿದರು.

ಪ್ರೊ.ವಿ.ಕೆ.ನಟರಾಜ್ ಅವರ ದೇಹದಾನ



ಮೈಸೂರು, ಡಿ.10(ಆರ್‌ಕೆ)–ಸೋಮವಾರ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದ ಮೈಸೂರು ವಿಶ್ವವಿದ್ಯಾನಿಲಯದ ಮಾಜಿ ಕುಲಸಚಿವ ಹಾಗೂ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ವಿ.ಕೆ.ನಟರಾಜ್ ಅವರ ದೇಹವನ್ನು ಜೆಎಸ್‌ಎಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ಇಂದು ದಾನ ಮಾಡಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಖಾಸಗಿ ಆಸ್ಪತ್ರೆಯಿಂದ ಸೋಮವಾರ ಬೆಳಗ್ಗೆ ಪಾರ್ಥಿವ ಶರೀರವನ್ನು ಜಯಲಕ್ಷ್ಮೀಪುರಂನಲ್ಲಿರುವ ಅವರ ಮನೆಗೆ ತಂದು ಸಾರ್ವಜನಿಕರ ದರ್ಶನಕ್ಕೆ ಇರಿಸಲಾಗಿತ್ತು. ಇಂದು ಬೆಳಗ್ಗೆ 11.30 ಗಂಟೆ ವೇಳೆಗೆ ಜೆಎಸ್‌ಎಸ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಗೆ ದಾನ ಮಾಡಲಾಯಿತು ಎಂದು ಹೇಳಲಾಗಿದೆ.

ನಿಧನ

ಶಾಂತಮ್ಮ ಆನಂದರಾವ್



ಮೈಸೂರು,ಡಿ.10–ಮೈಸೂರಿನ ಕೃಷ್ಣಮೂರ್ತಿಪುರಂ ನಿವಾಸಿ ದಿವಂಗತ ಆನಂದರಾವ್ ಅವರ ಪತ್ನಿ ಶಾಂತಮ್ಮ ಆನಂದರಾವ್ (83) ಮಂಗಳವಾರ ಬೆಳಗ್ಗೆ ನಿಧನರಾದರು. ಮೃತರು ಪುತ್ರರಾದ ರವೀಂದ್ರನಾಥ್ ಮತ್ತು ಗುಣಶೇಖರ್, ಪುತ್ರಿ ಸಂಧ್ಯಾ, ಸೊಸೆಯಂದಿರು, ಅಳಿಯ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಾರಾಯಣ ಶೆಟ್ಟಿ



ತಿ.ನರಸೀಪುರ ತಾಲೂಕು ಬನ್ನೂರು ಹೋಬಳಿ ಗಾಣಿಗನ ಕೊಪ್ಪಲಿನ ನಿವಾಸಿ ನಾರಾಯಣ ಶೆಟ್ಟಿ (70) ಮಂಗಳವಾರ ನಿಧನರಾದರು. ಮೃತರು ಪತ್ನಿ ಗೌರಮ್ಮ, ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗಾಣಿಗನಕೊಪ್ಪಲಿನಲ್ಲಿ ನೆರವೇರಿತು

ಬಿ.ಎಸ್.ಜಗದೀಶ್



ಮಂಡ್ಯ, ಡಿ.10– ಮಾಂಡವ್ಯ ವೃತ್ತಿಪರ ಸಂಘದ ಮಾಜಿ ಅಧ್ಯಕ್ಷ ಬಿ.ಎಸ್.ಜಗದೀಶ್(45) ಮಂಗಳವಾರ ನಿಧನರಾದರು.


ಮೃತರು ಪತ್ನಿ ಪವಿತ್ರ, ಪುತ್ರರಾದ ಶಶಾಂಕ್, ರೇವಂತ್ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ಸ್ವಗ್ರಾಮ ಬೇವಿನಹಳ್ಳಿಯಲ್ಲಿ ಮಧ್ಯಾಹ್ನ 12ಗಂಟೆಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವೇದಾವತಿ



ಕೆ.ಆರ್.ಪೇಟೆ: ತಾಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಮದ ನಿವಾಸಿ ಪಾಪಣ್ಣನ ಟಿ.ವಿಜಯ್ ಕುಮಾರ್ ಅವರ ಧರ್ಮಪತ್ನಿ ವೇದಾವತಿ(40) ಮಂಗಳವಾರ ನಿಧನರಾದರು. ಮೃತರು ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಡಿ.11ರಂದು ಮಧ್ಯಾಹ್ನ 11 ಗಂಟೆಗೆ ಮೈಸೂರಿನ ಕೆ.ಜಿ.ಕೊಪ್ಪಲಿನ ರುದ್ರಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

11.12.2024 ಬುಧವಾರ, ಮಳೆ ನಕ್ಷತ್ರ: ಜ್ಯೇಷ್ಠ, 02.12.2024 ರಿಂದ 15.12.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಶುಕ್ಲ ಪಕ್ಷ,
ತಿಥಿ: ಏಕಾದಶಿ, ನಕ್ಷತ್ರ: ರೇವತಿ, ರಾಹುಕಾಲ: ಮಧ್ಯಾಹ್ನ 12 ರಿಂದ 1.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಮಧುಮೇಹ ಕಾಯಿಲೆಗೆ ಚಿಕಿತ್ಸಾ ಶಿಬಿರ, ಕುತ್ತಿಗೆ ಹಾಗೂ ಬೆನ್ನು ನೋವಿಗೆ ಅಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 9ರಿಂದ ಸಂಜೆ 4.30ರವರೆಗೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್ ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ಸುಯೋಗ್ ಆಸ್ಪತ್ರೆ :** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಸುಯೋಗ್ ಆಸ್ಪತ್ರೆ, ರಾಮಕೃಷ್ಣನಗರ, ಬೆಳಗ್ಗೆ 10 ರಿಂದ.

■ **ಮೈಸೂರಿನ ಅವಧೂತ ದತ್ತ ಪೀಠ, ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ಶ್ರೀ ದತ್ತಾತ್ರೇಯ ಜಯಂತಿ ಪ್ರಯುಕ್ತ ವಿವಿಧ ಧಾರ್ಮಿಕ ಕಾರ್ಯಕ್ರಮ, ಗೀತಾ ಜಯಂತಿ, ಸಂಪೂರ್ಣ ಭಗವದ್ಗೀತಾ ಪಾರಾಯಣ, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ಬೆಳಗ್ಗೆ 10 ರಿಂದ.

■ **ಶ್ರೀ ಗೀತಾ ಪ್ರಚಾರಿಣೀ ಸಭಾ ಟ್ರಸ್ಟ್ :** ಶ್ರೀ ಗೀತಾ ಜಯಂತಿ ಮಹೋತ್ಸವ, ಬೆಳಗ್ಗೆ 7 ರಿಂದ ಗೀತಾ ಜಯಂತಿ ಧ್ವಜಾರೋಹಣ, 8 ರಿಂದ ಸಾಮೂಹಿಕ ಭಗವದ್ಗೀತೆ ಪಾರಾಯಣ, 8.30 ರಿಂದ ಮಹಾ ಮಂಗಳಾರತಿ, ಪ್ರಸಾದ ವಿನಿಯೋಗ, ಸಂಜೆ 5.30 ರಿಂದ ವಿಷ್ಣು ಸಹಸ್ರನಾಮ ಪಾರಾಯಣ, ಸಂಜೆ 6 ರಿಂದ ಜೆ.ಪಿ.ನಗರದ ಸಂಜೀವಿನಿ ಭಜನಾ ಮಂಡಳಿಯಿಂದ ಭಜನೆ, ಸಂಜೆ 7 ರಿಂದ ಬಿ.ಎನ್. ಮಾಧವಚಾರ್ ಅವರಿಂದ 'ಭಗವದ್ಗೀತೆ ಪ್ರವಚನ–6ನೇ ಅಧ್ಯಾಯ', ಸ್ಥಳ: ಗೀತಾ ಮಂದಿರ, ಅಶೋಕ ರಸ್ತೆ.

■ **ರಾಯಲ್ ಸೊಸೈಟಿ ಆಫ್ ಕೆಮಿಸ್ಟ್ರಿ, ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ, ಜೆಎಸ್‌ಎಸ್ ಫಾರ್ಮಸಿ ಕಾಲೇಜು :** ಯೂಸುಫ್ ಹಮೀದ್ ರಸಾಯನಶಾಸ್ತ್ರ ಶಿಬಿರ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು : ಜೆಎಸ್‌ಎಸ್ ಉನ್ನತ ಶಿಕ್ಷಣ ಅಕಾಡೆಮಿ ಡೀನ್ ಡಾ. ವಿಶಾಲ್‌ಕುಮಾರ್ ಗುಪ್ತಾ, ಅಧ್ಯಕ್ಷತೆ : ಜೆಎಸ್‌ಎಸ್ ಫಾರ್ಮಸಿ ಕಾಲೇಜು ಪ್ರಿನ್ಸಿಪಾಲ್ ಡಾ. ಟಿ.ಎಂ.ಪ್ರಮೋದ್‌ಕುಮಾರ್, ಗೌರವ ಅತಿಥಿಗಳು : ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಸ್. ರೇವಣ್ಣ, ಸಿ.ಎನ್. ರಾಜು, ಪ್ರಕಾಶ್, ರಾಯಲ್ ಸೊಸೈಟಿ ಆಫ್ ಕೆಮಿಸ್ಟ್ರಿ ಪ್ರೋಗ್ರಾಂ ಎಕ್ಸಿಕ್ಯೂಟಿವ್ ಮೆಲಿಸ್ಸಾ ಮೆಂಡೋನ್ಸಾ, ಜೆಎಸ್‌ಎಸ್ ಫಾರ್ಮಸಿ ಕಾಲೇಜು ಪ್ರಾಧ್ಯಾಪಕ ಡಾ. ಬಿ.ಎಂ. ಗುರುಪಾಧ್ಯಾಯ, ಸ್ಥಳ: ಶ್ರೀ ರಾಜೇಂದ್ರ ಸಭಾಂಗಣ, ಜೆಎಸ್‌ಎಸ್ ಫಾರ್ಮಸಿ ಕಾಲೇಜು, ಮಧ್ಯಾಹ್ನ 3.30ಕ್ಕೆ

ಮೈಸೂರು ಆಕಾಶವಾಣಿ




ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ವಾದ್ಯ ವೈಭವ' ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್., 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ – ಎ.ಎನ್. ಶೀಲಾ, ಪಿ.ಸುರಭಿ, ವ್ಯಾಖ್ಯಾನ–ಡಾ.ಲತಾ, ಮೈಸೂರು, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ: ಮೈಸೂರಿನ ಸಿಎಸ್‌ಐಆರ್–ಸಿಎಫ್‌ಟಿಆರ್‌ಐನ ಅಮೃತ ಮಹೋತ್ಸವದ ಸಂದರ್ಭದಲ್ಲಿ ಸಿಎಫ್‌ಟಿಆರ್‌ಐ ನಡೆದು ಬಂದ ದಾರಿ ಕುರಿತು ಪದ್ಮಶ್ರೀ ಪುರಸ್ಕೃತರು, ಸಿಎಫ್‌ಟಿಆರ್‌ಐನ ನಿವೃತ್ತ ನಿರ್ದೇಶಕರು ಹಾಗೂ ನವದೆಹಲಿಯ ಸಿಎಸ್‌ಐಆರ್ ಇಂಡಿಯಾದ ಪ್ರತಿಷ್ಠಿತ ವಿಜ್ಞಾನಿಗಳೂ ಆದ ಡಾ. ವಿಶ್ವೇಶ್ವರಯ್ಯ ಪ್ರಕಾಶ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಮಿಥುನ್ ಚಕ್ರವರ್ತಿ – ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ಆಯುಷ್ ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ. ಎಸ್. ಬೈಂದೂರು, ಪರಿಕಲ್ಪನೆ: ಅಬ್ದುಲ್ ರಶೀದ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಮಹತಿ ಟಿ. ಭಾರ್ಗವಪುರಿ–ವಯೋಲಿನ್ ವಾದನ, 4.00 ಮಹಿಳಾರಂಗ 'ಸ್ತ್ರೀಚೇತನ', ಭಾಗವಹಿಸುವವರು: ಮೈಸೂರಿನ ಪರ್ವತಾರೋಹಿ ಜಮ್ಮದ ಪ್ರೀತ್ ಅಪ್ಪಯ್ಯ, ಪ್ರಸ್ತುತಿ:ಸಹನಾ, 4.45 ಹಿಂದಿ ಪಾಠ– ಶಾಂತಾ. ಡಿ. ಕಿಣಿ, 5.00 ಕಟ್ಟಡ ನಿರ್ಮಾಣದಲ್ಲಿ ದೂರದೃಷ್ಟಿಯ ನೂತನ ತಾಂತ್ರಿಕತೆ–ಮೈಬಿಲ್ಡ್ 24 ವಿಷಯ ಕುರಿತು ನೇರ ಸಂವಾದ. ಡಿಸೆಂಬರ್ 12 ರಿಂದ 16 ರವರೆಗೆ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯಲಿರುವ ಕಟ್ಟಡ ಸಾಮಗ್ರಿಗಳ ವಸ್ತುಪ್ರದರ್ಶನಕ್ಕೆ ಸಂಬಂಧಿಸಿದ ಮಾಹಿತಿ ನೀಡಲಿದ್ದಾರೆ ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಮೈಸೂರು ಸೆಂಟರ್ ಅಧ್ಯಕ್ಷ ಎ.ಎಸ್. ಯೋಗಾನರಸಿಂಹ, 'ಮೈಬಿಲ್ಡ್ 24 ರ ಅಧ್ಯಕ್ಷ ಕೆ.ಟಿ. ಗೋವಿಂದರಾಜು ಮತ್ತು ಕಾರ್ಯದರ್ಶಿ ಎಸ್.ಎಲ್. ದಿನೇಶ್. ಪ್ರಾಯೋಜಕರು : ಮೈಬಿಲ್ಡ್–23, ಮೈಸೂರು, 6.50 ಕೃಷಿರಂಗ: ಕೃಷಿ ಮಾರಾಟ ಹಾಗೂ ತಪಾಸಣಾ ನಿರ್ದೇಶನಾಲಯದ ಕಾರ್ಯ ಚಟುವಟಿಕೆಗಳು. ಈ ಕುರಿತು ಸಹಾಯಕ ಕೃಷಿ ಮಾರುಕಟ್ಟೆ ಸಲಹೆಗಾರರಾದ ಎಸ್. ಶಿವಕುಮಾರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಸಂಸತ್ ಸಮೀಕ್ಷಾ, 9.30 ಕ್ರೀಡಾಲೋಕ, 10.00 ಸಂಸತ್ತಿನ ಪ್ರಶ್ನೋತ್ತರ ಅವಧಿಯ ಕಲಾಪಗಳ ಧ್ವನಿಮುದ್ರಣ



ಅಮೆರಿಕಾದ ಅಧ್ಯಕ್ಷರಾಗಿದ್ದ ಬರಾಕ್ ಒಬಾಮ ಅವರೊಂದಿಗೆ ಎಸ್.ಎಂ.ಕೃಷ್ಣ



ಪತ್ನಿ ಶ್ರೀಮತಿ ಪ್ರೇಮಾ ಹಾಗೂ ಕುಟುಂಬ ಸದಸ್ಯರೊಂದಿಗೆ ಕೃಷ್ಣ ಅಪರೂಪದ ಚಿತ್ರ



ವೀರಪ್ಪನ್‌ನಿಂದ ಬಿಡುಗಡೆ ಹೊಂದಿದ ಡಾ.ರಾಜ್ ಅವರೊಂದಿಗೆ ಪತ್ರಿಕಾಗೋಷ್ಠಿಯಲ್ಲಿ ಕೃಷ್ಣ



ಪದ್ಮವಿಭೂಷಣ ಪ್ರಶಸ್ತಿ ಪಡೆದ ಸಂದರ್ಭದಲ್ಲಿ ಪ್ರಧಾನಿ ಮೋದಿ ಜೊತೆ ಕೃಷ್ಣ



ಮುಖ್ಯಮಂತ್ರಿ ದೇವರಾಜ ಅರಸು ಅವರೊಂದಿಗೆ ಸದನದಲ್ಲಿ ಎಸ್ಎಂ ಕೃಷ್ಣ



ಸಚಿವ ಸಹೋದ್ಯೋಗಿಗಳೊಂದಿಗೆ ಕ್ರೀಡಾಕೂಟಕ್ಕೆ ಚಾಲನೆ ನೀಡಿದ್ದ ಮಾಜಿ ಸಿಎಂ ಕೃಷ್ಣ



ಉದ್ಯಮ ವಸ್ತುಪ್ರದರ್ಶನದಲ್ಲಿ ಸಿಎಂ ದೇವರಾಜ ಅರಸು ಅವರೊಂದಿಗೆ ಎಸ್ಎಂಕೆ

ನಾಡಿಗೆ ಕೃಷ್ಣರ ಕೊಡುಗೆ ಅಪಾರ



ಎಸ್.ಎಂ.ಕೃಷ್ಣ ಅವರು ಧೀಮಂತ ಮುತ್ಸದ್ಧಿ ರಾಜಕಾರಣಿ. ಅವರ ಅಗಲಿಕೆ ಅತೀವ ದುಃಖ ಉಂಟು ಮಾಡಿದೆ. ಮುಖ್ಯಮಂತ್ರಿಯಾಗಿ ಕೃಷ್ಣ ಅವರು ಈ ನಾಡಿಗೆ ನೀಡಿದ ಕೊಡುಗೆ ಅಪಾರವಾದುದು. ಐಟಿ-ಬಿಟಿ ಕ್ಷೇತ್ರಕ್ಕೆ ನೀಡಿದ ಕೊಡುಗೆ ಸದಾ ಸ್ಮರಣೀಯ. ಅವರ ಕುಟುಂಬ ವರ್ಗ ಮತ್ತು ಅಭಿಮಾನಿಗಳಿಗೆ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ. ಅವರ ಆತ್ಮಕ್ಕೆ ಶಾಂತಿ ದೊರೆಯಲೆಂದು ದೇವರಲ್ಲಿ ಪ್ರಾರ್ಥಿಸುತೇನೆ.

-ಟಿ.ಎಸ್.ಶ್ರೀವತ್ಸ, ಕೃಷ್ಣರಾಜ ಕ್ಷೇತ್ರದ ಶಾಸಕರು

ನಾಡಿಗೆ ತುಂಬಲಾರದ ನಷ್ಟ



ರಾಜ್ಯದ ಮುಖ್ಯಮಂತ್ರಿಗಳಾಗಿ ಎಸ್.ಎಂ.ಕೃಷ್ಣ ಅವರು ಈ ನಾಡಿನ ಅಭಿವೃದ್ಧಿಗೆ ಮಹತ್ವದ ಕೊಡುಗೆಗಳನ್ನು ನೀಡಿದ್ದಾರೆ. ಅವರ ಅಗಲಿಕೆಯು ಇಡೀ ನಾಡಿಗೆ ತುಂಬಲಾರದ ನಷ್ಟ. ಎಸ್.ಎಂ.ಕೃಷ್ಣ ಅವರು ಆದರ್ಶ ವ್ಯಕ್ತಿತ್ವದವರು. ಅವರ ರಾಜಕೀಯ ಜೀವನ ನಮ್ಮ ಪೀಳಿಗೆಗೆ ಮಾದರಿಯಾಗಿದೆ. ಒಬ್ಬ ಮುತ್ಸದ್ಧಿ ರಾಜಕಾರಣಿಯನ್ನು ಈ ರಾಜ್ಯ ಕಳೆದುಕೊಂಡು ಬಡವಾಗಿದೆ. ಮುಖ್ಯಮಂತ್ರಿಗಳಾಗಿದ್ದ ವೇಳೆ ಎದುರಾದ ಕಠಿಣ ಸವಾಲುಗಳನ್ನು ಸಮಚಿತ್ತದಿಂದ ಸ್ವೀಕರಿಸಿ ನಿಭಾಯಿಸುವಲ್ಲಿ ಯಶಸ್ವಿಯಾದರು. ದೇವರು ಅವರ ಕುಟುಂಬ ವರ್ಗಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ.

-ಕೆ.ಹರೀಶ್‌ಗೌಡ, ಚಾಮರಾಜ ಕ್ಷೇತ್ರದ ಶಾಸಕ


ಸಂಕಷ್ಟಗಳ ಸರಮಾಲೆ ನಡುವೆಯೇ ಅಭಿವೃದ್ಧಿ ಸರದಾರ; ಬೆಂಗಳೂರು 'ಸಿಲಿಕಾನ್ ಸಿಟಿ'ಯಾಯ್ತು!

ಬೆಂಗಳೂರು, ಡಿ.10(ಕೆಎಂಶಿ)- ಸಾಲು ಸಾಲು ಸಂಕಷ್ಟಗಳ ನಡುವೆಯೂ ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿ ನಾಲ್ಕೂವರೆ ವರ್ಷಗಳ ಅಧಿಕಾರದ ವೇಳೆ ವಿಶ್ವ ಭೂಪಟದಲ್ಲಿ ಕರ್ನಾಟಕ ರಾರಾಜಿಸುವಂತೆ ಮಾಡಿದ ಕೀರ್ತಿ ಇವರಿಗೆ ಸಲ್ಲುತ್ತದೆ.

ಮುಖ್ಯಮಂತ್ರಿಯಾಗಿ ರಾಜ್ಯವನ್ನು ಅದರಲ್ಲೂ ಬೆಂಗಳೂರನ್ನು ಐಟಿ-ಬಿಟಿ ಕ್ಷೇತ್ರದಲ್ಲಿ ವಿಶ್ವದ ಸಿಲಿಕಾನ್ ಸಿಟಿಯಾಗಿ ಮೇರುಮಟ್ಟಕ್ಕೆ ಕೊಂಡೊಯ್ಯುವಲ್ಲಿ ಕಾರಣೀಭೂತರಾಗಿದ್ದಲ್ಲದೆ, ರಾಜಧಾನಿಯನ್ನು ಸಿಂಗಪೂರ್ ಮಾದರಿ ನಗರವನ್ನಾಗಿಸುವ ಕಾರ್ಯಕ್ಕೂ ಕೈ ಹಾಕಿದ್ದರು.

ಇವರ ಆಡಳಿತಾವಧಿಯಲ್ಲೇ ಬೆಂಗಳೂರು-ಮೈಸೂರು ರಾಜ್ಯ ಹೆದ್ದಾರಿ ರಾಷ್ಟ್ರೀಯ ಹೆದ್ದಾರಿಯಾಗಿ ನಾಲ್ಕು ಪಥಗಳ ಮಾರ್ಗವಾಗಿ ಮಾರ್ಪಟ್ಟಿತು.

ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ, ಮೆಟ್ರೊ ಯೋಜನೆ, ನಗರ ಮತ್ತು ಪಟ್ಟಣ ಪ್ರದೇಶಗಳ ಮೂಲಸೌಕರ್ಯ ಕಲ್ಪಿಸುವುದೂ ಸೇರಿದಂತೆ ಅನೇಕ ಜನಪರ ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸಿದರು.



ರಾಜ್ಯಪಾಲ ಖುರ್ಷಿದ್ ಆಲಂ ಖಾನ್ ಅವರಿಂದ ಮುಖ್ಯಮಂತ್ರಿಯಾಗಿ ಕೃಷ್ಣ ಪ್ರಮಾಣ ವಚನ

ಜನೋಪಯೋಗಿ ಯೋಜನೆ: ಸತತ ಬರಗಾಲದ ನಡುವೆಯೂ ರಾಜ್ಯದ ಬೊಕ್ಕಸ ಬರಿದಾಗದಂತೆ ನೋಡಿಕೊಂಡಿದ್ದಲ್ಲದೆ, ರೈತರಿಗಾಗಿ ಯಶಸ್ವಿನಿ ವಿಮಾ ಯೋಜನೆ, ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆ ಆರಂಭಿಸಿದ ಹೆಗ್ಗಳಿಕೆ ಇವರದ್ದಾಗಿದೆ.

ಸ್ತ್ರೀಶಕ್ತಿ ಸಸ್ವಾಯ ಗುಂಪುಗಳನ್ನು ಅಸ್ತಿತ್ವಕ್ಕೆ ತಂದಿದ್ದಲ್ಲದೆ, ಗ್ರಾಮೀಣ ಭಾಗದಲ್ಲಿ ವಸತಿಗಳ ನಿರ್ಮಾಣಕ್ಕೆ ಒತ್ತು ನೀಡಿದರು.

ಮದ್ಯದ ದೊರೆಗಳಿಗೆ ಬ್ರೇಕ್: ಆಡಳಿತವನ್ನು ಮದ್ಯದ ದೊರೆಗಳಿಂದ ಮುಕ್ತಗೊಳಿಸಲು ಪಾನೀಯ ನಿಗಮ ಸ್ಥಾಪಿಸಿ, ಸೆಕೆಂಡ್ಸ್ ಹಾವಳಿ ತಡೆಗಟ್ಟಿ ಪಾನಪ್ರಿಯರಿಗೆ ಕಡಿಮೆ ದರದಲ್ಲಿ ಮದ್ಯ ದೊರೆಯುವಂತೆ ಮಾಡುವ ಮೂಲಕ ರಾಜ್ಯ ಬೊಕ್ಕಸಕ್ಕೂ ಹಣ ಹರಿದುಬರುವಂತೆ ಮಾಡಿದರು.

ವಿಕಾಸ, ಉದ್ಯೋಗಸೌಧ ನಿರ್ಮಾತೃ: ಒಂದೇ ಸೂರಿನಡಿ ಸರ್ಕಾರಿ ಸೇವೆ ದೊರೆಯಬೇಕೆಂದು ವಿಧಾನಸೌಧದ ಪಕ್ಕದಲ್ಲೇ ವಿಕಾಸಸೌಧ, ಅದರ ಸನಿಹದಲ್ಲೇ ಉದ್ಯೋಗಸೌಧ ನಿರ್ಮಿಸಿದರು.

ರೈತರ ಜಮೀನಿಗಾಗಿ ಭೂಮಿ ಆಪ್ ತಂದಿದ್ದಲ್ಲದೆ, ಬಿಡಿಎ ಮೂಲಕ ಹೊಸ ಬಡಾವಣೆಗಳನ್ನು ನಿರ್ಮಿಸಿ ಲಕ್ಷಾಂತರ ನಿವೇಶನಗಳನ್ನು ಹಂಚಿಕೆ ಮಾಡಿದರು.

ಕಾವೇರಿಗಾಗಿ ಬೆಂಗಳೂರು-ಮಂಡ್ಯ ಪಾದಯಾತ್ರೆ ಇವರ ಆಡಳಿತಾವಧಿಯಲ್ಲಿ ಮಳೆ ಇಲ್ಲದೆ ರೈತರು ಕಂಗಾಲಾದ ಸನ್ನಿವೇಶದಲ್ಲಿ ಕಾವೇರಿ ಜಲವಿವಾದ ಉಲ್ಬಣಗೊಂಡಿತ್ತು. ತಮಿಳುನಾಡಿಗೆ ಕಾವೇರಿ ನದಿ ನೀರು ಹರಿಸುವಂತೆ ಸುಪ್ರೀಂ ಕೋರ್ಟ್ ಆದೇಶ ನೀಡುವುದಕ್ಕೂ ಮುನ್ನ ಇವರು ಬೆಂಗಳೂರಿನಿಂದ ಮಂಡ್ಯದವರೆಗೆ ಪಾದಯಾತ್ರೆ ನಡೆಸಿದರು.

ಘಟಾನುಘಟಿ ಸಹೋದ್ಯೋಗಿಗಳು: ಕೆ.ಎಚ್.ರಂಗನಾಥ್, ಎಚ್.ಸಿ.ಶ್ರೀಕಂಠಯ್ಯ, ಎಂ.ವೈ.ಘೋರ್ಪಡೆ, ಮಲ್ಲಿಕಾರ್ಜುನ ಖರ್ಗೆ, ಧರ್ಮಸಿಂಗ್, ಡಿ.ಬಿ.ಚಂದ್ರೇಗೌಡ ಸೇರಿದಂತೆ ಘಟಾನುಘಟಿಗಳು ಕೃಷ್ಣ ಮಂತ್ರಿಮಂಡಲದಲ್ಲಿ ಇದ್ದರು.

ಆದಾಗ್ಯೂ ಇವರ ಆಡಳಿತಾವಧಿಯಲ್ಲಿ ಕಾವೇರಿ ಜಲ ವಿವಾದ, ಜಿಲ್ಲಾ, ತಾಲೂಕು ಪಂಚಾಯತ್ ಚುನಾವಣೆ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಗ್ರಾಮೀಣ ಕೃಪಾಂಕ ಸೇರಿದಂತೆ ಹಲವು ವಿಷಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಯಿತು.

ವೀರಪ್ಪನ್ ಉಪಟಳ: ಇದರ ನಡುವೆ ಕಾಡುಗಳ್ಳ ವೀರಪ್ಪನ್‌ನಿಂದ ಕನ್ನಡದ ವರನಟ ಡಾ.ರಾಜ್‌ಕುಮಾರ್ ಅಪಹರಣ ಕೃಷ್ಣ ಸರ್ಕಾರವನ್ನು ಸಂಕಷ್ಟಕ್ಕೆ ಸಿಲುಕಿಸಿತು. ಅಂದು ತಮಿಳುನಾಡು ಸರ್ಕಾರ ಮತ್ತು ಅಲ್ಲಿನ ಸಿನೆಮಾ ದಿಗ್ಗಜರು ಹಾಗೂ ಪತ್ರಕರ್ತರನ್ನು ಬಳಸಿಕೊಂಡು ಬಹಳ ಚಾಕಚಕ್ಯತೆಯಿಂದ ವೀರಪ್ಪನ್ ಬಂಧನದಿಂದ ರಾಜ್‌ಕುಮಾರ್ ಅವರನ್ನು ಬಿಡಿಸಿಕೊಂಡು ಬರುವಲ್ಲಿ ಕೃಷ್ಣ ಯಶಸ್ವಿಯಾದರು. ವೀರಪ್ಪನ್ ಇವರ ಆಡಳಿತದಲ್ಲಿ ಒಂದಲ್ಲಾ ಒಂದು ಸಮಸ್ಯೆ ಒಡ್ಡುತ್ತಲೇ ಇದ್ದ, ಮಾಜಿ ಸಚಿವ ನಾಗಪ್ಪ ಹತ್ಯೆಯೂ ಅದೇ ಸಮಯದಲ್ಲಿ ನಡೆಯಿತು.

ಕಾವೇರಿ, ಡಾ.ರಾಜ್ ಅಪಹರಣ ಪ್ರಕರಣವನ್ನು ಸಮರ್ಥವಾಗಿ ನಿಭಾಯಿಸಿದ ಕೃಷ್ಣ

ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ ರಾಜ್ಯದಲ್ಲಿ ಒಂದಲ್ಲಾ ಒಂದು ಸಮಸ್ಯೆ ತಾಂಡವವಾಡುತ್ತಿರುತ್ತದೆ. ಅದರಲ್ಲೂ ಕೃಷ್ಣ ತವರು ಮಂಡ್ಯ ಜಿಲ್ಲೆಯಲ್ಲಿ ಕಾವೇರಿ ಸಮಸ್ಯೆ ಭುಗಿಲೆದ್ದು, ಹೋರಾಟಗಳು ಪ್ರಾರಂಭವಾಗುತ್ತವೆ. ಹೋರಾಟ ಹಿಂಸಾ ಸ್ವರೂಪಕ್ಕೆ ತಿರುಗಿ, ಅಂಗಡಿ, ಮುಂಗ್ಗಟ್ಟುಗಳ ಮೇಲೆ ದಾಳಿ, ಸಾರ್ವಜನಿಕ ಆಸ್ತಿ, ಪಾಸ್ತಿ ನಷ್ಟವಾಗುತ್ತದೆ. ಹಾಗಿದ್ದರೂ ಅಂದಿನ ತಮಿಳುನಾಡು ಸಿಎಂ ಜಯಲಲಿತಾ ಕಾವೇರಿ ನೀರಿಗೆ ಹಿಡಿದಿದ್ದ ಪಟ್ಟನ್ನು ಸಡಿಲಗೊಳಿಸುವುದಿಲ್ಲ. ಹಾಗಿದ್ದರೂ ಕೃಷ್ಣರವರು ಬೆಂಗಳೂರಿನಿಂದ ಕೆಆರ್‌ಎಸ್‌ವರೆಗೂ ಪಾದಯಾತ್ರೆ ಮಾಡಿ, ತಮ್ಮ ತವರು ಜಿಲ್ಲೆಯ ಜನರನ್ನು ಸಮಾಧಾನಪಡಿಸಿ, ಕಾವೇರಿ ಸಮಸ್ಯೆಯನ್ನು ಬಗೆಹರಿಸುತ್ತಾರೆ. ಇದರ ಜೊತೆಗೆ ಬರ, ರೈತರ ಆತ್ಮಹತ್ಯೆ, ಆಲಮಟ್ಟಿ ನೀರಿನ ವಿವಾದವನ್ನು ನಾಜೂಕಾಗಿ ಪರಿಹರಿಸಿದ ಕೀರ್ತಿ ಕೃಷ್ಣರಿಗೆ ಸಲ್ಲುತ್ತದೆ.

ಇವೆಲ್ಲವುದಕ್ಕಿಂತ ಹೆಚ್ಚಾಗಿ ಕನ್ನಡದ ವರನಟ ಡಾ.ರಾಜ್‌ಕುಮಾರ್‌ರನ್ನು ಕಾಡುಗಳ್ಳ ವೀರಪ್ಪನ್ ಅಪಹರಣ ಮಾಡಿದಾಗ ಇಡೀ ರಾಜ್ಯವೇ ಹೊತ್ತಿ ಉರಿಯುತ್ತದೆ. ದೇಶದ ಗಮನವನ್ನು ರಾಜ್ಯ ಸೆಳೆದು, ಎಸ್.ಎಂ.ಕೃಷ್ಣ ಸರ್ಕಾರ ತೀವ್ರ ಸಮಸ್ಯೆಗೆ ಒಳಪಡುತ್ತದೆ. ಬರ, ಕಾವೇರಿ ಸಮಸ್ಯೆ, ರೈತರ ಆತ್ಮಹತ್ಯೆ ನಡುವೆ, ರಾಜ್ಯದ ಜನರೊಂದಿಗೆ ಭಾವನಾತ್ಮಕ ಸಂಬಂಧ ಹೊಂದಿದ್ದ ಡಾ.ರಾಜ್ ಅಪಹರಣ ಕೃಷ್ಣರನ್ನು ಭಾರಿ ಒತ್ತಡಕ್ಕೆ ಇಳಿಸುತ್ತದೆ. ಹಾಗಿದ್ದರೂ ದೃತಿಗಡೆದ ಕೃಷ್ಣ, ತಮಿಳುನಾಡಿನ ಅಂದಿನ ಸಿಎಂ ಕರುಣಾನಿಧಿ ಅವರೊಂದಿಗೆ ಚರ್ಚಿಸಿ, ಎರಡೂ ಸರ್ಕಾರ ಒಗ್ಗೂಡಿ ಡಾ.ರಾಜ್‌ರನ್ನು ಸುರಕ್ಷಿತವಾಗಿ ಕರೆತರಲಾಗುತ್ತದೆ. ಈ ಮೂಲಕ ಎಸ್.ಎಂ.ಕೃಷ್ಣರ ಚಾಣಾಕ್ಷತನ ಮತ್ತೊಮ್ಮೆ ಸಾಬೀತಾಗುತ್ತದೆ.



ಕಾಡಿನಿಂದ ಬಂದ ಡಾ.ರಾಜ್‌ರಿಗೆ ಸಿಹಿ ಸ್ವಾಗತ ನೀಡಿದ್ದ ಕೃಷ್ಣ

ಸಿಎಂ, ಗವರ್ನರ್, ಕೇಂದ್ರ ಮಂತ್ರಿಯಾದ ರಾಜ್ಯದ ಮೊದಲ ರಾಜಕೀಯ ನೇತಾರ

ರಾಜ್ಯದ ಅಗ್ರಗಣ್ಯ ರಾಜಕೀಯ ನೇತಾರರ ಪೈಕಿ ಅತಿಹೆಚ್ಚು ಅಧಿಕಾರ ಅನುಭವಿಸಿದ ರಾಜ್ಯದ ಏಕೈಕ ರಾಜಕಾರಣಿ ಎಸ್.ಎಂ.ಕೃಷ್ಣ. ನಾಲ್ಕೂವರೆ ವರ್ಷ ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿದ್ದ ಅವರು, ಬಳಿಕ ಮಹಾರಾಷ್ಟ್ರದಂತಹ ದೇಶದ ಬೃಹತ್ ರಾಜ್ಯದ ರಾಜ್ಯಪಾಲರಾಗಿ ಕಾರ್ಯನಿರ್ವಹಿಸಿದರು. ನಂತರ ಮೂರೂವರೆ ವರ್ಷ ಕೇಂದ್ರದಲ್ಲಿ ವಿದೇಶಾಂಗ ಸಚಿವರಾಗಿ ಕಾರ್ಯನಿರ್ವಹಿಸಿ, ಸಿಎಂ, ರಾಜ್ಯಪಾಲ ಹಾಗೂ ಕೇಂದ್ರದಲ್ಲಿ ಕ್ಯಾಬಿನೆಟ್ ದರ್ಜೆ ಸಚಿವರಾದ ರಾಜ್ಯದ ಏಕೈಕ ರಾಜಕಾರಣಿ ಎನಿಸಿಕೊಂಡಿದ್ದಾರೆ.

ಲಕೋಟೆಯಲ್ಲಿ ಕೃಷ್ಣ ಹೆಸರು ಬದಲಾಗಿ ಮೊಯ್ಲಿ ಹೆಸರು ಪ್ರತ್ಯಕ್ಷ..!

ಎಸ್.ಎಂ.ಕೃಷ್ಣ 1991ರಲ್ಲೇ ರಾಜ್ಯದ ಮುಖ್ಯಮಂತ್ರಿಯಾಗಬೇಕಿತ್ತು. ಹಿಂದಿನ ಬಂಗಾರಪ್ಪ ಆಡಳಿತದಲ್ಲಿ ಸ್ಪೀಕರ್ ಆಗಿದ್ದ ಕೃಷ್ಣ ಅವರ ಹೆಸರು ಬಂಗಾರಪ್ಪ ರಾಜೀನಾಮೆ ನೀಡಿದ ಬಳಿಕ ಕೇಳಿ ಬಂದಿತು. ಕೃಷ್ಣ ಅವರು ಮುಖ್ಯಮಂತ್ರಿಯಾಗುತ್ತೇನೆಂಬ ಹಂಬಲದಿಂದ ಮನೆ ದೇವರು ಮಲೈ ಮಹದೇಶ್ವರ ಬೆಟ್ಟಕ್ಕೆ ತೆರಳಿ ದೇವರ ದರ್ಶನ ಪಡೆದು ವಾಪಸ್ ಬರುವಷ್ಟರಲ್ಲಿ ಹೆಸರು ಬದಲಾಗಿತ್ತು.

ಲಕೋಟೆಯಲ್ಲಿ ಎಸ್.ಎಂ.ಕೃಷ್ಣ ಬದಲು ಎಂ.ವೀರಪ್ಪಮೊಯ್ಲಿ ಹೆಸರನ್ನು ಹೈಕಮಾಂಡ್ ಶಿಫಾರಸ್ಸು ಮಾಡಿತ್ತು. ಅದಾಗ್ಯೂ ಶಾಸಕರ ಬಲ ಕೃಷ್ಣ ಅವರ ಬಳಿ ಇದ್ದದ್ದರಿಂದ ಹೈಕಮಾಂಡ್ ಕೃಷ್ಣರನ್ನು ಮೊದಲು ಸ್ಪೀಕರ್ ಮಾಡಿ ಬಳಿಕ, ಡಿಸಿಎಂ ಹುದ್ದೆಗೆ ಪರಿಗಣಿಸಿತು. ಆ ಮೂಲಕ ರಾಜ್ಯದ ಮೊದಲ ಉಪಮುಖ್ಯಮಂತ್ರಿಯಾಗಿ ಎಸ್.ಎಂ.ಕೃಷ್ಣ ಅಧಿಕಾರ ವಹಿಸಿಕೊಂಡರು.

ಅಂಬರೀಷ್, ರಮ್ಯಾ ರಾಜಕೀಯ ಪ್ರವೇಶಕ್ಕೆ ಪ್ರೇರಣೆ

ಕನ್ನಡ ಚಿತ್ರರಂಗದ ಮೇರುನಟರಾಗಿದ್ದ ಡಾ.ಅಂಬರೀಷ್‌ರನ್ನು ರಾಜಕೀಯ ಪ್ರವೇಶಿಸಲು ಪ್ರೇರಕ ಶಕ್ತಿಯಾದವರು ಎಸ್.ಎಂ.ಕೃಷ್ಣ. 1995ರಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡ ಕೃಷ್ಣ, 1996ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ಟಿಕೆಟ್ ಕೊಡುವ ಭರವಸೆ ನೀಡಿದ್ದರು. ಆದರೆ ಟಿಕೆಟ್ ಬಿಟ್ಟು ಕೊಡಲು ಅಂದಿನ ಸಂಸದ ಜಿ.ಮಾದೇಗೌಡ ಒಪ್ಪದ ಕಾರಣ ಅಂಬಿ, ಜೆಡಿಎಸ್ ಸೇರ್ಪಡೆಗೊಂಡು ಸಂಸದರಾಗಿದ್ದರು.

ಆದರೆ 1999ರ ಚುನಾವಣೆ ಹೊತ್ತಿಗೆ ಅಂಬರೀಷ್‌ರನ್ನು ಮತ್ತೆ ಕಾಂಗ್ರೆಸ್‌ಗೆ ಕರೆತಂದ ಕೃಷ್ಣರವರು, ಅಂದಿನ ಲೋಕಸಭಾ ಚುನಾವಣಾ ಸಮಯದಲ್ಲಿ ಟಿಕೆಟ್ ನೀಡಿ, ಅಂಬಿ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರಲ್ಲದೇ 2004ರಲ್ಲಿ ಅಂಬರೀಷ್ ಕೇಂದ್ರ ಸಚಿವರಾಗಲು ಸಹಕಾರಿಯಾಗಿದ್ದರು.

ಇದಲ್ಲದೇ 2013ರಲ್ಲಿ ನಟಿ ರಮ್ಯಾ ರಾಜಕೀಯ ಪ್ರವೇಶಕ್ಕೂ ಕಾರಣರಾಗಿದ್ದ ಎಸ್.ಎಂ.ಕೃಷ್ಣ, ರಮ್ಯಾ ಸಂಸದರಾಗಿ ಮಂಡ್ಯದಲ್ಲಿ ಅಲ್ಪ ಅವಧಿಯಲ್ಲಿ ಕ್ರಿಯಾಶೀಲ ಕೆಲಸ ಮಾಡಲು, ಮಾರ್ಗದರ್ಶಕರಾಗಿದ್ದರು. ಇವರಿಷ್ಟೇ ಅಲ್ಲದೇ ಡಿ.ಕೆ.ಶಿವಕುಮಾರ್ ಹಾದಿಯಾಗಿ ಅನೇಕ ಮಂದಿಗೆ ಕೃಷ್ಣ ರವರೇ ಪ್ರೇರಕ ಶಕ್ತಿ.

ಎಸ್.ಎಂ.ಕೃಷ್ಣ ಹೆಸರಿನಲ್ಲಿ ಪ್ರಶಸ್ತಿ ಸ್ಥಾಪಿಸಲು ತೇಜಸ್ವಿ ಸೂರ್ಯ ಮನವಿ

ಬೆಂಗಳೂರು, ಡಿ.10- ಮಾಜಿ ಸಿಎಂ ಎಸ್ಎಂ ಕೃಷ್ಣ ನಿಧನಕ್ಕೆ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಸಂತಾಪ ಸೂಚಿಸಿದ್ದಾರೆ.



ಎಸ್ಎಂ ಕೃಷ್ಣ ನಿವಾಸದಲ್ಲಿ ಅಂತಿಮ ಗೌರವ ಸಲ್ಲಿಸಿರುವ ತೇಜಸ್ವಿ ಸೂರ್ಯ, ಭಾವನಾತ್ಮಕ ಬರಹವನ್ನು ಹಂಚಿಕೊಂಡಿದ್ದು, ಬೆಂಗಳೂರು, ರಾಜ್ಯಕ್ಕೆ ನೀಡಿರುವ ಕೊಡುಗೆಗಳನ್ನು ಸ್ಮರಿಸಿದ್ದಾರೆ.

ಇದೇ ವೇಳೆ, ಎಸ್ಎಂ ಕೃಷ್ಣ ಅವರ ಕೊಡುಗೆಗಳನ್ನು ಸ್ಮರಿಸುವ ನಿಟ್ಟಿನಲ್ಲಿ ಪ್ರಶಸ್ತಿ ಸ್ಥಾಪನೆಯಾಗಬೇಕೆಂದು ಸಂಸದರು ಅಭಿಪ್ರಾಯಪಟ್ಟಿದ್ದಾರೆ.

ಸಿಲ್ವರ್ ಜ್ಯೂಬಿಲಿ ಪಾರ್ಕ್‌ನಲ್ಲಿ ಮೊಳಗಿತ್ತು ಪಾಂಚಜನ್ಯ ಯಾತ್ರೆ

ಕುರುಕ್ಷೇತ್ರದ ಯುದ್ಧದಲ್ಲಿ ಗೆಲುವು ಸಾಧಿಸಲು, ಶ್ರೀ ಕೃಷ್ಣ ಪಾಂಚಜನ್ಯ ಮೊಳಗಿಸಿದ ಹಾಗೆ 1999ರ ವಿಧಾನಸಭಾ ಚುನಾವಣೆ ಗೆಲುವಿಗೆ ಅಂದಿನ ಕೆಪಿಸಿಸಿ ಅಧ್ಯಕ್ಷ ಎಸ್.ಎಂ.ಕೃಷ್ಣ ಪಾಂಚಜನ್ಯ ಯಾತ್ರೆ ಮೊಳಗಿಸಿದ್ದರು.

ಮಂಡ್ಯ ನಗರದ ಸಿಲ್ವರ್ ಜ್ಯೂಬಿಲಿ ಪಾರ್ಕ್‌ನಿಂದ ಪಾಂಚಜನ್ಯ ಯಾತ್ರೆ ಆರಂಭಿಸಿದರು. ಈ ಯಾತ್ರೆ ರಾಜ್ಯಾದ್ಯಂತ ಸಂಚರಿಸಿ, ಆ ಚುನಾವಣೆಯಲ್ಲಿ ಕೃಷ್ಣ ಭರ್ಜರಿಯಾಗಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದರು.

ಬೆಂಗಳೂರು- ಮೈಸೂರು ರಸ್ತೆ ಅಗಲೀಕರಣದ ರೂವಾರಿ

ತಮ್ಮ ಮುಖ್ಯಮಂತ್ರಿ ಅವಧಿಯಲ್ಲಿ ತವರು ಜಿಲ್ಲೆ ಮಂಡ್ಯ ಒಳಪಡುವಂತೆ ಬೆಂಗಳೂರು-ಮೈಸೂರು ಹೆದ್ದಾರಿಯ ನಿರ್ಮಾಣಕ್ಕೆ ಎಸ್.ಎಂ.ಕೃಷ್ಣ ಕಾರಣರಾಗಿದ್ದರು.

ಆದರೆ ಈ ಕೆಲಸ ಬೆಂಗಳೂರಿನಿಂದ ರಾಮನಗರ, ಚನ್ನಪಟ್ಟಣ, ಮದ್ದೂರು, ಮಂಡ್ಯವರೆಗೂ ಬಂದಿತಾದರೂ ಮಂಡ್ಯ ತಾಲೂಕಿನ ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ಜಾಗ ಹೊಂದಿರುವ ಹಲವು ರಾಜಕಾರಣಿಗಳು ಸ್ವಾರ್ಥಕ್ಕಾಗಿ ರಸ್ತೆ ನಿರ್ಮಾಣಕ್ಕೆ ಅಡ್ಡಿಪಡಿಸಿದ್ದರು. ಅದನ್ನು ನಿವಾರಿಸಿ ಹಿಡಿದ ಕಾರ್ಯ ಪೂರ್ಣಗೊಳಿಸಿದ್ದರು.



ಬೆಂಗಳೂರಿನ ಸದಾಶಿವ ನಗರದ ಮನೆಯಲ್ಲಿ ಎಸ್ಎಂ ಕೃಷ್ಣ ಪಾರ್ಥಿವ ಶರೀರ



ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಂತಿಮ ದರ್ಶನ ಪಡೆದರು



ಕೃಷ್ಣ ಅಂತಿಮ ದರ್ಶನ ಪಡೆದ ಹಿರಿಯ ನಟ ಶಿವರಾಜ್ ಕುಮಾರ್



ತಮ್ಮ ರಾಜಕೀಯ ಗೆಳೆಯ ಹೆಚ್.ವಿಶ್ವನಾಥ್ ಅವರೊಂದಿಗೆ ಕೃಷ್ಣ ಸಂತಸದ ಸಮಯ

ಕೃಷ್ಣರ ಕಳೆದುಕೊಂಡು ನಾಡು ಬಡವಾಗಿದೆ



ಎಸ್.ಎಂ.ಕೃಷ್ಣ ಅವರು ಈ ನಾಡು ಕಂಡ ಧೀಮಂತ ರಾಜಕಾರಣಿ. ಅವರು ಅಜಾತಶತ್ರುಗಳಾಗಿದ್ದವರು. ನಮ್ಮಂತಹ ಯುವ ಪೀಳಿಗೆಗೆ ಮಾರ್ಗದರ್ಶಕರಾಗಿದ್ದರು. ಅವರ ಅಧ್ಯಯನ ಶೀಲ ಪ್ರವೃತ್ತಿ ಉದಯೋನ್ಮುಖ ರಾಜಕಾರಣಿಗಳಿಗೆ ಮಾದರಿಯಾಗಿದೆ. ಅವರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸರಳ-ಸಜ್ಜನಿಕೆ ವ್ಯಕ್ತಿತ್ವದಿಂದ ನಮ್ಮ ಪೀಳಿಗೆಯವರು ಕಲಿಯುವುದು ಬಹಳವಿದೆ. ಅವರನ್ನು ಕಳೆದುಕೊಂಡು ಈ ನಾಡು ಬಡವಾಗಿದೆ. ಅವರ ಅಗಲಿಕೆಯಿಂದ ನೊಂದಿರುವ ಅವರ ಕುಟುಂಬ ಮತ್ತು ಅಭಿಮಾನಿಗಳ ದುಃಖದಲ್ಲಿ ನಾನೂ ಭಾಗಿಯಾಗಿದ್ದೇನೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ.

-ಜಿ.ಡಿ.ಹರೀಶ್‌ಗೌಡ, ಹುಣಸೂರು ಶಾಸಕ

ವಿಧಾನ ಮಂಡಲದ ಉಭಯ ಸದನದಲ್ಲಿ ಮಾಜಿ ಸಿಎಂ ಕೃಷ್ಣರಿಗೆ ಶ್ರದ್ಧಾಂಜಲಿ

ಬೆಂಗಳೂರು, ಡಿ.10(ಕೆಎಂಶಿ)- ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ನಿಧನಕ್ಕೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರತಿಪಕ್ಷದ ನಾಯಕ ಆರ್.ಅಶೋಕ್ ಸೇರಿದಂತೆ ಪೀಠಾಸೀನಾಧಿಕಾರಿಗಳು ಮಂಡಿಸಿದ ಸಂತಾಪ ನಿರ್ಣಯದ ಮೇಲೆ ಮಾತನಾಡಿ, ಕೃಷ್ಣ ಅವರು ನಾಡಿನ ಸಾಂಸ್ಕೃತಿಕ ನಾಯಕರಾಗಿದ್ದರೆಂದು ಬಣ್ಣಿಸಿದರು.

ದೇವರಾಜ ಅರಸು ಅವರಿಗೆ ಸರಿಸಮನಾದ ಮೌಲ್ಯಯುತ ಆಡಳಿತ ನಡೆಸಿದ ಧೀಮಂತ, ಎಲ್ಲರನ್ನೂ ಒಳಗೊಳ್ಳುವ ರಾಜಕಾರಣ ಮಾಡಿದ ಮುತ್ಸದ್ಧಿ ಎಂದಿದ್ದಾರೆ.

ಸಂತಾಪ ಸೂಚನಾ ನಿರ್ಣಯದ ಮೇಲೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ತಾವು ವಿದ್ಯಾರ್ಥಿಯಾಗಿದ್ದ ಸಂದರ್ಭದಲ್ಲಿ ಎಸ್.ಎಂ.ಕೃಷ್ಣ ಅವರ ಅಭಿಮಾನಿಯಾಗಿದ್ದೆ. 1968ರಲ್ಲಿ ಲೋಕಸಭಾ ಸ್ಥಾನಕ್ಕೆ ಪ್ರಜಾ ಸೋಷಿಯಲಿಸ್ಟ್ ಪಾರ್ಟಿಯಿಂದ ಎಸ್.ಎಂ.ಕೃಷ್ಣ ಅವರು ಸ್ಪರ್ಧಿಸಿದ್ದರು. ಇವರನ್ನು ಬೆಂಬಲಿಸಿ ಮಂಡ್ಯ ವಿದ್ಯಾರ್ಥಿ ಬಳಗದಿಂದ ಮೈಸೂರಿನ ಟೌನ್‌ಹಾಲ್‌ನಲ್ಲಿ ಕರೆದ ಸಭೆಯಲ್ಲಿ ಅವರನ್ನು ಬೆಂಬಲಿಸಿದ್ದೆ ಎಂದು ಸ್ಮರಿಸಿದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಇಂದು ನಾವೆಲ್ಲರೂ ಹೆಮ್ಮೆಯಿಂದ ಹೇಳುವ ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆ ರೂವಾರಿ ಕೃಷ್ಣ. ಬೆಂಗಳೂರಿನ ಜನ ಎಂದಿಗೂ ಅವರ ಅಭಿವೃದ್ಧಿ



ಕಾರ್ಯ ಮರೆಯುವುದಿಲ್ಲ ಎಂದರು.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಾತನಾಡಿ, ತಮ್ಮ ವ್ಯಕ್ತಿತ್ವದ ಮೂಲಕವೇ ಕೃಷ್ಣ ಅವರು ಮುಂದಿನ ಪೀಳಿಗೆಗೆ ಮಾದರಿಯಾಗಿದ್ದಾರೆ, ವಿದ್ಯಾರ್ಥಿ ದೆಸೆಯಿಂದಲೂ ಪ್ರತಿಭಾನ್ವಿತರಾಗಿದ್ದ ಅವರು, ಪ್ರಖ್ಯಾತ ವಾಷಿಂಗ್ಟನ್ ವಿಶ್ವ ವಿದ್ಯಾಲಯದಲ್ಲಿ ಫುಲ್‌ಬ್ರೈಟ್ ಸ್ಕಾಲರ್ ಪಡೆದ ಏಕೈಕ ರಾಜಕಾರಣಿ ಎಂದು ಬಣ್ಣಿಸಿದರು.

ಸಚಿವ ಹೆಚ್.ಕೆ.ಪಾಟೀಲ್ ಸಂತಾಪ ಸೂಚಿಸಿ ಮಾತನಾಡಿ, ಉತ್ತರ ಕರ್ನಾಟಕದ ಅಭಿವೃದ್ಧಿಗೆ ಕೃಷ್ಣ ಕೊಡುಗೆ ಅಪಾರ, ಬಚಾವತ್ ನ್ಯಾಯಾಧೀಕರಣ ಶಿಫಾರಸ್ಸು ಮೇರೆಗೆ ಕೃಷ್ಣಾ ನದಿ ನೀರಿನಲ್ಲಿ ರಾಜ್ಯಕ್ಕೆ 734 ಟಿ.ಎಂ.ಸಿ ನೀರು ಲಭಿಸಿತು. ಅದುವರೆಗೂ ಕೇವಲ 400 ಟಿ.ಎಂ.ಸಿ ನೀರಿಗೆ ಮಾತ್ರ ರಾಜ್ಯ ಸರ್ಕಾರ ಯೋಜನೆ ರೂಪಿಸಿತ್ತು, ಕೂಡಲೇ 729 ಟಿ.ಎಂ.ಸಿ. ನೀರು ಬಳಕೆಗೆ 'ಎ' ಸ್ಕೀಂ ಯೋಜನೆ ರೂಪಿಸಿ ಅನುದಾನ ನೀಡಿದರು. ವಿಧಾನ ಸೌಧದಲ್ಲಿ ಅವರ ಪ್ರತಿಮೆ ನಿರ್ಮಿಸುವಂತೆ ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು.

ಡಾ.ತಿಮ್ಮಯ್ಯ ಮಾತನಾಡಿ, ಡಾ.ರಾಜಕುಮಾರ ಅವರು ಅಪಹರಣವಾದಾಗ ಅವರನ್ನು ರಕ್ಷಣೆ ಮಾಡಿ ನಾಡಿಗೆ ಒಪ್ಪಿಸಿದ ಕೀರ್ತಿ ಕೃಷ್ಣ ಅವರಿಗೆ ಸಲ್ಲುತ್ತದೆ ಎಂದರು.

ಬಿ.ಕೆ.ಹರಿಪ್ರಸಾದ್ ಮಾತನಾಡಿ, ವಿದ್ಯಾರ್ಥಿ ದಿಸೆಯಿಂದಲೂ ನಾವು ಕೃಷ್ಣ ಅವರೊಂದಿಗೆ ಒಡನಾಟ ಹೊಂದಿದ್ದೆವು, ಎಲ್ಲ ಸದನದಲ್ಲೂ ಸದಸ್ಯರಾಗಿ ಮುಂದಿನ ಪೀಳಿಗೆಗೆ ಸ್ಫೂರ್ತಿಯಾಗುವಂತೆ ಆಡಳಿತ ನಡೆಸಿದರು ಎಂದರು.

ಹೆಚ್.ವಿಶ್ವನಾಥ್ ಮಾತನಾಡಿ, ಕೃಷ್ಣ ಅವರು, ತಮ್ಮ ಸರ್ಕಾರದ ಮೊದಲ ಆದ್ಯತೆ ಅಕ್ಷರ ಮತ್ತು ಆರೋಗ್ಯ ಎನ್ನುತ್ತಿದ್ದರು. ಸಂಪುಟದಲ್ಲಿ ತಮಗೆ ಶಾಲಾ ಶಿಕ್ಷಣ ಖಾತೆ ನೀಡಿದ್ದರು ಎಂದು ಸ್ಮರಿಸಿದರು.

ನಕ್ಕರೆ ಅದೇ ಸ್ವರ್ಗ

ಬಾಯ್ ಫ್ರೆಂಡ್ : ಸಾರಿ ಕಣೇ... ನಾನು ನಿನ್ನನ್ನು ಮದುವೆ ಆಗಕ್ಕಾಗಲ್ಲ...
ಗರ್ಲ್ ಫ್ರೆಂಡ್ : ಓ ಮೈ ಗಾಡ್... ಯಾಕೆ?
ಬಾಯ್ ಫ್ರೆಂಡ್ : ನಮ್ಮ ಮನೆಯಲ್ಲಿ ಒಪ್ತಾ ಇಲ್ಲ
ಗರ್ಲ್ ಫ್ರೆಂಡ್ : ನಿಮ್ಮ ಮನೆಯಲ್ಲಿ ಯಾರ್ಯಾರ್ ಇದ್ದೀರಿ!
ಬಾಯ್ ಫ್ರೆಂಡ್ : ನನ್ನ ಹೆಂಡತಿ, ಮೂರು ಮಕ್ಕಳು.

ಮೈಸೂರು ಮಿತ್ರ

ಬುಧವಾರ, 11 ಡಿಸೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಜಗತ್ತಿನಲ್ಲಿ ಮೂರು ವಸ್ತುಗಳನ್ನು ಮುಚ್ಚಿಡಲಾಗದು.
ಅವೆಂದರೆ ಸೂರ್ಯ, ಚಂದ್ರ ಮತ್ತು ಸತ್ಯ –ಗೌತಮ ಬುದ್ಧ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಒಕ್ಕಣ್ಣು ತನಗೆ ಹತ್ತು ಕಣ್ಣು ಅಂತಿದ್ನಂತೆ.

ನಿಮ್ಮ ಪತ್ರಗಳು

ಕನ್ನಡಿಗರ ಅಭಿವೃದ್ಧಿಯ ಕಣ್ಮಣಿ ಎಸ್.ಎಂ.ಕೃಷ್ಣ ಅಸ್ತಂಗತ

ಮಾನ್ಯರೆ,



ಮುದ್ದಾದ ಊರು ಮದ್ದೂರಿನ ಸೌಜನ್ಯದ ಸಾಕಾರಮೂರ್ತಿ, ಮಿತ ಭಾಷಿಯಾದ, ದೂರ ದೃಷ್ಟಿಯ, ಅಪರೂಪದಲ್ಲಿ ಅಪರೂಪದ ವ್ಯಕ್ತಿತ್ವವುಳ್ಳ ಸೋಮನಹಳ್ಳಿ ಮಲ್ಲಯ್ಯ ಕೃಷ್ಣ ಅವರು ಅಸ್ತಂಗತವಾಗಿರುವುದು ತುಂಬಲಾರದ ನಷ್ಟವಾಗಿದೆ. ಕೃಷ್ಣ ಅವರು ಮುಖ್ಯಮಂತ್ರಿಗಳಾಗಿ ಬೆಂಗಳೂರನ್ನು ಸಿಲಿಕಾನ್ ಸಿಟಿಯನ್ನಾಗಿ ಮಾಡಿ ಸಿಲಿಕಾನ್ ವ್ಯಾಲಿ ಎಂದು ಹೆಸರು ಗಳಿಸಲು ಕಾರಣ ಕರ್ತರಾಗಿ ಇಡೀ ನಭೋ ಮಂಡಲವೇ ಬೆಂಗಳೂರಿನತ್ತ ನೋಡುವಂತೆ ಮಾಡಿದ ರೂವಾರಿ. ಅವರ ದೂರದೃಷ್ಟಿಯ ಪರಿಣಾಮವಾಗಿ ಅವರ ಯೋಜನೆಗಳಾದ ಸ್ತ್ರೀ ಶಕ್ತಿ ಸಂಘ, ಶಾಲಾ ಮಕ್ಕಳಿಗೆ ಅಕ್ಷರ ದಾಸೋಹ, ರೈತರಿಗೆ ಪಹಣಿ ಪತ್ರ ನೀಡುವ ಯೋಜನೆ ಹಾಗೂ ಆರೋಗ್ಯಕ್ಕೆ ಸಂಬಂಧಿಸಿದ ಯಶಸ್ವಿನಿಯಂತಹ ಅತ್ಯುತ್ತಮ ಯೋಜನೆಗಳು ಬಹಳ ಯಶಸ್ವಿಯಾಗಿ ಇವತ್ತಿಗೂ ಜನಮಾನಸದಲ್ಲಿ ಚಿರಸ್ಥಾಯಿಯಾಗಿ ಉಳಿದಿವೆ. ಡಾ. ರಾಜಕುಮಾರ್ ಅವರನ್ನು ವೀರಪ್ಪನ್‌ನಿಂದ ಬಿಡುಗಡೆಗೊಳಿಸಲು ಹಾಗೂ ಕಾವೇರಿ ನದಿ ನಿರ್ವಹಣೆಗೆ ಪಟ್ಟ ಪರಿಶ್ರಮ ಮರೆಯುವಂತಿಲ್ಲ. ಮನಮೋಹನ್ ಸಿಂಗ್ ಅವರ ಸರ್ಕಾರದಲ್ಲಿ ವಿದೇಶಾಂಗ ಸಚಿವರಾಗಿ ದ್ವಿಪಕ್ಷೀಯ ಸಂಬಂಧ, ರಾಜತಾಂತ್ರಿಕ ಬಾಂಧವ್ಯವನ್ನು ಬೆಸೆಯಲು ಕಾರಣರಾದ ರೀತಿ ಹಾಗೂ ಪಾಸ್ ಪೋರ್ಟ್ ಸುಲಭವಾಗಿ ಸಿಗಲು ಪಾಸ್‌ಪೋರ್ಟ್ ಸೇವಾ ಪ್ರಕ್ರಿಯೆಯನ್ನು ಸರಳ ಗೊಳಿಸಿದ್ದನ್ನು ಯಾರೂ ಮರೆಯುವಂತಿಲ್ಲ. ನೀವು ಕನ್ನಡಿಗರ ಹಾಗೂ ದೇಶದ ಕಣ್ಮಣಿ ಎಂದರೆ ತಪ್ಪಾಗಲಾರದು, ನಿಮಗೊಂದು ಸಲಾಮ್ ಹೋಗಿ ಬನ್ನಿ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

ಸಲಾಂ ಪವರ್‌ಮ್ಯಾನ್(ಲೈನ್‌ಮ್ಯಾನ್)



ಮಾನ್ಯರೆ,

ಹೆಚ್.ಡಿ.ಕೋಟೆ ಪಟ್ಟಣದ ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿ ಪವರ್‌ಮ್ಯಾನ್ ಒಬ್ಬರು ಹೊಸ ಲೈನ್ ವೈರ್‌ಗಳನ್ನು ಅಳವಡಿಸುವಾಗ ತಮ್ಮ ಜೀವದ ಹಂಗನ್ನು ತೊರೆದು ಕರ್ತವ್ಯ ಮಾಡುತ್ತಿದ್ದಾರೆ. ಕತ್ತಲೆಯನ್ನು ಹೋಗಲಾಡಿಸಿ ಬೆಳಕನ್ನು ನೀಡುವ ಪವರ್ ಮ್ಯಾನ್‌ಗಳು ಸಹ ಯೋಧರೇ. ಅವರಿಗೂ ತಮ್ಮದೇ ಆದ ಕುಟುಂಬ ಸಂಸಾರವಿದ್ದರೂ ತಮ್ಮ ಪ್ರಾಣವನ್ನು ಲೆಕ್ಕಿಸದೆ ಮಳೆ, ಗಾಳಿ, ಬಿಸಿಲು, ಚಳಿ ಎನ್ನದೆ ನಮಗೆ ಬೆಳಕನ್ನು ನೀಡಲು ಹಗಲಿರುಳು ಶ್ರಮವಹಿಸುತ್ತಾರೆ. ರಾಜ್ಯದಲ್ಲಿ ಕೆಲವು ಕಡೆ ಪವರ್‌ಮ್ಯಾನ್‌ಗಳ ನಿಧನದ ಸುದ್ದಿಗಳನ್ನು ಪತ್ರಿಕೆಗಳಲ್ಲಿ ನೋಡಿದಾಗ ನಾಡು ಒಬ್ಬ ಯೋಧನನ್ನು ಕಳೆದುಕೊಂಡಷ್ಟು ದುಃಖವಾಗುತ್ತದೆ. ರಾಜ್ಯದ ಎಲ್ಲಾ ಪವರ್‌ಮ್ಯಾನ್‌ಗಳಿಗೆ ಹ್ಯಾಟ್ಸಾಪ್.

–ಪುಂಡಲೀಕ ಲಮಾಣಿ, ಹೌಸಿಂಗ್ ಬೋರ್ಡ್ ಕಾಲೋನಿ ನಿವಾಸಿ.

ಶೀಘ್ರ ವಾರ್ ಮೆಮೋರಿಯಲ್ ಪೂರ್ಣಗೊಳಿಸಲು ಮನವಿ

ಮಾನ್ಯರೇ.

ಕಳೆದ 12 ವರ್ಷಗಳಿಂದ ಹಗಲು ಇರುಳು ಹೋರಾಡಿ ಮೈಸೂರಿಗೆ ಮಾಜಿ ಸೈನಿಕರ ವಾರ್ ಮೆಮೋರಿಯಲ್ ಮಾಡಲು ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿ ಗೆಲುವು ಸಾಧಿಸಿದೆವು. ವಿಷಾದದ ಸಂಗತಿ ಎಂದರೆ ಶ್ರೀಮತಿ ಜಯಮಾಲಾ ಕನ್ನಡ ಸಂಸ್ಕೃತಿ ಇಲಾಖೆ ಸಚಿವರಾಗಿದ್ದಾಗ ಅವರಿಂದ 50 ಲಕ್ಷ ರೂ. ಬಿಡುಗಡೆಯಾಗಿತ್ತು ಹಾಗೂ ಸ್ಥಾಪನೆ ಆಗಿ ಕೆಲಸವೂ ಸಹ ಆರಂಭವಾಗಿತ್ತು. ಇತ್ತೀಚೆಗೆ ಈ ಕೆಲಸವು ನನೆಗುದಿಗೆ ಬಿದ್ದಿದೆ. ಯಾರೂ ಸಹ ಸಮರ್ಪಕವಾಗಿ ಉತ್ತರವನ್ನು ಕೊಡುತ್ತಿಲ್ಲ. ಸಂಬಂಧಪಟ್ಟ ಅಧಿಕಾರಿಗಳು ಇದರ ಬಗ್ಗೆ ಗಮನಹರಿಸಿ ಆದಷ್ಟು ಬೇಗ ಮಾಜಿ ಸೈನಿಕರ ವಾರ್ ಮೆಮೋರಿಯಲ್ ಅನ್ನು ಪೂರ್ಣಗೊಳಿಸಬೇಕೆಂದು ಮನವಿ.

–ಪಿ. ಶ್ರೀಧರ್, ಮೈಸೂರು ಮಿಲಿಟರಿ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷ, ಮೈಸೂರು.

ಕಾಯಕವೇ ಕೈಲಾಸಕ್ಕೆ......?

ಮಾನ್ಯರೆ,

ಲೇಖಕ ಮಿರ್ಲೆ ಚಂದ್ರಶೇಖರ್ ಅವರು ವಾರಕ್ಕೆ 70 ಘಂಟೆ ಕೆಲಸ ಮಾಡುವ ಇನ್ಫೋಸಿಸ್ ನಾರಾಯಣ ಮೂರ್ತಿ ಅವರ ಹೇಳಿಕೆಯ ಬಗ್ಗೆ ವಿವರವಾಗಿ ಚರ್ಚಿಸಿ, ಕಾಯಕವೇ ಕೈಲಾಸಕ್ಕೆ ದಾರಿಯಾಗದಿರಲಿ ಎಂದು ಮಾರ್ಮಿಕವಾಗಿ ಬರೆದಿದ್ದಾರೆ. ('ಮೈಸೂರು ಮಿತ್ರ' ಡಿಸೆಂಬರ್ 10). ಲೇಖಕರು ಅಭಿನಂದನಾರ್ಹರು. ಅಂದ ಹಾಗೆ ವಾಹನ ಚಾಲಕರು, ವಿಮಾನ ಪೈಲೆಟ್‌ಗಳು, ವೈದ್ಯರು, ದೈಹಿಕ ಶ್ರಮಜೀವಿಗಳೂ 70 ಗಂಟೆ ಕೆಲಸ ಮಾಡಬೇಕೆ? ಮೂರ್ತಿ ಅವರು ಇವರ ಬಗ್ಗೆ ಏನನ್ನುತ್ತಾರೆ?

–ಲಕ್ಷ್ಮಣ್ ಗೋರ್ಲಕಟ್ಟೆ, ವಿಜಯನಗರ, ಮೈಸೂರು

ಬಣ–ಬಣವೆಂದು ಬಡಿದಾಡಬೇಡಿ

ಮಾನ್ಯರೆ,

ಬಣ – ಬಣವೆಂದು ಬಡಿದಾಡ ಬೇಡಿರಯ್ಯ. ಸಾಕು ಮಾಡಿ ನಿಮ್ಮ ಬಣ ರಾಜಕೀಯದ ಪುರಾಣವ... ಆ ಬಣ – ಈ ಬಣದ ಮಧ್ಯೆ ಕಾರ್ಯಕರ್ತರು ತಲ್ಲಣ...ನಿಮ್ಮನ್ನು ಒಂದುಗೂಡಿಸಲು ವರಿಷ್ಠರು ಹೈರಾಣ.... ಅತ್ತ ಯತ್ನಾಳ್ ಬಣ, – ಇತ್ತ ವಿಜಯೇಂದ್ರ ಬಣ ನಡುವೆ ಕಾಂಗ್ರೆಸ್‌ನದು ಬರೀ ಹಗರಣ... ಇದೇ ಪ್ರಚಲಿತ ರಾಜಕೀಯದ ಪುರಾಣ!

– ಹೆಚ್. ಆರ್ ಪ್ರಸಾದ್, ವಿವೇಕಾನಂದ ನಗರ, ಮೈಸೂರು.



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ: 94815 33167

ಬಹುಮುಖಿ

ಕರ್ನಾಟಕದ ಕನಸುಗಾರ ಎಸ್.ಎಂ.ಕೃಷ್ಣ

ಕರ್ನಾಟಕದ ಮುಖ್ಯಮಂತ್ರಿಗಳಾಗಿ ನಾಡಿನ ಸಮಗ್ರ ಅಭಿವೃದ್ಧಿಗೆ ತಮ್ಮದೇ ಆದ ಮಹತ್ತರ ಕೊಡುಗೆ ನೀಡುವಲ್ಲಿ ಹಲವು ರೀತಿಯಲ್ಲಿ ರಾಜ್ಯ ಮತ್ತು ರಾಷ್ಟ್ರ ರಾಜಕಾರಣದಲ್ಲಿ ಹೆಸರಾಗಿದ್ದ ಸೋಮನಹಳ್ಳಿ ಮಲ್ಲಯ್ಯ ಕೃಷ್ಣ ಅರ್ಥಾತ್ ಎಸ್.ಎಂ.ಕೃಷ್ಣ ಅಂದ್ರೆ ಒಂದೂ ಕಪ್ಪು ಚುಕ್ಕಿಯಿಲ್ಲದ ಹಾಲ್ಬೆಳಕಿನ ಶುಭ್ರ ವ್ಯಕ್ತಿತ್ವದ ಅಪರಂಜಿಯಂಥ ಪರಿಶುದ್ಧ ರಾಜಕಾರಣಿ.

ಇತ್ತೀಚಿನ ಬೊಗಳೆ ರಾಜಕಾರಣಿಗಳಂತೆ ಅವರೆಂದೂ ಅಧಿಕಾರಕ್ಕಾಗಿ ಸ್ವಜಾತಿ ಸಂಘಟನೆ ಮಾಡಲಿಲ್ಲ. ಜಾತ್ಯಾತೀತವಾಗಿ ಜನ ಸಂಘಟನೆಯನ್ನಷ್ಟೇ ಮಾಡಿಕೊಂಡು ಬಂದವರು. ಅವರೆಂದೂ ಸ್ವಜಾತಿ ಸಮಾವೇಶ ಮಾಡಲಿಲ್ಲ. ಸರ್ವಜನಾಂದೋಲನ ಸಮಾವೇಶ ಮಾಡಿ ಜಾತ್ಯಾತೀತವಾಗಿ ಕೃಷ್ಣನ 'ಪಾಂಚಜನ್ಯ' ಮೊಳಗಿಸಿ ತಾವು ಪ್ರತಿನಿಧಿಸುತ್ತಿದ್ದ ಪಕ್ಷವನ್ನು ಅಧಿಕಾರಕ್ಕೆ ತಂದರು.

ಜನಾಭಿಪ್ರಾಯದಂತೆ ತಾವೇ ಮುಖ್ಯಮಂತ್ರಿಗಳೂ ಆದರು. ಅವರೆಂದೂ ಅಸಹ್ಯ ರಾಜಕಾರಣ ಮಾಡಲಿಲ್ಲ. ಕೈ–ಬಾಯಿ ಕೆಡಿಸಿಕೊಂಡವರಲ್ಲ. ಹೊಲಸನ್ನು ಮೈ–ಮನಸ್ಸಿಗೆ ಮೆತ್ತಿಕೊಂಡವರಲ್ಲ. ಹಾಗಾಗಿ ಅವರು ಎಲ್ಲರಿಗೂ ಸಹ್ಯರೆನಿಸಿದ್ದರು. ಅಕ್ಷರಶಃ ಜಾತ್ಯಾತೀತರಾಗಿ ನಾಡನ್ನು ಮುನ್ನಡೆಸಿದರು. ಆಧುನಿಕ ಕರ್ನಾಟಕದ ಭವಿಷ್ಯಕ್ಕೆ ಮುನ್ನುಡಿ ಬರೆದರು.

ಕರ್ನಾಟಕದ ಉದ್ದಗಲಕ್ಕೂ ಅಭಿವೃದ್ಧಿಯ ರಥದ ಚುಕ್ಕಾಣಿಯನ್ನು ಹಿಡಿದು "ಇದು ನನ್ನೂರು, ಎಲ್ಲಾರು ನನ್ನೋರು, ಇರೋರು ಇಲ್ಲದೋರು ಎಲ್ಲಾರು ನನ್ನ ಬಂಧು ಬಾಂಧವರು" ಎಂಬ ಸಾರ್ಥಕ ಭಾವದಿಂದ ಎಲ್ಲರೊಳಗೊಂದಾಗಿ ಎಳೆದರು. ಇವತ್ತು ಅವರು ಭೌತಿಕವಾಗಿ ನಮ್ಮೊಡನಿಲ್ಲ. (ನಿಧನ 10–12– 2024). ಆದರೆ ತಮ್ಮ ಜಾತ್ಯಾತೀತ ಮನಸ್ಸಿನ ಮೇರು ವ್ಯಕ್ತಿತ್ವದಿಂದ ಶಾಶ್ವತವಾಗಿ ಅವರು ಕರ್ನಾಟಕದ ಜನಮಾನಸದೊಳಗಿರುತ್ತಾರೆ.

ಶೈಕ್ಷಣಿಕವಾಗಿಯೂ ಅತ್ಯುನ್ನತ ಸಾಧನೆ ಮಾಡಿದ್ದ ಅವರು ಕಲೆ, ಸಾಹಿತ್ಯ, ಸಂಸ್ಕೃತಿ, ಸಿನಿಮಾ, ಸಾಂಸ್ಕೃತಿಕ ಮತ್ತು ಸಾಮಾಜಿಕ ಜೀವನದಲ್ಲೂ ಆಸಕ್ತಿ ತಳೆದಿದ್ದವರು ಮಾತ್ರವಲ್ಲ, ಅವುಗಳ ಅಭಿವೃದ್ಧಿಗಾಗಿಯೂ ಶ್ರಮಿಸುತ್ತಿದ್ದರು. ಇಂತಹ ಸಾಮಾಜಿಕ ಕಳಕಳಿಯ ಬಹುಮುಖಿ ವ್ಯಕ್ತಿತ್ವದ ಜನಮುಖಿ ಸೇವಾಧುರೀಣ ಸೋಮನಹಳ್ಳಿ ಮಲ್ಲಯ್ಯ ಕೃಷ್ಣ ಅವರು 1932 ಮೇ 1ರಂದು ಸಕ್ಕರೆ ನಾಡು ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಸೋಮನಹಳ್ಳಿ ಗ್ರಾಮದಲ್ಲಿ ಜನಿಸಿದರು. ತಂದೆ ಗಾಂಧಿವಾದಿ, ಸ್ವಾತಂತ್ರ್ಯ ಹೋರಾಟಗಾರ, ಪ್ರಗತಿಪರ ರೈತ ಎಸ್.ಸಿ.ಮಲ್ಲಯ್ಯ, ತಾಯಿ ಸುಸಂಸ್ಕೃತ ಕುಟುಂಬದ ತಾಯಮ್ಮ. ಈ ದಂಪತಿಯ ಹತ್ತು ಮಕ್ಕಳ ಪೈಕಿ ಎಸ್.ಎಂ.ಕೃಷ್ಣ ಆರನೆಯವರು. ಇವರ ಹಿಂದೆ ಐದು ಮಂದಿ ಹೆಣ್ಣು ಮಕ್ಕಳು ಹಾಗೂ ಇವರ ಬಳಿಕ ಒಂದು ಗಂಡು ಹಾಗೂ ಮೂರು ಮಂದಿ ಹೆಣ್ಣು ಮಕ್ಕಳು ಜನಿಸುತ್ತಾರೆ. ಕೃಷ್ಣ ಅವರು ಹುಟ್ಟುವುದಕ್ಕೂ ಮೊದಲು ಎರಡು ಗಂಡು ಮಕ್ಕಳು ಸಾವನ್ನಪ್ಪಿದ್ದರು. ಬಳಿಕ ಕೃಷ್ಣ ಅವರ ತಂದೆ ತಾಯಿ ಮಲೆ ಮಹದೇಶ್ವರನಿಗೆ ಹರಕೆ ಹೊತ್ತ ಫಲವಾಗಿ ಎಸ್.ಎಂ.ಕೃಷ್ಣ ಅವರು ಜನಿಸುತ್ತಾರೆ. ಜನಿಸಿದ ಕ್ಷಣದಿಂದಲೂ ಬಹಳ ಆರೋಗ್ಯವಂತಿಕೆಯಿಂದ ಬಾಲಕೃಷ್ಣನಂತೆಯೇ ಮುದ್ದು ಮುದ್ದಾಗಿ ಬಾಲ್ಯದಿಂದಲೂ ಬಹು ಚೂಟಿಯಾಗಿ ಎಸ್.ಎಂ.ಕೃಷ್ಣ ಎಲ್ಲರ ಆಕರ್ಷಣೆಯ ಕೇಂದ್ರಬಿಂದುವಾಗಿರುತ್ತಾರೆ.

ಮದ್ದೂರಿನ ಸ್ವಾತಂತ್ರ್ಯ ಹೋರಾಟಗಾರರ ಸೌಧಕ್ಕೆ ಒಮ್ಮೆ ಮಹಾತ್ಮ ಗಾಂಧಿ ಬಂದಿದ್ದ ಸಂದರ್ಭದಲ್ಲಿ ಬಾಲಕ ಎಸ್.ಎಂ.ಕೃಷ್ಣ ತಮ್ಮ ತಂದೆ ಮಲ್ಲಯ್ಯನವರ ಜೊತೆಯಲ್ಲಿ ಗಾಂಧೀಜಿಯವರನ್ನು ಕಂಡು ಮಾತನಾಡಿಸಿ ಪುಳಕಿತರಾಗಿ ಆಗಲೇ ಅವರಿಂದ ನಾಡ ಸೇವೆ, ದೇಶಸೇವೆಯ ಪ್ರೇರಣೆ ಹೊಂದಿದ್ದರು.

ಪ್ರಾಥಮಿಕ ವಿದ್ಯಾಭ್ಯಾಸವನ್ನು ಹುಟ್ಟೂರಿನಲ್ಲಿ ಕಲಿತು ನಂತರ ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆ, ಮಹಾಜನ ಹೈಸ್ಕೂಲುಗಳಲ್ಲಿ ಓದಿ, ಮಹಾರಾಜ ಕಾಲೇಜಿನಲ್ಲಿ ಕಲಾ ಪದವಿಯನ್ನು ಪೂರ್ಣಗೊಳಿಸಿದರು. ಬೆಂಗಳೂರಿನ ಸರ್ಕಾರಿ ಕಾನೂನು ಕಾಲೇಜಿನಲ್ಲಿ ಕಾನೂನು ಪದವಿ ಪಡೆದರು. ಮುಂದೆ ಅಮೆರಿಕದ ಟೆಕ್ಸಾಸ್‌ನ ಡಲ್ಲಾಸ್‌ನಲ್ಲಿರುವ ದಕ್ಷಿಣ ಮೆಥೋಡಿಸ್ಟ್ ವಿಶ್ವವಿದ್ಯಾಲಯ ಮತ್ತು ಜಾರ್ಜ್ ವಾಷಿಂಗ್‌ಟನ್ ವಿಶ್ವವಿದ್ಯಾಲಯದ ಕಾನೂನು ಶಾಲೆಯಲ್ಲಿಯೂ ಫುಲ್‌ಬ್ರೈಟ್ ವಿದ್ಯಾರ್ಥಿ ವೇತನ ಪಡೆದು ಕಾನೂನು ವ್ಯಾಸಂಗ ಮಾಡಿದರು.

ಎಸ್.ಎಂ.ಕೃಷ್ಣ ಅವರು ವಿದೇಶದಿಂದ ವಿದ್ಯಾಭ್ಯಾಸ ಮುಗಿಸಿ ಭಾರತಕ್ಕೆ ಮರಳಿದ ನಂತರ 1962ರಲ್ಲಿ ಮದ್ದೂರು ವಿಧಾನಸಭಾ ಕ್ಷೇತ್ರದಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸುವುದರ ಮೂಲಕ ರಾಜಕೀಯ ಕ್ಷೇತ್ರವನ್ನು ಪ್ರವೇಶಿಸುತ್ತಾರೆ. ಅದೂ ಯಾರ ವಿರುದ್ಧ? ಅವತ್ತಿನ ಕಾಲದಲ್ಲಿ ಪ್ರಮುಖ ರಾಜಕಾರಣಿಯಾಗಿ ರಾಜ್ಯದಲ್ಲೇ ಹೆಸರುವಾಸಿಯಾಗಿದ್ದ ಎಚ್.ಕೆ.ವೀರಣ್ಣಗೌಡ ಎದುರಾಗಿ. ಅಷ್ಟೇ ಅಲ್ಲ, ಇಡೀ ಕರ್ನಾಟಕವೇ ಎದುರು ನೋಡುತ್ತಿದ್ದ ಆ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿ ಕರ್ನಾಟಕ ವಿಧಾನಸಭೆಗೆ ಮೊಟ್ಟ ಮೊದಲಿಗೆ ಎಸ್.ಎಂ.ಕೆ. ಆಯ್ಕೆಯಾಗುತ್ತಾರೆ. ಅದು ಅಂತಿಂಥ ಗೆಲುವಲ್ಲ.



> ಎಸ್.ಎಂ.ಕೃಷ್ಣ ಸಾಹಿತ್ಯ ಹಾಗೂ ಸಾಂಸ್ಕೃತಿಕ ಆಸಕ್ತಿಗಳನ್ನೂ ರಾಜಕಾರಣದ ಜೊತೆ ಜೊತೆಯಾಗಿಟ್ಟುಕೊಂಡು ಬಂದವರು. ದೊಡ್ಡ ಸ್ಥಾನಗಳಲ್ಲಿದ್ದಾಗಲೂ ಸಾಮಾನ್ಯರಂತೆ ಸಭೆ ಸಮಾರಂಭಗಳಲ್ಲಿ ಅವರು ಪ್ರೇಕ್ಷಕರಾಗಿ ಭಾಗವಹಿಸಿದ್ದಿದೆ. ಅವರ ಜೀವನಾನುಭವ ಆಧರಿಸಿದ 'ಸ್ಮೃತಿವಾಹಿನಿ' ಎಂಬ ಜೀವನ ಚರಿತ್ರೆ ಪುಸ್ತಕ ಕೂಡ ಪ್ರಕಟಗೊಂಡಿದೆ. ಶಿಕ್ಷಣ, ತಾಂತ್ರಿಕ, ಐಟಿ, ಬಿಟಿ ಉದ್ಯಮ ಮುಂತಾದ ಕ್ಷೇತ್ರಗಳಲ್ಲಿ ಎಸ್.ಎಂ.ಕೃಷ್ಣ ಅವರ ಕೊಡುಗೆ ಅಪರಿಮಿತ. ರಾಜಕೀಯದಲ್ಲಿ ನಡೆಯುವ ಕ್ಷುದ್ರ ಜಾತೀಯ ಕಲಹಗಳಿಗೆ ಬೆಲೆಕೊಡದೆ ಎಲ್ಲ ವರ್ಗದ ಜನರನ್ನೂ ಗೌರವಿಸಿ, ಭಾಷೆ, ಸಂಸ್ಕೃತಿ, ಶಿಕ್ಷಣ, ಉದ್ಯಮ, ಸಾಮಾಜಿಕ ಮೌಲ್ಯ ಮತ್ತು ಜನರ ಆರ್ಥಿಕ ಅಭಿವೃದ್ಧಿಗಳ ಕುರಿತು ಗಮನಹರಿಸಿ ಸಹೃದಯಶೀಲರಾಗಿ ಎಸ್.ಎಂ.ಕೃಷ್ಣ ಅವರು, ನಾಡಿನೊಡನೆ, ನಾಡವರೊಡನೆ ಸ್ಪಂದಿಸಿದವರು. ನಾಡು ಮರೆಯದಂತಹ ಸಾಧನೆಯ ಶಿಖರವನ್ನು ನಿರ್ಮಿಸಿದ ಸಾಧಕರವರು. ಹಾಗಾಗಿ ಅವರನ್ನು ನಾಡು ಮರೆಯುವಂತೆಯೇ ಇಲ್ಲ. ನಾಡು ಮರೆಯದ ಮಹಾನ್ ಸಾಧಕರವರು.

ಅಭೂತಪೂರ್ವ ವಿಜಯವದು! ಸ್ವತಃ ಅಂದಿನ ಪ್ರಧಾನಿ ಸ್ಥಾನದ ಪಂಡಿತ್ ಜವಾಹರಲಾಲ್ ನೆಹರು ಅವರು ಎಚ್.ಕೆ.ವೀರಣ್ಣ ಗೌಡರ ಪರವಾಗಿ ಚುನಾವಣಾ ಪ್ರಚಾರ ಮಾಡಿದ್ದರೂ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಪ್ರಮುಖ ರಾಜಕಾರಣಿ ಎಚ್.ಕೆ. ವೀರಣ್ಣಗೌಡ ಅವರನ್ನು ಮೊದಲ ಎಂಟ್ರಿಯಲ್ಲೇ ಯುವಕ ಎಸ್.ಎಂ.ಕೃಷ್ಣ ಸೋಲಿಸಿದ್ದು ಅದೊಂದು ಅಪೂರ್ವ ದಾಖಲೆ ಎಂದೇ ಹೇಳಬಹುದು. ಅಲ್ಲಿಂದೀಚೆಗೆ ಎಸ್.ಎಂ. ಕೃಷ್ಣ ಅವರಿಗೆ ರಾಜಕಾರಣ ಮತ್ತು ಜನಸೇವೆ ಎಂಬುದು ಉಸಿರಿನಷ್ಟೇ ಸರಾಗವಾಗುತ್ತದೆ.

ನಂತರದ ದಿನಗಳಲ್ಲಿ ಎಸ್.ಎಂ.ಕೃಷ್ಣ ಅವರು ಪ್ರಜಾ ಸೋಷಿಯಲಿಸ್ಟ್ ಪಕ್ಷಕ್ಕೆ ಸೇರ್ಪಡೆಗೊಳ್ಳುತ್ತಾರೆ. 1967ರಲ್ಲಿ ನಡೆದ ವಿಧಾನ ಸಭಾ ಚುನಾವಣೆಯಲ್ಲಿ ಮದ್ದೂರಿನಿಂದ ಸ್ಪರ್ಧಿಸಿ ಕಾಂಗ್ರೆಸ್‌ನ ಎಂ.ಎಂ. ಗೌಡ ವಿರುದ್ಧ ಸೋಲುತ್ತಾರೆ. ಆದರೆ ಧೃತಿಗೆಡುವುದಿಲ್ಲ. ಇಂದಿನ ಸೋಲೇ ಮುಂದಿನ ಗೆಲುವಿನ ಮೆಟ್ಟಿಲೆಂದು ಭಾವಿಸಿ 1968 ರಲ್ಲಿ ಮಂಡ್ಯದ ಹಾಲಿ ಸಂಸದರು ನಿಧನರಾದಾಗ ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ನಡೆದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ವಿರುದ್ಧ ಸ್ಪರ್ಧಿಸಿ ದಾಖಲೆಯ ಗೆಲುವನ್ನು ಸಾಧಿಸುತ್ತಾರೆ.

1968ರಲ್ಲಿ ಕೃಷ್ಣ ಅವರು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಮತ್ತು ಪ್ರಜಾ ಸಮಾಜವಾದಿ ಪಕ್ಷದ ಸದಸ್ಯರ ನಡುವಿನ ಸಮನ್ವಯದಲ್ಲಿ ಪ್ರಭಾವಶಾಲಿಯಾಗುತ್ತಾರೆ. ಹಾಗಾಗಿ ಆ ಸಂದರ್ಭದಲ್ಲಿ 1968 ರಲ್ಲಿ ನಡೆದ ಉಪಚುನಾವಣೆಯಿಂದ ಸಮಾಜವಾದಿಯಾಗಿ ಕರ್ನಾಟಕದ ಮಂಡ್ಯ ಕ್ಷೇತ್ರದಿಂದ ಮೂರು ಬಾರಿ ಸಂಸದರಾಗಿ ಸೇವೆ ಸಲ್ಲಿಸುತ್ತಾರೆ. ಮುಂದಿನ ಎರಡು ಅವಧಿಗಳಲ್ಲಿ ಕಾಂಗ್ರೆಸ್ಸಿಗರಾಗಿ 1971 ಮತ್ತು 1980 ರಲ್ಲಿ ನಡೆಯುವ ಚುನಾವಣೆಗಳಲ್ಲಿಯೂ ವಿಜಯಶಾಲಿಯಾಗಿ ಮಂಡ್ಯ ಜನರ ಪ್ರೀತಿಯನ್ನು ಗೆಲ್ಲುತ್ತಾರೆ. ಅಷ್ಟೇ ವಿಶ್ವಾಸದಿಂದ, ಉತ್ಸಾಹದಿಂದ ಹೆಚ್ಚೆಚ್ಚು ಅಭಿವೃದ್ಧಿಯ ಕೆಲಸಗಳನ್ನು ಮಾಡುತ್ತಾರೆ.

ಎಸ್.ಎಂ.ಕೃಷ್ಣ ಅವರು ರಾಜ್ಯ ರಾಜಕಾರಣದತ್ತ ಉತ್ಸುಕರಾಗಿ 1972ರಲ್ಲಿ ಲೋಕಸಭೆಗೆ ರಾಜೀನಾಮೆ ನೀಡಿ ಕರ್ನಾಟಕದಲ್ಲಿ ಎಂಎಲ್‌ಸಿ ಆಗಿ ಅಂದಿನ ದೇವರಾಜ ಅರಸರ ಸರ್ಕಾರದಲ್ಲಿ ಸಚಿವರಾಗಿ ನೇಮಕವಾಗುತ್ತಾರೆ. 1980ರಲ್ಲಿ ಮತ್ತೆ ಲೋಕಸಭೆಗೆ ಮರಳಿ, 1983–1984ರ ಅವಧಿಯಲ್ಲಿ ಇಂದಿರಾ ಗಾಂಧಿಯವರ ಸರ್ಕಾರದಲ್ಲಿ ಸಚಿವರಾಗಿ ಸೇವೆ ಸಲ್ಲಿಸುತ್ತಾರೆ. 1984ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಸೋಲುತ್ತಾರೆ. ಅಲ್ಲಿ ಸೋತರೂ ಕೂಡ 1996 ಮತ್ತು 2006ರ ವರ್ಷಗಳಲ್ಲಿ ರಾಜ್ಯಸಭೆಯ ಸದಸ್ಯರಾಗುತ್ತಾರೆ. ಅವರು ವಿವಿಧ ಸಂದರ್ಭಗಳಲ್ಲಿ ಕರ್ನಾಟಕ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರಾಗಿದ್ದರು.1989 ಮತ್ತು 1993ರ ನಡುವೆ ಅವರು ಕರ್ನಾಟಕ ವಿಧಾನಸಭೆಯ ಸ್ಪೀಕರ್ ಮತ್ತು 1993ರಿಂದ 1994ರವರೆಗೆ ಕರ್ನಾಟಕದ ಉಪಮುಖ್ಯಮಂತ್ರಿಯಾಗಿದ್ದರು. ಎಸ್.ಎಂ.ಕೃಷ್ಣ ಅವರು 1999ರಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿ, ವಿಧಾನಸಭಾ ಚುನಾವಣೆಯಲ್ಲಿ ತಮ್ಮ ಪಕ್ಷವನ್ನು ಗೆಲುವಿನತ್ತ ಮುನ್ನಡೆಸಿ 2004ರವರೆಗೆ ಕರ್ನಾಟಕದ ಮುಖ್ಯಮಂತ್ರಿಗಳಾಗಿದ್ದರು. ಕೃಷ್ಣ ಅವರು ಕೆಲಕಾಲ ಮಹಾರಾಷ್ಟ್ರದ ರಾಜ್ಯಪಾಲರಾಗಿದ್ದು, 2008ರಲ್ಲಿ ಆ ಹುದ್ದೆಗೆ ರಾಜೀನಾಮೆ ನೀಡಿದರು. ರಾಜ್ಯಸಭೆ ಪ್ರವೇಶಿಸಿ 2009–2012ರ ಅವಧಿಯಲ್ಲಿ ಪ್ರಧಾನ ಮಂತ್ರಿ ಮನಮೋಹನ್ ಸಿಂಗ್ ಅವರ ಸರ್ಕಾರದಲ್ಲಿ ವಿದೇಶಾಂಗ ವ್ಯವಹಾರಗಳ ಕೇಂದ್ರ ಕ್ಯಾಬಿನೆಟ್ ಸಚಿವರಾಗಿ ಕಾರ್ಯನಿರ್ವಹಿಸಿದರು.

ಕಾಂಗ್ರೆಸ್ಸಿನ ರಾಜ್ಯ ರಾಜಕಾರಣದಲ್ಲಿ ಹಲವು ನಾಯಕತ್ವದ ಗೊಂದಲಗಳು, ಸಂಯುಕ್ತ ಸರ್ಕಾರಕ್ಕೆ ಜೊತೆಗೂಡಿದ ಜಾತ್ಯತೀತ ಜನತಾದಳದ ನಾಯಕರಿಗೆ ಇವರ ಕುರಿತಾಗಿದ್ದ ಅಸಹನೆಗಳು, ಗೆಲುವೆಂಬುದು ಮರೀಚಿಕೆಯಾಗಿದ್ದ ಕಾಂಗ್ರೆಸ್‌ನಲ್ಲಿ ತಮಗೆ ಗೌರವ ಇಲ್ಲದಿದ್ದದ್ದು ಇತ್ಯಾದಿಗಳನ್ನು ನಿರಂತರ ಕಂಡ ಎಸ್.ಎಂ.ಕೃಷ್ಣ ಅವರು, 2017ರಂದು ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ನೀಡಿ ಭಾರತೀಯ ಜನತಾ ಪಕ್ಷದತ್ತ ಒಲವು ತೋರಿದ್ದರು. ಬಿಜೆಪಿಗೆ ಬೆಂಬಲ ನೀಡಿದ್ದರು.

ಎಸ್.ಎಂ. ಕೃಷ್ಣ ಸಾಹಿತ್ಯ ಹಾಗೂ ಸಾಂಸ್ಕೃತಿಕ ಆಸಕ್ತಿಗಳನ್ನೂ ರಾಜಕಾರಣದ ಜೊತೆ ಜೊತೆಯಾಗಿಟ್ಟುಕೊಂಡು ಬಂದವರು. ದೊಡ್ಡ ಸ್ಥಾನಗಳಲ್ಲಿದ್ದಾಗಲೂ ಸಾಮಾನ್ಯರಂತೆ ಸಭೆ ಸಮಾರಂಭಗಳಲ್ಲಿ ಅವರು ಪ್ರೇಕ್ಷಕರಾಗಿ ಭಾಗವಹಿಸಿದ್ದಿದೆ. ಅವರ ಜೀವನಾನುಭವ ಆಧರಿಸಿದ 'ಸ್ಮೃತಿವಾಹಿನಿ' ಎಂಬ ಜೀವನ ಚರಿತ್ರೆ ಪುಸ್ತಕ ಕೂಡ ಪ್ರಕಟಗೊಂಡಿದೆ. ಶಿಕ್ಷಣ, ತಾಂತ್ರಿಕ, ಐಟಿ, ಬಿಟಿ ಉದ್ಯಮ ಮುಂತಾದ ಕ್ಷೇತ್ರಗಳಲ್ಲಿ ಎಸ್.ಎಂ.ಕೃಷ್ಣ ಅವರ ಕೊಡುಗೆ ಅಪರಿಮಿತ. ರಾಜಕೀಯದಲ್ಲಿ ನಡೆಯುವ ಕ್ಷುದ್ರ ಜಾತೀಯ ಕಲಹಗಳಿಗೆ ಬೆಲೆಕೊಡದೆ ಎಲ್ಲ ವರ್ಗದ ಜನರನ್ನೂ ಗೌರವಿಸಿ, ಭಾಷೆ, ಸಂಸ್ಕೃತಿ, ಶಿಕ್ಷಣ, ಉದ್ಯಮ, ಸಾಮಾಜಿಕ ಮೌಲ್ಯ ಮತ್ತು ಜನರ ಆರ್ಥಿಕ ಅಭಿವೃದ್ಧಿಗಳ ಕುರಿತು ಗಮನಹರಿಸಿ ಸಹೃದಯಶೀಲರಾಗಿ ಎಸ್.ಎಂ.ಕೃಷ್ಣ ಅವರು, ನಾಡಿನೊಡನೆ, ನಾಡವರೊಡನೆ ಸ್ಪಂದಿಸಿದವರು. ನಾಡು ಮರೆಯದಂತಹ ಸಾಧನೆಯ ಶಿಖರವನ್ನು ನಿರ್ಮಿಸಿದ ಸಾಧಕರವರು. ಹಾಗಾಗಿ ಅವರನ್ನು ನಾಡು ಮರೆಯುವಂತೆಯೇ ಇಲ್ಲ. ನಾಡು ಮರೆಯದ ಮಹಾನ್ ಸಾಧಕರವರು.


ಕರ್ನಾಟಕದಲ್ಲಿ ಬರದ ಕಾರ್ಮೋಡ ಆವರಿಸಿದ್ದ ಕಾಲಘಟ್ಟದಲ್ಲಿ 1999ರಿಂದ2004ರ ಅವಧಿಯಲ್ಲಿ ಮುಖ್ಯಮಂತ್ರಿಗಳಾಗಿದ್ದ ಎಸ್.ಎಂ. ಕೃಷ್ಣ ಅವರು ಅಂತಹ ಕಷ್ಟಕರ ಪರಿಸ್ಥಿತಿಯಲ್ಲೂ ನಾಡಿನಲ್ಲಿ ಅಭಿವೃದ್ಧಿಯ ಕೆಲಸಗಳನ್ನು ಮಾಡಿದ ರೀತಿಯಂತೂ ಇಡೀ ದೇಶ ಮೆಚ್ಚುವಂಥದ್ದು. ಈ ದೃಷ್ಟಿಯಲ್ಲಿ ಕರ್ನಾಟಕವನ್ನು ಆಳಿದ ಯಾವ ಮುಖ್ಯಮಂತ್ರಿಗಳು ಕೂಡ ಎಸ್.ಎಂ.ಕೃಷ್ಣರ ಸಾಧನೆಗೆ ಸರಿಸಾಟಿಯಾಗಲಾರರು!

ಕೃಷ್ಣ ಅವರು ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ರಚಿಸಿದ್ದ ತೆರಿಗೆ ಸುಧಾರಣಾ ಆಯೋಗ, ಆಡಳಿತ ಸುಧಾರಣಾ ಆಯೋಗ, ಬೆಂಗಳೂರು ಅಭಿವೃದ್ಧಿ ಕಾರ್ಯಪಡೆ, ಬಂಡವಾಳ ಹೂಡಿಕೆದಾರರ ಜಾಗತಿಕ ಸಮಾವೇಶ, ಐಟಿ ಮತ್ತು ಬಿಟಿ ಉದ್ಯಮಕ್ಕೆ ಕೊಟ್ಟ ಪ್ರೋತ್ಸಾಹ, ಗ್ರಾಮೀಣ ಪ್ರದೇಶದಲ್ಲಿ ವಸತಿ ನಿರ್ಮಾಣದಂತಹ ಯೋಜನೆಗಳು ಒಂದು ಸರ್ಕಾರ ಹೊಂದಿರಬೇಕಾದ ಅಭಿವೃದ್ಧಿಯ ಮುನ್ನೋಟಕ್ಕೆ ಮಾದರಿಯಾಗಿತ್ತು. ಅದರಲ್ಲೂ ಎಸ್.ಎಂ. ಕೃಷ್ಣರ ಅಧಿಕಾರಾವಧಿಯಲ್ಲಿ ಜಾರಿಗೊಳಿಸಲಾಗಿರುವ ಶಾಲಾ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿ ಊಟ ಯೋಜನೆ, ರೈತರಿಗೆ ಯಶಸ್ವಿನಿ ವಿಮೆ ಯೋಜನೆ ಅಚ್ಚಳಿಯದೆ ಉಳಿದ ಜನಪ್രಿಯ ಯೋಜನೆಗಳಾಗಿವೆ. ಇವು ಮುಂಬರುವ ಎಲ್ಲಾ ಮುಖ್ಯಮಂತ್ರಿಗಳಿಗೂ ಒಂದು ರೀತಿ ಮಾರ್ಗಸೂಚಿಗಳಾಗಿವೆ.

ಮುಂಬರುವ ಸಾಹಿತ್ಯ ಸಮ್ಮೇಳನಕ್ಕೆ ಅದಾಗಲೇ ಶುಭ ಕೋರಿದ್ದ ಎಸ್.ಎಂ.ಕೃಷ್ಣ

ಎಸ್.ಎಂ. ಕೃಷ್ಣ ಸಾರ್ವಜನಿಕವಾಗಿ ಬರೆದಿರುವ ಕೊನೆಯ ಪತ್ರವೊಂದು ಈ ವೇಳೆ ಗಮನ ಸೆಳೆಯುತ್ತಿದೆ. ಆ ಪತ್ರ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಂಬಂಧಿಸಿದ್ದಾಗಿದೆ; ಮಂಡ್ಯ ಜಿಲ್ಲೆಯಲ್ಲಿ ನಡೆಯುತ್ತಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ನನ್ನ ಶುಭಾಶಯಗಳು, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ದೂರದೃಷ್ಟಿಯ ಫಲವಾಗಿ ರೂಪುಗೊಂಡ ಮಂಡ್ಯ ಜಿಲ್ಲೆ ನಾಡಿನಲ್ಲಿ ಅತಿ ಹೆಚ್ಚು ಕನ್ನಡ ಮಾತನಾಡುವ ಭಾಷಿಕರು ಇರುವ ಜಿಲ್ಲೆ. ಇಂತಹ ಐತಿಹ್ಯವುಳ್ಳ ನಮ್ಮ ಮಂಡ್ಯ ಜಿಲ್ಲೆಯಲ್ಲಿ 3ನೇ ಬಾರಿಗೆ ಆಯೋಜನೆಗೊಂಡಿರುವ ಕನ್ನಡದ ಸಿರಿಹಬ್ಬವು ಯಶಸ್ವಿಯಾಗಿ ಜರುಗಲೆಂದು ಶುಭ ಹಾರೈಸುತ್ತೇನೆ.

ಮೈಸೂರಿನ ಮಹಾರಾಜರಾಗಿದ್ದ ಜನಾನುರಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರು ಕನ್ನಡದ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಲು ಕನ್ನಡ ಸಾಹಿತ್ಯ ಪರಿಷತ್ತನ್ನು ಪ್ರತಿಷ್ಠಾಪಿಸಿದರು. ಅಂದಿನಿಂದ ಕನ್ನಡದ ನುಡಿಹಬ್ಬ ಆಳುವ ಸರ್ಕಾರಗಳ ನೇತೃತ್ವದಲ್ಲಿ ವಿಜೃಂಭಣೆಯಿಂದ ಜರುಗುತ್ತಾ ಬಂದಿದೆ. ಕನ್ನಡ ಸಾರಸ್ವತ ಲೋಕದ ಹಲವು ಹಿರಿಯ ಸಾಹಿತಿಗಳು ಸಮ್ಮೇಳನದ ಅಧ್ಯಕ್ಷರಾಗಿ ಕನ್ನಡದ ತೇರನ್ನು ಎಳೆಯುವುದರ ಜೊತೆಗೆ ಕನ್ನಡ ಭಾಷೆಯನ್ನು ಪ್ರಚುರಪಡಿಸುತ್ತಾ ಕನ್ನಡದ ಉಳಿವಿಗಾಗಿ ಹಲವು ಸಲಹೆ ಒತ್ತಾಸೆಗಳನ್ನು ಸರ್ಕಾರಗಳಿಗೆ ನೀಡುತ್ತಾ ಬಂದಿದ್ದಾರೆ.



ಸಾಹಿತ್ಯ ಸಮ್ಮೇಳನಗಳು ಕೇವಲ ಜನಜಾತ್ರೆಗಳಾಗದೆ ಕನ್ನಡದ ಅಸ್ಮಿತೆಯನ್ನು ಸಾರುವ ಹಬ್ಬವಾಗಿದ್ದು ಇದರಲ್ಲಿ ಕನ್ನಡದ ಹಲವು ವಿದ್ವಾಂಸರ ಲೇಖನಗಳು, ಪುಸ್ತಕಗಳು ಹಾಗೂ ಬರವಣಿಗೆಗಳು ಹೊರಬಂದು ಹಲವು ಓದುಗರಿಗೆ ಸವಿಯೂಟವನ್ನು ಉಣಬಡಿಸಿದೆ. ತಂತ್ರಜ್ಞಾನ ಬೆಳೆದಂತೆ ಕನ್ನಡದ ಆವಿಷ್ಕಾರಗಳು ಪರಿಷ್ಕೃತಗೊಂಡು ರಾಜ್ಯದ ಎಲ್ಲೆಯನ್ನು ಮೀರಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕನ್ನಡದ ಬಳಕೆ ಎದ್ದು ಕಾಣುತ್ತಿದೆ.

ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರಕಿಸುವಲ್ಲಿ ಹಲವು ಮಹನೀಯರು ಶ್ರಮಿಸಿದ್ದು, ಅದರ ಫಲವಾಗಿ ಅಂದಿನ ಪ್ರಧಾನ ಮಂತ್ರಿಗಳಾಗಿದ್ದ ಡಾ. ಮನಮೋಹನ್ ಸಿಂಗ್‌ರವರ ಅಧಿಕಾರಾವಧಿಯಲ್ಲಿ

ಇದೇ ಅವರ ಕೊನೆಯ ಸಾರ್ವಜನಿಕ ಪತ್ರ

ಅದಕ್ಕೆ ಅಧಿಕೃತ ಮುದ್ರೆಯನ್ನು ಒತ್ತುವುದರ ಮೂಲಕ ಕನ್ನಡಕ್ಕೆ ಅಧಿಕೃತ ಶಾಸ್ತ್ರೀಯ ಸ್ಥಾನಮಾನ ಕಲ್ಪಿಸುವಲ್ಲಿ ನಾವು ಯಶಸ್ವಿಯಾಗಿದ್ದೇವೆ.

ಮಂಡ್ಯ ಆತಿಥ್ಯಕ್ಕೆ ಹೆಸರಾದ ಜಿಲ್ಲೆ. ಕನ್ನಡ ಭಾಷೆಯನ್ನು ಗೌರವಿಸುವಲ್ಲಿ ಜಿಲ್ಲೆಯ ಜನ ಸಿದ್ಧಹಸ್ತರು. ಈ ಹಿಂದೆ ನಡೆದ ಸಾಹಿತ್ಯ ಸಮ್ಮೇಳನಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಕನ್ನಡದ ಹಬ್ಬವನ್ನು ತಮ್ಮ ಮನೆಯ ಹಬ್ಬವಾಗಿ ಆಚರಿಸಿದ ಕೀರ್ತಿ ಮಂಡ್ಯ ಜಿಲ್ಲೆಯ ಜನರಿಗೆ ಸಲ್ಲುತ್ತದೆ. ಈ ಹಿಂದಿನ ಎರಡು ಸಮ್ಮೇಳನಗಳಲ್ಲಿ ಭಾಗವಹಿಸಿದ್ದ ನಾನು ಸದರಿ ಸಮ್ಮೇಳನಗಳಲ್ಲಿ ಭಾಗವಹಿಸಿದ್ದ ಜನರ ಉತ್ಸುಕತೆ ಕಂಡು ಅತ್ಯಂತ ಪುಳಕಿತನಾಗಿದ್ದೆ. ಮೊದಲ ಬಾರಿಗೆ ಮಂಡ್ಯದಲ್ಲಿ ನಡೆದ ಸಾಹಿತ್ಯ ಸಮ್ಮೇಳನಕ್ಕೆ ಹಿರಿಯ ಮಹಿಳಾ ಸಾಹಿತಿಗಳಾಗಿದ್ದ ಶ್ರೀಮತಿ ಜಯದೇವಿ ತಾಯಿ ಲಿಗಾಡೆಯವರು ಪ್ರಥಮ ಮಹಿಳಾ ಸಮ್ಮೇಳನಾಧ್ಯಕ್ಷರಾಗಿದ್ದು, ಅಂದಿನ ಸಾಹಿತ್ಯ ಸಮ್ಮೇಳನ ಐತಿಹಾಸಿಕ ದಾಖಲೆಯಾಗಿದೆ.

ಅದೇ ರೀತಿ 1994ರಲ್ಲಿ ನಾನು ರಾಜ್ಯದ ಉಪ ಮುಖ್ಯಮಂತ್ರಿಯಾಗಿದ್ದಾಗ ಜಿ.ಮಾದೇಗೌಡರವರ ನೇತೃತ್ವದಲ್ಲಿ ನಡೆದ ಸಮ್ಮೇಳನ ಅವಿಸ್ಮರಣೀಯ. ಮಾದೇಗೌಡರು ಎಲ್ಲರನ್ನೂ ಒಗ್ಗೂಡಿಸಿ ಎಲ್ಲರ ಸಹಕಾರದಿಂದ ಸಮ್ಮೇಳನ ಆಯೋಜಿಸಿದ್ದು ನನ್ನ ಸ್ಮೃತಿಪಟಲದಲ್ಲಿದೆ. ಜಗದ್ಗುರು ಶ್ರೀ ಶ್ರೀ ಬಾಲಗಂಗಾಧರನಾಥ ಮಹಾಸ್ವಾಮಿಗಳ ಶ್ರೀರಕ್ಷೆಯಲ್ಲಿ ಅಂದು ನಡೆದ ಸಮ್ಮೇಳನದ ರೀತಿಯಲ್ಲೇ ಪ್ರಸ್ತುತ ಆಯೋಜನೆಗೊಂಡಿರುವ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಲಿ, 1994ರ ಸಾಹಿತ್ಯ ಸಮ್ಮೇಳನದ ಅವಧಿಯಲ್ಲಿ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿದ್ದ ನನ್ನ ಸನ್ಮಿತ್ರರೂ, ಹಿರಿಯ ಸಾಹಿತಿಗಳೂ, ಶರಣರಾದ ಗೋ. ರು. ಚನ್ನಬಸಪ್ಪನವರು ಪ್ರಸ್ತುತ ಸಮ್ಮೇಳನಾಧ್ಯಕ್ಷರಾಗಿ ನೇಮಕಗೊಂಡಿರುವುದು ಸಂತಸ ತಂದಿದ್ದು, ಅವರಿಗೆ ನನ್ನ ಶುಭ ಹಾರೈಕೆ.

ನಾಡಿನ ಶ್ರೀಮಂತ ಸಾಹಿತ್ಯ ಪರಂಪರೆಗೆ ಮಂಡ್ಯ ಜಿಲ್ಲೆ ಕೊಡುಗೆ ಅಪಾರ, ಪ್ರಾತಃಸ್ಮರಣೀಯರಾದ ಶ್ರೀ ಪಿಟೀಲು ಚೌಡಯ್ಯ, ಶ್ರೀ ಬಿ.ಎಂ.ಶ್ರೀಕಂಠಯ್ಯ, ಶ್ರೀ ಪು.ತಿ.ನರಸಿಂಹಾಚಾರ್, ಶ್ರೀ ಕೆ.ಎಸ್ ನರಸಿಂಹಸ್ವಾಮಿ, ಜಾನಪದ ತಜ್ಞ ಡಾ|ಎಚ್.ಎಲ್. ನಾಗೇಗೌಡ, ಖ್ಯಾತ ನಟ ಶ್ರೀ ಅಂಬರೀಶ್, ಇವರೆಲ್ಲರೂ ಮಂಡ್ಯ ಜಿಲ್ಲೆಯ ಕೀರ್ತಿ ಬೆಳಗಿಸಿ ಅಜರಾಮರರಾದ ಮಹನೀಯರು ಇವರುಗಳನ್ನು ಪ್ರಸ್ತುತ ಸಮ್ಮೇಳನದಲ್ಲಿ ನೆನೆಯುವುದು ಅವಶ್ಯವಾಗಿದೆ. ಸರ್ವರಿಗೂ ಆದರ್ಶನೀಯರಾದ ಜಗದ ಕವಿ ಶ್ರೀ ಕುವೆಂಪು ಅವರ ಸರ್ವಜನಾಂಗದ ಶಾಂತಿಯ ತೋಟದ ಸ್ತುತಿಯನ್ನು ನೆನೆಯುತ್ತಾ ಸಾಹಿತ್ಯ ಸಮ್ಮೇಳನಕ್ಕೆ ಶುಭವಾಗಲಿ, ಈ ಸಂದರ್ಭದಲ್ಲಿ ಹೊರತರುತ್ತಿರುವ ನೆನಪಿನ ಸಂಪುಟಕ್ಕೆ ನನ್ನ ಶುಭಕಾಮನೆಗಳು.'

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ

ಎಸ್.ಎಂ.ಕೃಷ್ಣ ನಿಧನಕ್ಕೆ ಮುಖ್ಯಮಂತ್ರಿ ಸೇರಿದಂತೆ ಗಣ್ಯರ ಸಂತಾಪ

ಬೆಂಗಳೂರು, ಡಿ.10–ರಾಷ್ಟ್ರದ ಮುತ್ಸದ್ದಿ ರಾಜಕಾರಣಿಗಳಲ್ಲಿ ಒಬ್ಬರಾಗಿದ್ದ ಎಸ್.ಎಂ.ಕೃಷ್ಣ ಅವರ ನಿಧನಕ್ಕೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಎಐಸಿಸಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನ ಖರ್ಗೆ, ಲೋಕಸಭಾ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಹೆಚ್.ಡಿ.ಕುಮಾರಸ್ವಾಮಿ, ಬಸವರಾಜ ಬೊಮ್ಮಾಯಿ, ಡಿ.ವಿ.ಸದಾನಂದಗೌಡ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಹಲವು ಗಣ್ಯರು ಕಂಬನಿ ಮಿಡಿದಿದ್ದಾರೆ.

ಸದಾ ನನ್ನ ಹಿತೈಷಿಯಾಗಿದ್ದರು



ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಸಾವಿನಿಂದ ಆಘಾತಕ್ಕೀಡಾಗಿದ್ದೇನೆ. ರಾಜ್ಯ ಮತ್ತು ಕೇಂದ್ರ ಸಚಿವರಾಗಿ ಹಾಗೂ ಮುಖ್ಯಮಂತ್ರಿಯಾಗಿ ಕೃಷ್ಣ ಅವರು ಸಲ್ಲಿಸಿರುವ ಸೇವೆ ಅನುಪಮವಾದುದು. ವಿಶೇಷವಾಗಿ ಮುಖ್ಯಮಂತ್ರಿಯಾಗಿ ಐಟಿ–ಬಿಟಿ ಕ್ಷೇತ್ರದ ಬೆಳವಣಿಗೆಗೆ ಅವರು ನೀಡಿರುವ ಕೊಡುಗೆಗಾಗಿ ಕರ್ನಾಟಕ ಸದಾ ಋಣಿಯಾಗಿರುತ್ತದೆ. ಮುತ್ಸದ್ದಿ ರಾಜಕಾರಣಿಯಾಗಿದ್ದ ಕೃಷ್ಣ ಅವರು ಅಜಾತಶತ್ರುಗಳಾಗಿದ್ದರು. ನಾನು ಕಾಂಗ್ರೆಸ್ ಪಕ್ಷಕ್ಕೆ ಸೇರಿದ ಪ್ರಾರಂಭದ ದಿನಗಳಲ್ಲಿ ನನಗೆ ಮಾರ್ಗದರ್ಶಕರಾಗಿದ್ದರು. ಕೃಷ್ಣ ಅವರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸಜ್ಜನಿಕೆಯ ನಡವಳಿಕೆ ಮತ್ತು ಅಧ್ಯಯನಶೀಲ ಪ್ರವೃತ್ತಿ ಉದಯೋನ್ಮುಖ ರಾಜಕಾರಣಿಗಳಿಗೆ ಮಾದರಿಯಾಗಿದೆ. ಅವರ ಅಗಲಿಕೆಯಿಂದ ನೊಂದಿರುವ ಅವರ ಕುಟುಂಬವರ್ಗ ಮತ್ತು ಅಭಿಮಾನಿಗಳ ದುಃಖದಲ್ಲಿ ನಾನೂ ಭಾಗಿಯಾಗಿದ್ದೇನೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಭಗವಂತನಲ್ಲಿ ಕೋರುತ್ತೇನೆ. –ಸಿದ್ದರಾಮಯ್ಯ, ಮುಖ್ಯಮಂತ್ರಿ

ತಮಿಳುನಾಡು ಸಿಎಂ ಸಂತಾಪ



ಕರ್ನಾಟಕದ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ ಅವರು ರಾಜ್ಯವನ್ನು ಗಮನಾರ್ಹ ಪ್ರಗತಿಯತ್ತ ಮುನ್ನಡೆಸಿದ್ದರು. ವಿದೇಶಾಂಗ ವ್ಯವಹಾರಗಳ ಸಚಿವರಾಗಿಯೂ ದೇಶದ ರಾಜನೀತಿಯನ್ನು ಬಲಪಡಿಸಿದ್ದರು.
–ಎಂ.ಕೆ.ಸ್ಟಾಲಿನ್, ತಮಿಳುನಾಡು ಮುಖ್ಯಮಂತ್ರಿ

ನವ ಕರ್ನಾಟಕ ನಿರ್ಮಾಣಕ್ಕೆ ಅಡಿಪಾಯ



ಎಸ್.ಎಂ.ಕೃಷ್ಣ ಅವರು ರಾಜ್ಯ ವಿಕಾಸವಾಗಲಿ ಎಂದು ವಿಕಾಸಸೌಧ, ಎಲ್ಲರಿಗೂ ಉದ್ಯೋಗ ಸಿಗಲಿ ಎಂದು ಉದ್ಯೋಗ ಸೌಧ ಕಟ್ಟಿದರು. ರಾಜ್ಯದಲ್ಲಿ ಪಾನೀಯ ನಿಗಮ ಸ್ಥಾಪಿಸಿ ರಾಜ್ಯದ ಬೊಕ್ಕಸಕ್ಕೆ ಹಣ ಬರುವಂತೆ ಮಾಡಿದರು. ಕಾವೇರಿ ನೀರಿಗಾಗಿ ಅಧಿಕಾರ ತ್ಯಜಿಸಲು ಮುಂದಾಗಿದ್ದರು. ರಾಜ್‌ಕುಮಾರ್ ಅವರು ಅಪಹರಣವಾದಾಗ ಮಧ್ಯರಾತ್ರಿ ಮೊದಲು ಕರೆ ಮಾಡಿದ್ದು ನನಗೆ. ರಾಜ್‌ಕುಮಾರ್ ಅವರನ್ನು ಕರೆತರಲು ನಾವು ಪಟ್ಟಿರುವ ಪರಿಶ್ರಮ ನಮಗೆ ಮಾತ್ರ ಗೊತ್ತು. ಶಾಲಾ ಮಕ್ಕಳಿಗೆ ಬಿಸಿಯೂಟ ಯೋಜನೆ ಪ್ರಾರಂಭಿಸಿದರು. ರಾಜ್ಯದ ಆಡಳಿತಕ್ಕೆ ದೊಡ್ಡ ಶಕ್ತಿ ತುಂಬಿದ್ದರು. ಉತ್ತಮ ಆಡಳಿತಗಾರರಲ್ಲದೆ ನವ ಕರ್ನಾಟಕ ನಿರ್ಮಾಣಕ್ಕೆ ಅಡಿಪಾಯ ಹಾಕಿದ ಧೀಮಂತ ನಾಯಕ. ಆಸ್ತಿಗೆ ದಾಖಲೆ ನೀಡಿದ್ದನ್ನು ಯಾವ ರೈತರೂ ಮರೆಯುವುದಿಲ್ಲ. – ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

ತುಂಬಲಾರದ ನಷ್ಟವಾಗಿದೆ



ಎಸ್.ಎಂ.ಕೃಷ್ಣ ಅವರ ನಿಧನದ ವಿಚಾರ ತುಂಬಾ ದುಃಖವಾಗಿದೆ. ಎಸ್.ಎಂ.ಕೃಷ್ಣ ನಿಧನದಿಂದ ರಾಜ್ಯ ರಾಜಕಾರಣಕ್ಕೆ ತುಂಬಲಾರದ ನಷ್ಟವಾಗಿದೆ. ಎಸ್.ಎಂ. ಕೃಷ್ಣ ಅಜಾತಶತ್ರು, ಉತ್ತಮ ರಾಜಕಾರಣಿ. ಸಿಎಂ ಆಗಿ, ಕೇಂದ್ರ ಸಚಿವರಾಗಿ ಸಾಕಷ್ಟು ಉತ್ತಮ ಕೆಲಸ ಮಾಡಿದ್ದರು. ಬೆಂಗಳೂರು ಅಭಿವೃದ್ಧಿಗೆ ಶ್ರಮಿಸಿದ್ದರು, ಹಲವು ಯೋಜನೆ ಜಾರಿಗೆ ತಂದಿದ್ದಾರೆ. ಅವರು ರಾಜಕಾರಣದಲ್ಲಿ ಸುದೀರ್ಘ ಸೇವೆ ಸಲ್ಲಿಸಿದ್ದರು. ನಾನು ವಿದ್ಯಾರ್ಥಿಯಾಗಿದ್ದಾಗಲೇ ಅವರೊಂದಿಗೆ ಸಂಪರ್ಕ ಇತ್ತು. ಅವರ ಮನೆಗೆ ಭೇಟಿ ನೀಡಿ ಆಶೀರ್ವಾದ ಪಡೆದಿದ್ದೆ. ಅವರ ಸಾಧನೆ ಯುವ ರಾಜಕಾರಣಿಗಳಿಗೆ ಸ್ಫೂರ್ತಿದಾಯಕವಾಗಿದೆ. ಕುಟುಂಬಕ್ಕೆ ದುಃಖ ಸಹಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಪ್ರಾರ್ಥಿಸುತ್ತೇನೆ. –ಯು.ಟಿ.ಖಾದರ್, ವಿಧಾನಸಭೆ ಸ್ಪೀಕರ್

ಉತ್ತಮ ರಾಜಕಾರಣಿ ಕಳೆದುಕೊಂಡಿದ್ದೇವೆ



ಎಸ್.ಎಂ.ಕೃಷ್ಣ ನಿಧನ ವಿಚಾರ ಕೇಳಿ ತುಂಬಾ ನೋವಾಗಿದೆ. ಉತ್ತಮ ರಾಜಕಾರಣಿಯನ್ನು ನಾವು ಕಳೆದುಕೊಂಡಿದ್ದೇವೆ. ಮುಖ್ಯಮಂತ್ರಿಯಾಗಿ, ಕೇಂದ್ರ ಸಚಿವರಾಗಿ ಉತ್ತಮ ಕೆಲಸ ಮಾಡಿದ್ದರು. ಬೆಂಗಳೂರು ನಗರದಲ್ಲಿ ಐಟಿ–ಬಿಟಿ ಸ್ಥಾಪನೆಗೆ ಕಾರಣರಾಗಿದ್ದರು. ಅವರಿಂದ ಬೆಂಗಳೂರು ಸಿಲಿಕಾನ್ ಸಿಟಿಯಾಗಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿ ಪಡೆದಿದೆ. ಹಲವು ಯೋಜನೆಗಳ ಜೊತೆಗೆ ಹಲವು ಸವಾಲುಗಳನ್ನು ಎದುರಿಸಿದ್ದರು. ರಾಜ್‌ಕುಮಾರ್ ಅಪಹರಣ ಸೂಕ್ಷ್ಮ ಸಮಯವನ್ನು ಸಮರ್ಥವಾಗಿ ನಿಭಾಯಿಸಿದ್ದರು. ಕಾವೇರಿ ನದಿ ನೀರು ವಿಚಾರದಲ್ಲೂ ಸಮರ್ಥವಾಗಿ ಕೆಲಸ ಮಾಡಿದ್ದರು. ಅವರ ಸಾಧನೆ ಯುವ ರಾಜಕಾರಣಿಗಳಿಗೆ ಮಾದರಿಯಾಗಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ದೇವರಲ್ಲಿ ಎಂದು ಪ್ರಾರ್ಥಿಸುತ್ತೇನೆ.
–ಡಾ.ಜಿ.ಪರಮೇಶ್ವರ್, ಗೃಹಸಚಿವ

'ಕರ್ನಾಟಕ ರತ್ನ' ಘೋಷಿಸಲು ಮನವಿ



ರಾಷ್ಟ್ರದ ಪ್ರಜಾಪ್ರಭುತ್ವ ವ್ಯವಸ್ಥೆಯ ವಿಧಾನಸಭೆ, ವಿಧಾನಪರಿಷತ್, ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರಾಗಿ ಕಳೆದ 60 ವರ್ಷ ಕಾಲ ನಾಡಿನ ಹಾಗೂ ರಾಷ್ಟ್ರದ ಸೇವೆ ಮಾಡಿದ ದಿವಂಗತ ಎಸ್.ಎಂ.ಕೃಷ್ಣ ಅವರ ಅಗಲಿಕೆ ತೀವ್ರ ದುಃಖ ತಂದಿದೆ. 1999ರಿಂದ 2004ರವರೆಗೆ ಅವರು ಮುಖ್ಯಮಂತ್ರಿಯಾಗಿ ಸಲ್ಲಿಸಿದ ಸೇವೆ ಅವಿಸ್ಮರಣೀಯ. ಜಾಗತಿಕ ಮಟ್ಟದಲ್ಲಿ ಬೆಂಗಳೂರು ಸಿಲಿಕಾನ್ ವ್ಯಾಲಿ ಎಂದು ಪ್ರಸಿದ್ಧಿಯಾಗಿ ಅಮೇರಿಕಾದ ಕ್ಯಾಲಿಫೋರ್ನಿಯಾಗೆ ಪರ್ಯಾಯವಾಗಿ ಬೆಳೆದಿದೆ. ರಾಜ್ಯ ಸರ್ಕಾರ ಎಸ್.ಎಂ.ಕೃಷ್ಣ ಅವರನ್ನು 'ಕರ್ನಾಟಕ ರತ್ನ' ಪ್ರಶಸ್ತಿಯೊಂದಿಗೆ ಗೌರವಿಸಬೇಕು ಎಂಬುದು ನಮ್ಮೆಲ್ಲರ ಒತ್ತಾಸೆ. –ದಿನೇಶ್ ಗೂಳಿಗೌಡ, ಮಂಡ್ಯ ಶಾಸಕ



ಸೋಮನಹಳ್ಳಿ ಮಲ್ಲಯ್ಯ ಕೃಷ್ಣ

ಅಭಿವೃದ್ಧಿಯ ಕನಸುಗಾರ



ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳು ಹಾಗೂ ಮಾಜಿ ಕೇಂದ್ರ ಸಚಿವರಾದ ಎಸ್.ಎಂ.ಕೃಷ್ಣ ಅವರ ನಿಧನ ತೀವ್ರ ನೋವುಂಟು ಮಾಡಿದೆ. ಅಭಿವೃದ್ಧಿಯ ಕನಸುಗಾರರಾಗಿದ್ದ ಅವರು ರಾಜ್ಯ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ನೀಡಿದ ಕೊಡುಗೆ ಅಪಾರ. ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ನನ್ನ ಆತ್ಮೀಯರಾಗಿ, ಸಹೋದ್ಯೋಗಿಯಾಗಿ ಜೊತೆಯಾಗಿದ್ದ ಎಸ್.ಎಂ.ಕೃಷ್ಣರ ನಿಧನ ನನಗೆ ಅತೀವ ದುಃಖ ತಂದಿದೆ. –ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷ

ಹಿರಿಯಣ್ಣನನ್ನು ಕಳೆದುಕೊಂಡಂತೆ ಆಗಿದೆ



ಅತ್ಯಂತ ಮುತ್ಸದ್ದಿ ರಾಜಕಾರಣಿ ಆಗಿದ್ದ ಕೃಷ್ಣ ಅವರು ತಮ್ಮ ವಿಶಿಷ್ಟ ನಾಯಕತ್ವದಿಂದ ರಾಜ್ಯ ಮತ್ತು ರಾಷ್ಟ್ರಕ್ಕೆ ಅತ್ಯುತ್ತಮ ಕೊಡುಗೆ ನೀಡಿದ್ದಾರೆ. ಕೃಷ್ಣ ಅವರೊಂದಿಗಿನ ದಶಕಗಳ ಒಡನಾಟ ಮರೆಯಲು ಸಾಧ್ಯ ಇಲ್ಲ. ಮಾಹಿತಿ ತಂತ್ರಜ್ಞಾನ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳಿಂದ ಬೆಂಗಳೂರಿಗೆ ಜಾಗತಿಕ ಮಾನ್ಯತೆ ತಂದುಕೊಟ್ಟರು. ಜ್ಞಾನ ಆಯೋಗ ಸ್ಥಾಪನೆಯಿಂದ ರಾಜ್ಯದಲ್ಲಿ ಶಿಕ್ಷಣಕ್ಕೆ ಆದ್ಯತೆ ನೀಡಿದ್ದರು. ತಾಂತ್ರಿಕ ಶಿಕ್ಷಣಕ್ಕೆ ವಿಶೇಷ ಉತ್ತೇಜನ ನೀಡಿದರು.
–ಬಿ.ಎಸ್.ಯಡಿಯೂರಪ್ಪ, ಮಾಜಿ ಮುಖ್ಯಮಂತ್ರಿ

ಸಮಗ್ರ ಅಭಿವೃದ್ಧಿಗೆ ಪರಿಶ್ರಮ



ಕರ್ನಾಟಕದ ಹಿರಿಯ ರಾಜಕಾರಣಿ, ಬಿಜೆಪಿ ನಾಯಕ, ಗೌರವಾನ್ವಿತ ಮಾಜಿ ಮುಖ್ಯಮಂತ್ರಿ, ಮಹಾರಾಷ್ಟ್ರದ ಮಾಜಿ ರಾಜ್ಯಪಾಲ, ಮಾಜಿ ಕೇಂದ್ರ ಸಚಿವ ಮತ್ತು ಪದ್ಮ ವಿಭೂಷಣ ಪ್ರಶಸ್ತಿ ಪುರಸ್ಕೃತ ಎಸ್.ಎಂ.ಕೃಷ್ಣ ಅವರ ಅಗಲಿಕೆಯಿಂದ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ. ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಅವರು ಹಲವಾರು ಜನಪರ ಯೋಜನೆಗಳನ್ನು ಜಾರಿಗೆ ತಂದರು ಮತ್ತು ಕರ್ನಾಟಕದ ಸಮಗ್ರ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿದರು. ಸರ್ವಶಕ್ತನು ಅವರ ಕುಟುಂಬ, ಸ್ನೇಹಿತರು ಮತ್ತು ಅಭಿಮಾನಿಗಳಿಗೆ ಈ ಅಪಾರವಾದ ನಷ್ಟವನ್ನು ಭರಿಸುವ ಶಕ್ತಿಯನ್ನು ನೀಡಲಿ ಮತ್ತು ಕೃಷ್ಣ ಅವರ ಆತ್ಮಕ್ಕೆ ಚಿರಶಾಂತಿ ಕರುಣಿಸಲಿ. –ಯದುವೀರ್ ಒಡೆಯರ್, ಸಂಸದ

ಕೃಷ್ಣ ಅವರ ವಿರುದ್ಧ ಸ್ಪರ್ಧಿಸಿದ್ದೆ



ದೇಶದ ಧೀಮಂತ ಮುತ್ಸದ್ದಿ, ನಾಡಿನ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ನಿಧನ ನನಗೆ ಅಪಾರ ನೋವು ತಂದಿದೆ. ಬೆಂಗಳೂರು ನಗರವು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಗ್ಗುರುತಾಗುವಲ್ಲಿ ಅವರ ಶ್ರಮ ಅಪಾರ. ಅತ್ಯುತ್ತಮ ಆಡಳಿತಗಾರರಾಗಿದ್ದ ಸನ್ಮಾನ್ಯರು ತನ್ನ ಸನ್ನಡತೆ, ಸುಸಂಸ್ಕೃತ ವ್ಯಕ್ತಿತ್ವದಿಂದ ಸದಾ ನೆನಪಿನಲ್ಲಿ ಉಳಿಯುತ್ತಾರೆ. ಇಪ್ಪತ್ತು ವರ್ಷಗಳ ಹಿಂದೆ ಎಸ್.ಎಂ.ಕೃಷ್ಣ ಅವರ ವಿರುದ್ಧ ನಾನು ಚಾಮರಾಜಪೇಟೆ ವಿಧಾನಸಭೆಯಲ್ಲಿ ಸ್ಪರ್ಧಿಸಿದ್ದೆ. ರಾಜಕೀಯವಾಗಿ ನಾವು ಬೇರೆ ಬೇರೆ ದಿಕ್ಕಿನಲ್ಲಿದ್ದರೂ ಕೃಷ್ಣ ಅವರು ಒಬ್ಬ ಒಳ್ಳೆಯ ಹಿರಿಯ ಸ್ನೇಹಿತರಾಗಿದ್ದರು. –ಮುಖ್ಯಮಂತ್ರಿ ಚಂದ್ರು

ನಡೆ–ನುಡಿ ಅನುಕರಣೀಯ



ನವಕರ್ನಾಟಕ ಅಭಿವೃದ್ಧಿಯ ನೇತಾರ, ರಾಜಕೀಯ ಮುತ್ಸದ್ದಿ, ಅಜಾತಶತ್ರು, ಜನಪ್ರಿಯ ನಾಯಕರಾಗಿದ್ದ ಎಸ್.ಎಂ.ಕೃಷ್ಣ ಅವರ ನಿಧನದಿಂದ ರಾಜ್ಯ ಹಾಗೂ ರಾಷ್ಟ್ರಕ್ಕೆ ತುಂಬಲಾರದ ನಷ್ಟವಾಗಿದೆ. ಅವರ ಶಿಸ್ತುಬದ್ಧ ಜೀವನ, ನಡೆ–ನುಡಿ, ಆಡಳಿತ ವೈಖರಿ ಎಲ್ಲವೂ ಅನುಕರಣೀಯ. ಅವರು ಮುಖ್ಯಮಂತ್ರಿಯಾಗಿದ್ದಾಗ ಅನುಷ್ಠಾನಗೊಳಿಸಿದ ಯೋಜನೆಗಳು ಎಂದಿಗೂ ಪ್ರಸ್ತುತ. ಮರೆಯಾದ ಚೇತನಕ್ಕೆ ಅಂತಿಮ ನಮನಗಳು. ಎಸ್‌ಎಂಕೆ ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ, ಅಗಲಿಕೆ ನೋವು ಸಹಿಸುವ ಶಕ್ತಿಯನ್ನು ಕುಟುಂಬದವರು, ಬಂಧು–ಮಿತ್ರರು, ಅಭಿಮಾನಿಗಳಿಗೆ ದೇವರು ಕರುಣಿಸಲಿ. –ಸಂದೇಶ್ ಸ್ವಾಮಿ, ಮಾಜಿ ಮೇಯರ್

ಅಮೆರಿಕಾದ ಅಧ್ಯಕ್ಷರಾಗಿದ್ದ ಜಾನ್ ಎಫ್ ಕೆನಡಿ ಪ್ರೇರಣೆ

ಬೆಂಗಳೂರು: ದಿವಂಗತ ಎಸ್.ಎಂ.ಕೃಷ್ಣ ರಾಜ್ಯ ಕಂಡ ಅಪರೂಪದ ಮುಖ್ಯಮಂತ್ರಿಗಳಲ್ಲಿ ಒಬ್ಬರು. ಬೆಂಗಳೂರನ್ನು ಸಿಂಗಾಪುರ ಮಾಡುವ ಕನಸಿನೊಂದಿಗೆ ಸಿಲಿಕಾನ್ ಸಿಟಿಯಾಗಿಸುವಲ್ಲಿ ಅಪಾರ ಕೊಡುಗೆ ನೀಡಿದ್ದರು. ಭೀಕರ ಬರಗಾಲ, ಡಾ. ರಾಜ್‌ಕುಮಾರ್ ಅಪಹರಣದಂತಹ ಸಂದಿಗ್ಧತೆಯಲ್ಲೂ ಸಮರ್ಥ ಆಡಳಿತ ನೀಡಿದ್ದ ಹೆಗ್ಗಳಿಕೆ ಎಸ್.ಎಂ.ಕೃಷ್ಣ ಅವರದು. ಕಾಂಗ್ರೆಸ್‌ನಿಂದ ಮುಖ್ಯಮಂತ್ರಿ, ಕೇಂದ್ರ ಸಚಿವ, ರಾಜ್ಯಪಾಲ ರಾಗಿದ್ದ ಕೃಷ್ಣ ಅವರು, ಬದಲಾದ ರಾಜಕೀಯ ಸ್ಥಿತ್ಯಂತರದ ನಡುವೆ ಬಿಜೆಪಿ ಸೇರಿ ನಂತರ ರಾಜಕೀಯ ನಿವೃತ್ತಿ ಘೋಷಿಸಿದರು. ಇವರ ರಾಜಕೀಯ ಪ್ರವೇಶಕ್ಕೆ ಅಮೆರಿಕ ಮಾಜಿ ಅಧ್ಯಕ್ಷ ಜಾನ್ ಎಫ್ ಕೆನಡಿ ಪ್ರೇರಣೆ ಎನ್ನುವುದು ಗಮನಾರ್ಹ.



ಜಾನ್ ಎಫ್ ಕೆನಡಿಯೊಂದಿಗೆ ಎಸ್.ಎಂ.ಕೃಷ್ಣ.

1950ರಂದು ಮೈಸೂರು ಮಹಾರಾಜ ಕಾಲೇಜಿನಲ್ಲಿ ಬಿಎ ಪದವಿ ಪಡೆದ ನಂತರ 1955 ರಲ್ಲಿ ಬೆಂಗಳೂರಿನ ಲಾ ಕಾಲೇಜಿನಲ್ಲಿ ಕೃಷ್ಣ ಬಿ.ಎಲ್ ಪದವಿ ಪಡೆದರು. ಬಳಿಕ ಆ ಕಾಲದ ಹೆಸರಾಂತ ವಕೀಲರಾದ ಗಣೇಶ ರಾಯರ ಬಳಿ ಜೂನಿಯರ್ ಆಗಿ ಸೇರಿದ್ದರು. 1958 ರಲ್ಲಿ ಉನ್ನತ ವ್ಯಾಸಂಗಕ್ಕೆ ಕೃಷ್ಣ ಅವರು ಅಮೆರಿಕಗೆ ತೆರಳಿ ಅಲ್ಲಿನ ಟೆಕ್ಸಾಸ್‌ನ ಡಲ್ಲಾಸ್ ನಗರದ ಸದರನ್ ಮೆಥಾಡಿಸ್ಟ್ ವಿವಿಯಲ್ಲಿ ಎಂ.ಸಿ.ಎಲ್ ಪದವಿ ಪಡೆದರು.

ಈ ಸಂದರ್ಭದಲ್ಲಿ ಜಾನ್.ಎಫ್.ಕೆನಡಿ ಅವರ ಪ್ರಭಾವಕ್ಕೆ ಕೃಷ್ಣ ಒಳಗಾಗುತ್ತಾರೆ. 1960ರ ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಯುವ ರಾಜಕಾರಣಿ ಕೆನಡಿ ಸ್ಪರ್ಧಿಸಿದ್ದರು. ಅವರ ಪರ ಕೃಷ್ಣ ಪ್ರಚಾರ ಮಾಡಿದ್ದರು. ಚುನಾವಣೆಯಲ್ಲಿ ಜಯಗಳಿಸಿದ ನಂತರ ಕೆನಡಿ ಅವರು ಎಸ್.ಎಂ.ಕೃಷ್ಣ ಅವರಿಗೆ ಧನ್ಯವಾದ ಪತ್ರವನ್ನ ಕೂಡ ಬರೆದಿದ್ದರು.

1961ರಂದು ಕೃಷ್ಣ ಅವರು ಅಮೆರಿಕದಿಂದ ಉನ್ನತ ವ್ಯಾಸಂಗ ಮುಗಿಸಿ ಭಾರತಕ್ಕೆ ಮರಳಿದ್ದರು. ಅಲ್ಲಿಂದ ಬಂದವರೇ 1962ರಲ್ಲಿ ಮದ್ದೂರು ವಿಧಾನಸಭಾ ಕ್ಷೇತ್ರದಲ್ಲಿ ಪ್ರಜಾ ಸೋಷಿಯಲಿಸ್ಟ್ ಪಾರ್ಟಿಯಿಂದ ಸ್ಪರ್ಧಿಸಿ ಮೊದಲ ಚುನಾವಣೆಯಲ್ಲೇ ಗೆಲುವು ಸಾಧಿಸಿದ್ದರು. ಹಲವಾರು ಬಾರಿ ಎಸ್.ಎಂ.ಕೃಷ್ಣ ಅವರು ಕೆನಡಿ ತಮ್ಮ ರಾಜಕೀಯ ಗುರು ಎಂದೂ ಹೇಳಿಕೊಂಡಿದ್ದರು. ಕೆನಡಿ ಅವರು ಬರೆದಿರುವ ಪತ್ರವನ್ನು ಎಸ್.ಎಂ.ಕೃಷ್ಣ ಅವರ ಆತ್ಮಚರಿತ್ರೆ 'ಕೃಷ್ಣ ಪಥ' ಪುಸ್ತಕದಲ್ಲಿ ಪ್ರಕಟಿಸಲಾಗಿದೆ. ಪತ್ರದಲ್ಲಿ ಕೆನಡಿ ಅವರು 'ಡೆಮಾಕ್ರಟಿಕ್' ಪಕ್ಷದ ಪರವಾಗಿ ನೀವು ಮಾಡಿದ ಅತ್ಯುತ್ತಮ ಕೆಲಸಕ್ಕಾಗಿ ನಾನು ವೈಯಕ್ತಿಕವಾಗಿ ಧನ್ಯವಾದ ಹೇಳಲು ಸಾಧ್ಯವಾಗಲಿಲ್ಲ, ಕ್ಷಮಿಸಿ. ನಿಮ್ಮ ಪ್ರಯತ್ನ ಮತ್ತು ನಿಷ್ಠೆ ಇಲ್ಲದಿದ್ದರೆ ಕಳೆದ ನವೆಂಬರ್ 8 ರಂದು ಗೆಲುವು ಸಾಧ್ಯವಾಗುತ್ತಿರಲಿಲ್ಲ ಎಂದು ಬರೆದಿರುವುದು ಕಂಡು ಬಂದಿದೆ.

ಅಮೂಲ್ಯ ಕೊಡುಗೆ ನೀಡಿದ್ದಾರೆ



ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳು, ರಾಜಕೀಯ ಧುರೀಣರಾದ ಎಸ್.ಎಂ.ಕೃಷ್ಣ ಅವರು ವಯೋಸಹಜ ಅನಾರೋಗ್ಯದಿಂದ ನಿಧನ ಹೊಂದಿರುವ ಸುದ್ದಿ ದುಃಖ ತರಿಸಿದೆ. ಕರ್ನಾಟಕದ ನೀರಾವರಿಗೆ ಎಸ್.ಎಂ. ಕೃಷ್ಣ ಕೊಡುಗೆ ಅಪಾರ. ರಾಜ್ಯದ ವಿಧಾನ ಸಭಾಧ್ಯಕ್ಷರು, ಉಪಮುಖ್ಯಮಂತ್ರಿಗಳು, ಮುಖ್ಯಮಂತ್ರಿಗಳು, ಕೇಂದ್ರ ಸಚಿವರು, ರಾಜ್ಯಪಾಲರು ಸೇರಿದಂತೆ ಅನೇಕ ಉನ್ನತ ಹುದ್ದೆಗಳಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸಿ, ರಾಜ್ಯ ಮತ್ತು ದೇಶಕ್ಕೆ ತಮ್ಮದೇ ಆದ ಅಮೂಲ್ಯ ಕೊಡುಗೆ ನೀಡಿದ್ದರು. ಮೃತರ ಆತ್ಮಕ್ಕೆ ಚಿರಶಾಂತಿ ಲಭಿಸಲಿ. –ಈಶ್ವರ್ ಖಂಡ್ರೆ, ಅರಣ್ಯ ಸಚಿವ

ಕೃಷ್ಣ ಅವರ ಸಹಾಯ ಮರೆಯಲು ಅಸಾಧ್ಯ



ನಮ್ಮ ಕುಟುಂಬಕ್ಕೆ ತುಂಬಾ ಹತ್ತಿರದವರಾಗಿದ್ದರು. ಅತ್ಯಾಧುನಿಕ ಚಿಂತನೆಗಳನ್ನು ಮೈಗೂಡಿಸಿಕೊಂಡಿದ್ದರು. ವೀರಪ್ಪನ್ ನಮ್ಮ ತಂದೆಯವರನ್ನು ಅಪಹರಿಸಿದ್ದಾಗ ಅವರು ಮಾಡಿದ್ದ ಸಹಾಯವನ್ನು ಮರೆಯಲು ಸಾಧ್ಯ ಇಲ್ಲ. ವಯಸ್ಸು ಎಷ್ಟೇ ಆಗಿದ್ದರೂ ನಷ್ಟ ನಷ್ಟವೇ. ಅದನ್ನು ಭರಿಸಲು ಸಾಧ್ಯ ಇಲ್ಲ. 92 ವರ್ಷದ ಅವರ ಜೀವನ ಸಾರ್ಥಕವಾಗಿದೆ. ಅವರ ಕುಟುಂಬದವರಿಗೆ ದುಃಖ ಸಹಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ. –ಶಿವರಾಜ್‌ಕುಮಾರ್, ಚಿತ್ರನಟ

ಸ್ವಚ್ಛ ರಾಜಕಾರಣ ಮಾದರಿ



ಕೃಷ್ಣ ಮುಖ್ಯಮಂತ್ರಿ ಆಗಿದ್ದಾಗ ಕಾವೇರಿ ಸಮಸ್ಯೆ ಹೆಚ್ಚಾಗಿತ್ತು. ಅದನ್ನು ಅತ್ಯಂತ ಸೂಕ್ತ ರೀತಿಯಲ್ಲಿ ನಿಭಾಯಿಸಿದರು. ಇಂದಿನ ಸೇಡಿನ ರಾಜಕಾರಣವನ್ನು ನೋಡಿದಾಗ ಎಸ್.ಎಂ.ಕೃಷ್ಣ ಅವರ ಸ್ವಚ್ಛ ರಾಜಕಾರಣ ಎಲ್ಲರಿಗೂ ಮಾದರಿ. ಅಜಾತಶತ್ರು ಕೃಷ್ಣ ಅವರು, ಕರ್ನಾಟಕ ಹಾಗೂ ತಮಿಳುನಾಡಿನ ಮಧ್ಯೆ ಹೆಚ್ಚು ಸಂಘರ್ಷಕ್ಕೆ ಅವಕಾಶ ಮಾಡಿಕೊಡದೆ ರಾಜಕುಮಾರ್ ಅಪಹರಣ ಪ್ರಕರಣವನ್ನು ಬಗೆಹರಿಸಿದರು.
–ನಾರಾಯಣಗೌಡ, ಅಧ್ಯಕ್ಷ, ಕರ್ನಾಟಕ ರಕ್ಷಣಾ ವೇದಿಕೆ

ಹಲವು ಜನಪರ ಯೋಜನೆ ನೀಡಿದರು



ನಾಡಿನ ಹಿರಿಯ ಚೇತನ ಎಸ್.ಎಂ.ಕೃಷ್ಣ ಅವರ ನಿಧನದಿಂದ ದೇಶಕ್ಕೆ ತುಂಬಲಾರದ ನಷ್ಟವಾಗಿದೆ. ದೇಶದ ಅಭಿವೃದ್ಧಿ ದೃಷ್ಟಿಯಿಂದ ನಗರಗಳ ಬೆಳವಣಿಗೆ ಯಾವ ರೀತಿಯಲ್ಲಿ ಆಗಬೇಕು ಎಂಬುದನ್ನು ತೋರಿಸಿಕೊಟ್ಟವರು ಇವರು. ಉದ್ಯಮಗಳಿಂದ ಉದ್ಯೋಗ ಸೃಷ್ಟಿಸುವುದರ ಜೊತೆಗೆ ಹಲವು ಜನಪರ ಯೋಜನೆಗಳನ್ನು ನೀಡುವ ಮೂಲಕ ಜನಮಾನಸದಲ್ಲಿ ಉಳಿದಿದ್ದಾರೆ. ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ.
–ಸಿ.ನಾರಾಯಣಗೌಡ, ಅಧ್ಯಕ್ಷ, ಮೈಸೂರು ಹೋಟೆಲ್ ಮಾಲೀಕರ ಸಂಘ

ಬಹುಕಾಲದ ಸ್ನೇಹಿತನ ನಿಧನ ದುಃಖ ತಂದಿದೆ




ನನ್ನ ಬಹುಕಾಲದ ಸ್ನೇಹಿತ, ಸಹೋದ್ಯೋಗಿ ಎಸ್.ಎಂ.ಕೃಷ್ಣ ನಿಧನದಿಂದ ತೀವ್ರ ದುಃಖವಾಗಿದೆ. ನಾವಿಬ್ಬರೂ ಒಟ್ಟಿಗೆ ರಾಜಕೀಯ ಜೀವನವನ್ನು ಪ್ರಾರಂಭಿಸಿದೆವು. ಅಭಿವೃದ್ಧಿ ಮತ್ತು ಆಡಳಿತಕ್ಕೆ ವಿಭಿನ್ನ ದಾರಿಗಳನ್ನು ಕಂಡುಕೊಂಡಿದ್ದೆವು. ಓಂ ಶಾಂತಿ. –ಹೆಚ್.ಡಿ.ದೇವೇಗೌಡರು, ಮಾಜಿ ಪ್ರಧಾನಿ

ರಾಹುಲ್ ಗಾಂಧಿ ಕಂಬನಿ



ಎಸ್.ಎಂ.ಕೃಷ್ಣ ಅವರ ನಿಧನದ ಸುದ್ದಿ ತಿಳಿದು ದುಃಖವಾಯಿತು. ಕರ್ನಾಟಕದ ಅಭಿವೃದ್ಧಿಗೆ ಹಾಗೂ ಬೆಂಗಳೂರು ತಾಂತ್ರಿಕ ಕೇಂದ್ರವಾಗಿ ರೂಪಾಂತರಗೊಳ್ಳಲು ಕೃಷ್ಣ ಅವರು ಗಣನೀಯ ಕೊಡುಗೆ ನೀಡಿದ್ದರು. ಈ ದುಃಖದ ಸಮಯದಲ್ಲಿ ಅವರ ಕುಟುಂಬಸ್ಥರು ಹಾಗೂ ಪ್ರೀತಿಪಾತ್ರರ ಜೊತೆಗೆ ನಾವಿದ್ದೇವೆ. –ರಾಹುಲ್ ಗಾಂಧಿ, ಲೋಕಸಭೆ ವಿಪಕ್ಷ ನಾಯಕ

ಅನುಪಮ ಕೊಡುಗೆ ನೀಡಿದ ಮುತ್ಸದ್ದಿ



ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಶೋಕ ಸಂದೇಶದಲ್ಲಿ, ರಾಜ್ಯ ವಿಧಾನಸಭಾಧ್ಯಕ್ಷರು, ಉಪಮುಖ್ಯಮಂತ್ರಿಗಳು, ಮುಖ್ಯಮಂತ್ರಿಗಳು, ಕೇಂದ್ರ ಸಚಿವರು, ರಾಜ್ಯಪಾಲರೂ ಸೇರಿದಂತೆ ಅನೇಕ ಉನ್ನತ ಹುದ್ದೆಗಳಲ್ಲಿ ದಕ್ಷತೆಯಿಂದ ಕರ್ತವ್ಯ ನಿರ್ವಹಿಸಿ ರಾಜ್ಯಕ್ಕೆ, ದೇಶಕ್ಕೆ ತಮ್ಮದೇ ಆದ ಅನುಪಮ ಕೊಡುಗೆ ನೀಡಿದ್ದ ಹಿರಿಯರು, ಮುತ್ಸದ್ದಿಗಳಾದ ಎಸ್.ಎಂ.ಕೃಷ್ಣ ಅವರ ನಿಧನದ ಸುದ್ದಿ ಕೇಳಿ ಬಹಳ ದುಃಖವುಂಟಾಯಿತು. ವೈಯಕ್ತಿಕವಾಗಿ ನನಗೆ ಅವರ ಅಗಲಿಕೆ ಬಹಳ ದುಃಖ ಉಂಟು ಮಾಡಿದೆ. ಆ ಚೇತನಕ್ಕೆ ಚಿರಶಾಂತಿ ಸಿಗಲಿ ಹಾಗೂ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬಕ್ಕೆ, ಅಭಿಮಾನಿಗಳಿಗೆ ಕರುಣಿಸಲಿ. –ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

ಶಾಂತ ಸ್ವಭಾವದ ಸಜ್ಜನ ರಾಜಕಾರಣಿ



ಕರ್ನಾಟಕದ ಮುಖ್ಯಮಂತ್ರಿಯಾಗಿ, ದೇಶದ ವಿದೇಶಾಂಗ ಸಚಿವರಾಗಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದ, ಪದ್ಮ ವಿಭೂಷಣ ಎಸ್.ಎಂ. ಕೃಷ್ಣ ಅವರ ನಿಧನದ ಸುದ್ದಿ ಕೇಳಿ ಅತೀವ ದುಃಖವಾಗಿದೆ. ರಾಜಕಾರಣದಲ್ಲಿ ಅತ್ಯಂತ ಶಾಂತ ಸ್ವಭಾವದ, ಸಜ್ಜನ, ಹಿರಿಯ ನಾಯಕರಾಗಿದ್ದ ಅವರು ನಮಗೆಲ್ಲರಿಗೂ ಆದರ್ಶಪ್ರಾಯ. ಭಗವಂತ ಅವರ ಆತ್ಮಕ್ಕೆ ಶಾಂತಿ ನೀಡಲಿ ಹಾಗೂ ಅವರ ಕುಟುಂಬ ಮತ್ತು ಪ್ರೀತಿಪಾತ್ರರಿಗೆ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ನೀಡಲಿ.
–ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

ನಾಲ್ಕು ತಲೆಮಾರಿನ ರಾಜಕಾರಣದ ಕೊಂಡಿ




ಕರ್ನಾಟಕ ರಾಜ್ಯ ಕಂಡ ಮುತ್ಸದ್ದಿ ರಾಜಕಾರಣಿ, ಶಿಸ್ತು ಹಾಗೂ ಪ್ರಬುದ್ಧ ಆಡಳಿತಕ್ಕೆ ಮಾದರಿಯಾಗಿದ್ದ ನಾಡಿನ ಇತಿಹಾಸದಲ್ಲಿ ತಮ್ಮ ಸಜ್ಜನಿಕೆ ಹಾಗೂ ಘನತೆಯ ನಡವಳಿಕೆಯಿಂದ ವಿಶೇಷ ಛಾಪು ಮೂಡಿಸಿದ್ದ ಎಸ್.ಎಂ. ಕೃಷ್ಣ ಅವರ ನಿಧನ ಸುದ್ದಿ ಅತ್ಯಂತ ನೋವು ತಂದಿದೆ. ರಾಜ್ಯ ಹಾಗೂ ರಾಷ್ಟ್ರ ರಾಜಕಾರಣದಲ್ಲಿ ಮಹತ್ವದ ಹುದ್ದೆಗಳನ್ನು ಅಲಂಕರಿಸಿ ಇತಿಹಾಸದಲ್ಲಿ ತಮ್ಮ ಶಾಶ್ವತ ಹೆಜ್ಜೆ ಗುರುತು ಮೂಡಿಸಿರುವ ಹೆಮ್ಮೆಯ ಕನ್ನಡಿಗ ಎಸ್.ಎಂ ಕೃಷ್ಣರವರು ಮುಖ್ಯಮಂತ್ರಿಗಳಾಗಿ ಕರ್ನಾಟಕದ ಅಭಿವೃದ್ಧಿಗೆ ಅದರಲ್ಲೂ ಬೆಂಗಳೂರನ್ನು ಸಿಲಿಕಾನ್ ಸಿಟಿ ಎನಿಸಿಕೊಳ್ಳಲು ಕೊಟ್ಟ ಕೊಡುಗೆ ಎಂದೆಂದಿಗೂ ಮರೆಯಲಾಗದು. ನಾಲ್ಕು ತಲೆಮಾರಿನ ರಾಜಕಾರಣದ ಕೊಂಡಿ ಕೇಂದ್ರ ಸಚಿವ ಸಂಪುಟದಲ್ಲಿ ವಿವಿಧ ಹುದ್ದೆಗಳ ಜೊತೆಗೆ ಮಹತ್ವದ ವಿದೇಶಾಂಗ ಖಾತೆಯನ್ನು ಸಮರ್ಥವಾಗಿ ನಿಭಾಯಿಸಿ ಮಹಾರಾಷ್ಟ್ರದ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದರು. ಆರೋಗ್ಯಕರ ಮನಸ್ಸು ಕ್ರಿಯಾಶೀಲತೆಯ ಸಂಕೇತ ಎನ್ನುವ ನಿಟ್ಟಿನಲ್ಲಿ ತಮ್ಮ ಬದುಕಿನ ಕೊನೆಯ ಉಸಿರಿರುವವರೆಗೂ ಸಂಸ್ಕಾರ ಹಾಗೂ ಸುಸಂಸ್ಕೃತ ನಡವಳಿಕೆ ತಮ್ಮ ಜೀವನದ ಭಾಗವಾಗಿಸಿಕೊಂಡಿದ್ದರು. –ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

ಅಪರೂಪದ ರಾಜಕಾರಣಿ



ಎಸ್.ಎಂ.ಕೃಷ್ಣ ಅವರು ರಾಜ್ಯ ಮತ್ತು ದೇಶದ ರಾಜಕಾರಣಕ್ಕೆ ಮಾದರಿಯಾಗಿದ್ದಾರೆ. ಕೃಷ್ಣ ಅವರು ಮುಖ್ಯಮಂತ್ರಿಗಳಾಗಿ, ಕೇಂದ್ರ ಸಚಿವರಾಗಿ, ರಾಜ್ಯಪಾಲರಾಗಿ, ವಿಧಾನಸಭೆ, ವಿಧಾನಪರಿಷತ್, ಲೋಕಸಭೆ ಹಾಗೂ ರಾಜ್ಯಸಭೆ ಸದಸ್ಯರಾಗಿ ಕಾರ್ಯನಿರ್ವಹಿಸಿದ ಅಪರೂಪದ ರಾಜಕಾರಣಿ. ಕರ್ನಾಟಕ ವಿಧಾನ ಸಭಾಧ್ಯಕ್ಷರಾಗಿ ಸದನದ ಘನತೆ ಮತ್ತು ಗೌರವಗಳನ್ನು ಎತ್ತಿ ಹಿಡಿದವರು. ಸಭಾಧ್ಯಕ್ಷರಾಗಿ ಪಕ್ಷಪಾತದ ಆರೋಪಕ್ಕೆ ಗುರಿಯಾದವರಲ್ಲ. ಕರ್ನಾಟಕ ರಾಜ್ಯದ ಬೆಳವಣಿಗೆಗೆ ದುಡಿದವರು. ಮಂಡ್ಯ ಜಿಲ್ಲೆಯನ್ನ ದೇಶದ ರಾಜಕಾರಣದಲ್ಲಿ ಹಲವು ದಶಕಗಳ ಕಾಲ ಪ್ರತಿನಿಧಿಸಿದ ರಾಜಕಾರಣಿ. ಶ್ರೀಯುತರ ನಿಧನದಿಂದ ಕರ್ನಾಟಕ ರಾಜ್ಯವು ಒಬ್ಬ ಸಜ್ಜನ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ಇಂದಿನ ರಾಜಕಾರಣಕ್ಕೆ ಕೃಷ್ಣ ಅವರು ಮಾದರಿಯಾಗಿದ್ದಾರೆ.
–ಎಚ್.ಎ.ವೆಂಕಟೇಶ್, ವಕ್ತಾರರು, ಕೆಪಿಸಿಸಿ



2021ರ ಅಕ್ಟೋಬರ್ 7ರಂದು ಎಸ್.ಎಂ.ಕೃಷ್ಣ ಅವರು ಚಾಮುಂಡಿಬೆಟ್ಟದ ಮೇಲೆ ಮೈಸೂರು ದಸರಾ ಮಹೋತ್ಸವ–2021ಕ್ಕೆ ಚಾಲನೆ ನೀಡಿದ್ದರು. ದಸರಾ ಉದ್ಘಾಟನೆ ಮಾಡಿದ ಮೊದಲ ರಾಜಕಾರಣಿ ಕೃಷ್ಣ ಹೆಗ್ಗಳಿಕೆ.

ಕೃಷ್ಣರಿಗೆ ಮೈಸೂರಿನ ಅವಿನಾಭಾವ ನಂಟು

ಮೈಸೂರು,ಡಿ.10(ಎಂಟಿವೈ)– ರಾಜ್ಯ ಕಂಡ ವರ್ಣರಂಜಿತ ರಾಜಕಾರಣಿ, ರಾಜಕೀಯ ಮುತ್ಸದ್ದಿ ಎಸ್.ಎಂ.ಕೃಷ್ಣ ಅವರಿಗೂ, ಸಾಂಸ್ಕೃತಿಕ ನಗರಿ ಮೈಸೂರಿಗೂ ಅವಿನಾಭಾವ ಸಂಬಂಧವಿದೆ. ರಾಜಕಾರಣ ಮಾತ್ರವಲ್ಲದೆ, ಧಾರ್ಮಿಕ ಕೇಂದ್ರಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದ ಎಸ್‌ಎಂಕೆ ಮೈಸೂರಲ್ಲೂ ಅಪಾರ ಅಭಿಮಾನಿ ವೃಂದವನ್ನು ಹೊಂದಿದ್ದರು.

ರಾಜ್ಯದ ಮುಖ್ಯಮಂತ್ರಿಯಾಗಿ, ವಿದೇಶಾಂಗ ಸಚಿವ ಹಾಗೂ ಮಹಾರಾಷ್ಟ್ರದ ರಾಜ್ಯಪಾಲರಾಗಿಯೂ ಸೇವೆ ಸಲ್ಲಿಸಿದ್ದ ಎಸ್.ಎಂ.ಕೃಷ್ಣ ಅವರು ಆರು ದಶಕಗಳಿಗೂ ಅಧಿಕ ಕಾಲದಿಂದ ಮೈಸೂರಿನೊಂದಿಗೆ ಒಡನಾಟ ಹೊಂದಿದ್ದರು. ಮಂಡ್ಯ ಮೂಲದವರಾಗಿದ್ದರೂ ಮೈಸೂರಲ್ಲಿ ಪ್ರಾಥಮಿಕ ಶಿಕ್ಷಣದಿಂದ ಪದವಿ ಶಿಕ್ಷಣವನ್ನು ಪಡೆಯುವುದರೊಂದಿಗೆ ಮೈಸೂರಿನ ನಂಟನ್ನು ಗಟ್ಟಿಯಾಗಿ ಬೆಸೆದುಕೊಂಡಿದ್ದರು.

ಮೈಸೂರಿನ ಒಂಟಿಕೊಪ್ಪಲಿನ ಮಹಾಜನ ಪ್ರಾಥಮಿಕ ಶಾಲೆಯಲ್ಲಿ ಮೂರನೇ ತರಗತಿಗೆ ಸೇರ್ಪಡೆಗೊಂಡು ಪ್ರಾಥಮಿಕ ಶಿಕ್ಷಣ ಪಡೆದರು. ಬಳಿಕ ಎಸ್.ಎಂ.ಕೃಷ್ಣ ಅವರು ಮೈಸೂರಿನ ರಾಮಕೃಷ್ಣ ಆಶ್ರಮದ ವಿದ್ಯಾರ್ಥಿಯಾದರು. ಆಶ್ರಮದ ವಿದ್ಯಾರ್ಥಿನಿಲಯದಲ್ಲಿ, ವೇದಾನಂದ, ಶಾಂಭವಾನಂದ ಮಹಾರಾಜರ ಮಾರ್ಗದರ್ಶನದಲ್ಲಿ ಶಿಸ್ತನ್ನು ಅಳವಡಿಸಿಕೊಂಡರು.

ವಿದ್ಯಾರ್ಥಿದೆಸೆಯಲ್ಲಿಯೇ ಉತ್ತಮ ವಾಗ್ಮಿ ಎನಿಸಿಕೊಂಡಿದ್ದ ಎಸ್‌ಎಂಕೆ ಸಂಗೀತ, ಯೋಗಾಭ್ಯಾಸದಲ್ಲೂ ತೊಡಗಿಸಿಕೊಂಡಿದ್ದರು. ರಾಮಕೃಷ್ಣ ಆಶ್ರಮದ ಭಜನಾ ತಂಡದಲ್ಲಿ ತಬಲಾ ನುಡಿಸುವ ಕಲೆಯನ್ನು ಮೈಗೂಡಿಸಿಕೊಂಡಿದ್ದರು. ಅಲ್ಲದೆ, ರಾಮಕೃಷ್ಣ ಆಶ್ರಮದ ವಿದ್ಯಾರ್ಥಿಗಳ ತಂಡ ಮೈಸೂರು ಆಕಾಶವಾಣಿಗೆ ನೀಡಿದ ಕಾರ್ಯಕ್ರಮದಲ್ಲಿ ಎಸ್‌ಎಂಕೆ ತಬಲ ನುಡಿಸಿದ್ದರು.

ಆಶ್ರಮಕ್ಕೆ ನೆರವು: ಜೀವನದಲ್ಲಿ ಶಿಸ್ತಿನೊಂದಿಗೆ ಉತ್ತಮ ಶಿಕ್ಷಣ ಪಡೆಯಲು ನೆರವಾದ ರಾಮಕೃಷ್ಣ ಆಶ್ರಮಕ್ಕೆ ಎಸ್.ಎಂ.ಕೃಷ್ಣ ನೆರವು ನೀಡಿದ್ದಾರೆ. ಕೆಲ ವರ್ಷಗಳ ಹಿಂದೆ ಕೆಂಪೇಗೌಡ ಅಂತರರಾಷ್ಟ್ರೀಯ ಪ್ರಶಸ್ತಿಯೊಂದಿಗೆ ನೀಡಿದ 5 ಲಕ್ಷ ರೂ.ನೊಂದಿಗೆ ವೈಯಕ್ತಿಕವಾಗಿ 2 ಲಕ್ಷ ಸೇರಿಸಿ ದೇಣಿಗೆ ನೀಡಿದ್ದರು.

ಮಹಾರಾಜ ಕಾಲೇಜಿನಲ್ಲಿ ಪದವಿ: ಮೈಸೂರಿನ ಪ್ರತಿಷ್ಠಿತ ಕಾಲೇಜುಗಳಲ್ಲಿ ಒಂದಾಗಿರುವ ಮಹಾರಾಜ ಕಾಲೇಜಿನಲ್ಲಿ ಎಸ್.ಎಂ.ಕೃಷ್ಣ ಪದವಿ ಪಡೆದಿದ್ದಾರೆ. 1948ರಲ್ಲಿ ಮಹಾಜನ ಪ್ರೌಢಶಾಲೆಯಲ್ಲಿ ಎಸ್ಸೆಸ್ಸೆಲ್ಸಿ ಪೂರ್ಣಗೊಳಿಸಿದ ನಂತರ ಯುವರಾಜ ಕಾಲೇಜಿನಲ್ಲಿ ಇಂಟರ್ ಮೀಡಿಯೆಟ್ ಶಿಕ್ಷಣ ಪಡೆದರು. ಆ ನಂತರ ಮಹಾರಾಜ ಕಾಲೇಜಿನಲ್ಲಿ ಇತಿಹಾಸ, ಅರ್ಥಶಾಸ್ತ್ರ ಹಾಗೂ ರಾಜ್ಯಶಾಸ್ತ್ರ ವಿಷಯದಲ್ಲಿ ಪದವಿ ಪಡೆದರು. ಪದವಿ ಶಿಕ್ಷಣದ ವೇಳೆ ರಾಷ್ಟ್ರಕವಿ ಕುವೆಂಪು, ಎಂ.ಎ. ಗೋಪಾಲಸ್ವಾಮಿ, ಟಿ.ಎ. ಪುರುಷೋತ್ತಮ್, ದೇಜಗೌ, ಸಿ.ಡಿ.ನರಸಿಂಹಯ್ಯ ಸೇರಿದಂತೆ ಇನ್ನಿತರ ಹೆಸರಾಂತ ಗುರುಗಳ ಮಾರ್ಗದರ್ಶನ ದೊರೆತಿದ್ದ ಹಿನ್ನೆಲೆಯಲ್ಲಿ ಎಸ್.ಎಂ.ಕೃಷ್ಣ ಅವರ ವ್ಯಕ್ತಿತ್ವ ಉತ್ತಮವಾಗಿ ರೂಪುಗೊಳ್ಳಲು ಸಾಧ್ಯವಾಗಿದೆ. ಪದವಿ ಪಡೆಯುವ ಓದಿನೊಂದಿಗೆ ಕ್ರೀಡೆಯಲ್ಲೂ ಆಸಕ್ತಿ ಹೊಂದಿದ್ದ ಕೃಷ್ಣ ಅವರು, ವಾಲಿಬಾಲ್ ಮತ್ತು ಟೆನಿಸ್ ಆಟದಲ್ಲಿ ತೀವ್ರಾಸಕ್ತಿ ಹೊಂದಿದ್ದರು.

ಗೌರವ ಡಾಕ್ಟರೇಟ್: ರಾಜಕೀಯ ಮುತ್ಸದ್ದಿ ಎಸ್.ಎಂ.ಕೃಷ್ಣ ಅವರಿಗೆ ಮೈಸೂರು ವಿಶ್ವವಿದ್ಯಾಲಯವು ಪ್ರಸಕ್ತ ವರ್ಷ ಮಾರ್ಚ್‌ನಲ್ಲಿ ನಡೆದ 104ನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿತ್ತು. ಈ ಕಾರ್ಯಕ್ರಮದಲ್ಲಿ ಎಸ್‌ಎಂಕೆ ಅವರು ಖುದ್ದು ಹಾಜರಾಗಿ ಗೌರವ ಡಾಕ್ಟರೇಟ್ ಪದವಿ ಸ್ವೀಕರಿಸಿದ್ದರು.

ಮೈಸೂರು ಮಿತ್ರ

ಕಳಚಿತು ಸಕ್ಕರೆ ನಾಡಿನ ಮುತ್ಸದ್ದಿ ರಾಜಕಾರಣದ ಕಡೆಯ ಕೊಂಡಿ

ಚಿಕ್ಕ ವಯಸ್ಸಿನಲ್ಲೇ ಮಹಾತ್ಮಗಾಂಧಿಯನ್ನು ಸ್ವಾಗತಿಸಿ ಗಮನ ಸೆಳೆದಿದ್ದ ಕೃಷ್ಣ

ಎಂ.ಕೆ.ಮೋಹನ್‌ರಾಜ್

ಮಂಡ್ಯ,ಡಿ.10– ಸಕ್ಕರೆ ನಾಡು ಮಂಡ್ಯ ಜಿಲ್ಲೆ, ರಾಷ್ಟ್ರ ಹಾಗೂ ರಾಜ್ಯದ ಗಮನ ಸೆಳೆಯುವಂತಹ ಮುತ್ಸದ್ದಿ ರಾಜಕಾರಣಿಗಳನ್ನು ಕೊಡುಗೆಯಾಗಿ ನೀಡಿದ ಜಿಲ್ಲೆ. ಅಂತಹ ಶಕ್ತಿಯುತ ಮತ್ತು ಚಾಣಕ್ಯ ರಾಜಕಾರಣಿಗಳ ಪೈಕಿ ಅಗ್ರಗಣ್ಯ ನಾಯಕರೆಂದರೆ ಅದು ಸೋಮನಹಳ್ಳಿ ಮಲ್ಲಯ್ಯ ಕೃಷ್ಣ(ಎಸ್.ಎಂ.ಕೃಷ್ಣ). ಇದೀಗ ಜಿಲ್ಲೆಯ ಮುತ್ಸದ್ದಿ ರಾಜಕಾರಣದ ಕಡೆಯ ಕೊಂಡಿಯಂತಿದ್ದ ಎಸ್.ಎಂ.ಕೃಷ್ಣ ಅವರ ಅಗಲಿಕೆಯಿಂದ ಜಿಲ್ಲೆಯ ರಾಜಕೀಯ ಕ್ಷೇತ್ರ ಬಡವಾಗಿದೆ.

ಮಂಡ್ಯ ಜಿಲ್ಲೆಯ ಅಗ್ರಗಣ್ಯ ರಾಜಕೀಯ ನೇತಾರರೆಂದರೆ ಹೆಚ್.ಕೆ.ವೀರಣ್ಣಗೌಡ, ಕೆ.ವಿ.ಶಂಕರಗೌಡ, ಕೆ.ಎನ್.ನಾಗೇಗೌಡ, ಹೆಚ್.ಟಿ.ಕೃಷ್ಣಪ್ಪ, ಕೆ.ಆರ್.ಪೇಟೆ ಕೃಷ್ಣ, ಡಾ.ಹೆಚ್.ಡಿ.ಚೌಡಯ್ಯ, ಜಿ.ಮಾದೇಗೌಡ. ಹೀಗೆ ಇವರ ಸಾಲಿನಲ್ಲಿ ಅಗ್ರಗಣ್ಯರಾಗಿ ನಿಲ್ಲುವವರು ಎಸ್.ಎಂ.ಕೃಷ್ಣ. ಇದೀಗ ಕೃಷ್ಣ ನೆನಪು ಮಾತ್ರ.

ಚಿಕ್ಕ ವಯಸ್ಸಿನಲ್ಲೇ ರಾಷ್ಟ್ರಪಿತ ಮಹಾತ್ಮಗಾಂಧಿ ಅವರನ್ನು ಸ್ವಾಗತಿಸುವ ಮೂಲಕ ಗಮನ ಸೆಳೆದಿದ್ದ ಎಸ್.ಎಂ.ಕೃಷ್ಣ ಮುಂದೆ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಅವಿಸ್ಮರಣೀಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಜನಮಾನಸದಲ್ಲಿ ಉಳಿದುಕೊಂಡಿದ್ದಾರೆ.

ಸಂಭಾವಿತ ರಾಜಕಾರಣಿಯ ಹೆಜ್ಜೆ ಗುರುತು: ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಸೋಮನಹಳ್ಳಿ ಗ್ರಾಮದ ಶ್ರೀಮತಿ ಮಲ್ಲಯ್ಯ ದಂಪತಿಗಳ ಸುಪುತ್ರರಾಗಿ 1932, ಮೇ 1ರಂದು ಜನಿಸಿದರು ಕೃಷ್ಣ. ಮಲ್ಲಯ್ಯ ದಂಪತಿಗಳಿಗೆ ಒಟ್ಟು ಏಳು ಮಂದಿ ಮಕ್ಕಳು. ಮೊದಲ ಐವರು ಹೆಣ್ಣು ಮಕ್ಕಳಾದರೆ, ಕಡೆಯ ಇಬ್ಬರು ಗಂಡು ಮಕ್ಕಳು. ಆರನೇ ಪುತ್ರ ಎಸ್.ಎಂ.ಕೃಷ್ಣ.



ಎಸ್.ಎಂ.ಕೃಷ್ಣ ಅವರು ಚಿಕ್ಕ ವಯಸ್ಸಿನಲ್ಲೇ ಮದ್ದೂರಿಗೆ ಭೇಟಿ ನೀಡಿದ್ದ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರನ್ನು ಸ್ವಾಗತಿಸಿದ್ದರು.

ಪ್ರೇಮಾ ಅವರನ್ನು ಕೈಹಿಡಿಯುವ ಕೃಷ್ಣ ಅವರಿಗೆ ಇಬ್ಬರು ಮಕ್ಕಳು. ಒಬ್ಬರು ಮಾಳವಿಕ, ಮತ್ತೊಬ್ಬರು ಶಾಂಭವಿ. ಮಾಳವಿಕ ಅವರು ಕಾಫಿ ಡೇ ಸಂಸ್ಥಾಪಕ ದಿ.ಸಿದ್ಧಾರ್ಥ ಹೆಗಡೆ ಅವರನ್ನು ಕೈ ಹಿಡಿದಿದ್ದರೆ, ಶಾಂಭವಿ ಅವರನ್ನು ಉದ್ಯಮಿ ಉಮೇಶ್ ಎಂಬುವವರೊಂದಿಗೆ ವಿವಾಹ ಮಾಡಿಕೊಟ್ಟಿದ್ದು, ಅವರು ವಿದೇಶದಲ್ಲಿ ನೆಲೆಸಿದ್ದಾರೆ.

ಮಹಾತ್ಮ ಗಾಂಧಿಗೆ ಸ್ವಾಗತ ಕೋರಿದ ಕೃಷ್ಣ: ಕೃಷಿಕ ಕುಟುಂಬದಲ್ಲಿ ಜನಿಸಿದ ಕೃಷ್ಣ ಅವರು, ಬಾಲ್ಯದಲ್ಲೇ ಸ್ವಾತಂತ್ರ್ಯ ಚಳುವಳಿಗೆ ಮದ್ದೂರಿನ ಶಿವಪುರಕ್ಕೆ ಆಗಮಿಸಿದ್ದ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರನ್ನು ಸ್ವಾಗತಿಸುವ ಮೂಲಕ ಗಮನ ಸೆಳೆಯುತ್ತಾರೆ. ಮಿತಭಾಷೆಯ ಕೃಷ್ಣ ಬಾಲ್ಯ ಶಿಕ್ಷಣವನ್ನು ಮದ್ದೂರಿನಲ್ಲಿ ಮುಗಿಸಿ, ಪ್ರೌಢ ಶಿಕ್ಷಣ ಹಾಗೂ ಉನ್ನತ ಶಿಕ್ಷಣಕ್ಕೆ ಮೈಸೂರಿಗೆ ಬರುತ್ತಾರೆ.

ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಕಾನೂನು ಪದವಿ ಮುಗಿಸಿ, ಬೆಂಗಳೂರಿನ ಸರ್ಕಾರಿ ಕಾನೂನು ಕಾಲೇಜಿನಲ್ಲಿ ಮತ್ತೆ ಪದವಿಯನ್ನು ಪಡೆಯುತ್ತಾರೆ.

ಉನ್ನತ ವ್ಯಾಸಂಗ ಮಾಡಬೇಕೆಂಬ ದೃಷ್ಟಿಯಿಂದ ದೂರದ ಅಮೇರಿಕಾ ದೇಶದ ಡಲ್ಲಾಸ್‌ನ ಸೌತರ್ನ್ ಮೆಥಡಿಸ್ಟ್ ಮತ್ತು ಜಾರ್ಜ್ ವಾಷಿಂಗ್ಟನ್ ವಿಶ್ವವಿದ್ಯಾನಿಲಯದಲ್ಲಿ ವ್ಯಾಸಂಗ ಮಾಡಿ, ವಿದ್ಯಾಭ್ಯಾಸದ ತರುವಾಯ ಅಂತರಾಷ್ಟ್ರೀಯ ಕಾನೂನು ಕಾಲೇಜಿನಲ್ಲಿ ಕೆಲವರ್ಷ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿ, 1962ರಲ್ಲಿ ರಾಜಕೀಯ ಪ್ರವೇಶ ಮಾಡುತ್ತಾರೆ.

ಕೃಷ್ಣ ರಾಜಕೀಯ ಹಾದಿ: 1962ರಲ್ಲಿ ವಿದೇಶದಿಂದ ತಾಯ್ನಾಡಿಗೆ ವಾಪಸ್ಸಾಗುವ ಕೃಷ್ಣ, ಅಂದಿನ ಕಾಂಗ್ರೆಸ್ ಪಕ್ಷದ ಮುಖ್ಯಮಂತ್ರಿ ಅಭ್ಯರ್ಥಿ ಎಂದೇ ಬಿಂಬಿಸಲ್ಪಟ್ಟಿದ್ದ ಹೆಚ್.ಕೆ.ವೀರಣ್ಣಗೌಡ ವಿರುದ್ಧ ಸ್ಪರ್ಧಿಸಿ, ಗೆಲುವು ಸಾಧಿಸುತ್ತಾರೆ. 1968ರಲ್ಲಿ ಪ್ರಥಮ ಬಾರಿಗೆ ಲೋಕಸಭೆ ಪ್ರವೇಶಿಸುವ ಅವರು, 1972ರಲ್ಲಿ ರಾಜ್ಯ ವಿಧಾನಪರಿಷತ್‌ಗೆ ಆಯ್ಕೆಯಾಗಿ ವಾಣಿಜ್ಯ, ಕೈಗಾರಿಕೆ, ಕಾನೂನು, ಸಂಸದೀಯ ವ್ಯವಹಾರಗಳ ಸಚಿವರಾಗಿ ಕಾರ್ಯನಿರ್ವಹಿಸುತ್ತಾರೆ.

ವಿದೇಶಾಂಗ ಸಚಿವರಾದರೂ ಮಂಡ್ಯ ಮರೆಯದ ಕೃಷ್ಣ

ಕೃಷ್ಣ ವಿದೇಶಾಂಗ ಸಚಿವರಾಗಿದ್ದರೂ ತನ್ನ ಹುಟ್ಟೂರು ಮಂಡ್ಯ ಜಿಲ್ಲೆಯನ್ನು ಮಾತ್ರ ಮರೆಯುತ್ತಿರಲಿಲ್ಲ. ಆ ಸಮಯದಲ್ಲಿ ಕನಿಷ್ಠ 3 ತಿಂಗಳಿಗೊಮ್ಮೆ ಜಿಲ್ಲೆಗೆ ಭೇಟಿ ನೀಡುತ್ತಿದ್ದರು. ಅದರಲ್ಲೂ ಹುಟ್ಟೂರು ಮದ್ದೂರು ಮತ್ತು ಕೇಂದ್ರ ಸ್ಥಾನ ಮಂಡ್ಯಕ್ಕೆ ಭೇಟಿ ನೀಡುವುದನ್ನು ಎಸ್.ಎಂ.ಕೃಷ್ಣ ಮರೆಯುತ್ತಿರಲಿಲ್ಲ.

ತನ್ನ ಕುಟುಂಬ ವರ್ಗ, ಸ್ನೇಹಿತರ ವರ್ಗವನ್ನು ಎಂದೂ ಬಿಟ್ಟುಕೊಡದ ಕೃಷ್ಣ, ನೋವು–ನಲಿವಿನಲ್ಲಿ ಭಾಗವಹಿಸುತ್ತಿದ್ದರು.

1982ರಲ್ಲಿ ವಿಶ್ವಸಂಸ್ಥೆಗೆ ತೆರಳಿದ ಭಾರತದ ನಿಯೋಗದ ಸದಸ್ಯರಾಗಿ 1990ರಲ್ಲಿ ಇಂಗ್ಲೆಂಡ್‌ನಲ್ಲಿ ಜರುಗಿದ ಕಾಮನ್‌ವೆಲ್ತ್ ಸಂಸದೀಯ ವಿಚಾರ ಸಂಕಿರಣದ ಪ್ರತಿನಿಧಿಯಾಗಿ ಭಾಗವಹಿಸಿ, ತಮ್ಮ ಕೀರ್ತಿಯನ್ನು ಹೆಚ್ಚಿಸಿಕೊಳ್ಳುತ್ತಾರೆ. 1980ರಲ್ಲಿ ಮತ್ತೊಮ್ಮೆ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗಿ 1983–84ರ ಅವಧಿಯಲ್ಲಿ ಕೇಂದ್ರ ಕೈಗಾರಿಕೆ ಹಾಗೂ ಹಣಕಾಸು ಖಾತೆ ರಾಜ್ಯ ಸಚಿವರಾಗಿ ಕಾರ್ಯನಿರ್ವಹಿಸುತ್ತಾರೆ. 1989ರಿಂದ 92ರವರೆಗೆ ಮುಖ್ಯಮಂತ್ರಿ ಎಂ.ವೀರಪ್ಪಮೊಯ್ಲಿ ಸರ್ಕಾರದಲ್ಲಿ ಸ್ಪೀಕರ್ ಬಳಿಕ ಉಪಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸುತ್ತಾರೆ.



ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು ಕಾಂಗ್ರೆಸ್ ಪಕ್ಷವನ್ನು ತೊರೆದು ಬಿಜೆಪಿ ಸೇರಿದ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರನ್ನು ಅಭಿನಂದಿಸಿದ ಕ್ಷಣ

1996ರಲ್ಲಿ ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾಗುವ ಮೂಲಕ ವಿಶ್ವದ ಹಲವು ರಾಷ್ಟ್ರಗಳಿಗೆ ಪ್ರಯಾಣ ಬೆಳೆಸಿ ತಮ್ಮ ಕೌಶಲ ಮೆರೆದ ಕೀರ್ತಿಗೆ ಪಾತ್ರರಾಗುವ ಅವರು, 1999ರಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದು ನಾಲ್ಕೂವರೆ ವರ್ಷ ಆಡಳಿತ ನಡೆಸುತ್ತಾರೆ.

ಮುಖ್ಯಮಂತ್ರಿಯಾಗಿ ಎಸ್‌ಎಂಕೆ: ಕೃಷ್ಣ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಮಾಹಿತಿ ತಂತ್ರಜ್ಞಾನಕ್ಕೆ ಅವಕಾಶ ನೀಡಿ ವಿಶ್ವದ ಐಟಿ ಗಮನ ಬೆಂಗಳೂರಿನತ್ತ ತಿರುಗಿ ನೋಡುವಂತೆ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಒಂದು ರಾಜ್ಯದ ಅಭಿವೃದ್ಧಿ ಕೈಗಾರಿಕೀಕರಣ ಮತ್ತು ಸಾರಿಗೆ ಕ್ಷೇತ್ರದ ಬಲವರ್ಧನೆಯಿಂದ ಮಾತ್ರ ಸಾಧ್ಯ ಎಂಬುದನ್ನು ಮನಗಂಡ ಕೃಷ್ಣ ಅವರು ತಮ್ಮ ಅಧಿಕಾರಾವಧಿಯಲ್ಲಿ ಬೆಂಗಳೂರು–ಮೈಸೂರು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಗೊಳಿಸಿದರು.

ಬೆಂಗಳೂರು ನಗರದ ಅಭಿವೃದ್ಧಿಗೆ ಗಮನ ಹರಿಸಿ, ಬೆಂಗಳೂರು ಮಹಾನಗರದ ತಂತ್ರಜ್ಞಾನ ಪಾರ್ಕ್ ಆರಂಭಿಸಲು ಶ್ರಮಿಸಿದರು. ಭವಿಷ್ಯದ ಜನಾಂಗಕ್ಕಾಗಿ ಜೈವಿಕ ಮಹತ್ವದ ಅನಿವಾರ್ಯತೆಯನ್ನು ಅರಿತು ಈ ಕ್ಷೇತ್ರಕ್ಕೆ ಮನ್ನಣೆ ನೀಡಿ, ಸಹಸ್ರಾರು ಯುವ ಸಮೂಹ ದೇಶ, ವಿದೇಶಗಳಲ್ಲಿ ತೃಪ್ತಿದಾಯಕ ಸಂಭಾವನೆ ಪಡೆಯಲು ಕಾರಣರಾಗುತ್ತಾರೆ.

ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ರೈತರ ಜನಕಲ್ಯಾಣಕ್ಕೆ ಸಂಜೀವಿನಿ ಯೋಜನೆ, ಭೂಮಿ ಯೋಜನೆ ಜಾರಿಗೊಳಿಸಿ, ಸ್ತ್ರೀ ಶಕ್ತಿ ಸ್ವಸಹಾಯ ಸಂಘಗಳನ್ನು ಸ್ಥಾಪಿಸಿ, ಕುಟುಂಬ ನಿರ್ವಹಣೆಯಲ್ಲಿ ಸ್ತ್ರೀಯರ ಪಾತ್ರದ ಮಹತ್ವವನ್ನು ಸಾಬೀತು ಪಡಿಸುತ್ತಾರೆ. ಬೆಂಗಳೂರಿನಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆ, ಪಂಚಾಯತ್ ರಾಜ್ ಕಾಯ್ದೆ ತಿದ್ದುಪಡಿ ಹೀಗೆ ಹಲವು ಮಹತ್ವದ ಕೆಲಸಗಳನ್ನು ಕೃಷ್ಣ ಮಾಡುತ್ತಾರೆ.

ರಾಷ್ಟ್ರ ರಾಜಕಾರಣದಲ್ಲಿ ಕೃಷ್ಣ ಹೆಜ್ಜೆಗುರುತು: ಬಳಿಕ ಮುಖ್ಯಮಂತ್ರಿ ಹುದ್ದೆಯಿಂದ ನಿರ್ಗಮಿಸಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ ಕಾರ್ಯನಿರ್ವಹಿಸಿ, ನಂತರ 2010ರಲ್ಲಿ ರಾಜ್ಯಸಭೆಗೆ ಎರಡನೇ ಬಾರಿಗೆ ಪ್ರವೇಶಿಸಿ ಡಾ.ಮನಮೋಹನ್‌ಸಿಂಗ್ ಸಂಪುಟದಲ್ಲಿ ವಿದೇಶಾಂಗ ಸಚಿವರಾಗಿ ಕಾರ್ಯನಿರ್ವಹಿಸುತ್ತಾರೆ. ಹೀಗೆ ರಾಜಕಾರಣದಲ್ಲಿ ಯಶಸ್ಸುಗೊಳಿಸಿ, ಬಳಿಕ ನಿವೃತ್ತಿ ಘೋಷಿಸಿ, 93ನೇ ವಯಸ್ಸಿನವರೆಗೆ ತೃಪ್ತಿ ಜೀವನ ನಡೆಸಿದ ಕೃಷ್ಣ ಇನ್ನು ನೆನಪು ಮಾತ್ರ.

ಅಮೇರಿಕಾ ಸಂಸತ್‌ನಲ್ಲಿ ನಿರರ್ಗಳ ಭಾಷಣ ಮಾಡಿದ ಏಕೈಕ ಕನ್ನಡಿಗ

2009ರಲ್ಲಿ ವಿದೇಶಾಂಗ ಸಚಿವರಾಗಿದ್ದ ಎಸ್.ಎಂ.ಕೃಷ್ಣ, ಹಲವು ದೇಶಗಳಿಗೆ ತೆರಳಿ ಭಾರತವನ್ನು ಪ್ರತಿನಿಧಿಸುತ್ತಿದ್ದರು. ಹಾಗೆಯೇ ಅಮೇರಿಕಾಗೆ ಹಲವು ಬಾರಿ ಪ್ರವಾಸ ಕೈಗೊಂಡಿದ್ದ ಅವರು, ಅಂದಿನ ಅಮೇರಿಕಾ ಅಧ್ಯಕ್ಷ ಬರಾಕ್ ಒಬಾಮಾ ಜೊತೆಗೆ ಅವಿನಾಭಾವ ಸಂಬಂಧ ಹೊಂದಿದ್ದರು.

ಹಾಗೆಯೇ ಅಮೇರಿಕಾ ಸಂಸತ್‌ನಲ್ಲಿ ಹಲವು ಬಾರಿ, ಭಾರತವನ್ನು ಪ್ರತಿನಿಧಿಸಿ, ಭಾಷಣ ಮಾಡಿದ್ದಾರೆ. ವಿಶ್ವದ ದೊಡ್ಡಣ್ಣ ಅಮೇರಿಕಾದಲ್ಲಿ ಭಾರತದ ಪರ ಭಾಷಣ ಮಾಡಿದ ಏಕೈಕ ಕನ್ನಡಿಗ ಕೃಷ್ಣ ಅವರಾಗಿದ್ದಾರೆ. ಅಮೇರಿಕಾ ರೀತಿ ವಿಶ್ವದ ಹಲವು ರಾಷ್ಟ್ರಗಳಲ್ಲಿ ಭಾರತವನ್ನು ಎಸ್‌ಎಂಕೆ ಪ್ರತಿನಿಧಿಸಿದ್ದಾರೆ.

ಎಸ್‌ಎಂಕೆ ನಿಧನಕ್ಕೆ ರವೀಂದ್ರ ಕಂಬನಿ



ಎಸ್.ಎಂ.ಕೃಷ್ಣ ಅವರೊಂದಿಗೆ ಅಂದಿನ ಶಾಸಕಿ ಪಾರ್ವತಮ್ಮ ಶ್ರೀಕಂಠಯ್ಯ ಮತ್ತು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ.

ಶ್ರೀರಂಗಪಟ್ಟಣ, ಡಿ.10– ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಅಗಲಿಕೆ ಜಿಲ್ಲೆ, ರಾಜ್ಯ ಹಾಗೂ ದೇಶಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಕಂಬನಿ ಮಿಡಿದಿದ್ದಾರೆ.

ಎಸ್.ಎಂ.ಕೃಷ್ಣ ಅವರು ಮುಖ್ಯಮಂತ್ರಿಯಾಗಿದ್ದ ವೇಳೆ ನಮ್ಮ ತಾಯಿ ಪಾರ್ವತಮ್ಮ ಶ್ರೀಕಂಠಯ್ಯ ಅವರು ಶಾಸಕಿಯಾಗಿ ಕೆಲಸ ಮಾಡಲು ಅವಕಾಶ ದೊರಕಿತ್ತು. ಆ ವೇಳೆ ಸುಮಾರು 14 ಸಾವಿರ ಆಶ್ರಯ ಮನೆಗಳನ್ನು ಮಂಜೂರು ಮಾಡಿಕೊಟ್ಟಿದ್ದರು. ಜೊತೆಗೆ ಜಿಲ್ಲೆಯ ರೈತರ ಅನುಕೂಲಕ್ಕಾಗಿ ಕಾವೇರಿ ಪ್ರಾಧಿಕಾರ ತೆರೆದು, ಅತಿ ಹೆಚ್ಚು ನೀರಾವರಿ ಪ್ರದೇಶವನ್ನಾಗಿ ಮಾರ್ಪಡಿಸುವಲ್ಲಿ ಅವರ ಪಾತ್ರ ಪ್ರಮುಖ ಎಂದು ಸ್ಮರಿಸಿದರು.

ಮಹಿಳೆಯರ ಸಬಲೀಕರಣಕ್ಕಾಗಿ ಸ್ತ್ರೀಶಕ್ತಿ ಯೋಜನೆ, ಬಡವ ಮತ್ತು ಮಧ್ಯಮ ವರ್ಗಕ್ಕೆ ಅನುಕೂಲವಾಗುವಂತೆ ಯಶಸ್ವಿನಿ ಯೋಜನೆ, ಹೆಣ್ಣು ಮಕ್ಕಳ ವಿದ್ಯಾಭ್ಯಾಸದ ಪ್ರಗತಿಗಾಗಿ ಬಿಸಿಯೂಟ, ರೈತರ ಒಳಿತಿಗಾಗಿ ಭೂ ದಾಖಲೆಗಳ ಡಿಜಿಟಲೀಕರಣ ಮಾಡಲು ಭೂ ಯೋಜನೆ ಜಾರಿ. ಇಂತಹ ಹಲವು ಮಹತ್ತರ ಯೋಜನೆಗಳನ್ನು ಸಾಕಾರಗೊಳಿಸಿದ ಬಹುವ್ಯಕ್ತಿತ್ವದ ಎಸ್.ಎಂ.ಕೃಷ್ಣ ಅವರು ಅಗಲಿರುವುದು ತುಂಬಲಾರದ ನಷ್ಟ ಎಂದು ತಿಳಿಸಿದ್ದಾರೆ.

ನಮ್ಮ ಕುಟುಂಬದ ಒಡನಾಡಿಯಾಗಿದ್ದ ಎಸ್.ಎಂ.ಕೃಷ್ಣ ಅವರು ನಮ್ಮ ತಾತ ಚುಂಚೇಗೌಡ, ತಂದೆ ಎ.ಸಿ.ಶ್ರೀಕಂಠಯ್ಯ ಹಾಗೂ ತಾಯಿ ಪಾರ್ವತಮ್ಮ ಅವರೊಂದಿಗೆ ಬಾಂಧವ್ಯದಿಂದಿದ್ದರು. ಸಂಭಾವಿತ ಹಾಗೂ ವಿನಯವಂತಿಕೆ ರಾಜಕಾರಣಿಯಾಗಿದ್ದ ಎಸ್.ಎಂ.ಕೃಷ್ಣ ಅವರು ಯಾವುದೇ ಹುದ್ದೆ ಪಡೆದರೂ ಆ ಹುದ್ದೆಯ ಘನತೆ ಹೆಚ್ಚಾಗುವಂತೆ ಕೆಲಸ ನಿರ್ವಹಿಸುತ್ತಿದ್ದರು. ಜಿಲ್ಲೆಯ ಮಗನನ್ನು ಇಂದು ಕಳೆದುಕೊಂಡಿರುವುದು ಜಿಲ್ಲೆ ಮಾತ್ರವಲ್ಲ ಇಡೀ ದೇಶಕ್ಕೇ ನಷ್ಟವಾಗಿದೆ. ಅಲ್ಲದೆ, ನನ್ನ ರಾಜಕೀಯ ಮಾರ್ಗದರ್ಶಕರಾಗಿದ್ದರು ಎಂದು ನೆನಪಿಸಿಕೊಂಡರು.

ಕೃಷ್ಣ ನಿಧನಕ್ಕೆ ಜಿಲ್ಲೆಯಾದ್ಯಂತ ಶ್ರದ್ಧಾಂಜಲಿ

ಮಂಡ್ಯ: ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು ನಿಧನರಾದ ಹಿನ್ನೆಲೆಯಲ್ಲಿ ನಗರಸಭೆ ಸೇರಿದಂತೆ ಜಿಲ್ಲೆಯಾದ್ಯಂತ ಶ್ರದ್ಧಾಂಜಲಿ ಸಲ್ಲಿಸಲಾಯಿತು.


ಮಂಡ್ಯದ ನಗರಸಭೆಯ ಕಚೇರಿಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರ ಕೊಡುಗೆಯನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್, ಎಸ್.ಎಂ.ಕೃಷ್ಣರವರು ದೇಶದ ಎರಡು ಅತ್ಯುನ್ನತ ಹುದ್ದೆಗಳಾದ ಪ್ರಧಾನ ಮಂತ್ರಿ ಹಾಗೂ ರಾಷ್ಟ್ರಪತಿ ಸ್ಥಾನ ಮಾತ್ರ ಅಲಂಕರಿಸಲಿಲ್ಲ. ಉಳಿದ ಎಲ್ಲಾ ಹುದ್ದೆಗಳನ್ನು ಕಾಂಗ್ರೆಸ್ ಪಕ್ಷದಲ್ಲಿ ಅಲಂಕರಿಸಿ ಕೀರ್ತಿ ತಂದಿದ್ದಾರೆ. ಕರ್ನಾಟಕ ರಾಜ್ಯ ಕಂಡ ಉತ್ತಮ ರಾಜಕೀಯ ಮುತ್ಸದ್ದಿ ಅವರು ಎಂದರು.

ಎಸ್.ಎಂ.ಕೃಷ್ಣ ಅವರು ಮುಖ್ಯಮಂತ್ರಿಗಳಾಗಿದ್ದಾಗ ನಾನು ಸಹ ಅವರ ಜೊತೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷನಾಗಿ ಕೆಲಸ ಮಾಡಿದ್ದೇನೆ. ಅವರು ಅಧಿಕಾರಿಗಳನ್ನು ಗೌರವ ಕೊಟ್ಟು ಮಾತನಾಡಿಸುತ್ತಿದ್ದರು. ಮುಖ್ಯಮಂತ್ರಿಯಾಗಿ ದರ್ಪ ತೋರಿಸಲಿಲ್ಲ. ಕನ್ನಡ ಹಾಗೂ ಇಂಗ್ಲಿಷ್ ಭಾಷೆಯನ್ನು ಅವರು ಬಹಳ ಸುಲಲಿತವಾಗಿ ಬಳಸುತ್ತಿದ್ದರು. ಇದು ಅವರ ವ್ಯಕ್ತಿತ್ವವನ್ನು ಉನ್ನತ ಮಟ್ಟಕ್ಕೆ ಕೊಂಡೊಯಿತು ಎಂದು ತಿಳಿಸಿದರು. ನಗರಸಭೆ ಉಪಾಧ್ಯಕ್ಷರಾದ ಎಂ.ಪಿ.ಅರುಣ್ ಕುಮಾರ್, ಪೌರಾಯುಕ್ತೆ ಯು.ಪಿ.ಪಂಪಶ್ರೀ, ಕಚೇರಿ ವ್ಯವಸ್ಥಾಪಕ ಕಲ್ಪ, ನಾಗರಾಜು, ರುದ್ರೇಗೌಡ ಹಾಜರಿದ್ದರು. ಜಿಲ್ಲೆಯಾದ್ಯಂತ ಎಲ್ಲೆಡೆ ಎಸ್.ಎಂ.ಕೃಷ್ಣ ಅವರ ಕಟೌಟ್, ಫ್ಲೆಕ್ಸ್, ಬ್ಯಾನರ್‌ಗಳನ್ನು ಹಾಕಿ ಪುಷ್ಪಾರ್ಚನೆ ಮಾಡಿ ಕಂಬನಿ ಮಿಡಿಯಲಾಯಿತು.



ಮಂಡ್ಯದ ನಗರಸಭೆಯಲ್ಲಿ ಕೃಷ್ಣ ಅವರ ನಿಧನಕ್ಕೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.



ಕಾಮಗಾರಿ ವೀಕ್ಷಣೆ

ಎಸ್.ಎಂ.ಕೃಷ್ಣ ಅವರು ಶಾಸಕರಾಗಿದ್ದ ವೇಳೆ ಸ್ವ ಕ್ಷೇತ್ರ ಮದ್ದೂರಿನಲ್ಲಿ ನಡೆಯುತ್ತಿದ್ದ ಕಾಮಗಾರಿಯನ್ನು ವೀಕ್ಷಿಸಿ ಅದರ ಗುಣಮಟ್ಟ ಪರಿಶೀಲಿಸುತ್ತಿದ್ದರಲ್ಲದೆ ತಮ್ಮ ಜೊತೆಗಿದ್ದ ಅಧಿಕಾರಿಗಳಿಗೆ ಸಲಹೆ ಸೂಚನೆಗಳನ್ನು ನೀಡುತ್ತಿದ್ದರು.

ಇಂದು ಮದ್ದೂರು ಬಂದ್

ಮಂಡ್ಯ: ಎಸ್.ಎಂ.ಕೃಷ್ಣ ನಿಧನದ ಹಿನ್ನಲೆಯಲ್ಲಿ ಇಂದು (ಬುಧವಾರ) ಅವರು ಹುಟ್ಟೂರು ಮದ್ದೂರು ಬಂದ್‌ಗೆ ವಿವಿಧ ಪ್ರಗತಿಪರ ಸಂಘಟನೆಗಳು ಕರೆ ನೀಡಿವೆ.

ನಾಳೆ ಬೆಳಗ್ಗೆಯಿಂದ ಸಂಜೆವರೆಗೂ ಪಟ್ಟಣದಾದ್ಯಂತ ಅಂಗಡಿ–ಮುಂಗಟ್ಟುಗಳು, ವರ್ತಕರು, ಚಿತ್ರಮಂದಿರ, ಆಟೋ, ಟ್ಯಾಕ್ಸಿ, ಹೋಟೆಲ್‌ಗಳು, ಬಾರ್ ಅಂಡ್ ರೆಸ್ಟೋರೆಂಟ್‌ಗಳು ಬಂದ್ ಆಗಲಿದ್ದು, ಅಗತ್ಯ ಸೇವೆಗಳು ಮಾತ್ರ ಲಭ್ಯವಿರಲಿವೆ.

ಎಸ್‌ಎಂಕೆ ಅಗಲಿಕೆ ನನಗೆ ನೋವು ತಂದಿದೆ



ಭಾರತೀನಗರ,ಡಿ.10– ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಅಗಲಿಕೆ ನನಗೆ ತುಂಬಾ ನೋವು ಉಂಟುಮಾಡಿದೆ ಎಂದು ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಸಂತಾಪ ಸೂಚಿಸಿದ್ದಾರೆ. ಎಸ್.ಎಂ.ಕೃಷ್ಣ ಅವರ ರಾಜಕೀಯ ಜೀವನ ನನಗೆ ಅನುಕರಣೀಯವಾಗಿದೆ. ನಾನು ರಾಜಕೀಯಕ್ಕೆ ಬರಲು ಅವರೇ ಕಾರಣೀಕರ್ತರು, ಅವರು ಮುಖ್ಯಮಂತ್ರಿಯಾಗಿದ್ದಂತಹ ವೇಳೆಯಲ್ಲಿ ರಾಜ್ಯಕ್ಕೆ ಬಹಳಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಸುಸಂಸ್ಕೃತರು, ಸಜ್ಜನಿ ರಾಜಕಾರಣಿ ಅಂತಹವರನ್ನು ಕಳೆದುಕೊಂಡಿರುವುದು ನಮಗೆ ನೋವು ತಂದಿದೆ ಎಂದರು.

ಎಸ್.ಎಂ.ಕೃಷ್ಣ ನೆನಪಿನ ಪುಟಗಳಿಂದ...



ಮಂಡ್ಯ ಜಿಲ್ಲೆಯ ಗ್ರಾಮವೊಂದರಲ್ಲಿ ಜನರಿಂದ ಅಹವಾಲು ಸ್ವೀಕರಿಸುತ್ತಿರುವ ಕೃಷ್ಣ



ಚಿತ್ರನಟ, ಮಾಜಿ ಸಚಿವ ಅಂಬರೀಷ್ ಅವರೊಂದಿಗೆ ಎಸ್.ಎಂ.ಕೃಷ್ಣ.



ಮಂಡ್ಯದಲ್ಲಿ ನಡೆದ ರೈತ ಸಂಘದ ಕಾರ್ಯಕ್ರಮವೊಂದರಲ್ಲಿ ಕೃಷ್ಣ.



ರಾಜವಂಶಸ್ಥ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್‌ಗೆ ಸಿಎಂ ಕೃಷ್ಣ ಸನ್ಮಾನ.



ಕಾರ್ಯಕ್ರಮವೊಂದರಲ್ಲಿ ಕ್ರಿಕೆಟಿಗ ಅನಿಲ್‌ಕುಂಬ್ಳೆಗೆ ಸಿಎಂ ಕೃಷ್ಣರಿಂದ ಸನ್ಮಾನ.

ರಾಜಕಾರಣದಲ್ಲಿ ಎಸ್.ಎಂ.ಕೃಷ್ಣ ಏಳು–ಬೀಳು

ಶಾಸಕ, ಮಂತ್ರಿ, ಕೇಂದ್ರ ಮಂತ್ರಿ, ಡಿಸಿಎಂ, ಸಿಎಂ, ಗವರ್ನರ್... ಆಡು ಮುಟ್ಟದ ಸೊಪ್ಪಿಲ್ಲ, ಕೃಷ್ಣ ನೋಡದ ಅಧಿಕಾರವಿಲ್ಲ..!

ಮಂಡ್ಯ,ಡಿ.10– ಮುಖ್ಯಮಂತ್ರಿ, ಕೇಂದ್ರ ಸಚಿವ, ಉಪಮುಖ್ಯಮಂತ್ರಿ, ಸ್ಪೀಕರ್, ರಾಜ್ಯಪಾಲರಾಗಿ ಆಡು ಮುಟ್ಟದ ಸೊಪ್ಪಿಲ್ಲ, ಕೃಷ್ಣ ನೋಡದ ಅಧಿಕಾರವಿಲ್ಲ ಎಂಬ ರೀತಿಯಲ್ಲಿ ರಾಜಕಾರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಎಸ್.ಎಂ.ಕೃಷ್ಣ ರಾಜಕೀಯದಲ್ಲಿ ಏಳು–ಬೀಳುಗಳನ್ನು ನೋಡಿಕೊಂಡು ಬೆಳೆದವರು.

ಮೊದಲ ಬಾರಿಗೆ ಸಂಸತ್ ಪ್ರವೇಶ: 1968ರಲ್ಲಿ ಸಂಸದ ಎಂ.ಕೆ.ಶಿವನಂಜಪ್ಪ ನಿಧನದಿಂದ ತೆರವಾಗಿದ್ದ ಮಂಡ್ಯ ಲೋಕಸಭಾ ಕ್ಷೇತ್ರದ ಮೊದಲ ಉಪಚುನಾವಣೆಗೆ ಎಂದಿನಂತೆ ಪ್ರಜಾ ಸೋಷಲಿಸ್ಟ್ ಪಕ್ಷದಿಂದ ಕಣಕ್ಕಿಳಿದರೆ ಅವರ ವಿರುದ್ಧ ಕಾಂಗ್ರೆಸ್ ಅಭ್ಯರ್ಥಿಯಾಗಿ ಹೆಚ್.ಡಿ.ಚೌಡಯ್ಯ ಅಖಾಡಕ್ಕಿಳಿಯುತ್ತಾರೆ. 63,953 ಮತಗಳ ಅಂತರದಿಂದ ಕೃಷ್ಣ, ಚೌಡಯ್ಯರನ್ನು ಸೋಲಿಸಿ ಮೊದಲ ಬಾರಿಗೆ ಸಂಸತ್ ಪ್ರವೇಶಿಸುತ್ತಾರೆ. 1971ರ ಆರನೇ ಲೋಕಸಭಾ ಚುನಾವಣೆಯಲ್ಲಿಯೂ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಬಾಬು ಜಗಜೀವನ್‌ರಾಂ ಬಣದ ಕಾಂಗ್ರೆಸ್‌ನಿಂದ ಕಣಕ್ಕಿಳಿಯುವ ಕೃಷ್ಣ, ನಿಜಲಿಂಗಪ್ಪ ಬಣದ ಕಾಂಗ್ರೆಸ್‌ನಿಂದ ಕಣಕ್ಕಿಳಿದಿದ್ದ ಹೆಚ್.ಡಿ.ಚೌಡಯ್ಯ ವಿರುದ್ಧ 1,62,162 ಮತಗಳ ಅಂತರದಿಂದ ಜಯಭೇರಿ ಬಾರಿಸಿ, ಪ್ರಬಲ ನಾಯಕರಾಗಿ ಮಂಡ್ಯ ಜಿಲ್ಲೆಯಲ್ಲಿ ಬೆಳೆಯುತ್ತಾ ಸಾಗುತ್ತಾರೆ.



ಎಸ್.ಎಂ.ಕೃಷ್ಣ

ಅರಸು ಸಂಪುಟದಲ್ಲಿ ಮಂತ್ರಿ: ಕೃಷ್ಣ ಅವರ ಬೆಳವಣಿಗೆಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದ ಅಂದಿನ ಮುಖ್ಯಮಂತ್ರಿ ಡಿ.ದೇವರಾಜ ಅರಸು, 1972ರಲ್ಲಿ ದಿಢೀರನೇ ಕೃಷ್ಣ ಕೈಲಿ ಸಂಸತ್ ಸ್ಥಾನಕ್ಕೆ ರಾಜೀನಾಮೆ ಕೊಡಿಸಿ, ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಳಿಸಿ, ರಾಜ್ಯ ರಾಜಕಾರಣಕ್ಕೆ ಪುನರ್ ಪ್ರವೇಶಿಸಿಕೊಂಡು ವಿಧಾನಪರಿಷತ್ ಸದಸ್ಯರನ್ನಾಗಿ ಮಾಡುವುದಲ್ಲದೇ ತಮ್ಮ ಸಂಪುಟದಲ್ಲಿ ವಾಣಿಜ್ಯ, ಕೈಗಾರಿಕೆ, ಕಾನೂನು, ಸಂಸದೀಯ ವ್ಯವಹಾರಗಳ ಸಚಿವರನ್ನಾಗಿ ಮಾಡುತ್ತಾರೆ.

ಇಂದಿರಾ ಸಂಪುಟದಲ್ಲಿ ಸಚಿವ ಸ್ಥಾನ

1980ರಲ್ಲಿ ಮತ್ತೆ ರಾಜ್ಯ ರಾಜಕಾರಣದಿಂದ ವಿರಾಮ ಪಡೆದು ಎರಡನೇ ಬಾರಿಗೆ ರಾಷ್ಟ್ರ ರಾಜಕಾರಣದತ್ತ ಮುಖ ಮಾಡುವ ಕೃಷ್ಣ, ಮೂರನೇ ಬಾರಿಗೆ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಅಖಾಡಕ್ಕಿಳಿದು ಅಂದಿನ ಸಮಾಜವಾದಿ ಪಕ್ಷದ ಅಭ್ಯರ್ಥಿ ಡಾ.ಸಿ.ಬಂದೀಗೌಡ ವಿರುದ್ಧ 1,15,342 ಮತಗಳ ಅಂತರದಿಂದ ಗೆದ್ದು ಇಂದಿರಾಗಾಂಧಿ ಸಂಪುಟದಲ್ಲಿ ರಾಜ್ಯ ಹಣಕಾಸು ಸಚಿವರಾಗಿ ಕಾರ್ಯನಿರ್ವಹಿಸುತ್ತಾರೆ.

ಅದಾದ ನಂತರ 1984ರಲ್ಲಿ ನಡೆಯುವ ಲೋಕಸಭಾ ಚುನಾವಣೆಯಲ್ಲಿ ಕೇಂದ್ರ ಸಚಿವ ಎಸ್.ಎಂ.ಕೃಷ್ಣ ಪುನರಾಯ್ಕೆ ಬಯಸಿ, ಮಂಡ್ಯದಿಂದ ಸ್ಪರ್ಧಿಸಿದರೆ ಅವರ ವಿರುದ್ಧ ಜನತಾ ಪಕ್ಷದಿಂದ ಕೆ.ವಿ.ಶಂಕರಗೌಡರು ಸ್ಪರ್ಧಿಸುತ್ತಾರೆ. ಇಂದಿರಾಗಾಂಧಿ ಸಾವಿನ ಅಲೆಯಲ್ಲೂ ಕೃಷ್ಣರವರು ಸೋಲನ್ನಪ್ಪಬೇಕಾಗುತ್ತದೆ. ಅಂದು ಕೃಷ್ಣ ಗೆದ್ದಿದ್ದರೆ ರಾಜೀವ್‌ಗಾಂಧಿ ಸಂಪುಟದಲ್ಲಿ ಉನ್ನತ ಖಾತೆಯ ಕೇಂದ್ರ ಮಂತ್ರಿಯಾಗುತ್ತಿದ್ದರು ಎಂದು ವಿಶ್ಲೇಷಿಸಲಾಗುತ್ತದೆ.

ಸಿಎಂ ಅಭ್ಯರ್ಥಿಗೆ ಸೋಲುಣಿಸಿದ್ದ ಕೃಷ್ಣ

1962ರಲ್ಲಿ ವಿದೇಶದಿಂದ ವ್ಯಾಸಂಗ ಮುಗಿಸಿ ಆಗತಾನೆ ತವರೂರು ಸೋಮನಹಳ್ಳಿಗೆ ಆಗಮಿಸಿದ್ದ ಕೃಷ್ಣ ಅವರನ್ನು ಅವರ ತಂದೆ ಮಲ್ಲಯ್ಯ ಅವರ ಬೆಂಬಲಿಗರು ಮದ್ದೂರು ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗುವಂತೆ ಪಟ್ಟು ಹಿಡಿಯುತ್ತಾರೆ. 1952ರ ಮೊದಲ ಚುನಾವಣೆಯಲ್ಲಿ ಹೆಚ್.ಕೆ.ವೀರಣ್ಣಗೌಡ ವಿರುದ್ಧ ಕೃಷ್ಣ ತಂದೆ ಎಸ್.ಸಿ.ಮಲ್ಲಯ್ಯ ಅಭ್ಯರ್ಥಿಯಾಗಿ ಸೋತಿರುತ್ತಾರೆ. ಈ ಹಿನ್ನೆಲೆಯಲ್ಲಿ ಬೆಂಬಲಿಗರು ಒತ್ತಾಯ ಮಾಡಿದ ಕಾರಣ ಅಂದಿನ ಲೋಕೋಪಯೋಗಿ ಸಚಿವರು ಆಗಿದ್ದ ಜೊತೆಗೆ ಹ್ಯಾಟ್ರಿಕ್ ಗೆಲುವಿನ ಕನಸು ಕಂಡಿದ್ದ, ಎಲ್ಲಕ್ಕಿಂತ ಹೆಚ್ಚಾಗಿ ಕೆಪಿಸಿಸಿ ಅಧ್ಯಕ್ಷರಾಗಿ ಮುಖ್ಯಮಂತ್ರಿ ಗಾದಿ ಮೇಲೆ ಕಣ್ಣಿಟ್ಟಿದ್ದ ಹೆಚ್.ಕೆ.ವೀರಣ್ಣಗೌಡರನ್ನು 30 ವರ್ಷದ ಯುವಕ ಎಸ್.ಎಂ.ಕೃಷ್ಣ 1956 ಮತಗಳ ಅಂತರದಿಂದ ಸೋಲಿಸಿ, ಮೊದಲ ಬಾರಿಗೆ ವಿಧಾನಸಭೆ ಪ್ರವೇಶಿಸುತ್ತಾರೆ. ಬಳಿಕ 1967ರ ಚುನಾವಣೆಯಲ್ಲಿ ಪುನರಾಯ್ಕೆ ಬಯಸಿ ಪ್ರಜಾ ಸೋಷಲಿಸ್ಟ್ ಪಕ್ಷದಿಂದ ಕಣಕ್ಕಿಳಿಯುವ ಕೃಷ್ಣ ಅವರನ್ನು ಹೆಚ್.ಕೆ.ವೀರಣ್ಣಗೌಡರ ಅಳಿಯ ಎಂ.ಮಂಚೇಗೌಡ ಕಾಂಗ್ರೆಸ್‌ನಿಂದ ಅಭ್ಯರ್ಥಿಯಾಗಿ 4,434 ಮತಗಳ ಅಂತರದಿಂದ ಸೋಲಿಸುತ್ತಾರೆ. ಬಳಿಕ ರಾಜ್ಯ ರಾಜಕಾರಣಕ್ಕೆ ವಿರಾಮ ಹೇಳಿ ರಾಷ್ಟ್ರ ರಾಜಕಾರಣದತ್ತ ಮುಖ ಮಾಡುತ್ತಾರೆ.

ಸ್ಪೀಕರ್, ಡಿಸಿಎಂ ಆಗಿ ಸೇವೆ: 1989ರಲ್ಲಿ ಮತ್ತೆ ರಾಜ್ಯ ರಾಜಕಾರಣಕ್ಕೆ ಮರಳುವ ಕೃಷ್ಣ, ತಮ್ಮ ಸ್ವ ಕ್ಷೇತ್ರ ಮದ್ದೂರಿನಿಂದ ಸ್ಪರ್ಧಿಸಿ, ಶಾಸಕರಾಗಿ ಆಯ್ಕೆಯಾಗುತ್ತಾರೆ. ಜೊತೆಗೆ ಎಂ.ವೀರಪ್ಪ ಮೊಯ್ಲಿ ಸಂಪುಟದಲ್ಲಿ 1989ರಿಂದ 92ರವರೆಗೆ ಸ್ಪೀಕರ್ ತದನಂತರ ಡಿಸಿಎಂ ಆಗಿ ಕಾರ್ಯನಿರ್ವಹಿಸುತ್ತಾರೆ. 1994ರಲ್ಲಿ ಮತ್ತೆ ಮದ್ದೂರಿನಿಂದ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸುವ ಅವರು, ಕಾಂಗ್ರೆಸ್ ಪಕ್ಷದ ಅಘೋಷಿತ ಸಿಎಂ ಅಭ್ಯರ್ಥಿಯಾಗಿರುತ್ತಾರೆ. ಅದಾಗ್ಯೂ ಆ ಚುನಾವಣೆಯಲ್ಲಿ ಜನತಾದಳದ ಡಾ.ಮಹೇಶ್ ಚಂದ್ ವಿರುದ್ಧ 3464 ಮತಗಳ ಅಂತರದಿಂದ ಸೋಲನ್ನಪ್ಪುತ್ತಾರೆ.

ಕೆಪಿಸಿಸಿ ಅಧ್ಯಕ್ಷರಾಗಿ, ಸಿಎಂ ಆದ ಕೃಷ್ಣ: 1994ರ ವಿಧಾನಸಭೆ ಚುನಾವಣೆಯಲ್ಲಿ ಸೋತಿದ್ದ ಕೃಷ್ಣ ಅವರನ್ನು 1996ರಲ್ಲಿ ಕಾಂಗ್ರೆಸ್ ಪಕ್ಷವು ರಾಜ್ಯಸಭೆಗೆ ಕಳುಹಿಸಿ, ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ನೀಡುತ್ತದೆ. ಅದಾದ ಬಳಿಕ ನಡೆದ 1999ರ ಚುನಾವಣೆಯಲ್ಲಿ ಕೃಷ್ಣ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ಭರ್ಜರಿ ಜಯಭೇರಿಯನ್ನು ಭಾರಿಸುತ್ತದೆ. ಜೊತೆಗೆ ಮದ್ದೂರು ಕ್ಷೇತ್ರದಿಂದ ಪ್ರಚಂಡ ದಿಗ್ವಿಜಯ ಸಾಧಿಸಿದ್ದ ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿ ಆಳ್ವಿಕೆ ನಡೆಸುತ್ತಾರೆ.

ಚಾಮರಾಜಪೇಟೆಗೆ ವಲಸೆ: 2004ರಲ್ಲಿ ಅವಧಿಪೂರ್ವ ಚುನಾವಣೆಗೆ ಹೋಗುವ ಕೃಷ್ಣ ಸ್ವ ಕ್ಷೇತ್ರ ಮದ್ದೂರಿನಿಂದ ಕಣಕ್ಕಿಳಿಯದೇ ಬೆಂಗಳೂರಿನ ಚಾಮರಾಜಪೇಟೆ ಕ್ಷೇತ್ರದಿಂದ ಅಖಾಡಕ್ಕಿಳಿದು ಜನತಾದಳದ ಅನುತರ್ನಾಗ್, ಬಿಜೆಪಿಯ ಮುಖ್ಯಮಂತ್ರಿ ಚಂದ್ರು ವಿರುದ್ಧ ಪ್ರಚಂಡ ಜಯಭೇರಿ ಭಾರಿಸುತ್ತಾರೆ. ಆದರೆ ರಾಜ್ಯದಲ್ಲಿ ಸಮ್ಮಿಶ್ರ ಸರ್ಕಾರ ಅಸ್ತಿತ್ವಕ್ಕೆ ಬಂದು ಧರಂಸಿಂಗ್ ಸಿಎಂ ಆದ ಹಿನ್ನೆಲೆಯಲ್ಲಿ ಕೃಷ್ಣ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡುತ್ತಾರೆ.

ಮಹಾರಾಷ್ಟ್ರ ಗವರ್ನರ್ ಆಗಿ ಎಸ್‌ಎಂಕೆ: ಸಿಎಂ ಸ್ಥಾನ ತ್ಯಾಗ ಮಾಡಿದ ಕೃಷ್ಣರನ್ನು ಮಹಾರಾಷ್ಟ್ರಕ್ಕೆ ಕಳುಹಿಸುವ ಅಂದಿನ ಕಾಂಗ್ರೆಸ್ ಹೈಕಮಾಂಡ್, ಕೃಷ್ಣರನ್ನು ಮಹಾರಾಷ್ಟ್ರದ ಗವರ್ನರ್ ಮಾಡುತ್ತದೆ. 2004ರಿಂದ 2009 ರವರೆಗೆ ಕೃಷ್ಣ, ದೇಶದ ಅತಿದೊಡ್ಡ ವಾಣಿಜ್ಯ ನಗರಿ ಮಹಾರಾಷ್ಟ್ರದ ರಾಜ್ಯಪಾಲರಾಗಿರುತ್ತಾರೆ.

ವಿದೇಶಾಂಗ ಸಚಿವರಾದ ಕೃಷ್ಣ ರಾಜ್ಯಪಾಲ ಹುದ್ದೆಯಿಂದ ಕೆಳಗಿಳಿದ ಕೃಷ್ಣರನ್ನು 2009ರಲ್ಲಿ ರಾಜ್ಯಸಭೆಗೆ ನಾಮನಿರ್ದೇಶನ ಮಾಡಿ, ಡಾ.ಮನಮೋಹನ್‌ಸಿಂಗ್ ಅವರ ಯುಪಿಎ 2.0 ಸರ್ಕಾರದಲ್ಲಿ ವಿದೇಶಾಂಗ ಸಚಿವರಾಗಿ ಆಯ್ಕೆ ಮಾಡಲಾಗುತ್ತದೆ.

ಬಿಲ್‌ಗೇಟ್ಸ್ ಜೊತೆ ಎಸ್.ಎಂ.ಕೃಷ್ಣ.



ವಿದೇಶಾಂಗ ಸಚಿವರಾಗಿದ್ದ ಸಂದರ್ಭದಲ್ಲಿ ಮೈಕ್ರೋಸಾಫ್ಟ್ ದಿಗ್ಗಜ ಬಿಲ್‌ಗೇಟ್ಸ್ ಅವರೊಂದಿಗೆ ಎಸ್.ಎಂ.ಕೃಷ್ಣ.

ಬಿಜೆಪಿ ಕಚೇರಿಯಲ್ಲಿ ಎಸ್.ಎಂ.ಕೃಷ್ಣರಿಗೆ ಶ್ರದ್ಧಾಂಜಲಿ



ಮೈಸೂರಿನಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.

ಮೈಸೂರು, ಡಿ.10(ಆರ್‌ಕೆ)– ಮೈಸೂರಿನಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಇಂದು ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.


ಬಿಜೆಪಿ ಕಚೇರಿಯಲ್ಲಿ ನಗರ ಬಿಜೆಪಿ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಎಸ್.ಎಂ.ಕೃಷ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸುವ ಮೂಲಕ ಅಗಲಿದ ನಾಯಕರಿಗೆ ಗೌರವ ನಮನ ಸಲ್ಲಿಸಲಾಯಿತು. ಈ ಸಂದರ್ಭ ಮಾತನಾಡಿದ ನಗರ ಬಿಜೆಪಿ ಅಧ್ಯಕ್ಷರಾದ ಮಾಜಿ ಶಾಸಕ ಎಲ್.ನಾಗೇಂದ್ರ, ಮುಖ್ಯಮಂತ್ರಿಗಳಾಗಿ ರಾಜ್ಯವನ್ನು ಮಾದರಿಯಾಗಿಸಿದ ಎಸ್.ಎಂ.ಕೃಷ್ಣ ಅವರು ತಮ್ಮ ನಡೆ, ನುಡಿ ಮೂಲಕ ಜನ ಮೆಚ್ಚುಗೆ ಗಳಿಸಿದ್ದರು ಎಂದರು.

ಕಾಂಗ್ರೆಸ್ ಪಕ್ಷದಲ್ಲಿ ಸುದೀರ್ಘ ಸೇವೆ ಸಲ್ಲಿಸಿದ ಬಳಿಕ ಬಿಜೆಪಿ ಸೇರ್ಪಡೆಯಾಗಿ ಅತ್ಯುತ್ತಮ ಸಲಹೆ, ಮಾರ್ಗದರ್ಶನ ನೀಡಿದ್ದರು. ಸಮಾಜದ ಎಲ್ಲಾ ವರ್ಗದ ಜನರಿಗೂ ನ್ಯಾಯ ಒದಗಿಸುತ್ತಿದ್ದ ಕೃಷ್ಣ ಅವರು, ಪಕ್ಷಾತೀತವಾಗಿ ಎಲ್ಲರಿಗೂ ಪ್ರಿಯರಾಗಿದ್ದರು ಎಂದು ಎಲ್.ನಾಗೇಂದ್ರ ನುಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಎಂ.ಜಿ.ಮಹೇಶ, ಬಿ.ಎಂ.ರಘು, ಹೇಮಾ, ದಿನೇಶ್‌ಗೌಡ, ಎಂ.ಜಿ.ಮಹೇಶ್‌ರಾಜೇ ಅರಸ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಎಸ್.ಎಂ.ಕೃಷ್ಣ ರಾಜ್ಯ ಕಂಡ ಅತ್ಯುತ್ತಮ ಅಭಿವೃದ್ಧಿ ಹರಿಕಾರ

ಮೈಸೂರು, ಡಿ.10(ಆರ್‌ಕೆ)– ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು ಕರ್ನಾಟಕ ರಾಜ್ಯ ಕಂಡ ಅತ್ಯುತ್ತಮ ಅಭಿವೃದ್ಧಿ ಹರಿಕಾರ ಎಂದು ವಿಧಾನ ಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಸ್ಮರಿಸಿದ್ದಾರೆ.



ವಿಶ್ವನಾಥ್

ಎಸ್.ಎಂ.ಕೃಷ್ಣ ನಿಧನಕ್ಕೆ ಸಂತಾಪ ಸೂಚಿಸಿದ ಅವರು, ತಮ್ಮ ಶಿಸ್ತು, ಸಮಯಪಾಲನೆ, ತಾಳ್ಮೆಯಿಂದ ಮೇಲೆತ್ತರಕ್ಕೆ ಬೆಳೆದಿದ್ದ ಕೃಷ್ಣ ಅವರು, ರಾಜಕೀಯ ಕ್ಷೇತ್ರದಲ್ಲಿ ಸುದೀರ್ಘ ಸೇವೆ ಸಲ್ಲಿಸಿ ಎಂತಹ ಕ್ಲಿಷ್ಟ ಸಂದರ್ಭದಲ್ಲೂ ವಿಚಲಿತರಾಗದೇ ತಮಗೆ ದಕ್ಕಿದ ಅಧಿಕಾರವನ್ನು ಸಮಾಜದ ಒಳಿತಿಗಾಗಿ ಸದ್ಬಳಕೆ ಮಾಡಿಕೊಂಡು ರಾಜ್ಯವನ್ನು ಅಭಿವೃದ್ಧಿ ಪಥದಲ್ಲಿ ಕೊಂಡೊಯ್ದಿದ್ದರು ಎಂದು ನುಡಿದರು.

ಮಾಹಿತಿ ತಂತ್ರಜ್ಞಾನ, ಶಿಕ್ಷಣ, ಆರೋಗ್ಯ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ಮುಖ್ಯಮಂತ್ರಿ ಸ್ಥಾನಕ್ಕೆ ಗೌರವ ತಂದು ಕೊಟ್ಟ ಮಹಾನ್ ನಾಯಕ ಕೃಷ್ಣ, ಮಧ್ಯಾಹ್ನದ ಬಿಸಿಯೂಟ ಜಾರಿಗೆ ತಂದು ಶಾಲಾ ಮಕ್ಕಳ ಹಸಿವು ನೀಗಿಸಿದ್ದರು. ಮುಖ್ಯಮಂತ್ರಿಯಾಗಿದ್ದಾಗ ಎದುರಾದ ಬರ ಪರಿಸ್ಥಿತಿ, ವರನಟ ಡಾ.ರಾಜ್‌ಕುಮಾರ್ ಅಪಹರಣ, ಕಾವೇರಿ ಬಿಕ್ಕಟ್ಟಿನ ಸಂದರ್ಭವನ್ನು ಸಹನೆಯಿಂದ ಎದುರಿಸಿ ಯಶಸ್ವಿಯಾಗಿದ್ದರು.

ಬೆಂಗಳೂರು–ಮೈಸೂರು ಹೆದ್ದಾರಿ, ಬೆಂಗಳೂರು ನಗರದ ವಾಹನದಟ್ಟಣೆ ನಿಯಂತ್ರಿಸಲು ರಿಂಗ್ ರಸ್ತೆ ಅವರ ಕಾಲದಲ್ಲಿ ನಿರ್ಮಾಣವಾಗಿತ್ತು. ಫ್ಲೈ ಓವರ್ ಯೋಜನೆಗಳು ಕೃಷ್ಣ ಅವರ ಕಲ್ಪನೆಯಾಗಿದ್ದು, ಅವರು ಈ ನಾಡು ಕಂಡ ಅತ್ಯುತ್ತಮ ಅಭಿವೃದ್ಧಿಯ ಹರಿಕಾರ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದ್ದಾರೆ.

ಮಹಾಜನ ಕಾಲೇಜಲ್ಲಿ ಎಸ್.ಎಂ.ಕೃಷ್ಣರಿಗೆ ಶ್ರದ್ಧಾಂಜಲಿ



ಮೈಸೂರಿನ ಎಸ್‌ಬಿಆರ್‌ಆರ್ ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ನಿಧನರಾದ ಮಾಜಿ ಮುಖ್ಯಮಂತ್ರಿ ಡಾ. ಎಸ್.ಎಂ.ಕೃಷ್ಣ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮೈಸೂರು,ಡಿ.10–ಮೈಸೂರಿನ ಎಸ್‌ಬಿಆರ್‌ಆರ್ ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಾಜಿ ಸಿಎಂ ಡಾ.ಎಸ್.ಎಂ.ಕೃಷ್ಣ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಬಿ.ಆರ್. ಜಯಕುಮಾರಿ ಮಾತನಾಡಿ, ಶ್ರೀಯುತರು ಸರಳ ಸಜ್ಜನಿಕೆಯ ಸಾಕಾರಮೂರ್ತಿಯಾಗಿದ್ದು, ಮಾನವೀಯ ಮೌಲ್ಯಗಳನ್ನು ಮತ್ತು ಆದರ್ಶಗಳನ್ನು ಮೈಗೂಡಿಸಿಕೊಂಡಿದ್ದರು. ತಮ್ಮ ಸುದೀರ್ಘ ಜೀವಿತಾವಧಿಯಲ್ಲಿ ಶಿಸ್ತುಬದ್ಧ ಜೀವನವನ್ನು ಎಂದೂ ಮರೆಯಲಿಲ್ಲ. ಶಿಸ್ತು ಸಂಯಮದ ವಿಚಾರದಲ್ಲಿ ಇಂದಿನ ಪೀಳಿಗೆಗೆ ಮಾದರಿಯಾಗಿದ್ದರು. ಕರ್ನಾಟಕದ ಮುಖ್ಯಮಂತ್ರಿಗಳಾಗಿ ಹತ್ತು ಹಲವು ಐತಿಹಾಸಿಕ ಹಾಗೂ ಸ್ಮರಣೀಯ ಕೊಡುಗೆಗಳನ್ನು ನೀಡಿದ್ದಾರೆ ಎಂದು ನುಡಿನಮನ ಸಲ್ಲಿಸಿದರು.

ಇಂದು ಜಾಗತಿಕ ಮಟ್ಟದಲ್ಲಿ ರಾಜ್ಯದ ರಾಜಧಾನಿಯಾದ ಬೆಂಗಳೂರು ಐಟಿ, ಬಿಟಿ ಹಾಗೂ ಸಿಲಿಕಾನ್ ಸಿಟಿ ಎಂಬ ಖ್ಯಾತಿ ಗಳಿಸಿದೆ ಎಂದರೆ ಅದರ ಕೊಡುಗೆ ಮತ್ತು ಯಶಸ್ಸು ಎಸ್.ಎಂ. ಕೃಷ್ಣ ಅವರಿಗೆ ಸಲ್ಲಬೇಕು. ತಮ್ಮ ಐದು ವರ್ಷಗಳ ಆಡಳಿತಾವಧಿಯಲ್ಲಿ ಅನೇಕ ಸವಾಲುಗಳನ್ನು ಅತ್ಯಂತ ಸಮರ್ಥವಾಗಿ ನಿಭಾಯಿಸಿ ಜನರ ಮೆಚ್ಚುಗೆಗೆ ಪಾತ್ರರಾದರು.

ಶಾಲಾ ಮಕ್ಕಳಿಗೆ ಬಿಸಿಯೂಟದ ಪರಿಚಯದೊಂದಿಗೆ ತಮ್ಮ ಸಮಾಜಮುಖಿ ಸೇವೆಗಳನ್ನು ಆರಂಭಿಸಿ ಕೃಷಿ, ಕೈಗಾರಿಕೆ, ವ್ಯಾಪಾರ ವಾಣಿಜ್ಯ, ನೀರಾವರಿ, ಆರೋಗ್ಯ, ಸಾರಿಗೆ, ಮಾಹಿತಿ ತಂತ್ರಜ್ಞಾನ, ಔದ್ಯೋಗಿಕ ಸೃಷ್ಟಿ, ವಿಕಾಸಸೌಧ, ಉದ್ಯೋಗ ಸೌಧದ ನಿರ್ಮಾಣ, ಯಶಸ್ವಿನಿ ಯೋಜನೆ, ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣದಂತಹ ಹತ್ತಾರು ಜನಪ್ರಿಯ ಕಾರ್ಯಕ್ರಮಗಳನ್ನು ಈ ರಾಜ್ಯಕ್ಕೆ ನೀಡಿದ ಕೀರ್ತಿ ಮತ್ತು ಯಶಸ್ಸು ಶ್ರೀಯುತರದ್ದಾಗಿದೆ ಎಂದು ಸ್ಮರಿಸಿದರು. ಕನ್ನಡ ವಿಭಾಗದ ಮುಖ್ಯಸ್ಥ ಡಾ.ಎಚ್.ಆರ್.ತಿಮ್ಮೇಗೌಡ, ಶೈಕ್ಷಣಿಕ ಡೀನ್, ಇತಿಹಾಸ ವಿಭಾಗದ ಮುಖ್ಯಸ್ಥ ಡಾ.ಶ್ರೀಧರ ಹೆಚ್, ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಈ ವೇಳೆ ಉಪಸ್ಥಿತರಿದ್ದರು.

ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರಿಗೆ ಸಂತಾಪ



ಮೈಸೂರಿನ ಡಿ.ಸುಬ್ಬಯ್ಯ ರಸ್ತೆಯಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರಿಗೆ ಜೀವಧಾರ ರಕ್ತನಿಧಿ ಕೇಂದ್ರದ ವತಿಯಿಂದ ಮೌನಾಚರಣೆ ಮೂಲಕ ಸಂತಾಪ ಸಲ್ಲಿಸಲಾಯಿತು. ಈ ವೇಳೆ ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕೆ.ಆರ್.ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ಮುಖಂಡರಾದ ಸಂದೀಪ್, ನಿರೂಪಕ ಅಜಯ್ ಶಾಸ್ತ್ರಿ, ಎಸ್.ಎನ್.ರಾಜೇಶ್, ರವಿಚಂದ್ರ, ಎಂ.ಎನ್.ಚೇತನ್‌ಗೌಡ, ಸುಚಿಂದ್ರ, ಮಹಾನ್ ಶ್ರೇಯಸ್, ರಾಕೇಶ್ ಇನ್ನಿತರರಿದ್ದರು.

ಸಜ್ಜನ ರಾಜಕೀಯ ಮುತ್ಸದ್ದಿ ಎಸ್.ಎಂ.ಕೃಷ್ಣ

ಸುತ್ತೂರು ಶ್ರೀಗಳಿಂದ ಶ್ರದ್ಧಾಂಜಲಿ





ಸುತ್ತೂರು ಮಠದಲ್ಲಿ ನಡೆದಿದ್ದ ಹಲವು ಕಾರ್ಯಕ್ರಮಗಳಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರೊಂದಿಗೆ ಎಸ್.ಎಂ.ಕೃಷ್ಣರವರ ಸಾಂದರ್ಭಿಕ ಚಿತ್ರ.

ಮೈಸೂರು, ಡಿ. 10– ರಾಜ್ಯದ ಹಿರಿಯ ಧೀಮಂತ ರಾಜಕಾರಣಿ, ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ವಿಧಿವಶರಾಗಿರುವುದು ವಿಷಾದದ ಸಂಗತಿ ಎಂದು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಯವರು ಸಂತಾಪ ಸೂಚಿಸಿದ್ದಾರೆ.

ಬಾಲ್ಯದಿಂದಲೂ ತೀಕ್ಷ್ಣಮತಿಗಳಾಗಿದ್ದ ಎಸ್.ಎಂ. ಕೃಷ್ಣರವರು ಅಪ್ಪಟ ಗ್ರಾಮೀಣ ಪ್ರತಿಭೆ ಹೊಂದಿದ್ದರು. ಫುಲ್‌ಬ್ರೈಟ್ ವಿದ್ಯಾರ್ಥಿವೇತನ ಪಡೆದು ಅಮೆರಿಕದ ವಿಶ್ವವಿದ್ಯಾನಿಲಯಗಳಲ್ಲಿ ಅಧ್ಯಯನ ಮಾಡಿದರು. ಮದ್ದೂರಿನಿಂದ ಶಾಸಕರಾಗಿ 1962ರಲ್ಲಿ ಆಯ್ಕೆಯಾದ ಅವರು ವರ್ಣರಂಜಿತ ರಾಜಕೀಯದಲ್ಲಿ ಅಭಿವೃದ್ಧಿ ಪಥದಲ್ಲಿ ಮುಂದುವರಿದರು. ವಿಧಾನಸಭೆ, ವಿಧಾನ ಪರಿಷತ್ತು, ಲೋಕಸಭೆ ಹಾಗೂ ರಾಜ್ಯಸಭೆಗಳಿಗೆ ಆಯ್ಕೆಯಾಗಿದ್ದರು. ಅಪಾರ ರಾಜಕೀಯ ಪ್ರಜ್ಞೆಯನ್ನು ಸಹ ಹೊಂದಿದ್ದರು. ಅವರು ಮಾನವತಾವಾದಿಯಾಗಿದ್ದರು. ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾಗಿ ಬೆಂಗಳೂರು ನಗರವನ್ನು ಸಿಲಿಕಾನ್ ಸಿಟಿಯಾಗಿ ಪರಿವರ್ತಿಸುವ ಕನಸು ಹೊತ್ತ ದೂರದೃಷ್ಟಿಯ ನೇತಾರರು.

> “ಎಸ್.ಎಂ.ಕೃಷ್ಣ, ಸಾರ್ವಜನಿಕ ಜೀವನದಲ್ಲಿ ಸಜ್ಜನಿಕೆಯ ಮೂರ್ತಿಯಾಗಿದ್ದರು. ಸದಾ ಜನಪರ ನಿಲುವನ್ನು ಹೊಂದಿದ್ದರು. ಅವರ ರಾಜಕೀಯ ಜೀವನ ಒಂದು ತೆರೆದ ಪುಸ್ತಕವಾಗಿತ್ತು ಅವರಿಗೆ ಎಲ್ಲಾ ಪಕ್ಷಗಳಲ್ಲಿಯೂ ಅಭಿಮಾನಿಗಳಿದ್ದು, ಅವರೊಬ್ಬ ಅಜಾತಶತ್ರುಗಳಾಗಿದ್ದರು. ಶ್ರೀಮಠದ ಅಭಿಮಾನಿಗಳಾಗಿದ್ದು, ಹಲವಾರು ಸಮಾರಂಭಗಳಲ್ಲಿ ಭಾಗವಹಿಸಿದ್ದರು. ಅವರ ಅಗಲಿಕೆಯಿಂದ ಕರ್ನಾಟಕದ ಸುಪುತ್ರರೊಬ್ಬರು ಅಸ್ತಂಗತರಾದಂತಾಗಿದೆ.
> –ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ.

ಕೇಂದ್ರ ಸರ್ಕಾರದಲ್ಲಿ ವಾಣಿಜ್ಯ, ಕೈಗಾರಿಕಾ, ಹಣಕಾಸು ಖಾತೆಗಳ ಸಚಿವರಾಗಿದ್ದರು. ವಿದೇಶಾಂಗ ಸಚಿವರಾಗಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ ಉತ್ತಮವಾಗಿ ಕಾರ್ಯನಿರ್ವಹಿಸಿದ್ದರು. ಕಾನೂನು ಕಾಲೇಜಿನಲ್ಲಿ ಕೆಲಕಾಲ ಪ್ರಾಧ್ಯಾಪಕರಾಗಿಯೂ ಸೇವೆ ಸಲ್ಲಿಸಿದ್ದರು. ಇಂಗ್ಲೆಂಡ್, ನ್ಯೂಜಿಲೆಂಡ್, ವಿಶ್ವಸಂಸ್ಥೆಗಳಿಗೆ ಭೇಟಿ ನೀಡಿದ ಪಾರ್ಲಿಮೆಂಟರಿ ನಿಯೋಗದ ಅಧ್ಯಕ್ಷರೂ ಆಗಿದ್ದರು ಎಂದು ಶ್ರೀಗಳು ಸ್ಮರಿಸಿದ್ದಾರೆ. ದಿವಂಗತರ ಆತ್ಮಕ್ಕೆ ಶಾಂತಿಯನ್ನು, ಅವರ ಕುಟುಂಬ ಸದಸ್ಯರು, ಬಂಧು ಬಾಂಧವರು ಮತ್ತು ಅಪಾರ ಸಂಖ್ಯೆಯ ಅಭಿಮಾನಿಗಳಿಗೆ ಈ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಹಾರೈಸಿದ್ದಾರೆ.

ನೃಪತುಂಗ ಶಾಲೆಯಲ್ಲಿ ಎಸ್.ಎಂ.ಕೃಷ್ಣರಿಗೆ ಶ್ರದ್ಧಾಂಜಲಿ



ಮೈಸೂರಿನ ನೃಪತುಂಗ ಶಾಲೆಯಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರಿಗೆ ಮಂಗಳವಾರ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮೈಸೂರು, ಡಿ. 10– ಮೈಸೂರಿನ ನೃಪತುಂಗ ಶಾಲೆಯಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ವೇಳೆ ಸಂಸ್ಥೆಯ ಉಪಾಧ್ಯಕ್ಷ ಸ.ರ.ಸುದರ್ಶನ ಮಾತನಾಡಿ, ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳಾದ ಎಸ್.ಎಂ.ಕೃಷ್ಣ ಅವರು ಐಟಿ–ಬಿಟಿ ಕ್ಷೇತ್ರಕ್ಕೆ ಜಾಗತಿಕ ಮಟ್ಟದಲ್ಲಿ ಮಹತ್ವವನ್ನು ತಂದುಕೊಟ್ಟರು. ಜೊತೆಗೆ ಕರ್ನಾಟಕದ ಸಾಂಸ್ಕೃತಿಕ ಪ್ರಸಾರಕ್ಕೂ ಕೊಡುಗೆ ನೀಡಿದ್ದಾರೆ. ಇವರು ಮಾದರಿ ಮುಖ್ಯಮಂತ್ರಿಗಳಾಗಿದ್ದರು ಎಂದು ತಿಳಿಸಿದರು.

ಸಂಸ್ಥೆಯ ಕಾರ್ಯದರ್ಶಿ ಪ್ರೊ.ಹೆಚ್.ಜಿ.ಕೃಷ್ಣಪ್ಪ ಮಾತನಾಡಿ, ಎಸ್.ಎಂ.ಕೃಷ್ಣ ಅವರು ನಾನು ಕಂಡಂತಹ ಸುಸಂಸ್ಕೃತ ಹಾಗೂ ಸಜ್ಜನ ರಾಜಕಾರಣಿ. ಅವರು ಎಂದೆಂದಿಗೂ ಮರೆಯಲಾಗದವರು ಎಂದು ಹೇಳಿದರು.

ಅವರು ರಾಜ್ಯಕ್ಕೆ ಉತ್ತಮ ಕೊಡುಗೆ ನೀಡಿದಂತಹ ವ್ಯಕ್ತಿ. ಮುಖ್ಯಮಂತ್ರಿಯಾಗಿದ್ದಾಗ ಬಡ ಮಕ್ಕಳು ಶಾಲೆಗೆ ಬರುವಂತಾಗಲು, ಸರ್ಕಾರಿ ಶಾಲೆಗಳಲ್ಲಿ ಹಾಜರಾತಿಯನ್ನು ಹೆಚ್ಚಿಸಲು ಹಾಗೂ ಮಕ್ಕಳಿಗೆ ಪೌಷ್ಟಿಕಾಂಶ ಆಹಾರ ದೊರೆತು ಆರೋಗ್ಯ ಅಭಿವೃದ್ಧಿಯಾಗಲೆಂದು ರಾಜ್ಯಾದ್ಯಂತ ಮಧ್ಯಾಹ್ನದ ಬಿಸಿಊಟ ಯೋಜನೆ ಜಾರಿಗೆ ತಂದಂತಹ ಅವಿಸ್ಮರಣೀಯ ಮುಖ್ಯಮಂತ್ರಿ ಎಂದು ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಶೀಲಾ ಸ್ಮರಿಸಿದರು.

ಎಸ್.ಎಂ.ಕೃಷ್ಣ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ನೃಪತುಂಗ ಕನ್ನಡ ಶಾಲೆಯ ಆಡಳಿತ ಮಂಡಳಿ ಸದಸ್ಯರು, ಶಿಕ್ಷಕ–ಶಿಕ್ಷಕೇತರ ವರ್ಗದವರು ಹಾಗೂ ಎಲ್ಲ ಮಕ್ಕಳು ಮೌನಾಚರಣೆ ಮಾಡುವುದರ ಮೂಲಕ ಶ್ರದ್ಧಾಂಜಲಿ ಅರ್ಪಿಸಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದಲ್ಲಿ ಎಸ್.ಎಂ.ಕೃಷ್ಣರಿಗೆ ಸಂತಾಪ



ಜೆಎಸ್‌ಎಸ್ ಮಹಾವಿದ್ಯಾಪೀಠದಲ್ಲಿ ಎಸ್.ಎಂ.ಕೃಷ್ಣರಿಗೆ ಸಂತಾಪ ಸೂಚಿಸಲಾಯಿತು.

ಮೈಸೂರು: ಮುಖ್ಯಮಂತ್ರಿಯಾಗಿ, ಕೇಂದ್ರ ಸಚಿವರಾಗಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದ ಎಸ್.ಎಂ.ಕೃಷ್ಣ ಅವರ ನಿಧನಕ್ಕೆ ಜೆಎಸ್‌ಎಸ್ ಮಹಾವಿದ್ಯಾಪೀಠದ ಸಭಾಂಗಣದಲ್ಲಿ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಸಂತಾಪ ಸೂಚಿಸಲಾಯಿತು.

ಹಣಕಾಸು ವಿಭಾಗದ ನಿರ್ದೇಶಕ ಎಸ್.ಪುಟ್ಟಸುಬ್ಬಪ್ಪ ಮಾತನಾಡಿ, ಎಸ್.ಎಂ.ಕೃಷ್ಣ ಅವರು, ರಾಜ್ಯಕ್ಕೆ ಹಲವಾರು ವಿದ್ಯುತ್ ಯೋಜನೆಗಳನ್ನು ತಂದರು. ಯಳಂದೂರಿನಲ್ಲಿ 2002ರಲ್ಲಿ ಆರಂಭಿಸಿದ ಅಕ್ಷರ ದಾಸೋಹದ ಉದ್ಘಾಟನೆಯನ್ನು ಶ್ರೀಮತಿ ಸೋನಿಯಾ ಗಾಂಧಿ ಅವರಿಂದ ಉದ್ಘಾಟಿಸಿದರು. ಹಲವು ಕೈಗಾರಿಕೆಗಳ ಸ್ಥಾಪನೆಗೆ ಕಾರಣೀಭೂತರಾದರು. ಬೆಂಗಳೂರು ಅಭಿವೃದ್ಧಿಗೆ ಹಲವಾರು ಕೊಡುಗೆಗಳನ್ನು ನೀಡಿದರು. ಡಾ. ರಾಜ್‌ಕುಮಾರ್‌ರವರನ್ನು ವೀರಪ್ಪನ್ ಅಪಹರಣ ಮಾಡಿದಾಗ ಮತ್ತೆ ಕಾಡಿನಿಂದ ನಾಡಿಗೆ ಕರೆತರಲು ಬಹಳವಾಗಿ ಶ್ರಮಿಸಿದ್ದರು. ಕಾವೇರಿ ವಿವಾದವನ್ನು ಸಮರ್ಥವಾಗಿ ನಿಭಾಯಿಸಿದ್ದರು ಎಂದು ನುಡಿನಮನದಲ್ಲಿ ತಿಳಿಸಿದರು.

ಲೆಕ್ಕಪರಿಶೋಧನಾ ವಿಭಾಗದ ನಿರ್ದೇಶಕ ಕೆ.ಆರ್.ಸಂತಾನಂ ಹಾಗೂ ಪ್ರಕಟಣ ವಿಭಾಗದ ಗೌರವ ಸಂಪಾದಕ ಆರ್.ಎಸ್.ಪೂರ್ಣಾನಂದ, ಎಸ್.ಎಂ.ಕೃಷ್ಣರವರ ರಾಜಕೀಯ ಸೇವೆ ಕುರಿತು ಮಾತನಾಡಿದರು.

ಡಾ.ಸಿ.ಜಿ.ಬೆಟಸೂರಮಠ ಮಾತನಾಡಿ, 92 ವರ್ಷಗಳ ತುಂಬು ಜೀವನವನ್ನು ನಡೆಸಿದ್ದ ಎಸ್.ಎಂ.ಕೃಷ್ಣರವರು ರಾಜ್ಯಕ್ಕೆ, ದೇಶಕ್ಕೆ ಹಲವಾರು ಕೊಡುಗೆಗಳನ್ನು ನೀಡಿದ್ದಾರೆ. ಅವರ ವಿದ್ಯಾಭ್ಯಾಸ, ರಾಜಕೀಯ ಜೀವನ, ವಿವಿಧ ಸೇವೆಗಳನ್ನು ಸ್ಮರಿಸುವುದರ ಮೂಲಕ ನುಡಿನಮನ ಸಲ್ಲಿಸಿದರು.

ಎಸ್.ಎಂ.ಕೃಷ್ಣರವರ ಆತ್ಮಕ್ಕೆ ಶಾಂತಿ ಕೋರಿ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಸಾಮಾನ್ಯ ಆಡಳಿತ ವಿಭಾಗದ ನಿರ್ದೇಶಕ ಶ್ರೀ ಶಂಕರಪ್ಪ, ಸಾಮಾನ್ಯ ಅಭಿವೃದ್ಧಿ ವಿಭಾಗದ ನಿರ್ದೇಶಕ ರೇವಣ್ಣಸ್ವಾಮಿ, ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್.ಮಹೇಶ್, ಪ್ರಕಟಣ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ, ಶಾಲಾ ಶಿಕ್ಷಣ ವಿಭಾಗದ ನಿರ್ದೇಶಕ ರಾಜಶೇಖರ್, ಯೋಜನಾ ನಿರ್ದೇಶಕ ಕೆ.ಎನ್.ಶಿವಶಂಕರ್, ಇಂಜಿನಿಯರಿಂಗ್ ವಿಭಾಗದ ನಿರ್ದೇಶಕ ಕೆ.ಬಿ.ಸುರೇಶ್ ಬಾಬು ಇತರ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗ ಉಪಸ್ಥಿತರಿದ್ದರು.

ಮಾಜಿ ಸಿಎಂ ಎಸ್.ಎಂ.ಕೃಷ್ಣ, ಮಾಜಿ ಶಾಸಕ ಜಯಣ್ಣ ನಿಧನಕ್ಕೆ ಸಂತಾಪ

ಮೈಸೂರು,ಡಿ.10–ಹಿರಿಯ ರಾಜಕಾರಣಿ, ಮಾಜಿ ಸಿಎಂ ಎಸ್.ಎಂ.ಕೃಷ್ಣ ಹಾಗೂ ಕೊಳ್ಳೇಗಾಲದ ಮಾಜಿ ಶಾಸಕ, ಉಗ್ರಾಣ ನಿಗಮದ ಅಧ್ಯಕ್ಷ ಜಯಣ್ಣ ಅವರ ನಿಧನಕ್ಕೆ ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಸಂತಾಪ ಸೂಚಿಸಿದ್ದಾರೆ.



ಬಿ.ಸುಬ್ರಹ್ಮಣ್ಯ

ಎಸ್.ಎಂ.ಕೃಷ್ಣ ಅವರು ಬ್ರ್ಯಾಂಡ್ ಬೆಂಗಳೂರಿನ ರೂವಾರಿ. ಬೆಂಗಳೂರಿಗೆ ಜಾಗತಿಕ ಸ್ಥಾನಮಾನ ನೀಡಿದವರೇ ಇವರು ಎಂದು ಸ್ಮರಿಸಿದರು. ಕೃಷ್ಣ ಅವರ ನಿಧನದಿಂದ ಕರ್ನಾಟಕ ಮಾತ್ರವಲ್ಲ ಇಡೀ ರಾಷ್ಟ್ರಕ್ಕೇ ತುಂಬಲಾರದ ನಷ್ಟವಾಗಿದೆ. ಕೃಷ್ಣ ಅವರು ಒಬ್ಬ ಅನುಭವಿ, ಸೌಮ್ಯ ಮತ್ತು ಸೇವಾ ಸಮರ್ಪಿತ ರಾಜಕಾರಣಿ. ಮುಖ್ಯಮಂತ್ರಿ, ವಿರೋಧ ಪಕ್ಷದ ನಾಯಕ, ದೇಶದ ವಿದೇಶಾಂಗ ಮಂತ್ರಿ, ರಾಜ್ಯಪಾಲ ಹೀಗೆ ವಿವಿಧ ಪ್ರಮುಖ ಹುದ್ದೆಗಳನ್ನು ಅಲಂಕರಿಸಿ ದೇಶ ಮತ್ತು ರಾಜ್ಯದ ಪ್ರಗತಿಗೆ ಅನುಪಮ ಸೇವೆ ಸಲ್ಲಿಸಿದ್ದಾರೆ ಎಂದು ಸ್ಮರಿಸಿದ್ದಾರೆ.

ಇನ್ನು ಜಯಣ್ಣ ಅವರು 1994 ಹಾಗೂ 2013 ವಿಧಾನಸಭಾ ಚುನಾವಣೆಯಲ್ಲಿ ಗೆದ್ದಿದ್ದರು. ಕ್ಷೇತ್ರದ ಅಭಿವೃದ್ಧಿಗೆ ಶ್ರಮ ವಹಿಸಿ ಕೆಲಸ ಮಾಡಿದ್ದಾರೆ. ಇಂತಹ ಜನಾನುರಾಗಿಯನ್ನು ಕಳೆದುಕೊಂಡಿರುವುದು ನೋವಾಗಿದೆ ಎಂದು ತಿಳಿಸಿದ್ದಾರೆ.


ಎಸ್.ಎಂ.ಕೃಷ್ಣ ನಿಧನಕ್ಕೆ ಗಣ್ಯರ ಸಂತಾಪ

ಮೈಸೂರು,ಡಿ.10–ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳು, ಮಾಜಿ ಕೇಂದ್ರ ಸಚಿವರು ಹಾಗೂ ಮಹಾರಾಷ್ಟ್ರದ ಮಾಜಿ ರಾಜ್ಯಪಾಲರಾಗಿದ್ದ ಹಿರಿಯ ರಾಜಕೀಯ ಮುತ್ಸದ್ದಿ ಎಸ್.ಎಂ.ಕೃಷ್ಣ ಅವರ ನಿಧನಕ್ಕೆ ಮಾಜಿ ಶಾಸಕರಾದ ಡಾ.ಎನ್.ಎಲ್.ಭಾರತೀ ಶಂಕರ್, ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ. ನಿಂಗರಾಜ್‌ಗೌಡ, ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಸಂತಾಪ ಸೂಚಿಸಿದ್ದಾರೆ.

ದೇಶ - ವಿದೇಶ

ಟ್ರಂಪ್ ಆರೋಗ್ಯ ಕಾರ್ಯದರ್ಶಿ ರಾಬರ್ಟ್ ಕೆನಡಿ ಆಯ್ಕೆ ಖಂಡಿಸಿ ಪತ್ರ ಬರೆದ 77 ನೊಬೆಲ್ ಪುರಸ್ಕೃತರು


ನವದೆಹಲಿ: ಡೊನಾಲ್ಡ್ ಟ್ರಂಪ್ ಅವರ ಆರೋಗ್ಯ ಕಾರ್ಯದರ್ಶಿಯಾಗಿ ಆರ್‌ಎಫ್‌ಕೆ ಜೂನಿಯರ್ ಆಯ್ಕೆಯನ್ನು ಖಂಡಿಸುವ ಪತ್ರಕ್ಕೆ 77 ನೊಬೆಲ್ ಪುರಸ್ಕೃತರು ಸಹಿ ಹಾಕಿದ್ದಾರೆ. ಆರೋಗ್ಯ ಮತ್ತು ಮಾನವ ಸೇವೆಗಳ ಕಾರ್ಯದರ್ಶಿ ರಾಬರ್ಟ್ ಕೆನಡಿ ಜೂನಿಯರ್ ಅವರನ್ನು ಆಯ್ಕೆ ಮಾಡುವ ಡೊನಾಲ್ಡ್ ಟ್ರಂಪ್ ನಿರ್ಧಾರವನ್ನು ಖಂಡಿಸಿ ನೊಬೆಲ್ ಪ್ರಶಸ್ತಿ ಪುರಸ್ಕೃತರು ಪತ್ರ ಬರೆದಿದ್ದಾರೆ.



77 ನೊಬೆಲ್ ಪ್ರಶಸ್ತಿ ವಿಜೇತರು ಸೋಮವಾರ ಯುಎಸ್ ಸೆನೆಟ್‌ಗೆ ಬಹಿರಂಗ ಪತ್ರವನ್ನು ಕಳುಹಿಸಿದ್ದಾರೆ. ಆರೋಗ್ಯ ಮತ್ತು ಮಾನವ ಸೇವೆಗಳ ಕಾರ್ಯದರ್ಶಿ (HHS)ಗೆ ಅಧ್ಯಕ್ಷರಾಗಿ ಅಮೆರಿಕದ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಯ್ಕೆ ಮಾಡಿರುವ ರಾಬರ್ಟ್ ಎಫ್. ಕೆನಡಿ ಜೂನಿಯರ್ ಸೂಕ್ತವಲ್ಲ ಎಂದು ಹೇಳಿದ್ದಾರೆ. ರಾಬರ್ಟ್ ಕೆನಡಿ ಅವರಿಗೆ DHHSನ ಉಸ್ತುವಾರಿ ವಹಿಸುವುದು ಸಾರ್ವಜನಿಕರ ಆರೋಗ್ಯವನ್ನು ಅಪಾಯಕ್ಕೆ ಸಿಲುಕಿಸುತ್ತದೆ ಎಂದು ವೈದ್ಯಕೀಯ, ರಸಾಯನ ಶಾಸ್ತ್ರ, ಭೌತಶಾಸ್ತ್ರ ಮತ್ತು ಅರ್ಥಶಾಸ್ತ್ರದಲ್ಲಿ ನೊಬೆಲ್ ಪ್ರಶಸ್ತಿ ಪಡೆದ 77 ಪುರಸ್ಕೃತರು ಸಹಿ ಮಾಡಿದ ಪತ್ರದಲ್ಲಿ ತಿಳಿಸಿದ್ದಾರೆ.

ಪಾದಚಾರಿಗಳ ಮೇಲೆ ಹರಿದ ಬಸ್: ಏಳು ಮಂದಿ ಸಾವು

ಮುಂಬೈ(ಮಹಾರಾಷ್ಟ್ರ): ಮುಂಬೈನ ಪಶ್ಚಿಮ ಕುರ್ಲಾದ ಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದೆ.



ಘಟನೆಯಲ್ಲಿ 7 ಮಂದಿ ಸಾವಿಗೀಡಾಗಿದ್ದು, 49 ಜನರು ಗಾಯಗೊಂಡಿದ್ದಾರೆ. ಚಾಲಕನ ನಿಯಂತ್ರಣ ತಪ್ಪಿದ ಬೃಹನ್ ಮುಂಬೈ ವಿದ್ಯುತ್ ಸರಬರಾಜು ಮತ್ತು ಸಾರಿಗೆ ಸಂಸ್ಥೆಯ (ಬೆಸ್ಟ್) ಬಸ್ ಪಾದಚಾರಿಗಳು ಹಾಗೂ ಹಲವು ವಾಹನಗಳಿಗೆ ಡಿಕ್ಕಿ ಹೊಡೆದಿದೆ.

ಸೋಮವಾರ ರಾತ್ರಿ 9.30ರ ವೇಳೆಗೆ ಮುಂಬೈನ ಪಶ್ಚಿಮ ಕುರ್ಲಾದಲ್ಲಿರುವ ಎಸ್.ಜಿ.ಬಾರ್ವೆ ಮಾರ್ಗದಲ್ಲಿ ಈ ಘಟನೆ ನಡೆದಿದೆ. ಸೋಮವಾರ ಮೂವರು ಮೃತಪಟ್ಟಿದ್ದರು. ಮಂಗಳವಾರ ಸಾವಿನ ಸಂಖ್ಯೆ 7ಕ್ಕೆ ಏರಿಕೆಯಾಗಿದೆ. ಅಪಘಾತದಲ್ಲಿ ನಾಲ್ವರು ಪೊಲೀಸ್ ಸಿಬ್ಬಂದಿ ಸೇರಿದಂತೆ 49 ಮಂದಿ ಗಾಯಗೊಂಡಿದ್ದು, ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೇಂಬ್ರಿಡ್ಜ್ ಯೂನಿಯನ್ ಅಧ್ಯಕ್ಷೆಯಾಗಿ ಭಾರತೀಯ ಮೂಲದ ವಿದ್ಯಾರ್ಥಿನಿ ಆಯ್ಕೆ!

ಲಂಡನ್: ವಿಶ್ವದ ಅತ್ಯಂತ ಹಳೆಯ ಚರ್ಚಾ ಸೊಸೈಟಿಗಳಲ್ಲೊಂದಾದ ಕೇಂಬ್ರಿಡ್ಜ್ ವಿಶ್ವವಿದ್ಯಾನಿಲಯದ ಹಿಸ್ಟಾರಿಕ್ ಕ್ಯಾಂಬ್ರಿಡ್ಜ್ ಯೂನಿಯನ್ ಸೊಸೈಟಿ ಅಧ್ಯಕ್ಷೆಯಾಗಿ ಭಾರತೀಯ ಮೂಲದ ವಿದ್ಯಾರ್ಥಿನಿ ಅನುಷ್ಕಾ ಕಾಳೆ ಆಯ್ಕೆಯಾಗಿದ್ದಾರೆ. ಈ ಸೊಸೈಟಿ 1815ರಿಂದ ವಾಕ್ ಸ್ವಾತಂತ್ರ್ಯವನ್ನು ಕಾಪಾಡಿಕೊಂಡು ಬಂದ ಸಂಸ್ಥೆ ಎಂಬ ಹೆಗ್ಗಳಿಕೆ ಹೊಂದಿದೆ.



ಮುಂದಿನ ಈಸ್ಟರ್ 2025 ಅವಧಿಗಾಗಿ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ 126 ಮತಗಳನ್ನು ಪಡೆದ ಕಾಳೆ, ಅವಿರೋಧವಾಗಿ ಆಯ್ಕೆಯಾದರು. ಈ ಸೊಸೈಟಿಯ ಚರ್ಚಾ ಅಧಿಕಾರಿಯಾಗಿ ಕಾರ್ಯನಿರ್ವಹಿಸುವ ಅವಧಿಯಲ್ಲಿ ಅವರು, ವಿಶ್ವವಿದ್ಯಾನಿಲಯದಲ್ಲಿ ಇಂಡಿಯಾ ಸೊಸೈಟಿಯಂಥ ಸಾಂಸ್ಕೃತಿಕ ಸೊಸೈಟಿಗಳ ಜತೆ ಸಂಬಂಧವನ್ನು ಬಲಪಡಿಸುವ ವೇದಿಕೆ ನಿರ್ವಹಿಸುತ್ತಿದ್ದಾರೆ. "ಕೇಂಬ್ರಿಡ್ಜ್ ಯೂನಿಯನ್ ಸೊಸೈಟಿಗೆ 2025ರ ಈಸ್ಟರ್ ಅವಧಿಗಾಗಿ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ಅತೀವ ಸಂತಸ ತಂದಿದೆ ಹಾಗೂ ಇದು ದೊಡ್ಡ ಗೌರವ. ಎಲ್ಲ ಸದಸ್ಯರ ಬೆಂಬಲಕ್ಕೆ ಕೃತಜ್ಞತೆಗಳು" ಎಂದು ಅನುಷ್ಕಾ ತಿಳಿಸಿದ್ದಾರೆ.

ಪೊಲೀಸ್‌ಗೆ ಕಪಾಲಮೋಕ್ಷ ಮಾಡಿದ ಆಶಾ ಕಾರ್ಯಕರ್ತೆ

ಹೈದರಾಬಾದ್: ಆಶಾ ಕಾರ್ಯಕರ್ತೆಯೊಬ್ಬರು ಪೊಲೀಸ್ ಅಧಿಕಾರಿಯೊಬ್ಬರಿಗೆ ಕಪಾಲಮೋಕ್ಷ ಮಾಡಿರುವ ಘಟನೆ ಹೈದರಾಬಾದ್‌ನಲ್ಲಿ ನಡೆದಿದೆ.



ವೇತನ ಹೆಚ್ಚಳಕ್ಕಾಗಿ ಆಗ್ರಹಿಸಿ ಆಶಾ ಕಾರ್ಯಕರ್ತೆಯರು ಹೈದರಾಬಾದ್‌ನ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಕಚೇರಿ ಬಳಿ ಪ್ರತಿಭಟನೆ ನಡೆಸುತ್ತಿದ್ದು, ಈ ವೇಳೆ ಪ್ರತಿಭಟನಾಕಾರರು ಕಚೇರಿಯತ್ತ ಮುನ್ನುಗ್ಗುತ್ತಿದ್ದಂತೆ ಪೊಲೀಸರು ತಡೆದಿದ್ದಾರೆ. ಈ ವೇಳೆ ಪ್ರತಿಭಟನಾಕಾರರು ಹಾಗೂ ಪೊಲೀಸರ ನಡುವೆ ವಾಗ್ವಾದ ನಡೆದಿದೆ. ಪರಿಸ್ಥಿತಿ ವಿಕೋಪಕ್ಕೆ ತಿರುಗುತ್ತಿದ್ದಂತೆ ಪೊಲೀಸರು ಪ್ರತಿಭಟನಾನಿರತ ಆಶಾ ಕಾರ್ಯಕರ್ತೆಯರನ್ನು ವಶಕ್ಕೆ ಪಡೆದು ವಾಹನಕ್ಕೆ ಹತ್ತಿಸಿದ್ದಾರೆ. ಈ ವೇಳೆ ಆಶಾ ಕಾರ್ಯಕರ್ತೆಯೊಬ್ಬರ ಕಾಲು ವಾಹನದ ಬಾಗಿಲಿನಲ್ಲಿ ಸಿಲುಕಿಕೊಂಡಿದೆ. ಇದರಿಂದ ಸಿಟ್ಟಿಗೆದ್ದ ಮಹಿಳೆ ಪೊಲೀಸ್ ಅಧಿಕಾರಿಗೆ ಕಪಾಲಮೋಕ್ಷ ಮಾಡಿದ್ದಾರೆ. ಈ ಬಗ್ಗೆ ಪೊಲೀಸರು ತನಿಖೆ ನಡೆಸಿದ್ದಾರೆ.

ಡಿ.15ರಿಂದ 17ರವರೆಗೆ ಶ್ರೀಲಂಕಾ ಅಧ್ಯಕ್ಷ ದಿಸ್ಸಾನಾಯಕೆ ಭಾರತಕ್ಕೆ ಮೊದಲ ಪ್ರವಾಸ

ಕೊಲಂಬೊ: ಶ್ರೀಲಂಕಾ ಅಧ್ಯಕ್ಷ ಅನುರಾ ದಿಸ್ಸಾನಾಯಕೆ ಅವರು ಮುಂದಿನ ವಾರ ಭಾರತಕ್ಕೆ ಭೇಟಿ ನೀಡುತ್ತಿದ್ದು, ಅವರು ಅಧಿಕಾರಕ್ಕೆ ಬಂದ ನಂತರ ಕೈಗೊಳ್ಳುತ್ತಿರುವ ಮೊದಲ ಅಂತರ ರಾಷ್ಟ್ರೀಯ ಪ್ರವಾಸ ಇದಾಗಿದೆ. ದಿಸ್ಸಾನಾಯಕ ಅವರ ಭೇಟಿಯಿಂದ ಭಾರತ ಮತ್ತು ಶ್ರೀಲಂಕಾ ನಡುವಿನ ಸಂಬಂಧ ಇನ್ನಷ್ಟು ಗಟ್ಟಿಗೊಳ್ಳಲಿದೆ ಎಂದು ಪರಿಗಣಿಸಲಾಗಿದೆ.



ಅಧ್ಯಕ್ಷ ದಿಸ್ಸಾನಾಯಕೆ ಅವರು ಡಿ.15 ರಿಂದ 17 ರವರೆಗೆ ಭಾರತ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಶ್ರೀಲಂಕಾದ ಕ್ಯಾಬಿನೆಟ್ ವಕ್ತಾರ ಡಾ ನಳಿಂದಾ ಜಯತಿಸ್ಸಾ ತಿಳಿಸಿದ್ದಾರೆ. ಭಾರತ ಭೇಟಿಯ ವೇಳೆ ಅಧ್ಯಕ್ಷ ದಿಸ್ಸಾನಾಯಕೆ ಅವರು ಪ್ರಧಾನಿ ಮೋದಿ ಮತ್ತು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ ಎಂದು ಸಂಪುಟದ ವಕ್ತಾರ ನಳಿಂದಾ ಜಯತಿಸ್ಸ ಹೇಳಿದ್ದಾರೆ. ಶ್ರೀಲಂಕಾ ಅಧ್ಯಕ್ಷರ ಜೊತೆ ವಿದೇಶಾಂಗ ಸಚಿವ ವಿಜಿತ ಹೆರಾತ್ ಮತ್ತು ಹಣಕಾಸು ಖಾತೆ ಉಪ ಸಚಿವ ಅನಿಲ್ ಜಯಂತ ಫೆರ್ನಾಂಡೋ ಇರಲಿದ್ದಾರೆ ಎಂದು ಆರೋಗ್ಯ ಸಚಿವ ಜಯತಿಸ್ಸಾ ಅವರು ತಿಳಿಸಿದ್ದಾರೆ. ದಿಸ್ಸಾನಾಯಕೆ ಅವರು ಶ್ರೀಲಂಕಾ ಅಧ್ಯಕ್ಷರಾಗಿ ಆಯ್ಕೆಯಾದ ನಂತರ ಕೊಲಂಬೊಗೆ ಭೇಟಿ ನೀಡಿದ್ದ ವಿದೇಶಾಂಗ ಸಚಿವ ಎಸ್.ಜೈಶಂಕರ್, ನವದೆಹಲಿಗೆ ಭೇಟಿ ನೀಡುವಂತೆ ಆಹ್ವಾನವನ್ನು ನೀಡಿದ್ದರು.


ಮೈಸೂರು ಮಿತ್ರ ಬುಧವಾರ 11 ಡಿಸೆಂಬರ್ 2024

ಕೊಡಗಿಗೆ ಎಸ್.ಎಂ.ಕೃಷ್ಣ ಕೊಡುಗೆ ಅಪಾರ

ಶ್ರೀಕ್ಷೇತ್ರ ತಲಕಾವೇರಿ, ಭಾಗಮಂಡಲ ಅಭಿವೃದ್ಧಿ

ಮಡಿಕೇರಿ, ಡಿ.10– ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು ಕೊಡಗು ಜಿಲ್ಲೆಗೆ ನೀಡಿರುವ ಕೊಡುಗೆಗಳು ಅಮರವಾಗಿರಲಿವೆ.

ಮಂಡ್ಯದವರಾಗಿದ್ದ ಎಸ್.ಎಂ.ಕೃಷ್ಣ ಅವರು ಕೊಡಗು ಜಿಲ್ಲೆ ಬಗ್ಗೆ ಅಭಿಮಾನ ಮತ್ತು ಕಾವೇರಿ ಮಾತೆಯ ಮೇಲೆ ವಿಶೇಷ ಭಕ್ತಿ ಹೊಂದಿದ್ದರು. ಅವರು ಮುಖ್ಯಮಂತ್ರಿಯಾಗಿದ್ದ (1999–2004) ಅವಧಿಯಲ್ಲಿ ಕಾವೇರಿ ಮಾತೆ ಉಗಮ ಸ್ಥಾನ ತಲಕಾವೇರಿ ಮತ್ತು ಭಾಗಮಂಡಲದ ಶ್ರೀ ಭಗಂಡೇಶ್ವರ ದೇವಾಲಯಗಳ ಅಭಿವೃದ್ಧಿಗೆ 10 ಕೋಟಿ ರೂ. ಅನುದಾನ ಬಿಡುಗಡೆ ಮಾಡುವ ಮೂಲಕ ಪುಣ್ಯ ಕ್ಷೇತ್ರಗಳ ಜೀರ್ಣೋದ್ಧಾರಕ್ಕೆ ತಮ್ಮದೆ ಕೊಡುಗೆ ನೀಡಿದ್ದರು.



ಎಸ್.ಎಂ.ಕೃಷ್ಣ ಮುಖ್ಯಮಂತ್ರಿ ಆಗಿದ್ದಾಗ ನೀಡಿದ್ದ ಅನುದಾನದಲ್ಲಿ ತಲಕಾವೇರಿ ಕ್ಷೇತ್ರ ಅಭಿವೃದ್ಧಿ ಪಡಿಸಿರುವುದು.

ಈ ಪೈಕಿ 4 ಕೋಟಿ ರೂ. ವೆಚ್ಚದಲ್ಲಿ ತಲಕಾವೇರಿ ಕ್ಷೇತ್ರ ಹಾಗೂ 6 ಕೋಟಿ ರೂ. ವೆಚ್ಚದಲ್ಲಿ ಭಾಗಮಂಡಲ ದೇವಾಲಯದ ಅಭಿವೃದ್ಧಿ ಮತ್ತು ಮೂಲ ಸೌಕರ್ಯಗಳನ್ನು ಮುಜರಾಯಿ ಇಲಾಖೆ ಮುಖಾಂತರ ಕಾವೇರಿ ನೀರಾವರಿ ನಿಗಮದ ಉಸ್ತುವಾರಿಯಲ್ಲಿ ಮೇಲ್ದರ್ಜೆಗೇರಿಸಲಾಗಿತ್ತು.

ತಲಕಾವೇರಿಯಲ್ಲಿ ದೇವಾಲಯದ ನೂತನ ಸ್ವಾಗತ ಗೋಪುರ, ಕಲ್ಲು ಹಾಸಿನ ಹೊದಿಕೆಗಳು, ಪುಷ್ಕರಣಿ ಅಭಿವೃದ್ಧಿ, ಶ್ರೀ ಅಗಸ್ತೇಶ್ವರ ಹಾಗೂ ಶ್ರೀ ಗಣಪತಿ ಸಹಿತ ಇತರ ದೇವರ ಗುಡಿಗಳ ಜೀರ್ಣೋದ್ಧಾರ, ಭಕ್ತರ ಅನುಕೂಲಕ್ಕಾಗಿ ವೀಕ್ಷಕ ಗ್ಯಾಲರಿ, ಜಾತ್ರೆ ಸಂದರ್ಭ ಅನ್ನ ಸಂತರ್ಪಣೆ ಭವನ ಸಹಿತ ಎಲ್ಲಾ ಮೂಲ ಸೌಕರ್ಯಗಳನ್ನು ಇದೇ ಅನುದಾನದಲ್ಲಿ ಅಭಿವೃದ್ಧಿಪಡಿಸಲಾಗಿತ್ತು.

ಭಾಗಮಂಡಲ ಶ್ರೀ ಭಗಂಡೇಶ್ವರ ದೇವಾಲಯ ಮುಂಭಾಗದ ಗೋಪುರ, ಜೀರ್ಣೋದ್ಧಾರ, ಗ್ರಾನೈಟ್ ನೆಲಹಾಸಿನ ಪೌಳಿಗಳ ನಿರ್ಮಾಣ, ಅನ್ನದಾಸೋಹ ಕೊಠಡಿಗಳು, ನೂತನ ಕೇಶ ಮುಂಡನ ಭವನ, ಪಿಂಡಪ್ರದಾನ ಬಳಿಕ ಭಕ್ತರ ಅನುಕೂಲಕ್ಕಾಗಿ ತ್ರಿವೇಣಿ ಸಂಗಮದ ಪಕ್ಕದಲ್ಲೇ ಮೂಲಸೌಕರ್ಯ ವ್ಯವಸ್ಥೆ, ತ್ರಿವೇಣಿ ಸಂಗಮದಲ್ಲಿ ಎರಡು ಪಾದಚಾರಿ ಸೇತುವೆಗಳನ್ನು ನಿರ್ಮಿಸುವ ಮೂಲಕ ಮಾತೆ ಕಾವೇರಿಗೆ ಎಸ್.ಎಂ.ಕೃಷ್ಣ ತಮ್ಮ ಭಕ್ತಿ ಸಮರ್ಪಿಸಿದ್ದರು.

ಸಂತಾಪ: ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ನಿಧನಕ್ಕೆ ಕೊಡಗು ಜಿಲ್ಲೆಯ ವಿವಿಧ ಸಂಘ–ಸಂಸ್ಥೆಗಳು ಹಾಗೂ ಗಣ್ಯರು ಸಂತಾಪ ಸೂಚಿಸಿದ್ದಾರೆ.



ಎಸ್.ಎಂ.ಕೃಷ್ಣ

ಕರ್ನಾಟಕ ಕಂಡ ಅಪರೂಪದ ಮುಖ್ಯಮಂತ್ರಿಗಳಲ್ಲಿ ಒಬ್ಬರಾಗಿದ್ದ ಎಸ್.ಎಂ.ಕೃಷ್ಣ, ಮಾಜಿ ಕೇಂದ್ರ ಸಚಿವರೂ ಆಗಿ ರಾಜಕೀಯ ಮುತ್ಸದ್ದಿಯಾಗಿದ್ದರು ಎಂದು ಕಾಂಗ್ರೆಸ್ ಹಿರಿಯ ಮುಖಂಡ ವಿಟ್ಟು ಚಂಗಪ್ಪ ಸ್ಮರಿಸುವ ಮೂಲಕ ಸಂತಾಪ ಸೂಚಿಸಿದರು.

ಇವರ ನಿಧನ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದ್ದು, ಮೃತರ ಕುಟುಂಬಕ್ಕೆ ದೇವರು ದುಃಖ ಭರಿಸುವ ಶಕ್ತಿ ನೀಡಲಿ. ನಾನು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾಗಿದ್ದ ಸಂದರ್ಭ ಎಸ್.ಎಂ.ಕೃಷ್ಣ ಅವರೊಂದಿಗೆ ನಿಕಟ ಸಂಬಂಧ ಹೊಂದಿದ್ದೆ ಎಂದು ಸ್ಮರಿಸಿದರು.

ಮಡಿಕೇರಿ ಶಾಸಕ ಡಾ.ಮಂತರ್ ಗೌಡ, ವಿರಾಜಪೇಟೆ ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಮಾಜಿ ಸಚಿವ ಎಂ.ಸಿ.ನಾಣಯ್ಯ, ಕಸಾಪ ಜಿಲ್ಲಾಧ್ಯಕ್ಷ ಕೇಶವ ಕಾಮತ್ ಹಾಗೂ ವಿವಿಧ ಸಂಘ–ಸಂಸ್ಥೆಗಳು ಎಸ್.ಎಂ. ಕೃಷ್ಣ ನಿಧನಕ್ಕೆ ಸಂತಾಪ ಸೂಚಿಸಿವೆ.

ಬೆಳ್ಳೂರು ಗ್ರಾಮದಲ್ಲಿ ಮತ್ತೆ ಹುಲಿ ಘರ್ಜನೆ ಹಿನ್ನೆಲೆ

ಹುಲಿ ಸೆರೆ ಕಾರ್ಯಾಚರಣೆ ಆರಂಭ

ಮಡಿಕೇರಿ, ಡಿ.10– ಪೊನ್ನಂಪೇಟೆ ತಾಲೂಕಿನ ಹುದಿಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಳ್ಳೂರು ಗ್ರಾಮದಲ್ಲಿ ಮತ್ತೆ ಹುಲಿ ಘರ್ಜನೆ ಕೇಳಿ ಬಂದಿದ್ದು, ಗ್ರಾಮಸ್ಥರು ಬೆಚ್ಚಿ ಬಿದ್ದಿದ್ದಾರೆ. ಗ್ರಾಮಸ್ಥರ ದೂರಿನ ಹಿನ್ನೆಲೆಯಲ್ಲಿ ಮಂಗಳವಾರ ಅರಣ್ಯ ಇಲಾಖೆ ಹೆಚ್ಚಿನ ಸಿಬ್ಬಂದಿಯೊಂದಿಗೆ ಹುಲಿ ಸೆರೆ ಕಾರ್ಯಾಚರಣೆ ಆರಂಭಿಸಿದೆ.

ನ.30ರಂದು ಗ್ರಾಮದ ಬೆಳೆಗಾರ ನೂರೆರ ರಮೇಶ್ ಅವರ ಹಸುವನ್ನು ಹುಲಿ ಬಲಿ ಪಡೆದಿದ್ದ ಹಿನ್ನೆಲೆಯಲ್ಲಿ ಡಿ.1ರಿಂದ ಹುಲಿ ಸೆರೆಗೆ ಕಾರ್ಯಾಚರಣೆ ಕೈಗೊಳ್ಳಲಾಗಿತ್ತಾದರೂ, ಹುಲಿ ಸುಳಿವು ಪತ್ತೆ ಆಗಿರಲಿಲ್ಲ. ನಂತರ ಸುರಿದ ಮಳೆಯಿಂದ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು. ಸೋಮವಾರ ರಾತ್ರಿ ಹೈಸೊಡ್ಲೂರು ಗ್ರಾಮದಲ್ಲಿ ಹಾಗೂ ಮಂಗಳವಾರ ಬೆಳಗ್ಗೆ ಬೆಳ್ಳೂರು ಗ್ರಾಮದಲ್ಲಿ ಹುಲಿ ಘರ್ಜನೆ ಕೇಳಿದ ಗ್ರಾಮಸ್ಥರು, ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದರು. ಈ ಬೆನ್ನಲ್ಲೇ ಕೂಂಬಿಂಗ್ ಪ್ರಾರಂಭಿಸಲಾಗಿದೆ. ಕೂಂಬಿಂಗ್ ಸಂದರ್ಭ ಬೆಳ್ಳೂರು ಗ್ರಾಮದ ಖಾಸಗಿ ಪ್ರದೇಶದಲ್ಲಿ ಹುಲಿ ಹೆಜ್ಜೆ ಗುರುತು ಕಂಡು ಬಂದಿದ್ದು, ಈ ಸ್ಥಳದಲ್ಲಿ ಕಾಡುಹಂದಿಯನ್ನು ಹುಲಿ ಹಿಡಿದು ತಿಂದಿರುವ ಗುರುತು ಹಾಗೂ ಅಲ್ಲಿ ರಕ್ತದ ಕಲೆಗಳು ಪತ್ತೆಯಾಗಿವೆ.



ಹುಲಿ ಸೆರೆಗೆ ಬೆಳ್ಳೂರು ಗ್ರಾಮದಲ್ಲಿ ಬೋನು ಅಳವಡಿಸಿರುವುದು.

ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಮೇರಿಯಂಡ ಸಂಕೇತ್ ಪೂವಯ್ಯ, ವಿರಾಜಪೇಟೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಜಗನ್ನಾಥ್, ಪೊನ್ನಂಪೇಟೆ ವಲಯ ಅರಣ್ಯಾಧಿಕಾರಿ ಶಂಕರ್ ಅವರು ಸ್ಥಳದಲ್ಲಿ ಬೀಡು ಬಿಟ್ಟಿದ್ದು, ಅವರ ನಿರ್ದೇಶನದಂತೆ ಕಾರ್ಯಾಚರಣೆ ಆರಂಭವಾಗಿದೆ.

ಕಾರ್ಯಾಚರಣೆಯಲ್ಲಿ ಶ್ರೀಮಂಗಲ, ಪೊನ್ನಂಪೇಟೆ, ನಾಗರಹೊಳೆ, ಮಾಕುಟ್ಟ, ವಿರಾಜಪೇಟೆ ಅರಣ್ಯ ಸಿಬ್ಬಂದಿ ಸಹಿತ ಒಟ್ಟು 88 ಸಿಬ್ಬಂದಿ ಪಾಲ್ಗೊಂಡಿದ್ದಾರೆ.

ಈಗಾಗಲೇ ಹೆಚ್ಚಿನ ಸಿಬ್ಬಂದಿಯೊಂದಿಗೆ ಹುಲಿ ಸೆರೆ ಕಾರ್ಯಾಚರಣೆ ವೈಜ್ಞಾನಿಕವಾಗಿ ಕೈಗೊಳ್ಳಲಾಗಿದೆ ಹುಲಿ ಇರುವ ಜಾಗದ ಪತ್ತೆಗಾಗಿ ಕೂಂಬಿಂಗ್ ನಡೆಸಲಾಗುತ್ತಿದೆ. ಸುಳಿವು ದೊರೆತ ಕೂಡಲೇ ಅರವಳಿಕೆ ನೀಡಿ ಹುಲಿ ಸೆರೆ ಹಿಡಿಯಲು ಕ್ರಮ ಕೈಗೊಳ್ಳಲಾಗುವುದು ಎಂದು ಸಂಕೇತ್ ಪೂವಯ್ಯ ತಿಳಿಸಿದ್ದಾರೆ. ವಿರಾಜಪೇಟೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಜಗನ್ನಾಥ್ ಮಾತನಾಡಿ, ಬೆಳ್ಳೂರು ಗ್ರಾಮದಲ್ಲಿ ಹುಲಿ ಹಸುವನ್ನು ಕೊಂದ ಸ್ಥಳದಲ್ಲಿ ಬೋನು ಅಳವಡಿಸಲಾಗಿದೆ. ಆದರೆ, ಅಲ್ಲಿಗೆ ಹುಲಿ ಬಂದಿರುವ ಕುರುಹು ಪತ್ತೆಯಾಗಿಲ್ಲ. ಕಳೆದ 10 ದಿನಗಳಿಂದ ಹುಲಿ ಸುಳಿವು ಸಿಕ್ಕಿರಲಿಲ್ಲ. ಸ್ಥಳೀಯ ಗ್ರಾಮಸ್ಥರಿಗೆ ಯಾವುದೇ ತೊಂದರೆ ಯಾಗದಂತೆ ಹೆಚ್ಚುವರಿ ಸಿಬ್ಬಂದಿ ನಿಯೋಜಿಸಲಾಗಿದೆ. 7 ಸಿಬ್ಬಂದಿಯ 12 ತಂಡದಿಂದ ಹುಲಿ ಸೆರೆಗೆ ಕೂಂಬಿಂಗ್ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

ಬಸ್ ಪಲ್ಟಿ: ಚಾಲಕನ ಕಾಲು ಮುರಿತ



ತಿತಿಮತಿ ಹೆದ್ದಾರಿಯಲ್ಲಿ ಪಲ್ಟಿಯಾದ ಬಸ್ ಪ್ರಯಾಣಿಕರನ್ನು ಸಾರ್ವಜನಿಕರು ಮತ್ತು ಪೊಲೀಸರು ರಕ್ಷಿಸಿದರು.

ಗೋಣಿಕೊಪ್ಪ, ಡಿ.10– ಸಾರಿಗೆ ಸಂಸ್ಥೆ ಬಸ್ ಪಲ್ಟಿಯಾಗಿ ಚಾಲಕನ ಕಾಲು ಮುರಿದಿದ್ದು, ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿರುವ ಘಟನೆ ಸೋಮವಾರ ರಾತ್ರಿ ತಿತಿಮತಿ ಹೆದ್ದಾರಿಯಲ್ಲಿ ನಡೆದಿದೆ.

ಕಾಲು ಮುರಿದಿರುವ ಚಾಲಕ ದೊರೇಶ್‌ನನ್ನು ಮೈಸೂರು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ನಿರ್ವಾಹಕ ಹೊನ್ನಪ್ಪ ಸೇರಿದಂತೆ 17 ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯವಾಗಿವೆ.

ರಾತ್ರಿ ಗೋಣಿಕೊಪ್ಪಕ್ಕೆ ಆಗಮಿಸುತ್ತಿದ್ದಾಗ ದೇವರಪುರದಲ್ಲಿ ಗುಂಡಿ ತಪ್ಪಿಸಲು ಹೋಗಿ ಬಸ್ ರಸ್ತೆಯ ಬಲಬದಿಗೆ ಮಗುಚಿಕೊಂಡಿದೆ. ಇದರಿಂದ ಚಾಲಕ ಹೊರ ಬರಲಾಗದೆ ಸಿಲುಕಿಕೊಂಡು ಕಾಲು ಮುರಿದಿದೆ. ಎಲ್ಲಾ ಪ್ರಯಾಣಿಕರು ಸಣ್ಣಪುಟ ಗಾಯಗಳಿಂದ ಪರಾಗಿದ್ದಾರೆ.

ಸಾರ್ವಜನಿಕರು ಮತ್ತು ಪೊಲೀಸ್ ಸಿಬ್ಬಂದಿ ರಕ್ಷಣೆ ಕಾರ್ಯ ನಡೆಸಿದರು. ಈ ಸಂಬಂಧ ಗೋಣಿಕೊಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗಾಳಿಬೀಡು ಗ್ರಾಮ ಪಂಚಾಯಿತಿಗೆ ರಾಷ್ಟ್ರ ಪ್ರಶಸ್ತಿ

ಇಂದು ದೆಹಲಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಪ್ರಶಸ್ತಿ ಪ್ರದಾನ

ಮಡಿಕೇರಿ, ಡಿ.10–ತಾಲೂಕಿನ ಗಾಳಿಬೀಡು ಗ್ರಾಮ ಪಂಚಾಯಿತಿಗೆ ರಾಷ್ಟ್ರ ಪ್ರಶಸ್ತಿ ಲಭಿಸಿದೆ.

ಕೇಂದ್ರ ಸರ್ಕಾರದ ಪ್ರತಿಷ್ಠಿತ ದೀನ್ ದಯಾಳ್ ರಾಷ್ಟ್ರೀಯ ಪಂಚಾಯಿತಿ ವಿಕಾಸ್ ಪುರಸ್ಕಾರ ಗಾಳಿಬೀಡು ಗ್ರಾಮ ಪಂಚಾಯಿತಿಗೆ ಬಂದಿದೆ. ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ ಸಮಗ್ರ ಸಾಧನೆ ವಿಭಾಗದಲ್ಲಿ ಗಾಳಿಬೀಡು ಗ್ರಾಮ ಪಂಚಾಯಿತಿಗೆ ದೇಶದಲ್ಲಿ ಪ್ರಥಮ ಸ್ಥಾನ ಲಭಿಸಿದೆ. ಸಂಜೀವಿನಿ ಒಕ್ಕೂಟದ ಸ್ವಸಹಾಯ ಒಕ್ಕೂಟದವರು ಹಾಗೂ ಗ್ರಾಮಸ್ಥರ ಸಹಕಾರದಿಂದ ಪ್ರಶಸ್ತಿ ಲಭಿಸಿದೆ ಎಂದು ಪಿಡಿಓ ಶಶಿಕಿರಣ ಸಂತಸ ವ್ಯಕ್ತಪಡಿಸಿದ್ದಾರೆ.

ಒಂದು ಕೋಟಿ ರೂ. ನಗದು ಬಹುಮಾನದೊಂದಿಗೆ ಪ್ರಶಸ್ತಿ ಫಲಕ ಘೋಷಿಸಲಾಗಿದೆ. ಬುಧವಾರ (ಡಿ.11) ನವದೆಹಲಿಯ ವಿಜ್ಞಾನ ಭವನದಲ್ಲಿ ಪ್ರಶಸ್ತಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ನೀಡಲಿದ್ದಾರೆ. ಕೊಡಗು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಮಡಿಕೇರಿ ತಾಲೂಕು ಪಂಚಾಯಿತಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಅಭಿನಂದನೆ ತಿಳಿಸಿದ್ದಾರೆ ಎಂದು ಹೇಳಿದ್ದಾರೆ.



ಪಂಚಾಯಿತಿ ಮಟ್ಟದಲ್ಲಿ ಗ್ರಾಮಸ್ಥರ ಜೀವನ ಸುಧಾರಣೆಗೆ ಜೀವನೋಪಾಯ ಅಭಿವೃದ್ಧಿಗೊಳಿಸಲಾಗಿದೆ. ಗ್ರಾಮದ ಎಲ್ಲಾ ಮನೆಗಳು ಶೌಚಾಲಯ ಹೊಂದಿದ್ದು, ಶೌಚ ಮುಕ್ತ ಗ್ರಾಮ ಪಂಚಾಯಿತಿ ಪ್ರಶಸ್ತಿಗೂ ಪಾತ್ರವಾಗಿದೆ. ನಮ್ಮ ಗ್ರಾಪಂ ಸತತ ನಾಲ್ಕು ವರ್ಷಗಳಿಂದ 'ಗಾಂಧಿ ಗ್ರಾಮ' ಪುರಸ್ಕಾರಕ್ಕೂ ಭಾಜನವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ. ಗ್ರಾಪಂನಿಂದ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಮೂಲಕ ವಸತಿ ರಹಿತರಿಗೆ ವೈಯಕ್ತಿಕ ಮನೆ ನಿರ್ಮಾಣ, ಸರ್ಕಾರಿ ಶಾಲೆ ಉದ್ಯಾನ ನಿರ್ಮಾಣ, ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ. ಅಲ್ಲದೆ, ಡಿಜಿಟಲ್ ಲೈಬ್ರರಿ ವ್ಯವಸ್ಥೆ ಜೊತೆಗೆ ಅಮೃತ ಸರೋವರ ಚಪ್ಪಂಡ ಕೆರೆ ನಿರ್ಮಾಣದ ಮೂಲಕ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಜನರಿಗೆ ಅಗತ್ಯ ದಾಖಲೆಗಳ ಪೂರೈಕೆ, ಫಲಾನುಭವಿಗಳಿಗೆ ಪಿಂಚಣಿ, ಅಂಗನವಾಡಿ ಮಕ್ಕಳಿಗೆ ಪೌಷ್ಟಿಕಾಂಶ ಆಹಾರ ವಿತರಣೆ, ಸ್ವಸಹಾಯ ಸಂಘಗಳಿಗೆ ಆರ್ಥಿಕ ನೆರವು ನೀಡಿ ಸ್ವಾವಲಂಬಿಗೊಳಿಸಲಾಗಿದೆ. ಮನೆ ಮನೆಗೆ ನೈಸರ್ಗಿಕವಾಗಿ ಕುಡಿಯುವ ನೀರಿನ ಸರಬರಾಜು ಸೇರಿದಂತೆ ಮತ್ತಿತರ ಸೌಲಭ್ಯ ನೀಡಲಾಗಿದೆ ಎಂದರು.

ಗಾಳಿಯಲ್ಲಿ ಗುಂಡು ಹಾರಿಸಿದ್ದ ಬಸ್ ಚಾಲಕನ ಬಂಧನ

ಮಡಿಕೇರಿ, ಡಿ.10–ನಗರದ ಕೆಎಸ್‌ಆರ್‌ಟಿಸಿ ಡಿಪೋ ಮುಂಭಾಗ ಕ್ಷುಲ್ಲಕ ಕಾರಣಕ್ಕೆ ಕ್ಯಾತೆ ತೆಗೆದು ಗಾಳಿಯಲ್ಲಿ ಗುಂಡು ಹಾರಿಸಿದ ಬಸ್ ಚಾಲಕನನ್ನು ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಸ್ ಚಾಲಕ ವೇಣುಗೋಪಾಲ್ ಬಂಧಿತ ಆರೋಪಿ. ಈತ ಕೃತ್ಯಕ್ಕೆ ಬಳಸಿದ್ದ ಒಂಟಿ ನಳಿಗೆ ಬಂದೂಕನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಘಟನೆ: ಚಾಲಕ ವೇಣುಗೋಪಾಲ್ ಅವರನ್ನು ಶ್ರೀಮಂಗಲದ ಮೃತ್ಯುಂಜಯ ದೇವಾಲಯ ಮಾರ್ಗಕ್ಕೆ ಈ ಹಿಂದೆ ನಿಯೋಜಿಸಲಾಗಿತ್ತು. ಆದರೆ, ಕಳೆದ ಎರಡು ದಿನಗಳ ಹಿಂದೆ ಈ ಮಾರ್ಗಕ್ಕೆ ಮೂಲತಃ ಸೋಮವಾರಪೇಟೆಯ ರೂಪೇಶ್ ಅವರನ್ನು ಚಾಲಕರನ್ನಾಗಿ ನಿಯೋಜನೆ ಮಾಡಿ, ವೇಣುಗೋಪಾಲ್ ಅವರನ್ನು ಮಡಿಕೇರಿ–ಮಂಗಳೂರು ಮಾರ್ಗಕ್ಕೆ ಬದಲಾಯಿಸಲಾಗಿತ್ತು.

ಇದರಿಂದ ಅಸಮಾಧಾನಗೊಂಡ ವೇಣುಗೋಪಾಲ್ ಡಿಪೋ ಬಳಿ ತೆರಳಿ ಘಟಕದ ಸಂಚಾರಿ ನಿಯಂತ್ರಕರು ಮತ್ತು ರೂಪೇಶ್ ಜೊತೆ ಕ್ಯಾತೆ ತೆಗೆದು ಜಗಳ ಮಾಡಿದ್ದ. ಬಳಿಕ ಡಿಪೋ ಹೊರಭಾಗದಲ್ಲಿ ನಿಲ್ಲಿಸಲಾಗಿದ್ದ ಕಾರಿನಿಂದ ಬಂದೂಕು ತೆಗೆದು ರೂಪೇಶ್‌ಗೆ ಬೆದರಿಕೆ ಹಾಕಿ ಗಾಳಿಯಲ್ಲಿ ಒಂದು ಸುತ್ತು ಗುಂಡು ಹೊಡೆದು ಭಯದ ವಾತಾವರಣ ಸೃಷ್ಟಿಸಿದ್ದ. ಈ ಕುರಿತು ಚಾಲಕ ರೂಪೇಶ್ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ನಂತರ ಸ್ಥಳಕ್ಕಾಗಮಿಸಿದ ಪೊಲೀಸರು ಬಂದೂಕು ಸಹಿತ ಆರೋಪಿಯನ್ನು ಬಂಧಿಸಿದ್ದಾರೆ.

ಸಕಾಲಕ್ಕೆ ಕಾಮಗಾರಿ ಸುಂಕ ಪಾವತಿಸಿ

ಸಭೆಯಲ್ಲಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಸೂಚನೆ



ಚಾಮರಾಜನಗರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸುಂಕ ಪಾವತಿ ಕುರಿತ ಅಧಿಕಾರಿಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ಮಾತನಾಡಿದರು.

ಚಾಮರಾಜನಗರ, ಡಿ.10–ಕಟ್ಟಡ ಹಾಗೂ ಇತರೆ ಕಾಮಗಾರಿಗಳ ನಿರ್ಮಾಣ ವೆಚ್ಚದ ಮೇಲೆ ಶೇ.1ರಷ್ಟು ಸುಂಕವನ್ನು ಸಂಬಂಧಪಟ್ಟ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಸಕಾಲದಲ್ಲಿ ಪಾವತಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಕಟ್ಟಡ ಕಾಮಗಾರಿಗಳ ಸುಂಕ ಪಾವತಿ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆಯಡಿ ಸರ್ಕಾರಿ ಹಾಗೂ ಖಾಸಗಿ ಯಾವುದೇ ಕಾಮಗಾರಿಗಳ ವೆಚ್ಚದ ಮೇಲೆ ಸಂಬಂಧಪಟ್ಟ ಗುತ್ತಿಗೆದಾರರು ಹಾಗೂ ಏಜೆನ್ಸಿಗಳಿಂದ ಶೇ.1ರಷ್ಟು ಸುಂಕ ಸಂಗ್ರಹಿಸಿ ಕಾರ್ಮಿಕರ ಕಲ್ಯಾಣ ಮಂಡಳಿಗೆ ನಿಗದಿತ ಕಾಲಮಿತಿಯಲ್ಲಿ ಕಡ್ಡಾಯವಾಗಿ ಪಾವತಿಸಬೇಕು. ನಗರ, ಸ್ಥಳೀಯ ಸಂಸ್ಥೆ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕಾಮಗಾರಿ ಸುಂಕ ಸಂಗ್ರಹಿಸಿ ಪಾವತಿಸುವಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಾಗದಂತೆ ಸಂಬಂಧಪಟ್ಟ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಆದೇಶಿಸಿದರು.

ಜಿಲ್ಲೆಯಲ್ಲಿ ಪ್ರಸಕ್ತ ಒಟ್ಟು 64,500 ಕಟ್ಟಡ ಕಾರ್ಮಿಕರು ನೋಂದಾಯಿಸಿಕೊಂಡಿದ್ದು, ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಫಲಾನುಭವಿ ಕಾರ್ಮಿಕರಿಗೆ ವಿವಿಧ ಸೌಲಭ್ಯ ಒದಗಿಸಲಾಗುವುದು. ಪಿಂಚಣಿ, ಕುಟುಂಬ ಹಾಗೂ ದುರ್ಬಲತೆ ಪಿಂಚಣಿ, ಟೂಲ್‌ಕಿಟ್, ಮಕ್ಕಳ ಅಪೌಷ್ಟಿಕತೆ, ವಿವಾಹ ಸಹಾಯಧನ, ವೈದ್ಯಕೀಯ ವೆಚ್ಚ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ, ಮಕ್ಕಳ ಶೈಕ್ಷಣಿಕ ಸಹಾಯಧನ, ಅಪಘಾತ ಪರಿಹಾರಗಳಿಂದ ಯಾವುದೇ ಕಾರ್ಮಿಕರು ವಂಚಿತರಾಗದಂತೆ ಎಚ್ಚರ ವಹಿಸಬೇಕು ಎಂದು ತಿಳಿಸಿದರು.

ಕಟ್ಟಡ ಮತ್ತು ಇತರೆ ಕಾಮಗಾರಿ ನಿರ್ವಹಿಸುವ ಎಲ್ಲಾ ಗುತ್ತಿಗೆದಾರರು, ಏಜೆನ್ಸಿಗಳು ಕಾರ್ಮಿಕ ಇಲಾಖೆಯಿಂದ ಕಡ್ಡಾಯವಾಗಿ ಬಿಓಸಿಡಬ್ಲ್ಯೂ(ಬಿಲ್ಡಿಂಗ್ ಅಂಡ್ ಅದರ್ ಕನ್‌ಸ್ಟ್ರಕ್ಷನ್ ವರ್ಕ್) ಪರವಾನಗಿ ಪಡೆಯಬೇಕು. ಪರವಾನಗಿ ಪಡೆಯಲು ಆಧಾರ್ ಕಾರ್ಡ್, ಕಟ್ಟಡ ನಿರ್ಮಾಣದ ಸುಂಕ ಕಟ್ಟಿರುವ ವಿವರ ಹಾಗೂ ಕಟ್ಟಡ ಕೆಲಸಕ್ಕೆ ಮಕ್ಕಳನ್ನು ಬಳಸಿಕೊಂಡಿಲ್ಲದಿರುವ ಬಗ್ಗೆ ಪತ್ರ ನೀಡಬೇಕು. ಪರವಾನಗಿಯನ್ನು ಜಿಲ್ಲಾ ಮಟ್ಟದಲ್ಲಿ ನೀಡಲಾಗುತ್ತಿದ್ದು, ತಾಲೂಕು ಮಟ್ಟದ ಹೆಲ್ಪ್‌ಡೆಸ್ಕ್ ಸ್ಥಾಪಿಸಬೇಕು. ಈ ಸಂಬಂಧ ಉಸ್ತುವಾರಿಗಾಗಿ ನೋಡಲ್ ಅಧಿಕಾರಿ ಯನ್ನು ನೇಮಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಎಂ.ಸವಿತಾ, ನಗರಸಭೆ ಪೌರಾಯುಕ್ತ ಎಸ್.ವಿ.ರಾಮದಾಸ್, ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕಿ ಸುಧಾ, ಜಂಟಿ ಕೃಷಿ ನಿರ್ದೇಶಕ ಅಬೀದ್, ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಮಾನಸ ಶಿಕ್ಷಣ ಸಂಸ್ಥೆಯಲ್ಲಿ ಎಸ್.ಎಂ.ಕೃಷ್ಣಗೆ ನಮನ



ಕೊಳ್ಳೇಗಾಲ ಮಾನಸ ಶಿಕ್ಷಣ ಸಂಸ್ಥೆಯಲ್ಲಿ ಮಾಜಿ ಸಿಎಂ ಎಸ್.ಎಂ.ಕೃಷ್ಣ ಹಾಗೂ ಮಾಜಿ ಶಾಸಕ ಎಸ್.ಜಯಣ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಕೊಳ್ಳೇಗಾಲ, ಡಿ.10–ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಹಾಗೂ ಉಗ್ರಾಣ ಅಭಿವೃದ್ಧಿ ನಿಗಮ ಅಧ್ಯಕ್ಷ ಎಸ್. ಜಯಣ್ಣ ಅವರಿಗೆ ಪಟ್ಟಣದ ಮಾನಸ ಶಿಕ್ಷಣ ಸಂಸ್ಥೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಎಸ್.ಎಂ.ಕೃಷ್ಣ ಹಾಗೂ ಎಸ್. ಜಯಣ್ಣ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪ ನಮನ ಸಲ್ಲಿಸಲಾಯಿತು. ಇದೇ ವೇಳೆ ನಿಸರ್ಗ ಪಿಯು ಕಾಲೇಜು ಪ್ರಾಂಶುಪಾಲ ಡಿ.ಕೃಷ್ಣೇಗೌಡ ಮಾತನಾಡಿ, ರಾಜ್ಯ ಹಾಗೂ ಬೆಂಗಳೂರಿನ ಅಭಿವೃದ್ಧಿಗೆ ಎಸ್.ಎಂ.ಕೃಷ್ಣ ಅವರು ಅಪಾರ ಶ್ರಮಿಸಿದ್ದಾರೆ. ಅದೇ ರೀತಿ ಕೊಳ್ಳೇಗಾಲ ಮಾಜಿ ಶಾಸಕ ಎಸ್.ಜಯಣ್ಣ ಅವರು ಅಪಾರ ಕೊಡುಗೆ ನೀಡಿದ್ದಾರೆ. ಈ ಇಬ್ಬರ ಅಗಲಿಕೆ ರಾಜ್ಯಕ್ಕೆ ತುಂಬಾಲಾಗದ ನಷ್ಟ ಉಂಟಾಗಿದೆ ಎಂದರು.

ಶ್ರದ್ಧಾಂಜಲಿ ಸಭೆಯಲ್ಲಿ ಮಾನಸ ಶಿಕ್ಷಣ ಸಂಸ್ಥೆ ಪ್ರಾಂಶುಪಾಲರಾದ ಚನ್ನಶೆಟ್ಟಿ, ಧನಂಜಯ, ಕೃಷ್ಣೇಗೌಡ, ಮುಖ್ಯ ಶಿಕ್ಷಕ ಶಂಕರ್, ಬೋಧಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಎಸ್‌ಎಂಕೆಗೆ ಮಾದಪ್ಪನ ಮೇಲೆ ಅಪಾರ ಭಕ್ತಿ

▸ ಎಸ್.ಎಂ.ಕೃಷ್ಣ ಕುಟುಂಬ ಸಮೇತ ಬೆಟ್ಟಕ್ಕೆ ಪದೇ, ಪದೇ ಭೇಟಿ ▸ ದೇವರಿಗೆ ವಿಶೇಷ ಪೂಜೆ

ಚಾಮರಾಜನಗರ, ಡಿ.10–ಮಾಜಿ ಮುಖ್ಯಮಂತ್ರಿ, ರಾಜ್ಯ ಕಂಡ ಅಪರೂಪದ ರಾಜಕಾರಣಿಯಾಗಿದ್ದ ಎಸ್.ಎಂ.ಕೃಷ್ಣ ಅವರ ಮನೆ ದೇವರಾದ ಜಿಲ್ಲೆಯ ಧಾರ್ಮಿಕ ಶ್ರೀಕ್ಷೇತ್ರ ಮಲೆಮಹದೇಶ್ವರಬೆಟ್ಟಕ್ಕೆ ಅವರು ಪದೇ, ಪದೆ ಭೇಟಿ ನೀಡುವ ಮೂಲಕ ಮಾದಪ್ಪನ ಮೇಲೆ ಅಪಾರವಾದ ಭಕ್ತಿ ಹೊಂದಿದ್ದರು.

ರಾಜಕೀಯ ಧುರೀಣರಾದ ಎಸ್.ಎಂ. ಕೃಷ್ಣ ಅವರು ಬಾಲ್ಯದಿಂದಲೂ ಮಹದೇಶ್ವರಬೆಟ್ಟಕ್ಕೆ ಕುಟುಂಬ ಸಮೇತರಾಗಿ ಭೇಟಿ ನೀಡಿ, ಮಾದಪ್ಪನಿಗೆ ವಿಶೇಷ ಪೂಜೆ ಸಲ್ಲಿಸುತ್ತಿದ್ದರು.




ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ ಉದ್ಘಾಟನೆಗೊಂಡ ಮಹದೇಶ್ವರಬೆಟ್ಟದ ರಾಜಗೋಪುರ.

ರಾಜಗೋಪುರ ಉದ್ಘಾಟನೆ: 1999ರಲ್ಲಿ ಮುಖ್ಯಮಂತ್ರಿಯಾಗಿದ್ದ ಎಸ್.ಎಂ.ಕೃಷ್ಣ ಅವರು ಅಧಿಕಾರ ವಹಿಸಿಕೊಂಡ ಬಳಿಕ ಹನೂರು ತಾಲೂಕಿನ ಮಲೆಮಹದೇಶ್ವರ ಬೆಟ್ಟಕ್ಕೆ ಭೇಟಿ ನೀಡಿ, ದೇವಸ್ಥಾನ ಅಭಿವೃದ್ಧಿಗೆ ಯೋಜನೆ ರೂಪಿಸಿ, ಅನುದಾನ ಬಿಡುಗಡೆಗೊಳಿಸಿದ್ದರು.

2000ರಲ್ಲಿ ಬೆಟ್ಟದ ಮಾದಪ್ಪನ ದೇವಸ್ಥಾನ ಮುಂಭಾಗದಲ್ಲಿ 7 ಅಂತಸ್ತಿನ ನೂತನ ರಾಜಗೋಪುರ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದರು. ನಂತರ ಇದಕ್ಕೆ ಅಗತ್ಯ ಅನುದಾನ ಬಿಡುಗಡೆಗೊಳಿಸಿ 2003ರ ಜೂನ್ 9ರಂದು ನೂತನ ರಾಜಗೋಪುರ ಉದ್ಘಾಟನೆ ನೆರವೇರಿಸಿದರು. ಈ ವೇಳೆ ಸುತ್ತೂರು ಮಠದ ಶ್ರೀ ಶಿವರಾತ್ರಿದೇಶಿಕೇಂದ್ರ ಸ್ವಾಮೀಜಿ, ಆದಿ ಚುಂಚನಗಿರಿ ಮಠದ ಶ್ರೀ ಬಾಲಗಂಗಾಧರನಾಥಸ್ವಾಮೀಜಿ, ರಾಜನಹಳ್ಳಿ ವಾಲ್ಮೀಕಿ ಮಹಾಸಂಸ್ಥಾನ ಮಠದ ಶ್ರೀ ವಾಲ್ಮೀಕಿ ಪುಣ್ಯಾನಂದಪುರಿ ಸ್ವಾಮೀಜಿ, ವಾಟಾಳು ಸೂರ್ಯಸಿಂಹಾಸನ ಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯಸ್ವಾಮೀಜಿ, ಕನಕಪುರ ದೇಗುಲ ಮಠದ ಶ್ರೀ ಇಮ್ಮಡಿ ನಿರ್ವಾಣ ಸ್ವಾಮೀಜಿ, ಸಾಲೂರು ಮಠದ ಶ್ರೀ ಪಟ್ಟದಗುರು ಸ್ವಾಮೀಜಿ ಹಾಗೂ ಕೃಷಿ ಸಂಸ್ಕರಣ ಸಚಿವರಾಗಿದ್ದ ಜಿ. ರಾಜೂಗೌಡ ಪಾಲ್ಗೊಂಡಿದ್ದರು.

ನಂತರ ಮಹಾರಾಷ್ಟ್ರದ ರಾಜ್ಯಪಾಲರಾಗಿ, ಕೇಂದ್ರ ವಿದೇಶಾಂಗ ಸಚಿವರಾಗಿ ಕರ್ತವ್ಯ ನಿರ್ವಹಿಸಿದ ಸಂದರ್ಭದಲ್ಲಿ ಹಾಗೂ ರಾಜಕೀಯ ಜೀವನದಿಂದ ನಿವೃತ್ತಿ ಘೋಷಿಸಿದ ನಂತರವೂ ಎಸ್.ಎಂ.ಕೃಷ್ಣ ಅವರು ಬೆಟ್ಟಕ್ಕೆ ಕುಟುಂಬದೊಂದಿಗೆ ನಿರಂತರವಾಗಿ ಭೇಟಿ ನೀಡಿ, ಮಾದಪ್ಪನಿಗೆ ವಿಶೇಷ ಪೂಜೆ ಸಲ್ಲಿಸುತ್ತಿದ್ದರು. ಅವರು ಬೆಟ್ಟಕ್ಕೆ ಸಾಮಾನ್ಯರಂತೆ ಬಂದು ಹೋಗುತ್ತಿದ್ದರು ಎಂದು ಅವರ ಸರಳತೆಯ ಬಗ್ಗೆ ದೇವಾಲಯದ ಅರ್ಚಕರು ತಿಳಿಸಿದರು.



ಮಿನಿಸಂಪುಟ ಸಭೆ: ಜಿಲ್ಲೆಯ ಮತ್ತೊಂದು ಧಾರ್ಮಿಕ ಕ್ಷೇತ್ರವಾದ ಯಳಂದೂರು ತಾಲೂಕಿನ ಬಿಳಿಗಿರಿ ರಂಗನಾಥಸ್ವಾಮಿಬೆಟ್ಟದಲ್ಲಿ 2002ರಲ್ಲಿ ಮುಖ್ಯಮಂತ್ರಿಯಾಗಿದ್ದ ಎಸ್.ಎಂ.ಕೃಷ್ಣ ನೇತೃತ್ವದಲ್ಲಿ ಮಿನಿಸಚಿವ ಸಂಪುಟ ಸಭೆ ನಡೆಸಲಾಗಿತ್ತು. ಬಿಳಿಗಿರಿರಂಗನಬೆಟ್ಟ ಗಿರಿಜನರ ವಾಸಸ್ಥಳವಾಗಿದ್ದು, ಇವರ ಕಲ್ಯಾಣ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಹಲವು ಯೋಜನೆ ರೂಪಿಸಿದ್ದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಶ್ರದ್ಧಾಂಜಲಿ



ಚಾಮರಾಜನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಚಾಮರಾಜನಗರ, ಡಿ.10–ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರದ ಮಾಜಿ ಸಚಿವ ಎಸ್.ಎಂ.ಕೃಷ್ಣ ಅವರಿಗೆ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಇದೇ ವೇಳೆ ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಕಳೆದ 60 ದಶಕಗಳ ಹಿಂದೆ ರಾಜಕೀಯ ಪ್ರವೇಶಿಸಿದ ಎಸ್.ಎಂ. ಕೃಷ್ಣ ಅವರು ಬೆಂಗಳೂರನ್ನು ಐಟಿಬಿಟಿ ನಗರ ಮಾಡುವಲ್ಲಿ ಶ್ರಮ ವಹಿಸಿದ್ದರು. ಶಾಲಾ ಮಕ್ಕಳ ಅಕ್ಷರ ದಾಸೋಹಕ್ಕೆ ಚಾಲನೆ, ಯಶಸ್ವಿನಿ ಯೋಜನೆ ಜಾರಿ ಸೇರಿದಂತೆ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದರು. ಅವರ ನಿಧನ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ ಎಂದರು.

ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್. ಗುರುಸ್ವಾಮಿ, ಜಿಪಂ ಮಾಜಿ ಸದಸ್ಯರಾದ ಕೆ.ಪಿ.ಸದಾಶಿವಮೂರ್ತಿ, ಚುಡಾ ಸದಸ್ಯರಾದ ದ್ವಾರ್ಕಿ, ರಾಜು, ಕೆಪಿಸಿಸಿ ಸದಸ್ಯ ಸಯ್ಯದ್ ರಫಿ, ನಗರಸಭೆ ಮಾಜಿ ಸದಸ್ಯ ಪುಟ್ಟಸ್ವಾಮಿ, ಹೆಬ್ಬಸೂರು ವೀರಭದ್ರಸ್ವಾಮಿ, ನಾಗವಳ್ಳಿ ನಾಗಯ್ಯ, ಮುತ್ತಿಗೆ ದೊರೆ, ಕರಿನಂಜನಪುರ ಸ್ವಾಮಿ, ರಾಮಸಮುದ್ರ ಶಿವಮೂರ್ತಿ, ಬಸವರಾಜು, ಎ.ಎಚ್. ನಸ್ರುಲ್ಲಾಖಾನ್, ಪರ್ವಿಜ್ ಹಾಜರಿದ್ದರು.

ಗಾಂಜಾ ಬೆಳೆದಿದ್ದವನ ಬಂಧನ

ಹನೂರು, ಡಿ.10–ಅರಿಶಿಣ ಫಸಲಿನ ಮಧ್ಯದಲ್ಲಿ ಗಾಂಜಾ ಬೆಳೆದಿದ್ದ ವ್ಯಕ್ತಿಯನ್ನು ರಾಮಾಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ತಾಲೂಕಿನ ಕೆಂಪನಟ್ಟಿ ಗ್ರಾಮದ ಮಾರ (68) ಬಂಧಿತ ಆರೋಪಿ. ಈತ ಕುರಟ್ಟಿ ಹೊಸೂರು ಸಮೀಪದ ಎಲ್‌ಪಿಎಸ್ ಕ್ಯಾಂಪ್‌ನ ಜಮೀನಿನಲ್ಲಿ ಅರಿಶಿಣ ಫಸಲಿನ ಮಧ್ಯ ಗಾಂಜಾ ಗಿಡ ಬೆಳೆದಿದ್ದ. ರಾಮಾಪುರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಶೇಷಾದ್ರಿ ಹಾಗೂ ಪಿಎಸ್‌ಐಗಳಾದ ಈಶ್ವರ್, ಲೋಕೇಶ್ ಹಾಗೂ ಸಿಬ್ಬಂದಿ ಸೋಮವಾರ ರಾತ್ರಿ ದಾಳಿ ನಡೆಸಿ, ಲಕ್ಷಾಂತರ ರೂ. ಬೆಲೆಬಾಳುವ 211 ಕೆಜಿ ತೂಕದ ಗಾಂಜಾ ಗಿಡಗಳನ್ನು ವಶಪಡಿಸಿಕೊಂಡಿದ್ದಾರೆ. ಕಾರ್ಯಾಚರಣೆಯಲ್ಲಿ ಪೊಲೀಸ್ ಸಿಬ್ಬಂದಿ ಮಹೇಂದರ್, ಲಿಯಾಖಾತ್ ಅಲಿಖಾನ್, ಗಿರೀಶ್, ಮಕಂದರ್, ರಾಜು, ಪರಶುರಾಮ ಪಾಲ್ಗೊಂಡಿದ್ದರು.



ಕುರಟ್ಟಿ ಹೊಸೂರು ಸಮೀಪದ ಎಲ್‌ಪಿಎಸ್ ಕ್ಯಾಂಪ್ ಜಮೀನಿನಲ್ಲಿ ಬೆಳೆದಿದ್ದ ಗಾಂಜಾ ಗಿಡಗಳನ್ನು ಪೊಲೀಸರು ವಶಪಡಿಸಿಕೊಂಡಿರುವುದು.

ಮೈಸೂರು ಮಿತ್ರ

ಎಸ್.ಎಂ.ಕೃಷ್ಣರಿಗೆ ಶ್ರದ್ಧಾಂಜಲಿ...



ಮೈಸೂರಿನ ವಿಜಯನಗರದ ಒಂದನೇ ಹಂತದಲ್ಲಿರುವ ರಾಜ್ಯ ಒಕ್ಕಲಿಗರ ಸಂಘದ ವಿದ್ಯಾರ್ಥಿನಿಯರ ಹಾಸ್ಟೆಲ್‌ನಲ್ಲಿ ಮಂಗಳವಾರ ಶ್ರದ್ಧಾಂಜಲಿ ಅರ್ಪಿಸಲಾಯಿತು. ಕಾವೇರಿ ಕ್ರಿಯಾ ಸಮಿತಿ ಅಧ್ಯಕ್ಷ ಜಯಪ್ರಕಾಶ್(ಜೆಪಿ), ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಸಿ.ಜಿ.ಗಂಗಾಧರ್, ಕರುನಾಡು ಸೇನೆ ಜಿಲ್ಲಾಧ್ಯಕ್ಷ ತೇಜಸ್‌ಲೋಕೇಶ್‌ಗೌಡ, ಮುಖಂಡರಾದ ಡಾ.ಎಂ.ಬಿ.ಮಂಜೇಗೌಡ, ನಗರ ಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು, ಶಿವಲಿಂಗಯ್ಯ, ಗೋವಿಂದೇಗೌಡ, ಲತಾ ರಂಗನಾಥ್, ರವಿ ರಾಜಕೀಯ, ಶೇಖರ್, ಮಂಜುಳಾ, ಲಕ್ಷ್ಮೀ, ಹೇಮಂತ್, ಭಾಗ್ಯಮ್ಮ, ಹೊಂಬೇಗೌಡ, ಮಂಜುನಾಥ್ ಸೇರಿದಂತೆ ಹಾಸ್ಟೆಲ್‌ನ ವಿದ್ಯಾರ್ಥಿನಿಯರು ಹಾಜರಿದ್ದರು.

ವಿನಯವಂತ ರಾಜಕಾರಣಿ



"ಎಸ್.ಎಂ.ಕೃಷ್ಣ ಅವರು ಕರುನಾಡು ಕಂಡ ಮೇರು ರಾಜಕಾರಣಿ. ಶಿಸ್ತುಬದ್ಧ ಜೀವನ, ಅವರ ಉಡುಗೆ-ತೊಡುಗೆ, ಗಾಂಭೀರ್ಯದ ಮಾತುಗಳು ಅನುಕರಣೀಯ. ವೈಯಕ್ತಿಕ ವಿಚಾರಗಳನ್ನು ಪ್ರಸ್ತಾಪಿಸಿ ನಿಂದಿಸಿಕೊಳ್ಳುವ ಇಂದಿನ ರಾಜಕಾರಣಿಗಳು ಎಸ್.ಎಂ.ಕೃಷ್ಣ ಅವರ ವಿನಯವಂತಿಕೆಯನ್ನು ಅರಿತುಕೊಳ್ಳಬೇಕು. ಯಾವ ಸಂದಿಗ್ಧತೆ ಎದುರಾದರೂ ಕುಗ್ಗದೆ ಸಮರ್ಥವಾಗಿ ಎದುರಿಸಿದ್ದಲ್ಲದೆ ನಾಡಿನ ಅಭಿವೃದ್ಧಿಯಲ್ಲಿ ಮೈಲಿಗಲ್ಲು ಸ್ಥಾಪಿಸಿದ ಕೃಷ್ಣ ಅವರ ನಿಧನ, ನಾಡಿನಲ್ಲಿ ನಿರ್ವಾತ ಸೃಷ್ಟಿಸಿದೆ.

-ಸಂದೇಶ್ ನಾಗರಾಜ್, ಮಾಜಿ ಎಂಎಲ್‌ಸಿ

ಒಂದನೇ ಪುಟದಿಂದ

ಎಸ್.ಎಂ.ಕೃಷ್ಣ ಇನ್ನಿಲ್ಲ

ಪಕ್ಷೇತರರಾಗಿ ವಿಧಾನಸಭೆ ಪ್ರವೇಶಿಸಿದರು. 1968ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ನಡೆದ ಉಪಚುನಾವಣೆಯಲ್ಲಿ ಗೆಲುವು ಸಾಧಿಸಿ, 1971ರಲ್ಲಿ ಕಾಂಗ್ರೆಸ್‌ನಿಂದ ಕಣಕ್ಕಿಳಿದು ಮರು ಆಯ್ಕೆಗೊಂಡರು.

1972ರಲ್ಲಿ ವಿಧಾನ ಪರಿಷತ್ ಸದಸ್ಯರಾಗಿ ವಾಣಿಜ್ಯ ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ ಸೇವೆ ಸಲ್ಲಿಸಿ, ನಂತರ ರಾಷ್ಟ್ರ ರಾಜಕಾರಣಕ್ಕೆ ತೆರಳಿ ಇಂದಿರಾ ಗಾಂಧಿ ಆಡಳಿತದಲ್ಲಿ ಕೈಗಾರಿಕಾ ರಾಜ್ಯ ಸಚಿವರಾಗಿ ಸೇವೆ ಸಲ್ಲಿಸಿದರು.

ರಾಷ್ಟ್ರದ ನಾಲ್ಕೂ ಸದನಗಳ ಸದಸ್ಯರಾಗಿ ಕಾರ್ಯನಿರ್ವಹಿಸಿದ ಕೆಲವೇ ವ್ಯಕ್ತಿಗಳಲ್ಲಿ ಎಸ್.ಎಂ.ಕೃಷ್ಣ ಒಬ್ಬರಾಗಿದ್ದು, ವಿಧಾನ ಸಭೆ, ವಿಧಾನ ಪರಿಷತ್, ಲೋಕಸಭೆ ಹಾಗೂ ರಾಜ್ಯಸಭೆಯ ಸದಸ್ಯರೂ ಆಗಿದ್ದರು. ಮುಖ್ಯಮಂತ್ರಿ ದೇವರಾಜ ಅರಸ್ ಸಂಪುಟದಲ್ಲಿ ಸಚಿವರಾಗಿ, ಎಸ್.ಬಂಗಾರಪ್ಪ ಆಡಳಿತಾವಧಿಯಲ್ಲಿ ವಿಧಾನ ಸಭಾಧ್ಯಕ್ಷರಾಗಿ, ವೀರಪ್ಪ ಮೊಯಿಲಿ ಆಡಳಿತದಲ್ಲಿ ಉಪಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು. ಪ್ರದೇಶ ಕಾಂಗ್ರೆಸ್ ಅಧ್ಯಕ್ಷರಾಗಿ 1999ರಲ್ಲಿ ಪಕ್ಷವನ್ನು ಅಧಿಕಾರಕ್ಕೆ ತಂದು 2004ರವರೆಗೆ ಮುಖ್ಯಮಂತ್ರಿಯಾಗಿ ಕಾರ್ಯಭಾರ ನಡೆಸಿದರು. ಮಹಾರಾಷ್ಟ್ರದ ರಾಜ್ಯಪಾಲರಾಗಿ ಸೇವೆ ಸಲ್ಲಿಸಿ, ರಾಜ್ಯಪಾಲ ಹುದ್ದೆ ತೊರೆದು ಮತ್ತೆ ಸಕ್ರಿಯ ರಾಜಕಾರಣಕ್ಕೆ ಹಿಂತಿರುಗಿದರು. ನಂತರ ಪ್ರಧಾನಮಂತ್ರಿಯಾಗಿದ್ದ ಮನಮೋಹನ ಸಿಂಗ್ ಅವರ ಸಂಪುಟದಲ್ಲಿ ಕೇಂದ್ರ ವಿದೇಶಾಂಗ ಸಚಿವರಾಗಿದ್ದರು. ಬದಲಾದ ರಾಜಕೀಯ ಸನ್ನಿವೇಶದಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ ಕೃಷ್ಣ ಅವರು, ಅಲ್ಪದಿನಗಳಲ್ಲೇ ಸಕ್ರಿಯ ರಾಜಕೀಯದಿಂದ ನಿವೃತ್ತಿ ಘೋಷಿಸಿ, ವಿಶ್ರಾಂತ ಬದುಕು ನಡೆಸುತ್ತಿದ್ದರು. 2023ರಲ್ಲಿ ಇವರಿಗೆ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿ ಪದ್ಮ ವಿಭೂಷಣ ಪುರಸ್ಕಾರ ನೀಡಿ, ಗೌರವಿಸಲಾಗಿತ್ತು.

ಇಂದು ಎಸ್.ಎಂ.ಕೃಷ್ಣ ಅಂತ್ಯಕ್ರಿಯೆ

ಧೀಮಂತ ಹಿರಿಯ ನಾಯಕನನ್ನು ಇಂದು ನಾವು ಕಳೆದುಕೊಂಡಿದ್ದೇವೆ ಎಂದರು.

ರಾಜ್ಯದ ಮಕ್ಕಳ ಬಿಸಿಯೂಟ ಕಾರ್ಯಕ್ರಮದಿಂದ ಹಿಡಿದು ಮಹಿಳೆಯರ ಸಬಲೀಕರಣಕ್ಕಾಗಿ ಸ್ತ್ರೀ ಶಕ್ತಿ ಸಂಘ ತಂದವರು. ರೈತರ ಜೀವನದಲ್ಲಿ ಬದಲಾವಣೆ ತರಲು ಅಂದಿನ ಕಾಲದಲ್ಲಿ ರೈತರಿಗೆ ಕೇವಲ 5 ರೂ ಗೆ ಭೂಮಿ ಪಹಣಿ ಯೋಜನೆಯ ಬಾಂಡ್ ಅನ್ನು ನೀಡಿದ್ದು, ಎಲ್ಲಾ ರೈತರು ಇಂದು ಸ್ಮರಿಸುತ್ತಿದ್ದಾರೆ. ರಾಜ್ಯದಲ್ಲಿ ಶ್ರೀಗಂಧವನ್ನು ರೈತರು ಬೆಳೆಯಬೇಕು ಎಂಬ ನಿಟ್ಟಿನಲ್ಲಿ ಅನುಮತಿಸಿದವರು. ಕಾವೇರಿ ನೀರಾವರಿ ನಿಗಮವನ್ನು ಸ್ಥಾಪಿಸಿ, ಕಾವೇರಿ ಜಲಾನಯನ ಪ್ರದೇಶಕ್ಕೆ ಹೊಸ ರೂಪ ತಂದವರು. ಕಾವೇರಿ ವಿವಾದ ಹಾಗೂ ವರ ನಟ ಡಾ.ರಾಜ್‌ಕುಮಾರ್ ಅಪಹರಣ ವಿಷಯದಲ್ಲಿ ದಿಟ್ಟತನ ಪ್ರದರ್ಶಿಸಿ, ಪರಿಸ್ಥಿತಿಯನ್ನು ಯಶಸ್ವಿಯಾಗಿ ನಿರ್ವಹಣೆ ಮಾಡಿದ್ದರು.

ನಾಳೆ ಬೆಳಿಗ್ಗೆ 8 ಗಂಟೆಗೆ ಅವರ ಬೆಂಗಳೂರು ಸದಾಶಿವನಗರದ ಮನೆಯಿಂದ ಪಾರ್ಥಿವ ಶರೀರ ಹೊರಟು ಕೆಂಗೇರಿ- ಬಿಡದಿ-ರಾಮನಗರ-ಚನ್ನಪಟ್ಟಣದ ಮೂಲಕ ಮದ್ದೂರಿಗೆ ಆಗಮಿಸಲಿದೆ. ಮಾರ್ಗದುದ್ದಕ್ಕೂ ಅಂತಿಮ ದರ್ಶನ ಪಡೆಯಲು ಅವಕಾಶ ನೀಡಲಾಗುವುದು. ನಂತರ ಮದ್ದೂರು ತಾಲೂಕಿನ ಮೈಸೂರು-ಬೆಂಗಳೂರು ಹೆದ್ದಾರಿಯ ಸೋಮನಹಳ್ಳಿ ಕಾಫಿ ಡೇ ಹತ್ತಿರ ಎಸ್.ಎಂ.ಕೃಷ್ಣ ಅವರ ಕುಟುಂಬಕ್ಕೆ ಸೇರಿದ ಖಾಲಿ ಜಾಗದಲ್ಲಿ ನಾಳೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಅಂತಿಮ ದರ್ಶನ ಪಡೆಯಲು ಅವಕಾಶ ಮಾಡಿಕೊಡಲಾಗುವುದು. ಮಧ್ಯಾಹ್ನ 3 ಗಂಟೆಗೆ ಅಂತ್ಯಕ್ರಿಯೆಯನ್ನು ಸರ್ಕಾರಿ ಗೌರವದೊಂದಿಗೆ ನೆರವೇರಿಸಲಾಗುವುದು ಎಂದು ತಿಳಿಸಿದರು.

ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿ, ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಅಗಲಿಕೆ ನಮಗೆ ಬಹಳ ನೋವು ತಂದಿದ್ದು, ನಾಡಿಗೆ ತುಂಬಲಾಗದ ನಷ್ಟವಾಗಿದೆ. ಮಾಜಿ ಮುಖ್ಯಮಂತ್ರಿ ಕೃಷ್ಣರವರ ಹುಟ್ಟು ಮತ್ತು ಬದುಕು ಮಂಡ್ಯ ಜಿಲ್ಲೆಗೆ ದೊಡ್ಡ ಹೆಸರನ್ನು ತಂದಿರುವುದು ಹೆಮ್ಮೆಯ ವಿಷಯವಾಗಿದೆ. ಅವರ ಜೀವನದ ಶಿಸ್ತು, ಮುತ್ಸದಿ ರಾಜಕಾರಣವನ್ನು ಮೆಚ್ಚುವಂತದ್ದಾಗಿದೆ. ಎಸ್.ಎಂ.ಕೃಷ್ಣರವರ ಆಡಳಿತದಲ್ಲಿ ಐಟಿ ಬಿಟಿ ಹಾಗೂ ಕೈಗಾರಿಕೆಗೆ ಹೆಚ್ಚು ಒತ್ತು ಕೊಟ್ಟರು. ವಿಕಾಸ ಸೌಧದೊಂದಿಗೆ ಉದ್ಯೋಗ ಸೌಧವನ್ನು ನಿರ್ಮಿಸಿದರು. ಕಾವೇರಿ ನೀರಾವರಿ ನಿಗಮ ಮತ್ತು ಚೆಸ್ಕಾಂ ಆರಂಭಿಸಿದರು. ಸ್ತ್ರೀ ಶಕ್ತಿ ಯೋಜನೆ ಜಾರಿಗೆ ತರುವುದರ ಜೊತೆಗೆ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಕೂಲಿ ಕಾರ್ಮಿಕರ ಮಕ್ಕಳಿಗೆ ಊಟ, ವಸತಿ ನೀಡುವುದು, ಮೈಸೂರು-ಬೆಂಗಳೂರು ರಸ್ತೆ ನಿರ್ಮಾಣ ಮಾಡಿದರು ಎಂದು ಸ್ಮರಿಸಿದರು.

ಕೃಷ್ಣ ಅವರು ಯಾವುದೇ ಒಂದು ಸೀಮಿತ ಕ್ಷೇತ್ರದ ಬಗ್ಗೆ ಯೋಚಿಸದೆ ಇಡೀ ನಾಡಿನ ಜನರಿಗೆ ಒಳಿತು ಮಾಡುವ ದೃಷ್ಟಿಕೋನವನ್ನು ಇಟ್ಟುಕೊಂಡು ಕಾರ್ಯ ನಿರ್ವಹಿಸಿದವರು. ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಎರಡೂ ಸದನಗಳಲ್ಲಿಯೂ ಸೇವೆ ಸಲ್ಲಿಸಿದ್ದರು. ಅವರ ಇಷ್ಟೆಲ್ಲಾ ಕಾರ್ಯಗಳು ನಮಗೆ ಸ್ಫೂರ್ತಿಯಾಗಿದ್ದು, ಅವರು ಇಂದು ನಮ್ಮನ್ನೆಲ್ಲ ತೊರೆದಿರುವುದು ಬಹಳ ನೋವನ್ನುಂಟು ಮಾಡಿದೆ ಎಂದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ದಿನೇಶ್‌ಗೂಳಿಗೌಡ, ಶಾಸಕರಾದ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಪಿ.ರವಿಕುಮಾರ್ ಗಣಿಗ, ಕೆ.ಎಂ.ಉದಯ್‌ಗೌಡ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮಾಜಿ ಶಾಸಕ ಎಸ್.ಜಯಣ್ಣ ನಿಧನ



ಹೃದಯಾಘಾತದಿಂದ ನಿಧನರಾದ ಕೊಳ್ಳೇಗಾಲ ಮಾಜಿ ಶಾಸಕ ಎಸ್.ಜಯಣ್ಣ ಅವರ ಅಂತಿಮ ದರ್ಶನ ಪಡೆದ ಮಾಜಿ ಸಚಿವ ಎನ್.ಮಹೇಶ್.

ಮಾಜಿ ಸಚಿವ ಎನ್.ಮಹೇಶ್, ಶಾಸಕರಾದ ಆರ್.ನರೇಂದ್ರ, ಎಸ್.ಬಾಲರಾಜು, ಪರಿಮಳಾ ನಾಗಪ್ಪ, ಹರ್ಷವರ್ಧನ್, ಉಪವಿಭಾಗಾಧಿಕಾರಿ ಮಹೇಶ್, ಪ್ರಭಾರ ಡಿವೈಎಸ್ಪಿ ಲಕ್ಷ್ಮಯ್ಯ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು, ವಿವಿಧ ಇಲಾಖೆ ಅಧಿಕಾರಿಗಳು ಅಂತಿ ದರ್ಶನ ಪಡೆದರು.

ಎರಡು ಬಾರಿ ಶಾಸಕ: ಎಸ್.ಜಯಣ್ಣ ಅವರು 1994 ರಿಂದ 1999 ಹಾಗೂ 2013 ರಿಂದ 2018ರ ವರೆಗೆ ಕೊಳ್ಳೇಗಾಲ ಕ್ಷೇತ್ರದಿಂದ ಶಾಸಕರಾಗಿದ್ದರು. ಅನೇಕ ಜನಪರ ಕೆಲಸ ಮಾಡುವ ಮೂಲಕ ಕ್ಷೇತ್ರದ ಜನರ ಪ್ರೀತಿಗೆ ಪಾತ್ರರಾಗಿದ್ದರು. ಹಾಲಿ ರಾಜ್ಯ ಉಗ್ರಾಣ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದರು.

ಮೊನ್ನೆಯಷ್ಟೇ ಕೊಳ್ಳೇಗಾಲಕ್ಕೆ ಆಗಮಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಯಣ್ಣ ಅವರ ನೂತನ ಮನೆಯನ್ನು ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿದ್ದರು.

ಬೆಂಗಳೂರಿಗರಿಗೆ ಕೃಷ್ಣರ ಕಂಡರೆ ಅಚ್ಚುಮೆಚ್ಚು!




ಬೆಂಗಳೂರು: ಎಸ್.ಎಂ.ಕೃಷ್ಣ ಅವರನ್ನು ಬದಲಾವಣೆಗಳ ಹಾಗೂ ಅಭಿವೃದ್ಧಿಯ ಹರಿಕಾರ ಎಂದೇ ಬೆಂಗಳೂರಿಗರು ನೆನಪಿಸಿಕೊಳ್ಳುತ್ತಾರೆ. ಮುಖ್ಯಮಂತ್ರಿಯಾದಾಗ ಮಾಸ್ ಲೀಡರ್ ಎನಿಸಿದ್ದರು. ಬೆಂಗಳೂರನ್ನು ಸಿಂಗಾಪುರ ಮಾಡುವ ಕನಸಿನೊಂದಿಗೆ ಸಿಎಂ ಹುದ್ದೆ ನಿರ್ವಹಿಸತೊಡಗಿದ ಅವರು, ಆ ನಿಟ್ಟಿನಲ್ಲಿ ಕಾಯಕಲ್ಪಗಳನ್ನು ನಿರ್ಮಿಸುವ ಕೆಲಸ ಮಾಡಿದ್ದರು.

1999ರಿಂದ 2004ರವರೆಗೆ ಅವರು ಸಿಎಂ ಆಗಿದ್ದಾಗ ರಾಜ್ಯದ ಅಭಿವೃದ್ಧಿ ಕಾರ್ಯ ಚುರುಕುಗೊಂಡಿತು. ಅದರಲ್ಲೂ ಬೆಂಗಳೂರಿಗೆ ಕೃಷ್ಣ ಹೆಚ್ಚು ಮುತುವರ್ಜಿ ತೋರಿದರು. ಅದರ ಪರಿಣಾಮವಾಗಿ ಇಂದು ಬೆಂಗಳೂರು ನಗರವು ಸಿಲಿಕಾನ್ ಸಿಟಿ, ಐಟಿ-ಬಿಟಿ ಸಿಟಿ ಎನಿಸಲು ಸಾಧ್ಯವಾಯಿತು.

ಟ್ಯಾಕ್ಸ್ ಇನ್ಸೆಂಟಿವ್ಸ್: ಮದ್ದೂರಿನಲ್ಲಿ ಹುಟ್ಟಿದ ಎಸ್.ಎಂ.ಕೃಷ್ಣ ಅವರು ಅಮೆರಿಕದ ಡಲ್ಲಾಸ್ ಮತ್ತು ವಾಷಿಂಗ್ಟನ್‌ನಲ್ಲಿ ಉನ್ನತ ವ್ಯಾಸಂಗ ಮಾಡಿದವರಾದ್ದರಿಂದ ಅವರ ಆಡಳಿತದ ಬಗ್ಗೆ ಜನರಲ್ಲಿ ಸಾಕಷ್ಟು ನಿರೀಕ್ಷೆ ಇತ್ತು. ಈ ನಿರೀಕ್ಷೆ ಉಳಿಸಿಕೊಳ್ಳಲು ಅವರು ಶ್ರಮಿಸಿದ್ದರು. ಬೆಂಗಳೂರಿನಲ್ಲಿ ಮೂಲಭೂತ ಸೌಕರ್ಯ ಹೆಚ್ಚಿಸಿದ್ದನ್ನು ಬೆಂಗಳೂರಿಗರು ಮರೆಯುವಂತಿಲ್ಲ. ಉದ್ಯಮಗಳಿಗೆ ಇದ್ದ ನಿಯಮಗಳನ್ನು ಸಡಿಲಿಸಿ, ಟ್ಯಾಕ್ಸ್ ಇನ್ಸೆಂಟಿವ್‌ಗಳನ್ನು ನೀಡಿದರು. ಈ ನೀತಿಗಳಿಗೆ ಉದ್ಯಮ ವಲಯದಲ್ಲಿ ಮನ್ನಣೆ ಸಿಕ್ಕಿತು. ಹಲವು ಐಟಿ ಬಿಟಿ ಸಂಸ್ಥೆಗಳು ಬೆಂಗಳೂರಿನಲ್ಲಿ ನೆಲೆ ಕಾಣಲು ಈ ನೀತಿಗಳೇ ಕಾರಣವಾದವು.

ಕೃಷ್ಣ ಮದುವೆಗೆ ಮುನ್ನವೇ ಪ್ರೇಮಾರಿಗೆ ಶಾಕ್ ನೀಡಿದ್ದರು!



ಕೃಷ್ಣ-ಪ್ರೇಮಾ ವಿವಾಹ ಆಹ್ವಾನ ಪತ್ರಿಕೆ

ಬೆಂಗಳೂರು: ಎಸ್.ಎಂ.ಕೃಷ್ಣ ಅವರದು ಪ್ರೇಮವಿವಾಹ ಆಗಿರಲಿಲ್ಲ, ಅವರದು ಅರೇಂಜ್ಡ್ ಮ್ಯಾರೇಜ್. ಆದರೆ ಪ್ರೇಮಾ ಅವರನ್ನು ಮೊದಲ ಬಾರಿ ನೋಡಲು ಹೋದಾಗ ಕೃಷ್ಣ ಅವರು ನಾನು ಜೈಲಿಗೂ ಹೋಗುವ ಸಂಭವ ಇದೆ ಎಂದಿದ್ದರಂತೆ.

1966ರಲ್ಲಿ ಕೃಷ್ಣ-ಪ್ರೇಮಾ ಅವರ ಮದುವೆ ನಡೆಯಿತು. ಆಗ ಕೃಷ್ಣ ವಿರೋಧ ಪಕ್ಷದಲ್ಲಿದ್ದರು. ಪ್ರೇಮಾ ಅವರ ಊರು ತೀರ್ಥಹಳ್ಳಿ ಬಳಿಯ ಕುಡುಮಲ್ಲಿಗೆ. ಕಡಿದಾಳ್ ಮಂಜಪ್ಪ ಅವರ ಹೆಂಡತಿಯ ಅಣ್ಣ, ಪ್ರೇಮಾ ಅವರ ಅಕ್ಕನನ್ನು ಮದುವೆಯಾಗಿದ್ದರು. ಹೀಗೆ ಪ್ರೇಮಾ ಅವರ ಕುಟುಂಬ ಕಡಿದಾಳ್ ಮಂಜಪ್ಪನವರ ಕುಟುಂಬದೊಂದಿಗೆ ಸಂಬಂಧ ಹೊಂದಿತ್ತು. ಹೀಗೆ ಎರಡೂ ಕುಟುಂಬಗಳು ಗಂಡು-ಹೆಣ್ಣು ಭೇಟಿ ಮಾಡಿಸಲು ನಿರ್ಧರಿಸಿದರು.

ಪ್ರೇಮಾ ಅವರನ್ನು ನೋಡಲು ಕೃಷ್ಣ ಕುಟುಂಬ ಸಮೇತ ಕುಡುಮಲ್ಲಿಗೆಗೆ ಹೋದರು. ಪ್ರೇಮಾ ಅವರು ಅದಕ್ಕೂ ಮೊದಲು ಕೃಷ್ಣ ಅವರನ್ನು ನೋಡಿದ್ದರಂತೆ. ಇಬ್ಬರನ್ನು ಪ್ರತ್ಯೇಕವಾಗಿ ಮಾತನಾಡಲು ಕೂರಿಸಿದಾಗ, ಕೃಷ್ಣ ನಾನು ರಾಜಕೀಯದಲ್ಲಿದ್ದೇನೆ. ಹೀಗಾಗಿ ನನ್ನನ್ನು ಮದುವೆಯಾದರೆ ನಿನ್ನ ಬದುಕು ಹೂವಿನ ಹಾಸಿಗೆ ಆಗಲಾರದು. ನಾನು ವಿರೋಧ ಪಕ್ಷದಲ್ಲಿದ್ದೇನೆ. ಹೀಗಾಗಿ ಬಂಧನವೂ ಆಗುವ ಸಂಭವ ಇದೆ. ಇದಕ್ಕೆಲ್ಲ ತಯಾರಾಗಿದ್ದರೆ ಮುಂದುವರಿಯಬಹುದು ಎಂದು ಹೇಳಿದರಂತೆ.

ಪ್ರೇಮಾ ಅವರು ಇದಕ್ಕೆ ಓಕೆ ಎಂದರಂತೆ. ಹೀಗೆ ಇಬ್ಬರಿಗೂ ಒಪ್ಪಿಗೆಯಾಗಿ ಮದುವೆಯೂ ಆಯಿತಂತೆ. ಪ್ರೇಮಾ ಆರಂಭದಿಂದಲೂ ನನ್ನ ರಾಜಕೀಯ ಬದುಕಿಗೆ ಒತ್ತಾಸೆಯಾಗಿ ನಿಂತಿದ್ದವರು ಎಂದು ಕೃಷ್ಣ ಒಂದೆಡೆ ನೆನೆದಿದ್ದರು.

ಕೃಷ್ಣರದು ಧೀಮಂತ ನಡೆ; ಜೊತೆಗೆ ಜನಸಾಮಾನ್ಯರಲ್ಲಿ ಅತೀವ ಕಳಕಳಿ

ಬೆಂಗಳೂರು: ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು ಕರ್ನಾಟಕ ಕಂಡ ಡಿಗ್ನಿಫೈಡ್ ರಾಜಕಾರಣಿ ಎನ್ನುವುದನ್ನು ಪಕ್ಷಾತೀತವಾಗಿ ಎಲ್ಲರೂ ಒಪ್ಪುತ್ತಾರೆ. ಅವರು ರಾಜಕಾರಣದಲ್ಲಿ ಎಷ್ಟೇ ಎತ್ತರಕ್ಕೆ ಬೆಳೆದರೂ ಸಾಮಾನ್ಯ ವ್ಯಕ್ತಿಯಲ್ಲಿರುವ ಅಭಿರುಚಿಗಳನ್ನು ಎಂದೂ ಮರೆತಿರಲಿಲ್ಲ.

ಅನುಕರಣೀಯ ವ್ಯಕ್ತಿತ್ವ, ಧೀಮಂತ ನಡೆ, ಉತ್ತಮ ಸಂಘಟನಾ ಚತುರ ಹಾಗೂ ವಾಗ್ಮಿಯಾಗಿದ್ದ ಅವರು ಏನೇ ಮಾತನಾಡಿದರೂ ಅಳೆದು ತೂಗಿ ಮಾತನಾಡುವುದು ಅವರಿಗೆ ಸಿದ್ಧಿಸಿತ್ತು. ಕನ್ನಡ ಜೊತೆಗೆ ಇಂಗ್ಲಿಷ್ ಪ್ರೌಢಿಮೆ ನಿಬ್ಬೆರಗಾಗಿಸುವಂತಿತ್ತು. ಅಲ್ಲದೆ ಹಲವು ಭಾಷೆಗಳ ಮೇಲೆ ಒಳ್ಳೆ ಹಿಡಿತವಿತ್ತು. ಅವರು ಹೆಚ್ಚು ಇಂಗ್ಲಿಷ್ ಪುಸ್ತಕಗಳನ್ನು ಓದುತ್ತಿದ್ದರು.


ಕೃಷ್ಣ ಅವರಂತೆ ಉತ್ತಮ ಡ್ರೆಸಿಂಗ್ ಸೆನ್ಸ್ ಇರುವ ರಾಜಕಾರಣಿಗಳು ಕಾಣಸಿಗುವುದು ಬಲು ಅಪರೂಪ. ಖಾದಿಯಾಗಲೀ, ಸೂಟ್ ಆಗಲೀ ಅಥವಾ ಪ್ಯಾಂಟು ಶರ್ಟ್ ಆಗಲಿ ತಮಗೆ ತುಂಬಾ ಒಪ್ಪುವ ಬಟ್ಟೆಗಳನ್ನೇ ಅವರು ಧರಿಸುತ್ತಿದ್ದರು. ಬಟ್ಟೆ ವಿಚಾರದಲ್ಲಿ ಅವರು ತುಂಬಾ ಸೂಕ್ಷ್ಮತೆ ಹೊಂದಿದ್ದರು. ತಲೆಗೆ ವಿಗ್ ಸಹ ಅವರಿಗೆ ತುಂಬಾನೇ ಹೊಂದಿಕೊಂಡಿತ್ತು.

ಗಾಂಧಿ ಬಜಾರ್‌ನಲ್ಲಿರುವ ವಿದ್ಯಾರ್ಥಿ ಭವನದ ದೋಸೆ ಕೃಷ್ಣ ಅವರಿಗೆ ಅಚ್ಚುಮೆಚ್ಚು. ಅವರಿಗೆ ಊಟದ ವಿಚಾರದಲ್ಲೂ ಒಳ್ಳೆ ಟೇಸ್ಟ್ ಇತ್ತು ಸಿಎಂ ಆಗಿದ್ದಾಗ ಒಂದೆರಡು ಬಾರಿ ವಿದ್ಯಾರ್ಥಿ ಭವನದಲ್ಲಿ ದೋಸೆ ಸವಿದು ಹಳೆಯ ನೆನಪುಗಳನ್ನು ಮೆಲುಕು ಹಾಕಿದ್ದರು. ನಾಟಿ ಕೋಳಿ ಸಾಂಬಾರ್ ನೆಚ್ಚಿನ ರೆಸಿಪಿಯಾಗಿತ್ತು.

ಕೃಷ್ಣ ಅವರು ಟೆನ್ನಿಸ್ ಪ್ರಿಯರಾಗಿದ್ದರು. ಪ್ರತಿ ವರ್ಷ ಬರುವ ವಿಂಬಲ್ಡನ್ ಟೆನಿಸ್ ಪಂದ್ಯಾವಳಿಯನ್ನು ನೋಡಲು ಹೋಗುತ್ತಿದ್ದರು. ಆಸ್ಟ್ರೇಲಿಯಾದ ಟೆನ್ನಿಸ್ ಫ್ರಾಂಕ್ ಸೆಡ್ಮನ್ ಅವರ ನೆಚ್ಚಿನ ಆಟಗಾರ. ಬಿಡುವಿನ ವೇಳೆಯಲ್ಲಿ ಅವರು ಟೆನ್ನಿಸ್ ಅಂಗಳದಲ್ಲಿ ತಮ್ಮ ಪ್ರತಿಭೆ ತೋರುತ್ತಿದ್ದರು.

ರಾಜಕೀಯ ಬದುಕಿನಲ್ಲಿ ಎಷ್ಟೇ ಒತ್ತಡವಿರಲಿ, ಎಷ್ಟೇ ಏರುಪೇರುಗಳಿರಲಿ ನಗುನಗುತ್ತಾ ಎಲ್ಲವನ್ನೂ ಎದುರಿಸುತ್ತಿದ್ದ ಅವರು, ರಾಜ್ಯದ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ತಮ್ಮ ಪತ್ನಿ ಪ್ರೇಮಾ ಅವರೊಂದಿಗೆ ಹಲವಾರು ಹಾಸ್ಯಗೋಷ್ಠಿಗಳಿಗೆ ಹೋಗುತ್ತಿದ್ದರು.

ಕೆಲವೇ ದಿನದಲ್ಲಿ ಜಾಗ ಮಂಜೂರು ಮಾಡಿಸಿದ್ದರು




ಎಸ್.ಎಂ.ಕೃಷ್ಣ ಅವರು ಮುಖ್ಯಮಂತ್ರಿಯಾಗಿದ್ದಾಗ 2004ರಲ್ಲಿ ಮೈಸೂರಿನ ತ್ಯಾಗರಾಜ ರಸ್ತೆಯಲ್ಲಿರುವ ಮೈಸೂರು ಪತ್ರಕರ್ತರ ಸಂಘದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭಕ್ಕೆ ಆಗಮಿಸಿದ್ದರು. ಆ ಸಂದರ್ಭದಲ್ಲಿ ಸಂಘದ ಪರವಾಗಿ ಪ್ರಧಾನ ಕಾರ್ಯದರ್ಶಿಯಾಗಿದ್ದ ನಾನು ಪತ್ರಕರ್ತರಿಗೆ ನಿವೇಶನ ಕಲ್ಪಿಸಿಕೊಡಬೇಕೆಂದು ಅಧ್ಯಕ್ಷರಾದ ರಾಜಶೇಖರ ಕೋಟಿ ಹಾಗೂ ಉಪಾಧ್ಯಕ್ಷ ಕೆ.ಬಿ.ಗಣಪತಿ ಯವರ ಸಮ್ಮುಖದಲ್ಲಿ ಮನವಿ ಪತ್ರ ಸಲ್ಲಿಸಿದೆ. ಅದಾದ ಕೆಲ ದಿನಗಳಲ್ಲಿ ಪತ್ರಕರ್ತರ ಸಂಘಕ್ಕೆ ಆರ್.ಟಿ.ನಗರದ ಹತ್ತಿರ ಮುಡಾದಿಂದ ಆರು ಎಕರೆ ಜಾಗವನ್ನು ಮಂಜೂರು ಮಾಡಿಸಿಕೊಟ್ಟರು. ಅಲ್ಲಿ 95 ಜನ ಪತ್ರಕರ್ತರಿಗೆ ನಿವೇಶನಗಳನ್ನು ಮಾಡಿಕೊಡ ಲಾಯಿತು. ನಮ್ಮ ಮನವಿಗೆ ತಕ್ಷಣ ಸ್ಪಂದಿಸಿದ ಎಸ್.ಎಂ.ಕೃಷ್ಣ ಅವರಿಗೆ ಪತ್ರಕರ್ತರು ಸದಾ ಅಭಾರಿಯಾಗಿರುವುದನ್ನು ಈ ಸಂದರ್ಭದಲ್ಲಿ ನೆನಪು ಮಾಡಿಕೊಳ್ಳುತ್ತಿದ್ದೇನೆ.

-ಎಸ್.ಎಂ.ಜಂಬುಕೇಶ್ವರ, ಛಾಯಾಪತ್ರಕರ್ತ

ಅಪರೂಪದ ಸಜ್ಜನ ರಾಜಕಾರಣಿ ಎಸ್.ಎಂ.ಕೃಷ್ಣ

ಮೈಸೂರು ರಾಮಕೃಷ್ಣ ಆಶ್ರಮ ಸಂತಾಪ



ಮೈಸೂರು,ಡಿ.10(ಪಿಎಂ)- ಸಭ್ಯತೆ, ಸುಸಂಸ್ಕೃತ ಹಾಗೂ ಮುತ್ಸದಿತನದ ಅಪರೂಪದ ರಾಜಕಾರಣಿ ಎಸ್.ಎಂ.ಕೃಷ್ಣ ಅವರ ನಿಧನ ನಾಡಿಗೆ ತುಂಬಲಾರದ ನಷ್ಟ ಉಂಟು ಮಾಡಿದೆ ಎಂದು ಮೈಸೂರು ರಾಮಕೃಷ್ಣ ಆಶ್ರಮ ಸಂತಾಪ ಸೂಚಿಸಿದೆ.

ಎಸ್.ಎಂ.ಕೃಷ್ಣ ಅವರನ್ನು ಪಕ್ಷಭೇದ ಮರೆತು ಎಲ್ಲರೂ ಪ್ರೀತಿ ಗೌರವದಿಂದ ಕಾಣುತ್ತಿದ್ದರು. ಶ್ರೀಯುತರು ಅನೇಕ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ಪರಿಪೂರ್ಣ ಜೀವನ ನಡೆಸಿದ್ದಾರೆ. ಇವರು ಕರ್ನಾಟಕ ಮುಖ್ಯಮಂತ್ರಿಗಳಾಗಿ ಭಾರತ ಸರ್ಕಾರದ ವಿದೇಶಾಂಗ ಸಚಿವರಾಗಿ ಹಾಗೂ ಮಹಾರಾಷ್ಟ್ರದ ರಾಜ್ಯಪಾಲರಾಗಿಯೂ ಜನಸಮುದಾಯ ಹಾಗೂ ದೇಶಕ್ಕೆ ಅನನ್ಯ ಸೇವೆ ಸಲ್ಲಿಸಿದ್ದಾರೆ.

ಮೈಸೂರಿನ ಶ್ರೀರಾಮಕೃಷ್ಣ ವಿದ್ಯಾಶಾಲೆಯಲ್ಲಿ ಕೃಷ್ಣ ಅವರು ವಿದ್ಯಾಭ್ಯಾಸ ಮಾಡುವಾಗಲೇ ಜೀವನದ ಮೌಲ್ಯಗಳನ್ನು ಅಳವಡಿಸಿಕೊಂಡಿದ್ದರು. ಇವರು ಸ್ವಾಮಿ ವೇದಾನಂದಜಿ, ಸ್ವಾಮಿ ಸುರೇಶಾ ನಂದಜೀ ಮತ್ತು ಸ್ವಾಮಿ ಶಾಂಭ ವಾನಂದಜಿ, ಸ್ವಾಮಿ ಸೋಮ ನಾಥಾನಂದಜಿಯವರ ಸತ್ಸಂಗದ ದಿವ್ಯಾನುಭವವನ್ನು ಪಡೆದಿದ್ದರು. ಮೈಸೂರಿನ ರಾಮಕೃಷ್ಣ ಆಶ್ರಮದ ಹಿರಿಯ ಸಾಧುಗಳನ್ನು ಅತ್ಯಂತ ಗೌರವದಿಂದ ಸ್ಮರಿಸುತ್ತಿದ್ದರು. ಸವಾಲು, ಸಂಕಷ್ಟಗಳನ್ನು ಸಮರ್ಥವಾಗಿ ಎದುರಿಸಲು ಶ್ರೀರಾಮಕೃಷ್ಣ ಆಶ್ರಮ ನೀಡಿದಂತಹ ಉತ್ತಮ ಶಿಕ್ಷಣ ನೆರವಾಯಿತು ಎಂದು ಕೃಷ್ಣ ಅವರೇ ಸ್ವತಃ ಹೇಳಿಕೊಂಡಿದ್ದಾರೆ.

ಅವರಿಗೆ ಕೆಂಪೇಗೌಡ ಪ್ರಶಸ್ತಿ ಬಂದಾಗ ಪ್ರಶಸ್ತಿ ಪ್ರದಾನ ಸಮಾರಂಭದಲ್ಲೇ ತಮಗೆ ಬಂದ ಗೌರವಧನವನ್ನು ಮೈಸೂರಿನ ರಾಮಕೃಷ್ಣ ಆಶ್ರಮಕ್ಕೆ ಅರ್ಪಿಸುವುದಾಗಿ ಘೋಷಿಸಿ, ಆಶ್ರಮ ಕುರಿತ ತಮ್ಮ ಗೌರವ ಭಾವ ವ್ಯಕ್ತಪಡಿಸಿದ್ದರು. ಅವರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಬಂದಾಗ, ಪ್ರಶಸ್ತಿ ಜೊತೆಗೆ ಲಭಿಸಿದ 5 ಲಕ್ಷ ನಗದಿನ ಜೊತೆಗೆ ವೈಯಕ್ತಿಕವಾಗಿ ಹೆಚ್ಚುವರಿ 2 ಲಕ್ಷ ಒಳಗೊಂಡಂತೆ ಒಟ್ಟು 7 ಲಕ್ಷ ನಗದನ್ನು ಮೈಸೂರಿನಲ್ಲಿ ನಿರ್ಮಾಣವಾಗುತ್ತಿರುವ ವಿವೇಕ ಸ್ಮಾರಕಕ್ಕೆ ಮೊದಲ ದೇಣಿಗೆಯಾಗಿ ನೀಡಿದ್ದರು. ಇದು ಸ್ವಾಮಿ ವಿವೇಕಾನಂದರ ಬಗ್ಗೆ ಅವರಿಗಿರುವ ಅಪಾರ ಅಭಿಮಾನವನ್ನು ಸೂಚಿಸುತ್ತದೆ.

ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಮುತ್ಸದಿತನದಿಂದ ನಾಡಿಗೆ ಎದುರಾದ ಸವಾಲುಗಳನ್ನು ಸಮರ್ಥವಾಗಿ ನಿಭಾಯಿಸಿದ ಕೀರ್ತಿ ಕೃಷ್ಣರಿಗೆ ಸಲ್ಲುತ್ತದೆ. ರಾಜ್ಯದ ಅಭಿವೃದ್ಧಿಗೆ ಅವರ ಕೊಡುಗೆ ಅಪಾರ. ಅವರ ಕುಟುಂಬಕ್ಕೆ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಮತ್ತು ಕೃಷ್ಣರ ಆತ್ಮಕ್ಕೆ ದೇವರು ಚಿರಶಾಂತಿ ಕರುಣಿಸಲಿ ಎಂದು ದಿವ್ಯತ್ರಯರಲ್ಲಿ ಶ್ರೀರಾಮಕೃಷ್ಣ ಆಶ್ರಮದ ಯತಿಗಳು, ಶಿಕ್ಷಕರು, ಸಿಬ್ಬಂದಿ ಹಾಗೂ ಹಳೇ ವಿದ್ಯಾರ್ಥಿಗಳು ಪ್ರಾರ್ಥಿಸುವುದಾಗಿ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

ತನ್ನೂರಿನ ದೇವಸ್ಥಾನ ಜೀರ್ಣೋದ್ಧಾರ ಮಾಡಿದ್ದ ಕೃಷ್ಣ

ಬೆಂಗಳೂರು: ಎಸ್.ಎಂ.ಕೃಷ್ಣ ಅವರು ತಮ್ಮ ಹುಟ್ಟೂರು ಸೋಮನಹಳ್ಳಿಯ ದೇವಸ್ಥಾನದ ಜೀರ್ಣೋದ್ಧಾರ ಮಾಡಿಸಿ, ಮಂಡಲ ಪೂಜೆ ನೆರವೇರಿಸಿದ್ದರು. ಎಸ್.ಎಂ.ಕೃಷ್ಣ ಅವರು ಕೆಲವೇ ದಿನಗಳ ಹಿಂದೆಯಷ್ಟೇ ತಮ್ಮೂರಿನ ಆಂಜನೇಯ ಸ್ವಾಮಿ, ಮಾರಮ್ಮ, ಬೋರೆದೇವರ ದೇವಸ್ಥಾನವನ್ನು 45 ಲಕ್ಷ ರೂ. ವೆಚ್ಚದಲ್ಲಿ ಜೀರ್ಣೋದ್ಧಾರ ಮಾಡಿಸಿದ್ದರು. ಬಳಿಕ 48 ದಿನಗಳ ಮಂಡಲ ಪೂಜೆಯನ್ನೂ ಮಾಡಿಸಿದರು. ಆದರೆ ಮಂಡಲ ಪೂಜೆ ನಡುವೆಯೇ ಅವರು ತೀವ್ರ ಅನಾರೋಗ್ಯಕ್ಕೀಡಾಗಿದ್ದರು. ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ದುರಾದೃಷ್ಟವಶಾತ್ ತಾವು ಜೀರ್ಣೋದ್ಧಾರ ಮಾಡಿಸಿದ ದೇವಸ್ಥಾನಕ್ಕೆ ಹೋಗಲು ಆಗಲಿಲ್ಲ. ತಮ್ಮ ಅಂತಿಮ ದಿನಗಳಲ್ಲಿಯೂ ತಮ್ಮ ಹುಟ್ಟೂರಿನ ಮೇಲೆ ಅಪಾರ ಪ್ರೀತಿ-ಕಾಳಜಿ ತೋರಿಸಿದ್ದರು. ಅವರ ಸೇವೆಯನ್ನು ಸ್ಮರಿಸಿಕೊಂಡು ಗ್ರಾಮಸ್ಥರು ಭಾವುಕರಾಗಿದ್ದಾರೆ.

ಕೃಷ್ಣರ ಅಂತ್ಯಕ್ರಿಯೆಯಲ್ಲಿ ಸಿಎಂ ಸಿದ್ದರಾಮಯ್ಯ ಭಾಗಿ

ಬೆಂಗಳೂರು, ಡಿ.10- ಎಸ್.ಎಂ.ಕೃಷ್ಣ ಅವರ ಅಂತಿಮ ಸಂಸ್ಕಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಭಾಗವಹಿಸಲಿದ್ದಾರೆ. ಬುಧವಾರ ಬೆಳಗ್ಗೆ 11ಕ್ಕೆ ಹೆಲಿಕಾಪ್ಟರ್ ಮೂಲಕ ಕೊಳ್ಳೆಗಾಲಕ್ಕೆ ತೆರಳಿ, ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷ ದಿವಂಗತ ಎಸ್.ಜಯಣ್ಣ ಅವರ ಅಂತಿಮ ದರ್ಶನ ಪಡೆದು, ಮಧ್ಯಾಹ್ನ 2 ಗಂಟೆ ವೇಳೆಗೆ ಮಂಡ್ಯದ ಮದ್ದೂರು ತಾಲೂಕು ಸೋಮನಹಳ್ಳಿಗೆ ಆಗಮಿಸಿ ಮಾಜಿ ಸಿಎಂ ಕೃಷ್ಣ ಅವರ ಅಂತಿಮ ಸಂಸ್ಕಾರದಲ್ಲಿ ಭಾಗವಹಿಸಲಿದ್ದಾರೆ.

ಸಿಂಗ್ ಸಂಪುಟದಲ್ಲಿ ನಂ.2 ನಾಯಕ ಕೃಷ್ಣ

ಡಾ.ಮನಮೋಹನ್‌ಸಿಂಗ್ ಸಂಪುಟದಲ್ಲಿ ಕೇಂದ್ರ ವಿದೇಶಾಂಗ ಸಚಿವರಾಗಿದ್ದ ಎಸ್.ಎಂ.ಕೃಷ್ಣ ಸಂಪುಟದ ನಂಬರ್ 2 ನಾಯಕರಾಗಿದ್ದರು. ಪ್ರಧಾನಿ ಬಿಟ್ಟರೆ, ಎರಡನೇ ನಾಯಕರೆಂದೇ ಗುರುತಿಸಿಕೊಂಡಿದ್ದ ಕೃಷ್ಣ ಅವರಿಗೆ ಎಲ್ಲಾ ಹುದ್ದೆ ದೊರೆಯಿತು. ಆದರೆ ಪ್ರಧಾನಿ ಹಾಗೂ ರಾಷ್ಟ್ರಪತಿ ಹುದ್ದೆ ಮಾತ್ರ ಸಿಗಲಿಲ್ಲ.

ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಬರೆದಿದ್ದ ಆತ್ಮಚರಿತ್ರೆಯಲ್ಲಿ ಕೃಷ್ಣರಿಗೆ 2009ರಲ್ಲಿ ಪ್ರಧಾನಿ ಹುದ್ದೆಗೆ ಹೆಸರು ಕೇಳಿ ಬಂದಿತ್ತಾದರೂ ಅಂತಿಮವಾಗಿ ಪಕ್ಷದ ಹೈಕಮಾಂಡ್ ಸಿಂಗ್‌ರನ್ನೇ ಮುಂದುವರೆಸುವ ನಿರ್ಧಾರ ಕೈಗೊಂಡಿತು ಎಂದು ಬರೆದುಕೊಂಡಿದ್ದರು

ಕೃಷ್ಣರ ನೆನೆದು ಕಣ್ಣೀರಿಟ್ಟ ಡಿಸಿಎಂ ಡಿಕೆಶಿ



ಬೆಂಗಳೂರು, ಡಿ.10- ದಿವಂಗತ ಎಸ್.ಎಂ.ಕೃಷ್ಣ ಅವರ ಬಗ್ಗೆ ಮಾತನಾಡುವ ವೇಳೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಣ್ಣೀರಾದರು.

ನನ್ನ ತಂದೆಯನ್ನೇ ಕಳೆದುಕೊಂಡಷ್ಟು ನೋವು ಆಗುತ್ತಿದೆ ಎಂದು ಭಾವುಕರಾದರು. ನನ್ನ ಅವರ ಸಂಬಂಧ ತಂದೆ ಮಗನ ಸಂಬಂಧ ಇದ್ದಂತೆ ಎಂದು ಬಿಕ್ಕಿ ಅತ್ತರು. ತಕ್ಷಣ ತಡೆದು ಕೃಷ್ಣ ಅವರ ಸಾಧನೆ ಬಗ್ಗೆ ನಾನೇನು ಹೇಳಲಿ? ಎಲ್ಲ ನಿಮ್ಮ ಕಣ್ಣ ಮುಂದೆ ಇದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದರು.

ರಾಜ್ಯಕ್ಕೆ ಅವರ ಕೊಡುಗೆ ಅಪಾರವಾದದ್ದು. ರಾಜ್‌ಕುಮಾರ್ ಅಪಹರಣ ಆದಾಗ ಅವರು ತುಂಬಾ ನೋವು ಅನುಭವಿಸಿದರು. ಆ ನೋವಿನಿಂದ ಆಚೆ ಕರೆದುಕೊಂಡು ಬರಲು ತುಂಬಾ ಶ್ರಮ ಪಟ್ಟಿದ್ದೇವೆ ಎಂದು ಹಿಂದಿನ ಘಟನೆಗಳನ್ನು ಡಿಕೆಶಿ ಮೆಲುಕು ಹಾಕಿದರು.

ಇನ್ನು ಗುರುವಾರ ದಂಡೇ ಎಸ್.ಎಂ.ಕೃಷ್ಣ ಅವರ ದರ್ಶನಕ್ಕಾಗಿ ಸದಾಶಿವನಗರದ ನಿವಾಸಕ್ಕೆ ಭೇಟಿ ನೀಡಿತ್ತು ಡಿಕೆಶಿ, ಎಸ್.ಎಂ.ಕೃಷ್ಣ ಅವರ ನಿವಾಸಕ್ಕೆ ಭೇಟಿ ನೀಡಿ ದರ್ಶನ ಪಡೆದರು. ಆಗಲೂ ಅವರು ಬಿಕ್ಕಿಬಿಕ್ಕಿ ಅತ್ತರು.



ಎಸ್‌ಎಂ ಕೃಷ್ಣ ಅಭಿಮಾನಿ ಬಳಗ ಅಸ್ತಿತ್ವಕ್ಕೆ ತಂದು ಆ ಮೂಲಕ ಕೈಲಾದ ಮಟ್ಟಿಗೆ ಸಮಾಜ ಸೇವೆ ಮಾಡುತ್ತಾ ಬರುತ್ತಿರುವ ವಿಕ್ರಾಂತ್.ಪಿ. ದೇವೇಗೌಡ, ಎಸ್.ಎಂ.ಕೃಷ್ಣ ಅವರೊಂದಿಗೆ ನಿಕಟ ಸಂಪರ್ಕ ಹೊಂದಿದ್ದರು

ನಮ್ಮ ಎಸ್.ಎಂ.ಕೃಷ್ಣರದ್ದು ಪ್ರೀತಿಯ ರಾಜಕಾರಣ: ಜಿಟಿಡಿ



ಬೆಳಗಾವಿ, ಡಿ.10- ಎಸ್.ಎಂ.ಕೃಷ್ಣ ಅವರು ಎಂದೂ ದ್ವೇಷದ ರಾಜಕಾರಣ ಮಾಡಲಿಲ್ಲ, ಪ್ರೀತಿಯ ರಾಜಕಾರಣ ಮಾಡಿದರು ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಸ್ಮರಿಸಿಕೊಂಡರು.

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಸಂತಾಪ ಸೂಚನೆ ವೇಳೆ ಮಾತನಾಡಿದ ಅವರು, ಎರಡು ನಿದರ್ಶನಗಳ ಮೂಲಕ ಎಸ್.ಎಂ.ಕೃಷ್ಣರ ಮಾದರಿ ರಾಜಕಾರಣವನ್ನು ಬಣ್ಣಿಸಿದರು.

ಎಸ್.ಎಂ .ಕೃಷ್ಣ ಅವರು ಮುಖ್ಯಮಂತ್ರಿಗಳಾಗಿ, ಡಿ.ಕೆ.ಶಿವಕುಮಾರ್ ಸಹಕಾರ ಸಚಿವರಾಗಿದ್ದ ಸಂದರ್ಭದಲ್ಲಿ ಸಹಕಾರ ಮಹಾಮಂಡಳದ ಅಧ್ಯಕ್ಷರ ಚುನಾವಣೆ ನಿಗದಿಯಾಗಿತ್ತು. ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದ್ದರೂ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದ್ವೇಷ ರಾಜಕಾರಣ ಮಾಡದೇ, ನ್ಯಾಯಯುತವಾಗಿ ಚುನಾವಣೆ ನಡೆಸಲು ಅನುವು ಮಾಡಿಕೊಟ್ಟು, ನಾನು ಮಹಾಮಂಡಳದ ಅಧ್ಯಕ್ಷನಾಗಲು ನೆರವಾದರು.

ಅವರು ಸಿಎಂ ಆಗಿದ್ದಾಗಲೇ ಮೈಸೂರು ಜಿಲ್ಲಾ ಪಂಚಾಯ್ತಿ ಅಧ್ಯಕ್ಷರ ಚುನಾವಣೆ ನಡೆಯಿತು. ಸರ್ಕಾರದ 6 ಜನ ಸಚಿವರು ಮೈಸೂರಿಗೆ ಬಂದು ವಾಸ್ತವ್ಯ ಹೂಡಿ, ಅಧಿಕಾರ ಹಿಡಿಯಲೇಬೇಕು ಎಂದು ಎಲ್ಲಾ ರೀತಿಯ ಪ್ರಯತ್ನಗಳನ್ನೂ ಮಾಡಿದರು. ಆದರೆ ಅವರ ಪ್ರಯತ್ನಗಳೆಲ್ಲಾ ವಿಫಲವಾದಾಗ ಚುನಾವಣೆಯನ್ನೇ ಮುಂದೂಡಲು ಸಿದ್ಧತೆ ಮಾಡಿಕೊಂಡಿದ್ದರು. ಆಗ ನಾನು ದೂರವಾಣಿ ಮೂಲಕ ಎಸ್.ಎಂ.ಕೃಷ್ಣ ಅವರನ್ನು ಸಂಪರ್ಕಿಸಿ, ಆ ಎಲ್ಲಾ ಬೆಳವಣಿಗೆ ಬಗ್ಗೆ ಮಾಹಿತಿ ನೀಡಿದಾಗ ಪರಿಸ್ಥಿತಿಯೇ ಬದಲಾಯಿತು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದ್ವೇಷದ ರಾಜಕಾರಣ ಮಾಡಬಾರದು ಎಂದು ನಿಗದಿಯಂತೆ ಚುನಾವಣೆ ನಡೆಸಲು ನಿರ್ದೇಶನ ನೀಡಿದರು. ಆ ವೇಳೆ ಮೈಸೂರು ಹೊರತುಪಡಿಸಿ, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯ್ತಿಯಲ್ಲೂ ಕಾಂಗ್ರೆಸ್ ಅಧಿಕಾರ ಹಿಡಿಯಿತು. ಮೈಸೂರು ಜಿಲ್ಲಾ ಪಂಚಾಯ್ತಿಯಲ್ಲಿ ಜೆಡಿಎಸ್ ಅಧಿಕಾರಕ್ಕೆ ಬಂದು ಕಡಕೊಳ ನಾಗರಾಜ್ ಅಧ್ಯಕ್ಷರಾದರು. ಕೃಷ್ಣ ಅವರು ದ್ವೇಷದ ರಾಜಕಾರಣ ಮಾಡಿದ್ದರೆ ಮೈಸೂರು ಜಿಲ್ಲಾ ಪಂಚಾಯ್ತಿಯಲ್ಲೂ ಗೆಲ್ಲಬಹುದಿತ್ತು. ಆದರೆ ಅವರು ಹಾಗೆ ಮಾಡದೆ ಮಾದರಿಯಾದರು ಎಂದರು.

1989ರ ಚುನಾವಣೆಯಲ್ಲಿ ಎಸ್.ಎಂ.ಕೃಷ್ಣರವರು ಗೆದ್ದರು. 1992ರಲ್ಲಿ ಅವರೇ ಮುಖ್ಯಮಂತ್ರಿ ಎಂದು ಘೋಷಿಸಲಾಗಿತ್ತು. ಅವರು ದಂಪತಿ ಸಮೇತ ಮಹದೇಶ್ವರ ಬೆಟ್ಟಕ್ಕೆ ಪೂಜೆಗೆ ಹೋಗಿದ್ದರು. ಅವರು ಮುಖ್ಯಮಂತ್ರಿಯಾಗುತ್ತಾರೆ ಎಂದು ನಾವೆಲ್ಲರೂ ವಿಧಾನಸೌಧದಲ್ಲಿ ಜಮಾಯಿಸಿದ್ದೆವು. ಆದರೆ ಕೊನೆ ಕ್ಷಣದಲ್ಲಿ ಟಪಾಲಿನಲ್ಲಿ ವೀರಪ್ಪ ಮೊಯಿಲಿ ಅವರ ಹೆಸರು ಬಂತು. ವೀರಪ್ಪ ಮೊಯಿಲಿಯವರು ಮುಖ್ಯಮಂತ್ರಿಯಾದರು. ಆದರೂ ಕೃಷ್ಣ ಅವರು ಪ್ರತಿಭಟನೆ ಮಾಡಲಿಲ್ಲ. ಯಾವುದೇ ರೀತಿಯಲ್ಲೂ ವಿರೋಧ ಮಾಡದೆ ಉಪಮುಖ್ಯಮಂತ್ರಿಯಾದರು. ನಂತರ 1999ರ ಚುನಾವಣೆಯಲ್ಲಿ ಕೋಲಾರದ ಕುರುಡುಮಲೆ ಗಣಪತಿ ದೇವಸ್ಥಾನದಿಂದ ಡಿ.ಕೆ..ಶಿವಕುಮಾರ್ ನೇತೃತ್ವದಲ್ಲಿ ಎಲ್ಲಾ ಹಿರಿಯರು ಸೇರಿ ಪಾಂಚಜನ್ಯ ಯಾತ್ರೆ ಪ್ರಾರಂಭ ಮಾಡುತ್ತಾರೆ. ಆಗ ಕಾಂಗ್ರೆಸ್ ಅಧಿಕಾರಕ್ಕೆ ಬಂದಿತು. ಅದೇ ರೀತಿ 2004ರ ಚುನಾವಣೆಯಲ್ಲಿ ಅವಧಿಗೆ ಮುನ್ನವೇ ಕೃಷ್ಣರು ಚುನಾವಣೆಗೆ ಹೋದರು. ಆಗ ಕಾಂಗ್ರೆಸ್‌ಗೆ ನಿರೀಕ್ಷಿತ ಸ್ಥಾನ ದೊರಕಲಿಲ್ಲ. ಕೃಷ್ಣ ಅವರು ಅಧಿಕಾರ ಬಿಡಬೇಕಾಯಿತು. ಆಗ ಧರ್ಮಸಿಂಗ್‌ರವರು ಮುಖ್ಯಮಂತ್ರಿಗಳಾದರು. ಇಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಉಪಮುಖ್ಯಮಂತ್ರಿಯಾದರು ಎಂದು ತಿಳಿಸಿದರು.

ಇಂದಿನ ದಿನಗಳಲ್ಲಿ ದ್ವೇಷ ಮಾಡದೇ ಇರುವಂತಹ ರಾಜಕಾರಣಿಗಳು ವಿರಳ. ಗೆಲ್ಲಿಸುವುದಕ್ಕಿಂತ ಸೋಲಿಸಲೇ ಬೇಕೆನ್ನುವ ಜನ ಹೆಚ್ಚಿದ್ದಾರೆ. ಆದರೆ ಎಸ್.ಎಂ.ಕೃಷ್ಣ ಅವರು ಪ್ರೀತಿಯ ರಾಜಕಾರಣ ಮಾಡಿದರು. ಅಪ್ರತಿಮ ನಾಯಕ, ಅಪರೂಪದ ರಾಜಕಾರಣಿ, ವರ್ಣರಂಜಿತ ವಿಶೇಷ ವ್ಯಕ್ತಿತ್ವದ ಕನ್ನಡ ನಾಡಿನ ಸುಪುತ್ರ ಎಸ್.ಎಂ.ಕೃಷ್ಣ ಅವರ ನಿಧನದಿಂದ ರಾಜ್ಯ ಹಾಗೂ ರಾಷ್ಟ್ರಕ್ಕೆ ತುಂಬಲಾರದ ನಷ್ಟ ಆಗಿದೆ ಎಂದು ಕಂಬನಿ ಮಿಡಿದರು.

ತಿ.ನರಸೀಪುರದಲ್ಲಿ ಮಾಜಿ ಸಿಎಂ ಎಸ್.ಎಂ.ಕೃಷ್ಣಗೆ ಶ್ರದ್ಧಾಂಜಲಿ



ಮಾಜಿ ಸಿಎಂ ಎಸ್.ಎಂ.ಕೃಷ್ಣ

ತಿ.ನರಸೀಪುರ, ಡಿ.10– ರಾಜ್ಯ ಕಂಡ ಶ್ರೇಷ್ಠ ರಾಜಕಾರಣಿ, ದಕ್ಷ ಆಡಳಿತಗಾರ, ಚಿಂತಕ, ಅಭಿವೃದ್ಧಿಯ ಹರಿಕಾರರೂ ಆದ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರು ನಿಧನರಾದ ಹಿನ್ನೆಲೆಯಲ್ಲಿ ಪಟ್ಟಣದ ವಿದ್ಯೋದಯ ಕಾಲೇಜು ಸಭಾಂಗಣದಲ್ಲಿ ವಿದ್ಯೋದಯ ಶಿಕ್ಷಣ ಸಂಸ್ಥೆ ಹಾಗೂ ತಾಲೂಕು ಕೃಷಿಕ ಸಮಾಜ ಮತ್ತು ತಿರುಮಕೂಡಲಿನ ಚೌಡಯ್ಯ ವೃತ್ತದಲ್ಲಿ ಡಿ.ಕೆ. ಶಿವಕುಮಾರ್ ಅಭಿಮಾನಿ ಬಳಗದಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು.


ಚೌಡಯ್ಯ ವೃತ್ತ: ತಿರುಮಕೂಡಲಿನ ಚೌಡಯ್ಯ ವೃತ್ತದಲ್ಲಿ ನಡೆದ ಸಂತಾಪ ಸಭೆಯಲ್ಲಿ ಎಸ್.ಎಂ.ಕೃಷ್ಣ ಅವರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಮೌನಾಚರಿಸಿ ಮಾತನಾಡಿದ ಡಿ.ಕೆ.ಶಿವಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷ ಆರ್. ಚೇತನ್, ರಾಜ್ಯ ಕಂಡ ಧೀಮಂತ ರಾಜಕಾರಣಿ ಎಸ್.ಎಂ.ಕೃಷ್ಣ ಅವರ ನಿಧನ ದೇಶ, ರಾಜ್ಯ ಹಾಗೂ ಒಕ್ಕಲಿಗ ಸಮುದಾಯಕ್ಕೆ ತುಂಬಲಾರದ ನಷ್ಟವಾಗಿದೆ ಎಂದರು.

1999ರಲ್ಲಿ ಮಂಡ್ಯದ ಮದ್ದೂರು ಕ್ಷೇತ್ರದಿಂದ ಸ್ಪರ್ಧಿಸಿ ಗೆದ್ದು, ಮುಖ್ಯಮಂತ್ರಿಯಾಗಿ ಅವಧಿ ಪೂರೈಸಿ ಉತ್ತಮ ಆಡಳಿತ ನಡೆಸಿ ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗೆ ಮುನ್ನುಡಿ ಬರೆದರು. ತಮ್ಮ ಅಧಿಕಾರವಧಿಯಲ್ಲಿ ಸಾಲು ಸಾಲು ಸಂಕಷ್ಟ ಎದುರಿಸಿದ್ದ ಎಸ್.ಎಂ. ಕೃಷ್ಣ ಸುಭದ್ರ ಆಡಳಿತ ಕೊಟ್ಟು ಕರ್ನಾಟಕದ ಅತ್ಯುತ್ತಮ ಸಿಎಂ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು ಎಂದು ಬಣ್ಣಿಸಿದರು.

ರಾಜ್ಯ ಹಿಂದುಳಿದ ವರ್ಗಗಳ ಕೆಪಿಸಿಸಿ ಕಾರ್ಯದರ್ಶಿ ಎಂ.ರಮೇಶ್ ಮಾತನಾಡಿ, ಆಗಷ್ಟೇ ಬೆಳೆಯುತ್ತಿದ್ದ ಬೆಂಗಳೂರಿಗೆ ಸಾಫ್ಟ್‌ವೇರ್ ಉದ್ಯಮ ತಂದ ಹಿರಿಮೆ ಎಸ್.ಎಂ.ಕೃಷ್ಣ ಅವರಿಗೆ ಸಲ್ಲುತ್ತದೆ. ಈ ವೇಳೆ ಸರ್ಕಾರದಿಂದ ಉತ್ತೇಜನ ನೀಡಿದ ಫಲವಾಗಿ ಬೆಂಗಳೂರಿಗೆ ಅನೇಕ ಐಟಿ ಬಿಟಿ ಉದ್ಯಮಗಳು ರಾಜ್ಯಕ್ಕೆ ಕಾಲಿಡಲು ಸಾಧ್ಯವಾಯಿತು. ಬೆಂಗಳೂರು ಸಿಲಿಕಾನ್ ಸಿಟಿಯಾಗಿ ಬದಲಾಗಲು ಎಸ್.ಎಂ.ಕೃಷ್ಣ ಕೊಡುಗೆ ಅಪಾರ. ವರ್ಣರಂಜಿತ ರಾಜಕಾರಣಿ ಎಸ್‌ಎಂಕೆ ಸರಳ ಹಾಗೂ ಶಿಸ್ತಿನ ರಾಜಕಾರಣಿಯಾಗಿ ರಾಜ್ಯವನ್ನು ಮುನ್ನಡೆಸಿದ್ದರು ಎಂದರು.

ತನ್ನ ಸುದೀರ್ಘ 60 ವರ್ಷಗಳ ರಾಜಕೀಯ ಜೀವನದಲ್ಲಿ ಎಸ್.ಎಂ.ಕೃಷ್ಣ ಸರಳತೆ ಹಾಗೂ ಸಜ್ಜನಿಕೆಗೆ ಹೆಸರಾಗಿದ್ದರು. ಅವರು ಯಾವುದೇ ಹಗರಣ ಸಿಲುಕಿರಲಿಲ್ಲ. ಪಕ್ಷಾತೀತವಾಗಿ ಎಲ್ಲರೊಂದಿಗೂ ಉತ್ತಮ ಬಾಂಧವ್ಯ ಹೊಂದಿದ್ದ ಕೃಷ್ಣ ಹುಟ್ಟುತ್ತಲೇ ನಾಯಕತ್ವ ಗುಣಗಳನ್ನು ಮೈಗೂಡಿಸಿಕೊಂಡು ಎಲ್ಲರಿಗೂ ಪ್ರೇರಣೆಯಾಗಿದ್ದರು. ಅಂತಹ ಧೀಮಂತ, ಮಾದರಿ ರಾಜಕಾರಣಿಯಾಗಿದ್ದ ಅವರು ಇಹಲೋಕ ತ್ಯಜಿಸಿದ್ದು, ಕರ್ನಾಟಕದ ಅನರ್ಘ್ಯ ರತ್ನವೊಂದು ಕಣ್ಮರೆಯಾಗಿದೆ ಎಂದು ಭಾವುಕರಾದರು.

ಗ್ರಾಪಂ ಮಾಜಿ ಉಪಾಧ್ಯಕ್ಷ ಪುಟ್ಟು, ಸದಸ್ಯ ಕುಮಾರ್, ಟಿಎಪಿಎಂಎಸ್ ಮಾಜಿ ನಿರ್ದೇಶಕ ಫಣೀಶ್ ಕುಮಾರ್, ಚಿಕ್ಕ ಯಜಮಾನ ರಮೇಶ್, ಬಸ್ ಮಂಜುನಾಥ್, ಲಕ್ಷ್ಮಣ, ಮಂಜು, ಮುಕುಂದ, ನಟೇಶ್, ಆಟೋ ವಿಜಿ, ಮಹದೇವ ಮತ್ತಿತರಿದ್ದರು.





ತಿ.ನರಸೀಪುರದ ವಿದ್ಯೋದಯ ಕಾಲೇಜು ಸಭಾಂಗಣ ಹಾಗೂ ತಿರುಮಕೂಡಲಿನ ಚೌಡಯ್ಯ ವೃತ್ತದಲ್ಲಿ ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ವಿದ್ಯೋದಯ ಕಾಲೇಜು ಸಭಾಂಗಣ: ಪಟ್ಟಣದ ವಿದ್ಯೋದಯ ಕಾಲೇಜು ಸಭಾಂಗಣದಲ್ಲಿ ವಿದ್ಯೋದಯ ಶಿಕ್ಷಣ ಸಂಸ್ಥೆ ಹಾಗೂ ತಾಲೂಕು ಕೃಷಿಕ ಸಮಾಜದಿಂದ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಎಸ್.ಎಂ.ಕೃಷ್ಣ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಶಿಕ್ಷಣ ಸಂಸ್ಥೆ ಗೌರವ ಕಾರ್ಯದರ್ಶಿ ಕೆ.ಪಿ. ಮಹದೇವಸ್ವಾಮಿ, ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರದ ಅತ್ಯುನ್ನತ ಹುದ್ದೆಗಳನ್ನು ಅಲಂಕರಿಸಿ ಬೆಂಗಳೂರನ್ನು ಐಟಿ ಬಿಟಿ ನಗರವನ್ನಾಗಿ ಪರಿವರ್ತಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ ಎಂದರು.

ಈ ವೇಳೆ ತಾಲೂಕು ಕೃಷಿಕ ಸಮಾಜ ಬಿ.ಎಂ.ಶಿವಮಲ್ಲಪ್ಪ, ಬಿ.ಕುಮಾರ್, ಚೆನ್ನಯ್ಯ, ಎಂ.ಸ್ವಾಮಿ, ನಂಜುಂಡಸ್ವಾಮಿ, ರಾಜಗೋಪಾಲ್, ಪಿ.ನಾಗರಾಜು, ಬಿ.ಆರ್.ಪುರುಷೋತ್ತಮ್, ಕೆ.ಜಿ.ವೀರಣ್ಣ, ಪಿ.ಶಶಿಧರ್, ವೈ.ಎಸ್.ರಾಮಸ್ವಾಮಿ, ಆಲಗೂಡು ನಾಗರಾಜು, ಕೆ.ಜೆ.ಚಿಕ್ಕಜವರಪ್ಪ, ಬಿಜೆಪಿ ಕ್ಷೇತ್ರಾಧ್ಯಕ್ಷ ಸತ್ಯಪ್ಪ, ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಸ್.ಎಂ.ಪ್ರಕಾಶ್, ಕಾರ್ಯದರ್ಶಿ ಶಿವು, ಡಾ.ಮಲ್ಲಿಕಾರ್ಜುನಸ್ವಾಮಿ, ಕುಮಾರ್, ಬನ್ನೂರು ಪುರಸಭಾ ನಾಮನಿರ್ದೇಶನ ಸದಸ್ಯ ಮಹೇಶ್, ಪೂಜಿತ್ ಮೆಡಿಕಲ್ ಕುಮಾರ್, ಬ್ಯಾಂಕ್ ಕುಮಾರ್, ಸುರೇಶ, ಬಸವರಾಜು, ವಿದ್ಯೋದಯ ಶಿಕ್ಷಣ ಸಂಸ್ಥೆ ಕೆ.ಪಿ.ಉದಯ ಕುಮಾರ್, ಶಿವನಂಜಪ್ಪ, ಮೂಗೂರು ಕುಮಾರಸ್ವಾಮಿ ಸೇರಿದಂತೆ ವಿದ್ಯೋದಯ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಬೋಧಕರು ಉಪಸ್ಥಿತರಿದ್ದರು.

ಚುಂಚನಕಟ್ಟೆಯಲ್ಲೂ ಎಸ್‌ಎಂಕೆಗೆ ನಮನ

ಚುಂಚನಕಟ್ಟೆ, ಡಿ.10– ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರ ನಿಧನ ಇಡೀ ರಾಜ್ಯಕ್ಕೆ ತುಂಬಲಾರದ ನಷ್ಟ ಎಂದು ನಿವೃತ್ತ ಶಿಕ್ಷಕ ಕುಚೇಲ ತಿಳಿಸಿದರು.

ಸಾಲಿಗ್ರಾಮ ತಾಲೂಕಿನ ಹೊಸೂರು ಗ್ರಾಮದಲ್ಲಿ ಆಯೋಜಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಎಸ್.ಎಂ.ಕೃಷ್ಣ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಎಸ್.ಎಂ. ಕೃಷ್ಣ ಅವರು ಸಜ್ಜನ ರಾಜಕಾರಣಕ್ಕೆ ಮಾದರಿಯಾಗಿದ್ದರು. ರಾಜ್ಯಕ್ಕೆ ಅವರ ಕೊಡುಗೆ ಅಪಾರ ಎಂದರು. ಈ ವೇಳೆ ಡೈರಿ ಮಾಜಿ ಅಧ್ಯಕ್ಷ ರಮೇಶ್, ಗ್ರಾಪಂ ಮಾಜಿ ಸದಸ್ಯ ಮಹದೇವ್, ಕಾಲೇಜು ಮಂಡಳಿ ಉಪಾಧ್ಯಕ್ಷ ಶ್ರೀನಿವಾಸ್, ಸಹಕಾರ ಸಂಘದ ನಿರ್ದೇಶಕ ರಮೇಶ್, ಮುಖಂಡರಾದ ಪ್ರಮೋದ್, ಕೀರ್ತಿ, ಮಂಜ, ಸುರೇಶ್, ನಾಗೇಶ್ ಮತ್ತಿತರರಿದ್ದರು.



ಚುಂಚನಕಟ್ಟೆಯಲ್ಲಿ ಎಸ್.ಎಂ.ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಕನ್ನಡ ಸಾಹಿತ್ಯ ಸಮ್ಮೇಳನ: ಕನ್ನಡ ರಥಕ್ಕೆ ಅದ್ದೂರಿ ಸ್ವಾಗತ



ನಂಜನಗೂಡಿನಲ್ಲಿ ಕನ್ನಡ ರಥವನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು.

ನಂಜನಗೂಡು, ಡಿ.10– ನಗರದ ಶ್ರೀಕಂಠೇಶ್ವರಸ್ವಾಮಿ ದೇವಾಲಯದ ಎದುರು ಮಂಡ್ಯದಲ್ಲಿ ನಡೆಯುವ 87ನೇ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರ ಕನ್ನಡ ರಥವನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಹಾಗೂ ತಾಲೂಕು ಆಡಳಿತದಿಂದ ಪುಷ್ಪಾರ್ಚನೆ ಮಾಡುವ ಮೂಲಕ ಅದ್ದೂರಿಯಾಗಿ ಸ್ವಾಗತಿಸಲಾಯಿತು. ಈ ವೇಳೆ ನೆರೆದಿದ್ದ ಅಂಗನವಾಡಿ ಕಾರ್ಯಕರ್ತೆಯರು, ವಿವಿಧ ಮಹಿಳಾ ಸಂಘಟನೆಗಳ ಮಹಿಳೆಯರು ಕಳಸ ಹಿಡಿದು, ಆರತಿ ಎತ್ತಿ ಪುಷ್ಪಾರ್ಚನೆ ಮಾಡುವ ಮೂಲಕ ರಥವನ್ನು ಸ್ವಾಗತಿಸಿದರು.

ತಹಸೀಲ್ದಾರ್ ಶಿವಕುಮಾರ್ ಕಾಸನೂರು ಮಾತನಾಡಿ, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಈ ಬಾರಿ ಮಂಡ್ಯದಲ್ಲಿ ನಡೆಯುತ್ತಿದೆ. ಸಮ್ಮೇಳನದ ಅಂಗವಾಗಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಕನ್ನಡ ರಥವನ್ನು ಬರಮಾಡಿಕೊಳ್ಳಲಾಗಿದೆ. ಪೋಷಕರು ಮಕ್ಕಳಿಗೆ ಮಾತೃಭಾಷೆ ಕನ್ನಡದಲ್ಲಿ ಶಿಕ್ಷಣ ನೀಡುವವರೆಗೆ ಮುಂದಿನ ತಲೆಮಾರಿಗೆ ನಮ್ಮ ಭಾಷೆ, ಸಂಸ್ಕೃತಿಗಳ ಬಗ್ಗೆ ತಿಳಿವಳಿಕೆ ಮೂಡುವುದಿಲ್ಲ. ಭಾಷೆ ಉಳಿದರೆ ನಮ್ಮತನ ಉಳಿಯುತ್ತದೆ ಎಂದರು.

ಈ ವೇಳೆ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷೆ ಲತಾ, ಶಿಲ್ಪ ನಾಗಶಯನ, ಸುರೇಖಾ, ಮಂಜುಳಾ, ಪ್ರಭಾಕರ್, ಮಂಜುನಾಥ, ರಂಗಸ್ವಾಮಿ, ಸಿಡಿಪಿಓ ಭವ್ಯಶ್ರೀ, ಇನ್ಸ್‌ಪೆಕ್ಟರ್ ಸುನೀಲ್ ಕುಮಾರ್, ಶಿವಣ್ಣ, ಶಿವಕುಮಾರ್ ಉಪಸ್ಥಿತರಿದ್ದರು.

ದೊಡ್ಡಹೆಜ್ಜೂರಲ್ಲಿ ಶುಂಠಿ ಬೆಳೆ ಕ್ಷೇತ್ರೋತ್ಸವ

ಹನಗೋಡು, ಡಿ.10– ಶುಂಠಿ ಬೆಳೆಯಲ್ಲಿ ಅಧಿಕ ಇಳುವರಿ ಪಡೆಯಲು ಲಘು ಪೋಷಕಾಂಶಗಳು ಸಹಕಾರಿ ಎಂದು ಇಲವಾಲ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಸಿದ್ದಪ್ಪ ತಿಳಿಸಿದರು.

ತಾಲೂಕಿನ ದೊಡ್ಡಹೆಜ್ಜೂರು ಗ್ರಾಮದ ವೀರನಹೊಸಳ್ಳಿಯ ರೈತ ಶಿವಕುಮಾರ್ ಅವರ ಶುಂಠಿ ಗದ್ದೆಯಲ್ಲಿ ಮಂಗಳವಾರ ತೋಟಗಾರಿಕೆ ಇಲಾಖೆ ವತಿಯಿಂದ ಏರ್ಪಡಿಸಿದ್ದ ಶುಂಠಿ ಬೆಳೆ ಕ್ಷೇತ್ರೋತ್ಸವದಲ್ಲಿ ಅವರು ಮಾತನಾಡಿದರು.

ಶುಂಠಿ ಬೆಳೆಯಲ್ಲಿ ಇಳುವರಿ ಹೆಚ್ಚಿಸಲು ಜಿಂಜರ್ ವಿಶೇಷ ಲಘು ಪೋಷಕಾಂಶಗಳಿದ್ದು, ಅವುಗಳನ್ನು ಬಳಸುವುದರಿಂದ ಶುಂಠಿ ಬೆಳೆಯಲ್ಲಿ ರೋಗ ನಿಯಂತ್ರಣದೊಂದಿಗೆ ಹೆಚ್ಚಿನ ಇಳುವರಿ ಪಡೆಯಲು ಸಾಧ್ಯವಾಗುತ್ತದೆ. ರೈತರು ಕೃಷಿ ವಿಜ್ಞಾನ ಕೇಂದ್ರದಿಂದ ಕೈಗೊಳ್ಳುವ ಪ್ರಾತ್ಯಕ್ಷಿಕೆ, ತರಬೇತಿಗಳಲ್ಲಿ ಪಾಲ್ಗೊಂಡು ಕೃಷಿಯಲ್ಲಿ ನಾವಿನ್ಯತೆ ಅಳವಡಿಸಿಕೊಂಡು ಹೆಚ್ಚು ಲಾಭಗಳಿಸಬೇಕು. ಯಾವುದೇ ಬೆಳೆಯಲ್ಲಿ ಸಮಸ್ಯೆ ಉದ್ಭವಿಸಿದರೂ ಕೃಷಿ ವಿಜ್ಞಾನ ಕೇಂದ್ರ ಸಂಪರ್ಕಿಸಿ ನೆರವು ಪಡೆಯಬಹುದು ಎಂದರು.



ಇಲವಾಲ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಸಿದ್ದಪ್ಪ ಮಾತನಾಡಿದರು.

ರೈತರು ಬೆಳೆಗಳಿಗೆ ಮುಖ್ಯ ಪೋಷಕಾಂಶಗಳನ್ನು ಮಾತ್ರ ನೀಡುತ್ತಿದ್ದು, ಲಘು ಪೋಷಕಾಂಶಗಳ ಬಗ್ಗೆ ಗಮನ ಹರಿಸುತ್ತಿಲ್ಲ. ಈ ನಿಟ್ಟಿನಲ್ಲಿ ಕ್ಯಾಲಿಕಟ್‌ನಲ್ಲಿರುವ ಭಾರತೀಯ ಸಾಂಬಾರು ಸಂಶೋಧನಾ ಸಂಸ್ಥೆಯವರು ಜಿಂಜರ್ ಸ್ಪೆಷಲ್ ಲಘು ಪೋಷಕಾಂಶ ಪರಿಚಯಿಸಿದ್ದು, ರೈತರು ಶುಂಠಿ ನಾಟಿ ಮಾಡಿದ 45 ದಿನಗಳ ಅಂತರದಲ್ಲಿ 4 ಹಂತಗಳಲ್ಲಿ 6 ತಿಂಗಳವರೆಗೆ ಪ್ರತಿ ಲೀಟರ್ ನೀರಿಗೆ 5 ಗ್ರಾಂನಂತೆ ಮಿಶ್ರಣ ಮಾಡಿ ಸಿಂಪಡಣೆ ಮಾಡಬೇಕು. ಶುಂಠಿ ಬೆಳೆಯಲ್ಲಿ ಜಿಂಜರ್ ಸ್ಪೆಷಲ್ ಸಿಂಪಡಣೆ ಮಾಡುವುದರಿಂದ ಮರಿ ಕಂದುಗಳು ಜಾಸ್ತಿಯಾಗಿ, ಶುಂಠಿ ಗೆಡ್ಡೆ ಗಾತ್ರ ಹೆಚ್ಚಾಗುತ್ತದೆ. ಅಲ್ಲದೇ ಉತ್ತಮ ಗುಣಮಟ್ಟದ ಗೆಡ್ಡೆಗಳನ್ನು ಪಡೆಯಬಹುದಾಗಿದೆ ಎಂದರು.

ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ನಾಗರಾಜ್ ಮಾತನಾಡಿ, ರೈತರು ಬೆಳೆ ಬೆಳೆಯುವಾಗ ಬೇಕಾದ ಪೂರಕ ಅಂಶಗಳನ್ನು ಇಲಾಖೆಯಿಂದ ಅಥವಾ ವಿಜ್ಞಾನಿಗಳಿಂದ ಪಡೆದು ಸಕಾಲದಲ್ಲಿ ನೀರು ಮತ್ತು ಪೋಷಕಾಂಶಗಳನ್ನು ಒದಗಿಸುವಂತೆ ಸಲಹೆ ನೀಡಿದರು.

ಗ್ರಾಪಂ ಮಾಜಿ ಅಧ್ಯಕ್ಷ ದಾ.ರಾ. ಮಹೇಶ್, ಶಿವಕುಮಾರ್, ರೈತ ಲೋಕೇಶ್, ಮಂಜು, ತೋಟಗಾರಿಕೆ ಇಲಾಖೆ ಪಾಷ, ರವಿಕುಮಾರ್, ಸ್ವಾಮಿ ಇದ್ದರು.

ಕಾಡಾನೆ ದಾಳಿ: ಭತ್ತದ ಫಸಲು ನಾಶ



ಕಾಡಾನೆಗಳ ದಾಳಿಗೆ ಭತ್ತದ ಫಸಲು ನಾಶವಾಗಿರುವುದು.

ಮಲ್ಕುಂಡಿ, ಡಿ.10– ಕಾಡಾನೆ ದಾಳಿಗೆ ಭತ್ತದ ಫಸಲು ನಾಶವಾಗಿರುವ ಘಟನೆ ಸೋಮವಾರ ರಾತ್ರಿ ಸಮೀಪದ ಜಾಲಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಶಿವಣ್ಣ ಅವರಿಗೆ ಸೇರಿದ 1 ಎಕರೆ ಗದ್ದೆಯಲ್ಲಿ ಬೆಳೆದಿದ್ದ ಭತ್ತದ ಫಸಲನ್ನು ಕಾಡಾನೆಗಳು ತುಳಿದು ತಿಂದು ನಾಶಗೊಳಿಸಿವೆ.

ರಾಜ್ಯ ರೈತ ಸಂಘದ ಸರಗೂರು ತಾಲೂಕು ಅಧ್ಯಕ್ಷ ಗೋವಿಂದರಾಜು ಮಾತನಾಡಿ, ಅರಣ್ಯ ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ರೈತರ ಫಸಲು ಕಾಡುಪ್ರಾಣಿಗಳ ಪಾಲಾಗುತ್ತಿವೆ. ಹೀಗಾದರೇ ಮಾಡಿದ ಸಾಲ ತೀರಿಸುವುದಾದರೂ ಹೇಗೆ ಎಂದು ಪ್ರಶ್ನಿಸಿದ ಅವರು, ಕೂಡಲೇ ಸರ್ಕಾರ ನಷ್ಟಕ್ಕೊಳಗಾದ ರೈತನಿಗೆ ಸೂಕ್ತ ಪರಿಹಾರ ಕೊಡಬೇಕು ಎಂದು ಒತ್ತಾಯಿಸಿದರು. ಕಾಡಂಚಿನ ಗ್ರಾಮಗಳಾದ ಜಾಲಹಳ್ಳಿ, ಕಲ್ಲಂಬಾಳು, ಕುಂದೂರು ಗ್ರಾಮ, ಚಿಕ್ಕದೇವಮ್ಮನಬೆಟ್ಟದ ಕಾಡು ಪ್ರದೇಶಕ್ಕೆ ರೈಲ್ವೆ ಕಂಬಿಗಳನ್ನು ಅಳವಡಿಸಿ ಕಾಡುಪ್ರಾಣಿಗಳ ಹಾವಳಿ ತಪ್ಪಿಸಬೇಕು ಎಂದು ಆಗ್ರಹಿಸಿದರು.


ಮುತ್ತುರಾಯಸ್ವಾಮಿ ಅದ್ದೂರಿ ಜಾತ್ರಾ ಮಹೋತ್ಸವ



ಶ್ರೀಮುತ್ತುರಾಯಸ್ವಾಮಿ ಜಾತ್ರಾ ಮಹೋತ್ಸವ ನೆರವೇರಿತು.

ಪಿರಿಯಾಪಟ್ಟಣ, ಡಿ.10– ತಾಲೂಕಿನ ಆನೆ ಚೌಕೂರು ಮುಖ್ಯ ರಸ್ತೆಯಲ್ಲಿರುವ ಶ್ರೀಮುತ್ತುರಾಯ ಸ್ವಾಮಿ ದೇವಸ್ಥಾನದಲ್ಲಿ 31ನೇ ವರ್ಷದ ಜಾತ್ರಾ ಮಹೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನೆರವೇರಿತು. ಮುಂಜಾನೆಯಿಂದಲೇ ದೇವಾಲಯದಲ್ಲಿ ಸ್ವಾಮಿಗೆ ಹೊಳೆಮಜ್ಜನ, ಅಭಿಷೇಕ, ಗಣಪತಿ ಹೋಮ, ನವಗ್ರಹ ಪೂಜೆ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಬಳಿಕ ವಿವಿಧ ಹೂಗಳಿಂದ ಅಲಂಕರಿಸಲಾಯಿತು. ಬೆಳಗ್ಗೆ 11.30ಕ್ಕೆ ಮಹಾಮಂಗಳಾರತಿ ನೆರವೇರಿಸಿ ಭಕ್ತರಿಗೆ ತೀರ್ಥ ಪ್ರಸಾದ ವಿನಿಯೋಗ ಮಾಡಲಾಯಿತು. ಅಲ್ಲದೇ ದೇವಾಲಯಕ್ಕೆ ಆಗಮಿಸಿದ ಭಕ್ತರಿಗೆ ಅನ್ನ ಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು ಈ ವೇಳೆ ಮುತ್ತುರಾಯಸ್ವಾಮಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ವಿ.ಎಸ್.ರಾಮಚಂದ್ರ, ಕಾರ್ಯದರ್ಶಿ ಪಾಪಣ್ಣಗೌಡ, ಮುತ್ತುರಾಜ್, ಪಟೇಲ್ ಶ್ರೀನಿವಾಸ್, ಸುರೇಶ್, ತಿಮ್ಮಯ್ಯ, ಮಾಲಂಗಿ ಗ್ರಾಪಂ ಮಾಜಿ ಅಧ್ಯಕ್ಷ ಪ್ರದೀಪ್, ರಮೇಶ್, ನವೀನ್, ರಘು, ರಾಮೇಗೌಡ ಸೇರಿದಂತೆ ಇತರರಿದ್ದರು.

ಜಯಪುರ ಗ್ರಾಪಂ ಉಪಾಧ್ಯಕ್ಷೆಗೆ ಅಭಿನಂದನೆ



ಮೈಸೂರು ತಾಲೂಕಿನ ಜಯಪುರ ಗ್ರಾಪಂ ನೂತನ ಉಪಾಧ್ಯಕ್ಷೆ ರಾಣಿ ಮಂಜುನಾಥ್ ಅವರನ್ನು ಸಮಾಜ ಸೇವಕ ಎಸ್.ಶ್ರೀಕಾಂತ್ ಅಭಿನಂದಿಸಿದರು. ಈ ವೇಳೆ ಚುನಾವಣಾಧಿಕಾರಿ ದೇವೇಂದ್ರಪ್ಪ, ಅಧ್ಯಕ್ಷ ಮಹದೇವಯ್ಯ, ಸದಸ್ಯರಾದ ಮರಿಸಿದ್ದೇಗೌಡ, ಬಸವಣ್ಣ, ಎಂ.ನಾಗರಾಜು, ಬಿ.ರೇಣುಕಾ, ನವೀನಮ್ಮ, ಶಿವಣ್ಣ, ಭೈರೇಶ್, ಮಹಾದೇವಿ, ನಂಜಮ್ಮಣ್ಣಿ, ಲಕ್ಷ್ಮಮ್ಮ, ಸುಮಾ, ಮುಖಂಡರಾದ ಮೂಗನಾಯಕ, ರಾಮೇಗೌಡ, ಜವರನಾಯಕ, ಅಬ್ದುಲ್ ಮುತಾಲೀಫ್, ಭೈರೇಗೌಡ, ಸಣ್ಣಪ್ಪ, ಚಂದನ್ ಗೌಡ, ಎಸ್.ಸಂತೋಷ್ ಕುಮಾರ್, ಡೇರಿ ಬಸವಣ್ಣ, ಶಿವರಾಜು, ರಂಗಸ್ವಾಮಿ, ಸಣ್ಣಸ್ವಾಮಿ ಇತರರಿದ್ದರು.

ವೀರನಹೊಸಹಳ್ಳಿಯಲ್ಲಿ ಜೇನುಗೂಡು ಪೆಟ್ಟಿಗೆ ವಿತರಣೆ

ಹುಣಸೂರು, ಡಿ.10– ಐಸಿಐಸಿಐ ಫೌಂಡೇಶನ್ ವತಿಯಿಂದ ತಾಲೂಕಿನ ವೀರನಹೊಸಹಳ್ಳಿ ಹಾಡಿಯಲ್ಲಿ ಜೇನುಸಾಕಣೆ ತರಬೇತಿ ಪಡೆದ 50 ಜೇನು ಕುರುಬ ಆದಿವಾಸಿ ಕುಟುಂಬಗಳಿಗೆ ಜೇನುಗೂಡು ಪೆಟ್ಟಿಗೆ ಮತ್ತು ತುಡುವೆ ಜೇನುಗೂಡುಗಳನ್ನು ಸೋಮವಾರ ವಿತರಿಸಲಾಯಿತು.

ನಾಗರಹೊಳೆ ಹುಲಿ ಯೋಜನೆ ನಿರ್ದೇಶಕರು ಹಾಗೂ ವನ್ಯಜೀವಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಸೀಮಾ ಮಾತನಾಡಿ, ಸ್ವತಃ ಜೇನು ಕೃಷಿಯಲ್ಲಿ ತೊಡಗಿಸಿಕೊಂಡು ಆರ್ಥಿಕವಾಗಿ ಮುಂದೆ ಬನ್ನಿ ಎಂದು ಆದಿವಾಸಿಗಳಿಗೆ ಶುಭ ಹಾರೈಸಿದರು.

ಫೌಂಡೇಶನ್‌ನ ಎಂ.ಸತ್ಯಶ್ರೀ ಮಾತನಾಡಿ, ಆದಿವಾಸಿಗಳು ಇದನ್ನು ಸಮರ್ಪಕವಾಗಿ ಸದುಪಯೋಗ ಪಡಿಸಿಕೊಂಡರೇ ಇನ್ನೂ ಹೆಚ್ಚಿನ ಸೌಲಭ್ಯ ಕಲ್ಪಿಸಲಾಗುವುದು ಎಂದರು.

ಜೇನುಗೂಡು ಸರಬರಾಜು ಮಾಡಿದ ಜೈಶಂಕರ್ ತುಡುವೆ ಜೇನಿನ ಸ್ವಭಾವ ವಿವರಿಸಿದರು.

ಈ ವೇಳೆ ಫೌಂಡೇಶನ್‌ನ ಜನಾರ್ಧನ್, ಎಸಿಎಫ್ ಲಕ್ಷ್ಮಿಕಾಂತ್, ವಲಯ ಅರಣ್ಯಾಧಿಕಾರಿ ಅಭಿಷೇಕ್, ಉಪ ವಲಯ ಅಧಿಕಾರಿಗಳಾದ ನವೀನ್, ಮಾಲತೇಶ್ ಹಾಗೂ ಸಿಬ್ಬಂದಿ, ಐಸಿಐಸಿಐ ಬ್ಯಾಂಕ್ ಪ್ರತಿನಿಧಿಗಳಾದ ಅನಿಲ್ ನಾಯರ್, ಕುಲದೀಪ್ ಗುಪ್ತ, ಮಜರ್, ಬುಡಕಟ್ಟು ಕೃಷಿಕರ ಸಂಘದ ಅಧ್ಯಕ್ಷ ಜಯಪ್ಪ, ಡೀಡ್ ನಿರ್ದೇಶಕ ಡಾ.ಎಸ್.ಶ್ರೀಕಾಂತ್, ಆದಿವಾಸಿ ಮುಖಂಡರಾದ ಗಣೇಶ್, ಜಯಪ್ಪ, ಹಾಡಿ ಹಿರಿಯ ಪುಟ್ಟಯ್ಯ ಉಪಸ್ಥಿತರಿದ್ದರು.



ಆದಿವಾಸಿಗಳಿಗೆ ಜೇನುಗೂಡು ಪೆಟ್ಟಿಗೆಗಳನ್ನು ವಿತರಿಸಲಾಯಿತು.

ಮಹಿಳೆಯರ ಅಸಭ್ಯ ಚಿತ್ರ ಬಿಡಿಸಿ ಮನೆ ಮುಂದೆ ಎಸೆಯುತ್ತಿದ್ದವನ ಬಂಧನ

ನಂಜನಗೂಡು, ಡಿ.10– ಮಹಿಳೆಯರ ಅಸಭ್ಯ ಚಿತ್ರಗಳನ್ನು ಬಿಡಿಸಿ ಮನೆಗಳ ಮುಂದೆ ಎಸೆಯುತ್ತಿದ್ದ ವ್ಯಕ್ತಿಯನ್ನು ಗ್ರಾಮಸ್ಥರೇ ಹಿಡಿದು ಪೊಲೀಸರಿಗೆ ಒಪ್ಪಿಸಿರುವ ಘಟನೆ ಸೋಮವಾರ ರಾತ್ರಿ ತಾಲೂಕಿನ ಹುಲ್ಲಹಳ್ಳಿ ಗ್ರಾಮದಲ್ಲಿ ಜರುಗಿದೆ.



ಗ್ರಾಮದ ವರದರಾಜಸ್ವಾಮಿ ಬಡಾವಣೆ ನಿವಾಸಿ ಶಿವಣ್ಣ(54) ಬಂಧಿತ ಆರೋಪಿ. ಈತ ಕಳೆದ ಹಲವು ವರ್ಷಗಳಿಂದ ಪೇಪರ್‌ನಲ್ಲಿ ಮಹಿಳೆಯರ ಅಸಭ್ಯ ಚಿತ್ರಗಳನ್ನು ಬಿಡಿಸಿ, ಹೆಸರು ಉಲ್ಲೇಖಿಸಿ ಅವರ ಮನೆ ಎದುರು ಎಸೆಯುತ್ತಿದ್ದ ಎನ್ನಲಾಗಿದೆ. ಇದರಿಂದ ಮಹಿಳೆಯರು ಮಾನಸಿಕ ಸಮಸ್ಯೆಗೆ ಒಳಗಾಗಿದ್ದರು. ಅಲ್ಲದೇ ಕೆಲವು ಮದುವೆಗಳು ನಿಂತು ಹೋಗಿದ್ದವು. ಮಹಿಳೆಯರಿಗೆ ತೊಂದರೆ ನೀಡುತ್ತಿದ್ದ ವ್ಯಕ್ತಿಯನ್ನು ಹಿಡಿಯಬೇಕು ಎಂದು ಗ್ರಾಮಸ್ಥರು ಸಹ ಹೊಂಚು ಹಾಕಿದ್ದರು. ಸೋಮವಾರ ರಾತ್ರಿ ಶಿವಣ್ಣ ಅಸಭ್ಯ ಚಿತ್ರಗಳುಳ್ಳ ಕಾಗದವನ್ನು ಮಹಿಳೆ ಮನೆ ಮುಂದೆ ಇಡುತ್ತಿದ್ದ ವೇಳೆ ಗ್ರಾಮಸ್ಥರು ಆತನನ್ನು ಹಿಡಿದು ಥಳಿಸಿ ಪೊಲೀಸರಿಗೆ ಒಪ್ಪಿಸಿದ್ದಾರೆ. ಈ ಸಂಬಂಧ ಶಿವಣ್ಣನ ವಿರುದ್ಧ ಹುಲ್ಲಹಳ್ಳಿ ಠಾಣೆಯಲ್ಲಿ ಲೈಂಗಿಕ ಕಿರುಕುಳ ಪ್ರಕರಣ ದಾಖಲಾಗಿದೆ.

ಮೈಸೂರು ಶರಣ ಸಾಹಿತ್ಯ ಪರಿಷತ್ತಿನ ತವರೂರು

ಪದಾಧಿಕಾರಿಗಳ ಸೇವಾ ದೀಕ್ಷೆ ಸ್ವೀಕಾರ ಕಾರ್ಯಕ್ರಮದಲ್ಲಿ ಸಿದ್ದಪ್ಪ ಅಭಿಪ್ರಾಯ

ತಿ.ನರಸೀಪುರ, ಡಿ.10– ಮೈಸೂರು ಜಿಲ್ಲೆ ಶರಣ ಸಾಹಿತ್ಯ ಪರಿಷತ್ತಿನ ತವರಾಗಿದ್ದು, ಸುತ್ತೂರು ಶ್ರೀಗಳ ನೇರ ನಿಗಾದಲ್ಲಿ ನಾವೆಲ್ಲರೂ ಕೆಲಸ ಮಾಡುತ್ತಿದ್ದೇವೆ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ತಿಳಿಸಿದರು.

ಮೈಸೂರು ಜಿಲ್ಲಾ ಮತ್ತು ತಿ.ನರಸೀಪುರ ತಾಲೂಕು ಶರಣ ಸಾಹಿತ್ಯ ಪರಿಷತ್ ವತಿಯಿಂದ ಪಟ್ಟಣದ ವೀರಶೈವ ವಿದ್ಯಾರ್ಥಿನಿಲಯದಲ್ಲಿ ನಡೆದ ತಿ.ನರಸೀಪುರ ತಾಲೂಕಿನ ಶರಣ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಸೇವಾ ದೀಕ್ಷೆ ಸ್ವೀಕಾರ ಹಾಗೂ ದತ್ತಿ ಉಪನ್ಯಾಸ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಇಡೀ ಭಾರತದಲ್ಲಿ ತನ್ನ ಕಾರ್ಯ ಕ್ಷೇತ್ರವನ್ನು ವಿಸ್ತರಿಸಿಕೊಂಡು ಕೆಲಸ ಮಾಡುತ್ತಿದೆ. ತಮಿಳುನಾಡು, ದೆಹಲಿ, ದುಬೈ ಹಾಗೂ ಅಮೆರಿಕಾದಲ್ಲಿ ಸಂಸ್ಥೆ ಬೃಹದಾಕಾರವಾಗಿ ಬೆಳೆಯುತ್ತಿದೆ. ಸಂಸ್ಥೆ ಸ್ಥಾಪಿಸಿ ಶಿವಶರಣರ ಹಾಗೂ ಸಾಹಿತ್ಯ ಸೇವೆ ಮಾಡಲು ಅವಕಾಶ ಮಾಡಿಕೊಟ್ಟ ಸುತ್ತೂರು ಗುರು ಪರಂಪರೆಯನ್ನು ನಾವೆಲ್ಲರೂ ಗೌರವಿಸುವ ಕೆಲಸ ಮಾಡಬೇಕಿದೆ. ಇಡೀ ತಾಲೂಕಿನಲ್ಲಿ ನಡೆಯುತ್ತಿರುವ ಚಟುವಟಿಕೆಗಳ ಪೂರ್ಣ ಅರಿವು ಸಂಸ್ಥೆ ಗೌರವಾಧ್ಯಕ್ಷ ಶಿವರಾತ್ರಿ ದೇಶಿಕೇಂದ್ರ ಶ್ರೀಗಳಿಗೆ ಇರಲಿದೆ. ಅವರ ಮಾರ್ಗದರ್ಶನ ನಮಗೆ ದೊರಕುತ್ತಿದೆ ಎಂದರು.



ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷರು, ಪದಾಧಿಕಾರಿಗಳಿಗೆ ಸೇವಾ ದೀಕ್ಷೆ ಪ್ರಮಾಣ ಪತ್ರ ನೀಡಲಾಯಿತು.

ತಾಲೂಕಿನಲ್ಲಿ ಸಾಹಿತ್ಯ ಪರಿಷತ್ತು ಅತ್ಯಂತ ಚಟುವಟಿಕೆಯಿಂದ ಕೆಲಸ ಮಾಡಬೇಕೆಂಬ ಉದ್ದೇಶದಿಂದ ವಾಟಾಳುಶ್ರೀಗಳ ನೇರ ಸಲಹೆ ಯಿಂದ ಸಂಘದ ನೂತನ ಪದಾಧಿಕಾರಿಗಳಿಗೆ ಸೇವಾ ದೀಕ್ಷೆ ಕೊಡಿಸಲಾಗಿದೆ ಇದು ಕೇವಲ ಪದಗ್ರಹಣ, ಅಧಿಕಾರ ಸ್ವೀಕಾರ, ಪ್ರಮಾಣ ವಚನ ಕಾರ್ಯಕ್ರಮವಲ್ಲ. ಬದಲಿಗೆ ಇದನ್ನು ಸೇವೆ ಎಂದು ಭಾವಿಸಬೇಕಿದೆ. ಹೊಸ ಕಾರ್ಯಕಾರಿ ಸಮಿತಿ ಬಸವಣ್ಣ ಹಾಗೂ ಶರಣರ ತತ್ವಗಳನ್ನು ಎಲ್ಲಾ ಗ್ರಾಮಗಳಲ್ಲಿ ಪ್ರಚುರ ಪಡಿಸಲು ಮುಂದಾಗಬೇಕು ಎಂದು ಸಲಹೆ ನೀಡಿದರು.

> ನವೀಗ ಬದುಕನ್ನು ಸಾರ್ಥಕ ಮಾಡಿಕೊಳ್ಳುವ ಕಾಲಘಟ್ಟದಲ್ಲಿದ್ದೇವೆ. ಮನೆ ಕಟ್ಟುವುದು, ಅಧಿಕಾರ ಹಾಗೂ ಹಣ ಸಂಪಾದನೆ ಮಾಡುವುದೇ ನಮ್ಮ ಮುಖ್ಯ ಗುರಿಯಾಗಬಾರದು. ಬದುಕಿಗೆ ವಿವೇಕ, ಸಂಸ್ಕಾರ ನೀಡಬೇಕು. ಸಂಸ್ಕಾರ ಇಲ್ಲದಿದ್ದರೆ ಮನುಷ್ಯ ಪಶುವಿಗೆ ಸಮಾನ. ರಾಜೇಂದ್ರ ಶ್ರೀಗಳು ಶರಣ ಸಾಹಿತ್ಯ ಪರಿಷತ್ ಮಾಡಿ ನಮಗೆಲ್ಲ ಸಂಸ್ಕಾರ ಕೊಡುತ್ತಿದ್ದು, ಅವರ ಆದರ್ಶ ಪಾಲನೆಗೆ ಎಲ್ಲರೂ ಮುಂದಾಗಬೇಕು.
>
> – **ಶಾಂತಮಲ್ಲಿಕಾರ್ಜುನಸ್ವಾಮೀಜಿ, ಮಾಡ್ರಹಳ್ಳಿ ಮಠ.**

ತಿ.ನರಸೀಪುರ ಶರಣ ಸಾಹಿತ್ಯ ಪರಿಷತ್ ನೂತನ ಅಧ್ಯಕ್ಷ ಕೆಬ್ಬೇಹುಂಡಿ ಸೋಮಶೇಖರಪ್ಪ ಸೇರಿದಂತೆ ಸಂಘದ ಪದಾಧಿಕಾರಿಗಳಿಗೆ ವಾಟಾಳು ಸೂರ್ಯ ಸಿಂಹಾಸನ ಮಠದ ಶ್ರೀಸಿದ್ದಲಿಂಗಶಿವಾಚಾರ್ಯ ಸ್ವಾಮೀಜಿ ಸೇವಾ ದೀಕ್ಷೆ ನೀಡಿದರು.

ಗರ್ಗೇಶ್ವರಿ ಹಿಲಾಲ್ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಕನ್ನಡ ಅಧ್ಯಾಪಕ ಮು.ನಾ.ರಮೇಶ್, ಬಸವಣ್ಣನವರ ಸಾಮಾಜಿಕ ಚಿಂತನೆಗಳು ವಿಷಯಕ್ಕೆ ಸಂಬಂಧಿಸಿದಂತೆ ದತ್ತಿ ಉಪನ್ಯಾಸ ನೀಡಿದರು.

ತಾಲೂಕು ಶರಣ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷ ತೊಂಟೇಶ್, ಜಿಲ್ಲಾ ಸಂಘದ ನಿಕಟ ಪೂರ್ವ ಅಧ್ಯಕ್ಷ ಎಂ.ಚಂದ್ರಶೇಖರ್, ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಎಸ್‌ಎಂಆರ್ ಪ್ರಕಾಶ್, ಬಿಜೆಪಿ ಕ್ಷೇತ್ರಾಧ್ಯಕ್ಷ ಸತ್ಯಪ್ಪ, ವಕೀಲರ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ಯುವ ಘಟಕದ ಅಧ್ಯಕ್ಷ ಕೆ.ಎನ್.ಅಶೋಕ್, ಪುರಸಭೆ ಸದಸ್ಯೆ ರೂಪಾ ಪರಮೇಶ್, ವಕೀಲ ಜ್ಞಾನೇಂದ್ರ ಮೂರ್ತಿ, ಆಡಿಟರ್ ಮಂಜುನಾಥ್, ಕಾರ್ ಮಲ್ಲಪ್ಪ, ಸುಗಂಧರಾಜು, ಬಜ್ಜಿ ನಿಂಗಪ್ಪ, ತೊಟ್ಟವಾಡಿ ರವಿ, ಡಣಾಯಕನಪುರ ಮಲ್ಲಣ್ಣ ಯಡದೊರೆ ಭಗವಾನ್, ಹಿರಿಯೂರು ಪ್ರಕಾಶ್, ಮೂಗೂರು ಕುಮಾರಸ್ವಾಮಿ, ಸಾಲೂರು ಸ್ವಾಮಿ ಸೇರಿದಂತೆ ಮತ್ತಿತರರಿದ್ದರು.

ವಿಜಯ್ ಕುಮಾರ್ ನಿಧನ

ಸರಗೂರು, ಡಿ.10– ಪಟ್ಟಣದ ನಿವಾಸಿ, ವಿಜಯ್ ಕುಮಾರ್ ಟ್ರಾನ್ಸ್‌ಪೋರ್ಟ್ ಲಾರಿ ಮಾಲೀಕ ಎಸ್.ಎನ್.ವಿಜಯ್ ಕುಮಾರ್ (55) ಮಂಗಳವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಪಟ್ಟಣದ ಸೋಮೇಶ್ವರ ದೇವಸ್ಥಾನದ ಕಪಿಲಾ ನದಿ ದಡದಲ್ಲಿ ಸಂಜೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಮೈಸೂರು ಹೊರವಲಯದಲ್ಲಿ ಬೀಡುಬಿಟ್ಟಿದ್ದ ಕಾಡಾನೆಗಳ ಮರಡಿಗುಡ್ಡ ಕಡೆಗೆ ಅಟ್ಟುವ ಕಾರ್ಯಾಚರಣೆ ಯಶಸ್ವಿ

ಮೈಸೂರು,ಡಿ.10(ಎಂಟಿವೈ)– ಮೈಸೂರು ನಗರದ ರಿಂಗ್ ರಸ್ತೆಯ ನಾಲ್ಕೈದು ಕಿ.ಮೀ. ದೂರದ ಗ್ರಾಮಗಳ ಹೊಲ ಗದ್ದೆಗಳಲ್ಲಿ ಅಡ್ಡಾಡುತ್ತಿದ್ದ ಎರಡು ಕಾಡಾನೆಗಳನ್ನು ಹೆಚ್‌ಡಿ ಕೋಟೆಯ ಗೋಪಾಲಪುರ, ಬೆಟ್ಟದಬೀಡು ಮೂಲಕ ಮರಡಿಗುಡ್ಡದ ಕಡೆಗೆ ಅಟ್ಟುವಲ್ಲಿ ಅರಣ್ಯ ಇಲಾಖೆಯು ಮಂಗಳವಾರ ಯಶಸ್ಸು ಕಂಡಿದೆ.

ಮೈಸೂರಿನ ರಿಂಗ್‌ರಸ್ತೆ ಸಮೀಪದ ವಿವಿಧ ಗ್ರಾಮಗಳಲ್ಲಿ ಕಳೆದ ಒಂದು ತಿಂಗಳಿಂದ ಅಲೆದಾಡುತ್ತಿದ್ದ ಈ ಎರಡು ಕಾಡಾನೆಗಳು ಅರಣ್ಯ ಪ್ರದೇಶದತ್ತ ಸಾಗುವಲ್ಲಿ ಅರಣ್ಯ ಇಲಾಖೆಯನ್ನು ಸತಾಯಿಸುತ್ತಿದ್ದವು. ಈ ಎರಡು ಗಂಡಾನೆ ದಿಕ್ಕು ತೋಚದೆ ಕಂಗೆಟ್ಟಂತೆ ವರ್ತಿಸಿದ್ದವು. ದಾರಿಯುದ್ದಕ್ಕೂ ಹೊಲ ಗದ್ದೆಗಳಲ್ಲಿ ಬೆಳೆಗಳನ್ನು ತುಳಿದು ನಾಶ ಮಾಡಿದ ಆನೆಗಳ ಪುಂಡಾಟಕ್ಕೆ ರೈತರು ಕಂಗಾಲಾಗಿದ್ದು, ಅರಣ್ಯ ಇಲಾಖೆ ವಿರುದ್ಧ ಭಾರಿ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಹೆಚ್.ಡಿ.ಕೋಟೆ ವಲಯದ ಮರಡಿಗುಡ್ಡ ಅಥವಾ ಚಿಕ್ಕನಹಳ್ಳಿ ಅರಣ್ಯ ಪ್ರದೇಶದಿಂದ ನ.8ರಂದು ಮೈಸೂರು ತಾಲೂಕಿಗೆ ಪ್ರವೇಶ ಮಾಡಿದ್ದ ಈ ಆನೆಗಳು, ತಾಲೂಕಿನ ಜಯಪುರ ಹೋಬಳಿಯ ಗುಮಚನಹಳ್ಳಿ, ಮಂಡನಹಳ್ಳಿ, ಗುಜ್ಜೇಗೌಡನಪುರ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕಾಣಿಸಿಕೊಂಡು ಹೊಲ, ತೋಟದಲ್ಲಿ ಬೆಳೆದಿದ್ದ ಫಸಲು ಹಾನಿಯುಂಟು ಮಾಡಿವೆ. ಇವುಗಳನ್ನು ಕಾಡಿಗೆ ಓಡಿಸುವ ಕಾರ್ಯಾಚರಣೆ ಆರಂಭಿಸಿದ್ದ ಅರಣ್ಯ ಇಲಾಖೆಗೆ ಚಳ್ಳೆಹಣ್ಣು ತಿನ್ನಿಸಿ, ದಿಕ್ಕು ಬದಲಿಸಿದ್ದವು. ಆ ಮೂಲಕ ಮೈಸೂರು–ಹೆಚ್.ಡಿ.ಕೋಟೆ ರಸ್ತೆ, ಗದ್ದಿಗೆ ರಸ್ತೆ, ಹುಣಸೂರು ಮುಖ್ಯರಸ್ತೆ ದಾಟಿ ಕೆಆರ್‌ಎಸ್ ಹಿನ್ನೀರು ತಲುಪಿದ್ದವು.

ಬಳಿಕ ಮೈಸೂರು, ಹುಣಸೂರು, ಕೆಆರ್.ನಗರ ಗಡಿ ಭಾಗದ ಹಿನ್ನೀರಿನ ಪ್ರದೇಶದಲ್ಲಿ ದಿಕ್ಕು ತೋಚದಂತಾಗಿ ಪರದಾಡಿದ್ದವು. ಇದರಿಂದ ಗಂಟೆಗಟ್ಟಲೇ ಹಿನ್ನೀರಿನಲ್ಲೇ ಬಿಡಾರ ಹೂಡುವ ಮೂಲಕ ಅಪಾಯದ ಸನ್ನಿವೇಶಕ್ಕೂ ಸಿಲುಕಿದ್ದವು. ಕೊನೆಗೆ ದಡ ಸೇರಿ, ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ಭಾಗ ಪ್ರವೇಶಿಸಿದ್ದವು. ಅಲ್ಲದೆ, ಇಲ್ಲಿಯೂ ಹೊಲ, ಗದ್ದೆಗಳಲ್ಲಿ ಬೆಳೆಗಳಿಗೆ ಹಾನಿಯುಂಟು ಮಾಡಿದ್ದ ಆನೆಗಳು, ಜನರನ್ನು ಕಂಡು ಮತ್ತೆ ಬಂದ ದಾರಿಯಲ್ಲೇ ಹಿಂದಿರುಗಿ ಕೆ.ಆರ್.ನಗರದ ಸಾಗರಕಟ್ಟೆ ಸೇತುವೆ ಬಳಿಯಿಂದ ಕೆ.ಆರ್.ಎಸ್ ಹಿನ್ನೀರಲ್ಲಿ ಈಜಿ ಒಂದೇ ದಿನ ಸುದೀರ್ಘ ದೂರ ಸಾಗಿ ಸೋಮವಾರ ಬೋಗಾದಿ ಸಮೀಪದ ಮಾಣಿಕ್ಯಪುರಕ್ಕೆ ಲಗ್ಗೆಯಿಟ್ಟಿದ್ದವು.

ಸೋಮವಾರ ಸಂಜೆ ಕಾಡಾನೆಗಳನ್ನು ಅರಣ್ಯಕ್ಕೆ ಓಡಿಸುವ ಕಾರ್ಯಾಚರಣೆ ವೇಳೆ ಬೀರಿಹುಂಡಿ ಬಳಿ ಬೀಡು ಬಿಟ್ಟಿದ್ದ ಇವು, ಮುಂದೆ ಹೋಗಲು ಹಿಂದೇಟು ಹಾಕಿದ್ದವು. ಮಧ್ಯರಾತ್ರಿ ವೇಳೆ ಮತ್ತೆ ಮಾಣಿಕ್ಯಪುರ, ಜಟ್ಟಿಹುಂಡಿ, ಮಾದಹಳ್ಳಿ ಬಳಿ ಪ್ರತ್ಯಕ್ಷವಾಗಿದ್ದವು. ಈ ಹಿನ್ನೆಲೆಯಲ್ಲಿ ಮಂಗಳವಾರ ಸಂಜೆ ಮತ್ತೆ ಕಾರ್ಯಾಚರಣೆ ಆರಂಭಿಸಿದ ಅರಣ್ಯ ಇಲಾಖೆ, ಗೋಪಾಲಪುರ, ಬೆಟ್ಟದಬೀಡು ಮೂಲಕ ಮರಡಿಗುಡ್ಡದ ಕಡೆಗೆ ಓಡಿಸುವಲ್ಲಿ ಯಶಸ್ಸು ಕಂಡಿದೆ. ಈ ನಡುವೆ ಇವುಗಳು ಮತ್ತೆ ಮೈಸೂರಿನತ್ತ ಬಾರದಂತೆ ಕಟ್ಟೆಚ್ಚರ ವಹಿಸಿದ್ದು, ರಾತ್ರಿಯಿಡೀ ಗಸ್ತು ತಿರುಗಲು ಅರಣ್ಯ ಇಲಾಖೆ ಕ್ರಮ ವಹಿಸಿದೆ.

ಅಲ್ಪ ಪರಿಹಾರ: ಈ ಕಾಡಾನೆಗಳು ಒಂದು ತಿಂಗಳಲ್ಲಿ ಮೈಸೂರು ತಾಲೂಕಿನ ವಿವಿಧ ಗ್ರಾಮಗಳ ಹೊಲ ಗದ್ದೆಗಳಲ್ಲಿ ವಿವಿಧ ಬೆಳೆಗಳನ್ನು ತಿಂದು, ತುಳಿದು ನಷ್ಟವನ್ನುಂಟು ಮಾಡಿವೆ. ರಾಗಿ, ಭತ್ತ, ತರಕಾರಿ ಬೆಳೆ, ಬಾಳೆ ಸೇರಿದಂತೆ ಇನ್ನಿತರ ಬೆಳೆಯನ್ನು ತಿಂದು ಹಾಕಿವೆ. ಆದರೆ, ಸಕಾಲಕ್ಕೆ ಪರಿಹಾರ ಕೊಡಲು ಅರಣ್ಯ ಅಥವಾ ಕಂದಾಯ ಇಲಾಖೆ ಮುಂದಾಗಿಲ್ಲ ಎಂಬುದು ರೈತರ ಆರೋಪವಾಗಿದೆ. ಪರಿಹಾರ ಕೊಟ್ಟರು ಅದು ಅಲ್ಪ ಪ್ರಮಾಣದ್ದಾಗಿದ್ದು, ಇದರಿಂದ ರೈತರಿಗೆ ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯು ಬೆಳೆ ಹಾನಿಗೊಳಗಾದ ಪ್ರಮಾಣಕ್ಕೆ ಅನುಗುಣವಾಗಿ ಪರಿಹಾರ ನೀಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.



ಮೈಸೂರಿನ ಹೊರವಲಯದ ಗದ್ದೆಯೊಂದರಲ್ಲಿ ಬೀಡುಬಿಟ್ಟಿದ್ದ ಕಾಡಾನೆಗಳನ್ನು ಚಿತ್ರದಲ್ಲಿ ಕಾಣಬಹುದು.

ಕೂದಲೆಳೆ ಅಂತರದಲ್ಲಿ ಸ್ಕೂಟರ್ ಸವಾರ ಪಾರು

ಇಲವಾಲದಿಂದ ಮುಂದೆ ಕೆರೆ ಏರಿ ಮೇಲೆ ಬರುತ್ತಿದ್ದ ಕಾಡಾನೆಗಳ ದಾಳಿಯಿಂದ ಕೂದಲೆಳೆ ಅಂತರದಲ್ಲಿ ಸ್ಕೂಟರ್ ಸವಾರ ಪಾರಾಗಿದ್ದಾನೆ. ಏರಿಯ ಕಡಿದಾದ ತಿರುವಿನಲ್ಲಿ ಇಬ್ಬನಿ ಕವಿದ ವಾತಾವರಣವಿದ್ದ ಕಾರಣ ಆನೆಗಳನ್ನು ಗಮನಿಸದೇ ಸ್ಕೂಟರ್ ಸವಾರ ಬಂದಿದ್ದಾನೆ. ಕೂಡಲೇ ಒಂದು ಸಲಗ ದಾಳಿ ಮಾಡಲು ಸೊಂಡಿಲು ಬೀಸಿದೆ. ಅದಾಗ್ಯೂ ಸವಾರ ಸ್ವಲ್ಪದರಲ್ಲೇ ಪಾರಾಗಿ ಜೀವ ಉಳಿಸಿಕೊಂಡಿದ್ದಾನೆ. ಈ ದೃಶ್ಯವನ್ನು ಕೆರೆಯ ಮತ್ತೊಂದು ಭಾಗದಲ್ಲಿದ್ದ ಜನ ಮೊಬೈಲ್‌ನಲ್ಲಿ ಚಿತ್ರೀಕರಿಸಿದ್ದಾರೆ.

ಸಿಬ್ಬಂದಿ ಕೆಂಗಣ್ಣಿಗೆ ಗುರಿ: ಕಾಡಾನೆ ದಾಳಿ ವೇಳೆ ರೈತರು ಹಾಗೂ ಗ್ರಾಮಸ್ಥರ ಕೆಂಗಣ್ಣಿಗೆ ಅರಣ್ಯ ಇಲಾಖೆಯ ಮುಂಚೂಣಿ ಸಿಬ್ಬಂದಿ ಗುರಿಯಾಗುತ್ತಿದ್ದಾರೆ. ಕಾಡಾನೆ ಓಡಿಸುವ ಕಾರ್ಯ ಹಾಗೂ ಕಾಡಾನೆಗಳಿಂದ ಉಂಟಾಗಬಹುದಾದ ಪ್ರಾಣಹಾನಿ ತಡೆಗೆ ಆದ್ಯತೆ ನೀಡಿ ಕಾರ್ಯನಿರ್ವಹಿಸಬೇಕಾದ ಒತ್ತಡವಿರುವುದರಿಂದ ಬೆಳೆ ನಷ್ಟ ಪರಿಹಾರದ ಮಾಹಿತಿ ಸಂಗ್ರಹಿಸಲು ವಿಳಂಬವಾಗುತ್ತಿದೆ. ಈ ಹಿನ್ನೆಲೆಯಲ್ಲಿ ರೈತರ ಆಕ್ರೋಶಕ್ಕೆ ಇಲಾಖೆಯ ಕೆಳಹಂತದ ಸಿಬ್ಬಂದಿ ಗುರಿಯಾಗುತ್ತಿದ್ದಾರೆ.

ಆನೆಗಳು ಒತ್ತಡಕ್ಕೆ ಒಳಗಾದವೇ?: ಒಂದು ತಿಂಗಳಿಂದ ಮೈಸೂರು, ಹೆಚ್.ಡಿ.ಕೋಟೆ, ಸರಗೂರು, ಹುಣಸೂರು, ಕೆಆರ್.ನಗರ, ಕೆಆರ್.ಪೇಟೆ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಸಂಚರಿಸುತ್ತಿದ್ದ ಈ ಗಂಡಾನೆಗಳು ಕೆ.ಆರ್.ಎಸ್ ಹಿನ್ನೀರಿನಲ್ಲಿ ಸಾಹಸ ಪ್ರದರ್ಶಿಸಿವೆ ದಡದಲ್ಲಿ ಅರಣ್ಯ ಸಿಬ್ಬಂದಿ ಹಾಗೂ ಕುತೂಹಲದಿಂದ ಸೇರಿದ್ದ ಜನರನ್ನು ಕಂಡು ಹಿನ್ನೀರಿನಲ್ಲೇ 3ರಿಂದ 4 ಗಂಟೆ ಇದ್ದ ಆನೆಗಳ ಸಾಹಸ ಕಂಡ ಅಧಿಕಾರಿಗಳು, ಇಲಾಖಾ ಸಿಬ್ಬಂದಿ ಕೆಲ ಸಮಯ ದಿಗ್ಮೂಢರಾಗಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ನಾ ನಿನ್ನ ಬಿಡಲಾರೆ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಭೈರತಿ ರಣಗಲ್(ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪುಷ್ಪಾ–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಬಘೀರ (ಕ)	4 ಪ್ರದರ್ಶನಗಳು
ಸಂಗಂ	
ಪುಷ್ಪಾ–2 (ತೆ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಜೀಬ್ರಾ (ಕ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಪುಷ್ಪಾ 2 (ಕ): ಬೆ.9.45ಕ್ಕೆ, ಮ.1.45ಕ್ಕೆ, ಪುಷ್ಪಾ 2 (ಹಿಂ): ಸಂ.5.50ಕ್ಕೆ, ಪುಷ್ಪಾ 2 (ತೆ): ರಾ.9.50ಕ್ಕೆ.
ಸ್ಕ್ರೀನ್ 2	ಮೋನಾ 2 (3ಡಿ)(ಇಂ): ಬೆ.11ಕ್ಕೆ, ಮ.3.45ಕ್ಕೆ, ಸಂ.6ಕ್ಕೆ, ಸೋಲೋ ಲೀವಿಂಗ್ ರಿವಾಕ್ (ಜ): ಮ.1.10ಕ್ಕೆ, ಪುಷ್ಪಾ 2 (ತೆ): ರಾ.8.10ಕ್ಕೆ.
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.25ಕ್ಕೆ, ಭೈರತಿ ರಣಗಲ್ (ಕ): ಮ.1.05ಕ್ಕೆ, ಹರಿದಾಸರ ದಿನಚರಿ (ಕ): ಸಂ.4ಕ್ಕೆ, ಪುಷ್ಪಾ 2 (ಕ): ಸಂ.6.15ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.10ಕ್ಕೆ, ಮ.2.10ಕ್ಕೆ, ಸಂ.6.05ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಅಮರನ್ (ಕ): ಬೆ.10.30ಕ್ಕೆ, ರಾ.7.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಧೀರ ಭಗತ್ ರಾಯ್ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಭೈರತಿ ರಣಗಲ್ (ಕ): ಬೆ.10.40ಕ್ಕೆ, ಪುಷ್ಪಾ 2 (ಕ): ಮ.1.15ಕ್ಕೆ, ಸಂ.5.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ಪುಷ್ಪಾ 2 (ಕ): ಬೆ.11.30ಕ್ಕೆ, ರಾ.7.45ಕ್ಕೆ, ಪುಷ್ಪಾ 2 (ತೆ): ಸಂ.4ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.30ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಪುಷ್ಪಾ 2 (ಕ): ಮ.2.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಎಸ್.ಎಂ.ಕೃಷ್ಣ ನಿಧನಕ್ಕೆ ಶಾಸಕ ತನ್ವೀರ್ ಸೇಠ್ ಕಂಬನಿ

ಮೈಸೂರು, ಡಿ.10(ಪಿಎಂ)– ಎಸ್.ಎಂ.ಕೃಷ್ಣ ಅವರ ಅಗಲಿಕೆಯು ಅವರ ಕುಟುಂಬದೊಂದಿಗೆ ಅವರ ಅಪಾರ ಅಭಿಮಾನಿಗಳು ಹಾಗೂ ಅವರಿಂದ ರಾಜಕೀಯ ನಾಯಕರಾಗಿ ಹೊರಹೊಮ್ಮಿದವರನ್ನೂ ಅನಾಥವಾಗಿಸಿದೆ ಎಂದು ಎನ್‌ಆರ್ ಕ್ಷೇತ್ರದ ಶಾಸಕ ತನ್ವೀರ್‌ಸೇಠ್ ಸಂತಾಪ ಸೂಚಿಸಿದರು.



ನಮ್ಮ ತಂದೆ ಅಜೀಜ್ ಸೇಠ್ ಅವರ ಕಾಲದಿಂದಲೂ ಕೃಷ್ಣ ಅವರು ನಮ್ಮ ಕುಟುಂಬದೊಂದಿಗೆ ಉತ್ತಮ ಒಡನಾಟ ಹೊಂದಿದ್ದರು. 1960ರ ಸಂದರ್ಭದಲ್ಲಿ ನಮ್ಮ ತಂದೆಯವರು, ಎಸ್.ಎಂ.ಕೃಷ್ಣ, ಬಂಗಾರಪ್ಪ, ರಾಚಯ್ಯ, ಕೆ.ಹೆಚ್.ರಂಗನಾಥ್ ಎಲ್ಲರು ಸೇರಿ ಸಮಾಜವಾದಿ ಪಾರ್ಟಿ ಪ್ರಾರಂಭ ಮಾಡಿದರು.

ನನಗೆ ಜನ್ಮಕೊಟ್ಟ ತಂದೆ ಅಜೀಜ್ ಸೇಠ್ ಆಗಿದ್ದರೆ, ಎಸ್.ಎಂ.ಕೃಷ್ಣ ಅವರು ನನ್ನ ರಾಜಕೀಯ ತಂದೆ ಸದಾ ನನಗೆ ಅವರು ಮಾರ್ಗದರ್ಶನ ನೀಡುತ್ತಿದ್ದರು. ನಮ್ಮ ತಂದೆಯವರ ನಿಧನದ ನಂತರ ನಾನು ವಿಧಾನಸಭೆ ಪ್ರವೇಶಿಸುವಲ್ಲಿ ಕೃಷ್ಣರ ಪಾತ್ರ ದೊಡ್ಡದು. ಎಸ್.ಎಂ.ಕೃಷ್ಣ ಅವರದು ಮೇರು ವ್ಯಕ್ತಿತ್ವ ಅವರು ಯಾರ ಬಗ್ಗೆಯೂ ದ್ವೇಷ ಇಟ್ಟುಕೊಂಡವರಲ್ಲ. ಅವರು ಮಾತಿನಲ್ಲಿ ಬಳಕೆ ಮಾಡುತ್ತಿದ್ದ ಪದಗಳು ಯಾರನ್ನು ನೋಯಿಸುತ್ತಿರಲಿಲ್ಲ. ಬಹುಶಃ ಸೈದ್ಧಾಂತಿಕ ರಾಜಕಾರಣ ಅವರ ತಲೆಗೆ ಕೊನೆ ಎಂದು ಭಾವಿಸಿದ್ದೇನೆ.

ವಿಧಾನ ಪರಿಷತ್, ವಿಧಾನಸಭೆ, ಲೋಕಸಭೆ ಹಾಗೂ ರಾಜ್ಯಸಭೆ ಸೇರಿದಂತೆ ನಾಲ್ಕು ಸದನಗಳ ಸದಸ್ಯರಾಗಿ ಅವರು ಸೇವೆ ಸಲ್ಲಿಸಿದ್ದು, ಇದು ವಿಶಿಷ್ಟ ಅದನ್ನು ಮೀರಿ ರಾಜ್ಯಪಾಲರಾಗಿಯೂ ಸೇವೆ ಸಲ್ಲಿಸಿದರು. ಬಹಳ ಕಡಿಮೆ ಜನಕ್ಕೆ ಅಂತಹ ಅವಕಾಶ ದೊರೆಯುತ್ತದೆ. ಅವರಲ್ಲಿ ಇದ್ದಂತಹ ಅಭಿವೃದ್ಧಿ ದೃಷ್ಟಿಕೋನವು ಬೆಂಗಳೂರನ್ನು ಸಿಲಿಕಾನ್ ಸಿಟಿ ಪಟ್ಟಕ್ಕೇರಿಸಿ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಂಗಳೂರು ಗುರುತಿಸುವಂತೆ ಆಯಿತು. ಆ ಮೂಲಕ ಕರ್ನಾಟಕ ನೆಲವು ವಿಶ್ವಕ್ಕೆ ಪರಿಚಯವಾಯಿತು ಎಂದು ತಿಳಿಸಿದರು.

ಹನುಮಂತನಗರದ ವೀರ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಹನುಮ ಜಯಂತಿ

ಮೈಸೂರು, ಡಿ.10–ಮೈಸೂರಿನ ಬನ್ನಿಮಂಟಪ 'ಸಿ' ಬಡಾವಣೆಯ ಹನುಮಂತನಗರ ಶ್ರೀ ವೀರಾಂಜನೇಯಸ್ವಾಮಿ ದೇವಸ್ಥಾನ ಟ್ರಸ್ಟ್ ವತಿಯಿಂದ ಹನುಮ ಜಯಂತಿ ಏರ್ಪಡಿಸಲಾಗಿದೆ.

ಡಿ.12ರ ಗುರುವಾರ ಸಂಜೆ 6.30ಕ್ಕೆ ಆರಂಭವಾಗುವ ಪೂಜಾ ವಿಧಾನ 9.30ರವರೆಗೆ ನೆರವೇರಲಿದೆ. ನಂತರ ರಾತ್ರಿ 10 ಗಂಟೆಗೆ ಶ್ರೀ ಮುರುಗನ್ ತಂಡದಿಂದ ಅಖಂಡ ಭಜನೆ ಏರ್ಪಡಿಸಲಾಗಿದೆ. ಡಿ.13ರ ಶುಕ್ರವಾರ ಬೆಳಗ್ಗೆ 7.30 ರಿಂದ 11 ಗಂಟೆಯವರೆಗೆ ವಿಶೇಷ ಪೂಜಾ ಕಾರ್ಯಕ್ರಮವಿದ್ದು, 12 ಗಂಟೆಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಸಂಜೆ 6.30ಕ್ಕೆ ಶ್ರೀಮತಿ ಭಾಗ್ಯದತ್ತ ಅವರಿಂದ ಸುಗಮ ಸಂಗೀತವಿದೆ. ಡಿ.14ರ ಶನಿವಾರ ಬೆಳಗ್ಗೆ ವಿಶೇಷ ಪೂಜೆ, ಅಲಂಕಾರವಿದ್ದು, ಸಂಜೆ 6.30ಕ್ಕೆ ಶ್ರೀಕೃಷ್ಣ ಭಜನಾ ಮಂಡಳಿಯಿಂದ ಭಜನೆ ಏರ್ಪಡಿಸಲಾಗಿದೆ. ಡಿ.15ರ ಭಾನುವಾರ ಸತ್ಯನಾರಾಯಣ ಪೂಜೆ ಇದ್ದು, ಮಧ್ಯಾಹ್ನ 12ಕ್ಕೆ ಅನ್ನಸಂತರ್ಪಣೆ. ಹೆಚ್ಚಿನ ಮಾಹಿತಿಗೆ ಎಂ.ಬಿ.ಮಂಜುನಾಥ್ (ಅಧ್ಯಕ್ಷರು), ಮೊಬೈಲ್: 90731313132, ಸುರೇಶ್ (ಕಾರ್ಯದರ್ಶಿ) ಮೊ.ನಂ.9945716422. ಕೆ.ಬಿ.ಕಾಳೇಗೌಡ (ಖಜಾಂಚಿ) ಮೊ.ನಂ.9880645697 ಸಂಪರ್ಕಿಸಬಹುದು.

ಬ್ರಾಹ್ಮಣ ವಧು–ವರರ ಸಮಾವೇಶ

ಮೈಸೂರು, ಡಿ. 10– ಬ್ರಾಹ್ಮಣ ಕಂಕಣ ಮಾಹಿತಿ ಸಭಾ ವತಿಯಿಂದ ಡಿ. 22 ರಂದು ಬೆಂಗಳೂರಿನ ರಾಜಾಜಿನಗರದಲ್ಲಿರುವ ಶ್ರೀ ಶಂಕರ ಸೇವಾ ಸಮಿತಿ ಸಭಾಂಗಣದಲ್ಲಿ ಬ್ರಾಹ್ಮಣ ಸಮುದಾಯದ ವಧುವರರ ಸಮಾವೇಶವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 93427 34832 ಸಂಪರ್ಕಿಸಬಹುದು.



ಖದೀಮನ ಬಂಧನ;ಲಕ್ಷಾಂತರ ರೂ ಚಿನ್ನಾಭರಣ, ದ್ವಿಚಕ್ರ ವಾಹನ ವಶಕ್ಕೆ

ಮೈಸೂರು, ಡಿ.10(ಎಸ್‌ಪಿಎನ್)–ನಗರ ವಿವಿಧೆಡೆ ಕಳ್ಳತನ ಮಾಡಿದ್ದ ಕಳ್ಳನನ್ನು ಬಂಧಿಸಿರುವ ಮೈಸೂರು ನಗರ ಸಿಸಿಬಿ ಪೊಲೀಸರು, ಈತನಿಂದ 217 ಗ್ರಾಂ ಚಿನ್ನಾಭರಣ, 1.560 ಕೆಜಿ ತೂಕದ ಬೆಳ್ಳಿಯ ಪದಾರ್ಥಗಳು ಮತ್ತು 1 ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ ಡಿ.4ರಂದು ಮೈಸೂರು ನಗರದ ಮಂಡಿ ಮೊಹಲ್ಲಾದ 2ನೇ ಈದ್ಗಾದ ಬಳಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ವ್ಯಕ್ತಿಯನ್ನು ಸಿಸಿಬಿ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಈತ ಮತ್ತು ಮತ್ತೊಬ್ಬ ಆರೋಪಿಯೊಂದಿಗೆ ಸೇರಿ ಮೈಸೂರು ನಗರ ಮತ್ತು ಜಿಲ್ಲೆಯ ವಿವಿಧ ಸ್ಥಳಗಳಲ್ಲಿ 8 ಕಡೆ ಮನೆಗಳ್ಳತನ ಹಾಗೂ ಒಂದು ದ್ವಿಚಕ್ರವಾಹನ ಕಳವು ಮಾಡಿರುವುದಾಗಿ ಪೊಲೀಸರ ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾನೆ. ಮೈಸೂರು ನಗರದ ನಜರ್‌ಬಾದ್ ಠಾಣೆ 1, ಎನ್. ಆರ್.ಠಾಣೆ 1, ಹುಣಸೂರು ಟೌನ್ 4, ಮತ್ತು ಕೆ.ಆರ್.ನಗರ ಠಾಣೆ 2 ಪ್ರಕರಣ ಸೇರಿದಂತೆ ಒಟ್ಟು 8 ಪ್ರಕರಣ ಭೇದಿಸಿದಂತಾಗಿದೆ. ಮತ್ತೊಬ್ಬ ಆರೋಪಿಯ ಪತ್ತೆ ಕಾರ್ಯ ಮುಂದುವರೆದಿದೆ.

ಈ ಕಾರ್ಯದಲ್ಲಿ ಕೇಂದ್ರ ಸ್ಥಾನ, ಅಪರಾಧ ಮತ್ತು ಸಂಚಾರ ವಿಭಾಗ ಡಿಸಿಪಿ ಜಾಹ್ನವಿ, ಸಿಸಿಬಿ ಘಟಕದ ಎಸಿಪಿ ಎಸ್.ಎನ್.ಸಂದೇಶ್‌ಕುಮಾರ್ ನೇತೃತ್ವದಲ್ಲಿ, ಸಿಸಿಬಿ ಘಟಕದ ಇನ್ಸ್‌ಪೆಕ್ಟರ್ ಎಂ. ಮೋಹನ್‌ಕುಮಾರ್, ಪಿಎಸ್‌ಐ ಮಾರುತಿ ಅಂತರಗಟ್ಟಿ ಎಎಸ್‌ಐಗಳಾದ ಅಸ್ಗರ್ ಖಾನ್, ಎಂ.ಆರ್.ಗಣೇಶ್, ರಾಮೇಗೌಡ, ಸಿಬ್ಬಂದಿಗಳಾದ ರಾಮಸ್ವಾಮಿ, ಪ್ರಕಾಶ್, ಜಯರಾಮ್, ಸುರೇಶ್, ಮಹೇಶ್, ಉಮಾಮಹೇಶ್, ನರಸಿಂಹರಾಜು, ಮಹೇಶ್, ಶಿವಣ್ಣ, ರವಿ ಗೋವಿಂದ ಇದ್ದರು ಎಂದು ನಗರ ಪೊಲೀಸ್ ಆಯುಕ್ತರ ಕಚೇರಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಿಂಸಾಚಾರಕ್ಕೆ ತಿರುಗಿದ ಪಂಚಮಸಾಲಿ ಹೋರಾಟ: ಲಾಠಿ ಚಾರ್ಜ್, ಕಲ್ಲು ತೂರಾಟ; ಸ್ವಾಮೀಜಿ ವಶಕ್ಕೆ

ಬೆಳಗಾವಿ, ಡಿ.10– 2ಎ ಮೀಸಲಾತಿಗೆ ಆಗ್ರಹಿಸಿ ಲಿಂಗಾಯತ ಪಂಚಮಸಾಲಿ ಸಮುದಾಯದ ಹೋರಾಟ ಮಂಗಳವಾರ ತೀವ್ರ ಹಿಂಸಾ ಸ್ವರೂಪ ಪಡೆದುಕೊಂಡಿದ್ದು, ಬೆಳಗಾವಿಯ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ ವೇಳೆ ಪೊಲೀಸರು ಪ್ರತಿಭಟನಾಕಾರರನ್ನು ನಿಯಂತ್ರಿಸಲು ಲಾಠಿ ಚಾರ್ಜ್ ನಡೆಸಿದರು.

ವಿಧಾನಮಂಡಲ ಚಳಿಗಾಲದ ಅಧಿವೇಶನ ನಡೆಯುತ್ತಿರುವ ಸುವರ್ಣ ವಿಧಾನಸೌಧದ ಸುತ್ತ ಪೊಲೀಸರು ಬ್ಯಾರಿಕೇಡ್‌ಗಳನ್ನು ಹಾಕಿದ್ದರು. ಪ್ರತಿಭಟನಾಕಾರರು ಆ ಬ್ಯಾರಿಕೇಡ್‌ಗಳನ್ನು ತಳ್ಳಿ ಸುವರ್ಣ ಸೌಧಕ್ಕೆ ನುಗ್ಗಲು ಯತ್ನಿಸಿದರು. ಇದರಿಂದ ಭಾರಿ ಹೈಡ್ರಾಮಾವೇ ನಡೆದುಹೋಯಿತು. ಪ್ರತಿಭಟನಾಕಾರರು ಬ್ಯಾರಿಕೇಡ್‌ಗಳ ತಳ್ಳಿಕೊಂಡು ನುಗ್ಗಲು ಯತ್ನಿಸಿದಾಗ ಪೊಲೀಸರು ಲಾಠಿಚಾರ್ಜ್ ನಡೆಸಿದರು. ಇದರಿಂದ ಹಲವು ರೈತರಿಗೆ ಗಾಯಗಳಾಗಿದ್ದು, ಪರಿಸ್ಥಿತಿ ಉದ್ವಿಗ್ನಗೊಂಡಿದೆ.

ಬಸವ ಜಯ ಮೃತ್ಯುಂಜಯ ಸ್ವಾಮಿ ನೇತೃತ್ವದಲ್ಲಿ ಪಂಚಮಸಾಲಿ ಸಮಾಜ 2ಎ ಮೀಸಲಾತಿಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದು, ಇಂದು ಟ್ರ್ಯಾಕ್ಟರ್ ರ್ಯಾಲಿಯ ಮೂಲಕ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ್ದರು. ಆಕ್ರೋಶಗೊಂಡ ಪ್ರತಿಭಟನಾಕಾರರು ಸರ್ಕಾರಿ ವಾಹನಗಳು, ಶಾಸಕರು ಮತ್ತು ಎಂಎಲ್‌ಸಿಗಳಿಗೆ ಸೇರಿದ ವಾಹನಗಳ ಮೇಲೆ ಕಲ್ಲು ತೂರಾಟ ನಡೆಸಿದರು. ಈ ವೇಳೆ ಇಪ್ಪತ್ತಕ್ಕೂ ಅಧಿಕ ಪೊಲೀಸರಿಗೆ ಗಾಯಗಳಾಗಿದ್ದರೆ, ಐವತ್ತಕ್ಕೂ ಅಧಿಕ ಹೋರಾಟಗಾರರು ಗಾಯಗೊಂಡಿದ್ದಾರೆ.



ಪರಿಸ್ಥಿತಿ ಕೈಮೀರುತ್ತಿರುವುದನ್ನು ಗಮನಿಸಿದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ಎಡಿಜಿಪಿ) ಆರ್.ಹಿತೇಂದ್ರ ಅವರು ಲಾಠಿ ಚಾರ್ಜ್‌ಗೆ ಆದೇಶಿಸಿದ್ದಾರೆ. ಲಾಠಿಚಾರ್ಜ್‌ನಲ್ಲಿ ಗಾಯಗೊಂಡ ಹಲವಾರು ಪ್ರತಿಭಟನಾಕಾರರನ್ನು ಆಸ್ಪತ್ರೆಗೆ ರವಾನಿಸಲಾಗಿದೆ.

ಜಯಮೃತ್ಯುಂಜಯ ಸ್ವಾಮೀಜಿ ವಶಕ್ಕೆ: ಇನ್ನು ಈ ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಪರಿಸ್ಥಿತಿ ಕೈಮೀರುವ ಹಂತಕ್ಕೆ ಹೋದಾಗ ಪ್ರತಿಭಟನೆಯ ನೇತೃತ್ವ ವಹಿಸಿರುವ ಕೂಡಲಸಂಗಮದ ಬಸವ ಜಯಮೃತ್ಯುಂಜಯ ಸ್ವಾಮೀಜಿ ಅವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಹೆಚ್ಚುವರಿ ಎಸ್ಪಿ ನಾರಾಯಣ್ ಬರಮಣಿ ಅವರು ಸ್ವಾಮೀಜಿ ಅವರನ್ನು ಇನ್ನೋವಾ ಕಾರಿನಲ್ಲಿ ಕರೆದುಕೊಂಡು ಹೋದರು.

ಇನ್ನು ರಾಜಕೀಯ ನಾಯಕರಾದ ಬಸನಗೌಡ ಪಾಟೀಲ್ ಯತ್ನಾಳ್, ಈರಣ್ಣ ಕಡಾಡಿ, ಅರವಿಂದ್ ಬೆಲ್ಲದ್ ಸೇರಿದಂತೆ ಹಲವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

2ನೇ ವರ್ಷದ ಸವಿನೆನಪು



ಶ್ರೀಮತಿ ಸತ್ಯವತಿ

ನೀವು ನಮ್ಮನ್ನಗಲಿ ಇಂದಿಗೆ 2 ವರ್ಷ ಕಳೆದರು ನಿಮ್ಮ ನೆನಪು ಹಸಿರಾಗಿದೆ, ಸದಾ ನಿಮ್ಮ ನೆನಪಿನಲ್ಲಿರುವ ಪತಿ ಕೃಷ್ಣಮೂರ್ತಿ, ಮೊಮ್ಮಕ್ಕಳು ಹಮಿತ್‌ಶೆಟ್ಟಿ, ಕಾರುಣ್ಯ, ಎಂ.ಟಿ.ಎಸ್ ಕುಟುಂಬ ಹಾಗೂ ಜೆ. ನಾಗರಾಜ್ ಕುಟುಂಬ

20X30 ಸೈಟುಗಳು ಮಾರಾಟಕ್ಕೆ ಲಭ್ಯವಿದೆ

ಟೋಲ್‌ಗು ಮೊದಲು, ಮೈಸೂರು ಏರ್‌ಪೋರ್ಟ್ ಹತ್ತಿರ.

ನೇರವಾಗಿ ಸಂಪರ್ಕಿಸಿ

99644 04954
80509 49051

HOUSE FOR SALE

Siddartha Layout
20x40 G+1
Sangeetha
Corner Backside
9591348280

We Are Hiring

Experienced Steward, Captain, Barman, Bantendor For Newly Opening Restobar in Mysore

Interview Time : 11-00pm to 2:30 pm & 6.30 to 8:30pm

9900430790, 9113236415
7996091189

ಸಂತಸ ಫರ್ಟಿಲಿಟಿ ವತಿಯಿಂದ ಮಕ್ಕಳು ಬಯಸುವ ದಂಪತಿಗಳಿಗೆ ಉಚಿತ ತಪಾಸಣಾ ಶಿಬಿರ ನಡೆಸಲಾಗುವುದು

santasa
Bringing Baby Bliss

ದಿನಾಂಕ: 13-12-2024 ಶುಕ್ರವಾರ ಹಾಗೂ 14-12-2024 ಶನಿವಾರ
ಸಮಯ: ಬೆಳಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ

ವಿಶೇಷ ಕೊಡುಗೆಗಳು

- ಮಹಿಳೆಯರಿಗೆ ಉಚಿತ ಸ್ಕ್ಯಾನಿಂಗ್
- ಪುರುಷರಿಗೆ ಉಚಿತ ವೀರ್ಯಾಣು ಪರೀಕ್ಷೆ
- ಫರ್ಟಿಲಿಟಿ ಹಾಗೂ ಸ್ತ್ರೀರೋಗ ಸಮಸ್ಯೆಗೆ ತಜ್ಞರೊಂದಿಗೆ ಉಚಿತ ಸಮಾಲೋಚನೆ
- ಲ್ಯಾಬ್ ಟೆಸ್ಟ್‌ಗಳ ಮೇಲೆ ಶೇ. 20 ರಷ್ಟು ರಿಯಾಯಿತಿ

*ಷರತ್ತುಗಳು ಅನ್ವಯಿಸುತ್ತವೆ.

ಸಂತಸ ಫರ್ಟಿಲಿಟಿ

ಸ್ಥಳ : ಹೊಸ ಕಾಂತರಾಜ ಅರಸ್ ರಸ್ತೆ, ಪಂಚವಟಿ ಹೋಟೆಲ್ ಎದುರು, ಬಲ್ಲಾಳ್ ವೃತ್ತದ ಹತ್ತಿರ, ಲಕ್ಷ್ಮೀಪುರಂ, ಮೈಸೂರು

ಹೆಚ್ಚಿನ ಮಾಹಿತಿಗಾಗಿ ಮತ್ತು ಉಚಿತ ಶಿಬಿರಕ್ಕೆ ನಿಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಸಂಪರ್ಕಿಸಿ:
9620099936, 9845049079

7ನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ N.ಲಕ್ಷ್ಮಿ

ನಿಧನ: 11.12.2017

ನೀವು ನಮ್ಮನ್ನಗಲಿ ಇಂದಿಗೆ 7 ವರ್ಷ ಕಳೆದರೂ ನಿಮ್ಮ ನೆನಪು ನಮ್ಮ ಮನದಲ್ಲಿ ಸದಾ ಹಸಿರು

ದುಃಖತಪ್ತರು:
ಮಗಳು ಕು.ಮೌಲ್ಯ (ಅಮ್ಮು)
ತಂಗಿ ಕು.N.ಪ್ರತಿಮಾ
ತಂದೆ N.ನಾಗರಾಜು ಡ್ರೈವರ್ (ನಿ) ಕಾಡ ಇಲಾಖೆ, ಮೈಸೂರು ಮತ್ತು ಬಂಧು ಮಿತ್ರರು

MUDA APPROVED
Vee2 Developers

YEAR END DHAMAKA

₹20 Lakhs Only
(20 x 30 Site)

HERITAGE CITY

Uttanahalli, Mysuru
PRM/KA/RERA/1268/PR/160124/006555
READY FOR REGISTRATION
Available Plots 20x30 & 30x40
8055 004 400

ಕಾಂಚೀಪುರಂ ರೇಷ್ಮೆ ಸೀರೆಗಳು

50% ರಿಯಾಯಿತಿ

ಮಾರಾಟ ಮತ್ತು

ಹಳೆ ಸೀರೆಗಳ ಎಕ್ಸ್‌ಚೇಂಜ್ ಆಫರ್
ಈ ಅವಕಾಶ ಕೆಲವೇ ದಿನಗಳು ಮಾತ್ರ

ಹೋಟೆಲ್ ಮಯೂರ ಹೊಯ್ಸಳ
ಜೆಎಲ್‌ಬಿ ರಸ್ತೆ, ಮೈಸೂರು

ಮೊ. : 9481820079

SESHADRIPURAM INSTITUTIONS

Bengaluru | Mysuru | Tumakuru | Mandya
27, Nagappa Street, Seshadripuram Bengaluru-560 020.
Phone: 22955350.
Website: www.set.edu.in E-mail : info@set.edu.in

Require

Seshadripuram Institute of Technology
Campus No. 4, 5, 6A, 6B & 7A, Kadakola Industrial Area, Kadakola Village, Jaipura Hobli, Mysuru Taluk, Mysuru-571 311

ACCOUNTANT
B. Com with at least 2 years experience with Computer knowledge and Tally

LIBRARY ASSISTANT
Diploma Course offered by the Board of Technical Education. Minimum 1 year working experience in an academic Library. Basic knowledge of using computer and Library Software

OFFICE ASSISTANT
Graduate with at least 2 years experience with Computer knowledge

Eligible candidates may apply in handwritten application along with a detailed resume, passport size photo & copies of testimonials etc., to the **Honorary General Secretary, Seshadripuram Educational Trust, Bengaluru - 560 020 within 7 days through E-mail: info@set.edu.in**

N. R. Pandith Aradhya, President
Dr. Wooday P. Krishna, Honorary General Secretary

4ನೇ ವರ್ಷದ ಸವಿನೆನಪು



ವೈ.ಎಸ್.ನಾಗರತ್ನಮ್ಮ

ನೀವು ನಮ್ಮನ್ನಗಲಿ ನಾಲ್ಕು ವರ್ಷ ಕಳೆದರು ನಿಮ್ಮ ನೆನಪು ಸದಾ ನಮ್ಮ ಮನದಲ್ಲಿ ಇದೆ

ದುಃಖತಪ್ತರು
ಶ್ರೀಮತಿ ಕೆ.ಎನ್.ಶೋಭಾ, ಬಿ.ಆರ್.ರವಿ, ವೈ.ಎನ್.ಚೇತನ್ ಆರ್.ರಾಜೇಶ (ಪುಣ್ಯ ಎಂಟರ್‌ಪ್ರೈಸಸ್) ಹಾಗೂ ಲೇಟ್ ಲಕ್ಷ್ಮಮ್ಮ ಲಕ್ಕಪಗೌಡ ಕುಟುಂಬವರ್ಗ ಬಿಳಿಕೆರೆ

SITE FOR SALE

50x80 North facing site.
Prime location. Opposite to park in ROOPANAGAR.
Attached to SBM bogadi.
Near christ public school.
Price is 4000 per sqft.
8884616461 | 8792235466

BEFORE THE HON'BLE III ADDL. DISTRICT JUDGE AT MANDYA (SITTING AT SRIRANGAAPATNA)
R.A. No. 5008/2022

Chetan P. Tayal S/o Late Nandakishore, aged about 67 years, residing at No.50, 'GOLD TOWERS', Residency Road, Bangalore-560025 ...**Appellant**

Vs

Sakamma and Others ...**Respondents**

Respondent No.11 Smt. Basamna, W/o Manchaiah, D/o Subbaiah @ Masanaiah, Aged about 66 years, R/at Kyathamaranahalli Village, In front of Cinema Theatre, Udayagiri Post, Mysore Taluk & District

SUMMONS TO DEFENDANT THROUGH PAPER PUBLICATION

Whereas, the above named Appellant instituted the above top noted Appeal against the Respondents on the file of the III Additional District & Sessions Judge, Mandya (Sitting at Srirangapatna), since the Respondent No.11 is avoiding to take the notice of the above Appeal proceedings, the notice to Respondant No.11 is published in this newspaper, accordingly, the Respondent No.11 is hereby summoned to appear before this court in person or through pleader on the **30th day of January 2025,** at 11 AM to answer the same failing which you will be placed ex- parte, given under my hand and seal of the court, this 05th day of December 2024.

SCHEDULE

Dry land measuring 1 Acre of land, bearing Sy. No.23, assessed at about Rs.1-50 Ps. situated at Basthipura Village, Belagola Hobli, Srirangapatna Taluk, bounded on; East: by the land of Koorgalli, Shivaramaiah, West: by the land of Boraiah, South: by the land of two acres sold by the Respondents in favour of Kamalamma, W/o Raigaswamyshetty of Bangalore City in site survey No.23 and North: by the land of Respondents 1 to 7 out of suit Sy. No.23, now sold the same to the Respondents 8 and 9.

By Order of the Court
Sd/- Chief Ministerial Officer
III Addl. District and Session Court Mandya (Sitting ast Srirangapatna)

Advocate for Petitioner
M. Sampath Kumar, Advocate, Building No. 11, House No. 123, Kengeri Satellite Town, Bangalore-560060. Mob:9845147741

Walk-in Drive: rProcess is Hiring Data Annotators for AI projects

Wanted candidates with good communication, computer skills, Attention to detail & result oriented are required qualities.

Walk-in with all Documents:
11th Dec to 16th Dec 2024 (9AM to 5PM)

Walk-in Venue:
1. Gunamba Towers, No. 579/2, D. Subbaiah Road, Lakshmipuram, Mysuru-04
2. rProcess, T. N Pura Main Road, Alanahalli, Mysuru-28

Contact for more information:
99800 07732 / 63617 94249 / 78295 73628
Apply to Email: careers@rprocess.net
visit us on www.rprocess.in

2.5 BHK
HOME INTERIORS @ ₹ 2.5 Lakh*

Home Space Mart
*T&C Apply
91089 23123

45
ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

JOB OPPORTUNITY
URGENTLY REQUIRED

- **Experienced Receptionist**: (Female)
  Any Degree with good computer knowledge and good communication skills.
- **B.Sc., / M.Sc., Female Candidates GNM / B.Sc., FEMALE STAFF NURSES**

For a reputed Hospital in Mysore

Attractive Salaries Offered. Free Accommodation provided

For more details please contact: 9845049079

IMPERIAL CITY

Mega Residential Villa Township
Mysuru - Hunsur Main Road, Mysuru
Just 4 km from Ilavala Satellite Bus Stand
BOOKING OPEN
Just ₹749/ per Sq.ft.
MUDA LIMITS
Easy 4 Instalment Facility
30x40 | 30x50 | 40x60 | 50x80
Sites with all facilities
HYLAND PROPERTIES 88840 71010 74060 78080
Kalidasa Road, Vijayanagara 1st Stage, Mysuru

ಅರ್ಕ ಮಹಾವಿದ್ಯಾಲಯ

ಶಿಕ್ಷಕ / ಶಿಕ್ಷಕಿಯರು ಬೇಕಾಗಿದ್ದಾರೆ

- ದೈಹಿಕ ಶಿಕ್ಷಣ ಶಿಕ್ಷಕರು – 01 ಹುದ್ದೆ
- ಕಲೆ ಮತ್ತು ಕರಕುಶಲ ಶಿಕ್ಷಕರು – 01 ಹುದ್ದೆ
- ಸ್ಪೋಕನ್ ಇಂಗ್ಲೀಷ್ ಶಿಕ್ಷಕರು – 01 ಹುದ್ದೆ

ವಿಳಾಸ : ಅರ್ಕ ಮಹಾವಿದ್ಯಾಲಯ, ಮಾದಹಳ್ಳಿ, ಕಣಿಯನಹುಂಡಿ ಗೇಟ್, ಬೋಗಾದಿ-ಗದ್ದಿಗೆ ಮುಖ್ಯರಸ್ತೆ, ಮೈಸೂರು.

9986133697 | 9606954534 | 9606954535

ಬೇಕಾಗಿದ್ದಾರೆ

ನಂಜನಗೂಡಿನ ಪ್ರತಿಷ್ಠಿತ ಆಸ್ಪತ್ರೆಗಳು ಈ ಕೆಳಗಿನ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳುತ್ತವೆ

1. **ಡ್ಯೂಟಿ ಡಾಕ್ಟರ್ಸ್ :** 2+ ವರ್ಷಗಳ ಅನುಭವ ಹೊಂದಿರುವ ವೈದ್ಯಕೀಯ/ ಸ್ನಾತಕೋತ್ತರ ಪದವೀಧರರು
2. **ನರ್ಸಿಂಗ್ ಸಿಬ್ಬಂದಿ ಎಲ್ಲಾ ಹಂತಗಳು:** ಪದವಿ / ಪಿಜಿ ಜೊತೆಗೆ 5+ ವರ್ಷಗಳ ಅನುಭವ, ಫ್ರೆಶರ್ಸ್‌ಗಳನ್ನು ಕೂಡ ಪರಿಗಣಿಸಲಾಗುವುದು.
3. **ಲ್ಯಾಬ್ ಟೆಕ್ನಿಷಿಯನ್/ ರೇಡಿಯೋ ಡಯಾಗ್ನೋಸ್ಟಿಕ್ಸ್:** ಸಂಬಂಧಿತ ಕ್ಷೇತ್ರದಲ್ಲಿ ಪದವಿ/ ಡಿಪ್ ಪದವಿ ಪಡೆದಿರಬೇಕು ಮತ್ತು ಅನುಭವದಾರರು
4. **ಔಷಧಿಕಾರರು(Pharmacist'):** ಬಿ ಫಾರ್ಮಸಿ / ಎಂ ಫಾರ್ಮಸಿ ಹಾಗೂ ಅನುಭವದಾರರು
5. **ಆಫೀಸ್ ಮ್ಯಾನೇಜರ್/ಸ್ಟಾಫ್:** ಪದವಿ/ಸ್ನಾತಕೋತ್ತರ ಪದವಿ ಮತ್ತು ಅನುಭವದಾರರು
6. **ಸಹಾಯಕರು/ ವಾಹನ ಚಾಲಕರು:** 10ನೇ ತರಗತಿ/ಪಿಯುಸಿ. ಮತ್ತು ಅನುಭವದಾರರು

ಅನುಭವದ ಆಧಾರದ ಮೇಲೆ ಅತ್ಯುತ್ತಮ ಸಂಬಳ ಮತ್ತು ಕಾರ್ಯಕ್ಷಮತೆ ಪ್ರೋತ್ಸಾಹಕ ಪ್ರಯೋಜನಗಳು. ಅಗತ್ಯದ ಆಧಾರದ ಮೇಲೆ ವಸತಿ.

ಕರ್ತವ್ಯ ಸ್ಥಳ: ನಂಜನಗೂಡು, ದಯವಿಟ್ಟು ರೆಸ್ಯೂಮ್ ಮತ್ತು ವಿವರಗಳನ್ನು ಮ್ಯಾನೇಜರ್‌ಗೆ tmh05manager@gmail.com ಇಮೇಲ್ ಮತ್ತು ವಾಟ್ಸ್‌ಆಪ್‌ನಲ್ಲಿ ಪಿಡಿಎಫ್ ಕಳುಹಿಸಿ

ಮೊ: 9380404936

**ಅಲೋಪತಿಕ್ ಅಲ್ಲದ ಪ್ರೊಫೈಲ್‌ಗಳನ್ನು (ಬಿಎಎಂಎಸ್ / ಬಿಎಚ್‌ಎಂಎಸ್ / ಯುನಾನಿ) ಸಹಾಯಕ ಪಾತ್ರಗಳಿಗೆ ಪರಿಗಣಿಸಬಹುದು. ಅನುಭವದಅನುಗುಣವಾಗಿ ಸಂಬಳ.

** ಕನ್ಸಲ್ಟೆಂಟ್‌ಗಳು / ಸೀನಿಯರ್ ಕನ್ಸಲ್ಟೆಂಟ್‌ಗಳು ದಯವಿಟ್ಟು ಕನ್ಸಲ್ಟೆನ್ಸಿಗಾಗಿ ನಿಮ್ಮ ಪ್ರೊಫೈಲ್‌ಗಳನ್ನು ಹಂಚಿಕೊಳ್ಳಿ

4ನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ ಸುಶೀಲಮ್ಮ

ನಿಧನ 11.12.2020

ಮಾಜಿ ಉಪಾಧ್ಯಕ್ಷರು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ

ಕಳೆದ ಪ್ರತಿಕ್ಷಣವೂ ನಿಮ್ಮ ನೆನಪಿಗೆ ಅರ್ಪಣೆ ಮಿಡಿದ ಪ್ರತಿ ಕಂಬನಿಯೂ ನಿಮ್ಮ ತ್ಯಾಗಕ್ಕೆ ಸಮರ್ಪಣೆ ಸದಾ ನಮ್ಮ ಸ್ಫೂರ್ತಿಯ ಚಿಲುಮೆಯಾಗಿದ್ದ ನಮ್ಮವ್ವ

ನೀವು ನಮ್ಮನ್ನು ಅಗಲಿ ಇಂದಿಗೆ 4 ವರ್ಷ ಆದರೂ ಸದಾ ನಿಮ್ಮ ನೆನಪಿನಲ್ಲಿ ನಿಮ್ಮ ಮಕ್ಕಳು ಹಾಗೂ ಕುಟುಂಬ ವರ್ಗದವರು ನಿಮ್ಮ ಆತ್ಮಕ್ಕೆ ಚಿರಶಾಂತಿಯನ್ನು ಕೋರುತ್ತಿರುವ

ಪಾಲಹಳ್ಳಿ, ಶ್ರೀರಂಗಪಟ್ಟಣ ತಾಲ್ಲೂಕು

ಇಂತಿ ಶ್ರೀ ಶಂಕರೇಗೌಡ ಮತ್ತು ಮಕ್ಕಳು ಹಾಗೂ ಅಪಾರ ಕುಟುಂಬ ವರ್ಗದವರು

Bombay Dyeing | Vastra Vaibhav

Year End Sale

Upto **50% off**

Bedsheets, Curtains, Mattresses, Carpets & more!




Shiv Market, shivarampet Beside Rajkamal Theatre, Mysuru

IMKTA TEACHER TRAINING COURSE INDIA MYSORE

IMKTA Since 2003

21 years of success in PreSchool Teacher Training and Placements



JOIN DIPLOMA MONTESSORI/ PRIMARY TEACHER TRAINING
DIPLOMA IN SPECIAL EDUCATION
- Learning Disability
- Autism
- ADHD Syndrome
- Slow Learners

GET PLACED IN INDIA, DUBAI, QATAR, UAE, SHARJAH, OMAN
- FOR SSLC, PUC OR ANY GRADUATES
- REGULAR/ SATURDAY CLASS

43RD BATCH ORIENTATION & INDUCTION CEREMONY
15 DECEMBER | SUNDAY

Admission Open
Online course available

Alpha International School
Manandavadi Road, Near Ring Road Signal Junction, Srirampura, Mysore
7829937469
WWW.IMKTA.IN

ಪುರಸಭಾ ಕಾರ್ಯಾಲಯ, ಗುಂಡ್ಲುಪೇಟೆ.

ಚಾಮರಾಜನಗರ ಜಿಲ್ಲೆ–571111
Office: 08229-222236 | Fax: 08229-222226 | Helpline: 08229-223377 |
E-mail: tmc_gundlupet@yahoo.com | Website: www.gundlupettown.gov.in

ಸಂಖ್ಯೆ: ಪುಗು/05/ಪುರಸಭೆ ನಿಧಿ/2024–25 ದಿನಾಂಕ : 09.12.2024

ಷೆಡ್ಯೂಲ್–ಬಿ ಪ್ರಕಟಣೆ

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು ಹಾಗೂ ಇತ್ತೀಚಿನ ತಿದ್ದುಪಡಿ ನಿಬಂಧನೆಗೆ ಒಳಪಟ್ಟಂತೆ ನೋಂದಾಯಿಸಿದ ಅರ್ಹ ಪಂಪು, ಮೋಟಾರ್ ಸರಬರಾಜುದಾರರು / ಡೀಲರ್‌ಗಳಿಂದ ಗುಂಡ್ಲುಪೇಟೆ ಪುರಸಭೆ ವ್ಯಾಪ್ತಿಯಲ್ಲಿ ಈ ಕೆಳಗೆ ನಮೂದಿಸಿದ ಕಾಮಗಾರಿಗಳಿಗೆ ಷೆಡ್ಯೂಲ್–ಬಿ ಟೆಂಡರ್ ಗಳನ್ನು ಆಹ್ವಾನಿಸಲಾಗಿದೆ. ಕಾಮಗಾರಿಯ ವಿವರ:

Brief Specifications

1. 500MM MS/PSC Pipeline Leak Arresting work near Debur Pump House
2. 500MM MS/PSC Pipeline Leak Arresting work near Elachagere Bore.
3. 500MM MS/PSC Pipeline Leak Arresting work near Begur ITI College.
4. 500MM MS/PSC Pipeline Leak Arresting work near Kunnaiah Land near Debur

1) ಷೆಡ್ಯೂಲ್–ಬಿ ನೀಡುವ ಕೊನೆಯ ದಿನಾಂಕ: 16.12.2024 ಸಂಜೆ 4–00ವರೆಗೆ
2) ಷೆಡ್ಯೂಲ್–ಬಿ ಯನ್ನು ಗುತ್ತಿಗೆದಾರರು ಸಲ್ಲಿಸುವ ಕೊನೆಯ ದಿನಾಂಕ: 16.12.2024, ಸಂಜೆ 4–00ವರೆಗೆ

ಮೇಲಿನ ಕಾಮಗಾರಿಗಳಿಗೆ ಕಾಲಾವಧಿ:– 07 ದಿನಗಳು.
ಮೇಲಿನ ಎಲ್ಲಾ ಕಾಮಗಾರಿಗಳಿಗೆ ಅರ್ಹ ಗುತ್ತಿಗೆದಾರ ದರ್ಜೆ:– 2ನೇ ದರ್ಜೆ ಮೇಲ್ಪಟ್ಟು.
ಕಾಮಗಾರಿ ಪೂರ್ಣಗೊಂಡ ನಂತರ ಪುರಸಭೆಯ ಆರ್ಥಿಕ ಪರಿಸ್ಥಿತಿ ಪರಿಗಣಿಸಿ ಬಿಲ್ ಪಾವತಿ ಮಾಡಲಾಗುವುದು.
ವಿಶೇಷ ಸೂಚನೆ: ಕಾಮಗಾರಿಗಳ ವಿವರಗಳನ್ನು ಮತ್ತು ಇತರ ಷರತ್ತುಗಳ ಬಗ್ಗೆ ಸಂಬಂಧಪಟ್ಟ ತಾಂತ್ರಿಕ ಶಾಖೆಯಲ್ಲಿ ತಿಳಿದುಕೊಳ್ಳಬಹುದು.

ಸಹಿ/– ಅಧ್ಯಕ್ಷರು, ಪುರಸಭೆ, ಗುಂಡ್ಲುಪೇಟೆ
ಸಹಿ/– ಮುಖ್ಯಾಧಿಕಾರಿ, ಪುರಸಭೆ, ಗುಂಡ್ಲುಪೇಟೆ

ದೂ: 0821–2520894/4259665

ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ನಿ.,

ಎನ್. ಮಾಧವರಾವ್ ವೃತ್ತ, ಮೈಸೂರು

ಪ್ರಕಟಣೆ

ಮಾನ್ಯ ಸದಸ್ಯರು ಹಾಗೂ ಠೇವಣಿದಾರರಿಗೆ ಹೊಸ ವರ್ಷದ ಶುಭಾಶಯಗಳು

1. 2025ನೇ ಸಾಲಿನ ಬ್ಯಾಂಕಿನ ವಾಲ್ ಕ್ಯಾಲೆಂಡರ್ ನೀಡಲಾಗುತ್ತಿದೆ.
2. 2023–24 ನೇ ಸಾಲಿಗೆ ಶೇ. 10% ರಂತೆ ಡಿವಿಡೆಂಡ್ ವಿತರಿಸಲಾಗುತ್ತಿದೆ. ಮಾನ್ಯ ಸದಸ್ಯರುಗಳು ಪಾಸ್ ಪುಸ್ತಕ ಹಾಜರುಪಡಿಸಿ ಪಡೆಯುವುದು
3. ಸದಸ್ಯರು ಮತ್ತು ಸದಸ್ಯರೇತರರಿಗೆ ಚಿನ್ನಾಭರಣಗಳ ಮೇಲೆ ಶೇ. 9.5 ರಂತೆ ಗ್ರಾಂಗೆ ರೂ.5500/– ರಂತೆ ಶೀಘ್ರವಾಗಿ ಸಾಲ ನೀಡಲಾಗುತ್ತಿದೆ.
4. ಮನೆ ಹಾಗೂ ನಿವೇಶನಗಳ ಮೇಲೆ ಮನೆ/ನಿವೇಶನ ಕೊಳ್ಳುವ ಉದ್ದೇಶಕ್ಕೆ ಶೇ. 12.5 ರಂತೆ ಗರಿಷ್ಠ 20 ಲಕ್ಷ ಸಾಲ ನೀಡಲಾಗುತ್ತಿದೆ. (ಸುಸ್ತಿ ಬಡ್ಡಿ ಪಾವತಿಸದೇ ಸರಿಯಾಗಿ ಕಂತುಗಳನ್ನು ಕಟ್ಟಿದವರಿಗೆ ಬಡ್ಡಿಯಲ್ಲಿ 1% ರಿಯಾಯಿತಿ ನೀಡಲಾಗುವುದು.)
5. ಠೇವಣಿಗಳ ಮೇಲೆ ಗರಿಷ್ಠ ಶೇ. 7.0 ರಂತೆ ಹಾಗೂ ಹಿರಿಯ ನಾಗರಿಕರಿಗೆ ಶೇ. 7.5 ರಂತೆ ಬಡ್ಡಿ ನೀಡಲಾಗುತ್ತಿದೆ.

ಡಿ.ಬಸವರಾಜು(ಬಸಪ್ಪ), ಅಧ್ಯಕ್ಷರು
ಹೆಚ್.ಎಸ್.ಸರ್ವಮಂಗಳ, ಉಪಾಧ್ಯಕ್ಷರು
ಡಿ. ಅನಂತವೀರಪ್ಪ, ಪ್ರಧಾನವ್ಯವಸ್ಥಾಪಕರು

ನಿರ್ದೇಶಕರುಗಳಾದ: ನಂಸಿದ್ದಪ್ಪ, ಜಿ.ಎಂ. ಪಂಚಾಕ್ಷರಿ, ಹೆಚ್.ಪಿ.ಭಾಸ್ಕರ್, ಎಂ.ಡಿ.ಪಾರ್ಥಸಾರಥಿ, ಪ್ರತಿಧ್ವನಿಪ್ರಸಾದ್, ಗಣೇಶ ಮೂರ್ತಿ ಟಿ.ಪಿ., ಶ್ರೀಮತಿ ನಾಗಜ್ಯೋತಿ, ನವೀನ್ ಕುಮಾರ್ ಎಂ.ಎನ್., ಎಂ.ಎಸ್. ಅರುಣಸಿದ್ದಪ್ಪ, ಹೆಚ್ ವಾಸು, ಶಿವಪ್ರಕಾಶ್ ಎಂ.

WANTED

FOR REPUTED COMPANY IN HOOTGALLI INDUSTRIAL AREA

Sl. No	Vacant Positions	Qualification	Experience
1	Stores Executive	B.Com/Diploma	2 years in relevant field
2	Accounts & Finance Executive	B.Com/M.com	5 years in relevant field
3	Sales Coordinator	Any Degree	2 years in relevant field
4	Planning Executive	B.Com/ BBM	2 years in relevant field
5	Electrical Assistant	Diploma / ITI in Electrical	2 years in relevant field
6	Mechanical Assistant	Diploma / ITI in Mechanical	2 years in relevant field
7	Quality Controller	Diploma/ Science Graduate	2 years in relevant field
8	Machine Operator	ITI / Diploma	Equivalent experience
9	Security Supervisor	PUC/ Any Degree	Equivalent experience
10	Driver	SSLC/PUC	Heavy vehicle license

SALARY OFFERED : BEST IN INDUSTRY
Please share your resume to email: glopro815@gmail.com